ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮಾರ್ಚ್ 6 ಬುಧವಾರ 2024

ಸಂಪುಟ: 44 | ಸಂಚಿಕೆ: 318 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಚಾಮುಂಡಿಬೆಟ್ಟದ ನಂದಿ ರಸ್ತೆಯ ಮೂರು ಕಡೆ ಭೂ ಕುಸಿತ

ಎರಡೂವರೆ ವರ್ಷವಾದರೂ ತಡೆಗೋಡೆ ಕಾಮಗಾರಿ ಪೂರ್ಣಗೊಂಡಿಲ್ಲ....



■ ಪುಟ–3

ಎಲ್ಲಿಯೂ ಕುಡಿಯುವ ನೀರಿಗೆ ಸಮಸ್ಯೆ ಆಗದಂತೆ ಕ್ರಮ ಕೈಗೊಳ್ಳಿ

● ಜಿಲ್ಲಾಡಳಿತಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ● ಬರ ನಿರ್ವಹಣೆ ಸಂಬಂಧ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು, ಜಿಲ್ಲಾಧಿಕಾರಿಗಳು, ಜಿಪಂ ಸಿಇಓಗಳೊಂದಿಗೆ ವೀಡಿಯೋ ಸಂವಾದ ● 'ಗ್ಯಾರಂಟಿ' ಯೋಜನೆಯಿಂದ ಜನರಿಗೆ ಅಂತಹ ಸಮಸ್ಯೆ ಉಂಟಾಗಿಲ್ಲ ● ಕುಡಿಯುವ ನೀರಿಗಾಗಿ ಬೋರ್‌ವೆಲ್ ಕೊರೆಯಲು 240 ಕೋಟಿ ಬಿಡುಗಡೆ ● ರಾಜ್ಯದ ಯಾವುದೇ ಮೂಲೆಯಿಂದ ನಿಯಂತ್ರಣ ಕೊಠಡಿ ಸಂಪರ್ಕಿಸಿ ದೂರು ನೀಡಿದರೂ ಸಮಸ್ಯೆಗೆ ಶೀಘ್ರ ಪರಿಹಾರ





ಭೀಕರ ಬರ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ಬೆಂಗಳೂರು, ಮಾ.5(ಕೆಎಂಶಿ)–ಬರ ನಿರ್ವಹಣೆಗೆ ಜಿಲ್ಲಾ ಮತ್ತು ತಾಲೂಕು ಕೇಂದ್ರಗಳಲ್ಲಿ ಸಹಾಯವಾಣಿ, ನಿಯಂತ್ರಣ ಕೊಠಡಿಗಳನ್ನು ಸ್ಥಾಪಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಜಿಲ್ಲಾಡಳಿತಗಳಿಗೆ ಆದೇಶ ಮಾಡಿದ್ದಾರೆ.

ರಾಜ್ಯದಲ್ಲಿ ಭೀಕರ ಬರಗಾಲ ಎದುರಾಗಿದ್ದರೂ ಗ್ಯಾರಂಟಿ ಯೋಜನೆಗಳಿಂದ ಯಾರೂ ಸಂಕಷ್ಟಕ್ಕೆ ಸಿಲುಕಿಲ್ಲ. ಆದರೆ, ಕೆಲವು ಭಾಗಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಿದೆ ಎಂದಿದ್ದಾರೆ. ಕುಡಿಯುವ ನೀರಿನ ಸಮಸ್ಯೆಯನ್ನು ತಕ್ಷಣವೇ ಬಗೆಹರಿಸಬೇಕು. ಅದಕ್ಕೆ ಅಗತ್ಯವಿರುವ ಎಷ್ಟೇ ಹಣವನ್ನು ನೀಡುವುದಾಗಿ ಜಿಲ್ಲಾಧಿಕಾರಿಗಳಿಗೆ ತಿಳಿಸಿದ್ದಾರೆ.

ಗೃಹ ಕಚೇರಿ ಕೃಷ್ಣಾದಲ್ಲಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು, ಜಿಲ್ಲಾಧಿಕಾರಿ ಹಾಗೂ ಸಿಇಓಗಳೊಂದಿಗೆ ವಿಡಿಯೋ ಸಂವಾದ ನಡೆಸಿದ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇದುವರೆಗೂ ಮೇವಿಗೆ ಕೊರತೆಯಾಗಿಲ್ಲ. ಆದರೆ, ಕುಡಿಯುವ ನೀರಿನ ಸಮಸ್ಯೆ ಎದುರಿಸಲು ಹೊಸ ಕೊಳವೆ ಬಾವಿ ಕೊರೆಯಲು 240 ಕೋಟಿ ರೂ. ಬಿಡುಗಡೆ ಮಾಡಿರುವುದಾಗಿ ತಿಳಿಸಿದರು.

ಮುನ್ನೆಚ್ಚರಿಕೆಯಾಗಿ ಮೇವು ಬೆಳೆಯಲು ಹೆಚ್ಚುವರಿಯಾಗಿ 40 ಕೋಟಿ ರೂ.ಗಳನ್ನು ಇಂದು ಬಿಡುಗಡೆ ಮಾಡಲಾಗಿದೆ. ಇದಲ್ಲದೆ, ಜಿಲ್ಲಾಧಿಕಾರಿಗಳ ಬಳಿ ಪಿಡಿಎಫ್ ಖಾತೆಯಲ್ಲೇ 854 ಕೋಟಿ ರೂ.ಗಳು ಲಭ್ಯವಿದೆ. ಬರ ನಿರ್ವಹಣೆಗಾಗಿ ಎಷ್ಟೇ ಹಣವನ್ನಾದರೂ ಸರ್ಕಾರ ನೀಡಲು ಸಿದ್ಧವಿದೆ. ಸಾರ್ವಜನಿಕರಿಗೆ ಯಾವುದೇ ಸಮಸ್ಯೆ ಎದುರಾಗದಂತೆ ನೋಡಿಕೊಳ್ಳುವ ಹೊಣೆ ಜಿಲ್ಲಾಡಳಿತದ ಹೆಗಲಿಗೆ ಹಾಕಿದ್ದೇವೆ ಎಂದರು. ಯಾವುದೇ ಮೂಲೆಯಲ್ಲಿ ಬರದಿಂದ ಸಮಸ್ಯೆ ಎದುರಾದರೆ ತಕ್ಷಣವೇ ನಿಯಂತ್ರಣ ಕೊಠಡಿ ಸಂಪರ್ಕಿಸಿ ದೂರು ದಾಖಲಿಸಿ, ಕಾಲಮಿತಿಯೊಳಗೆ ಅಧಿಕಾರಿಗಳು ಪರಿಹಾರ ನೀಡಲಿದ್ದಾರೆ ಎಂದರು. ರಾಜ್ಯದಲ್ಲಿ ಮುಂದಿನ ಮೂರು ತಿಂಗಳಲ್ಲಿ ಎದುರಾಗಬಹುದಾದ ತೀವ್ರ ಬರಗಾಲವನ್ನು

● 10ನೇ ಪುಟಕ್ಕೆ

ಮುಖ್ಯಮಂತ್ರಿ ಸಭೆ ನಂತರ ಅಧಿಕಾರಿಗಳಿಗೆ ಡಿಸಿ ಸೂಚನೆ



ಮುಖ್ಯಮಂತ್ರಿಗಳ ವಿಡಿಯೋ ಸಂವಾದದ ನಂತರ ಮೈಸೂರು ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಅಧಿಕಾರಿಗಳ ಸಭೆ ನಡೆಸಿದರು. ಕುಡಿಯುವ ನೀರಿನ ಸಮಸ್ಯೆ ಇರುವ ಸ್ಥಳಗಳಿಗೆ ಅಧಿಕಾರಿಗಳು ಖುದ್ದು ಭೇಟಿ ನೀಡಿ, ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಆದ್ಯತೆ ಮೇರೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು. ಪ್ರತಿ ಗ್ರಾಮ ಪಂಚಾಯಿತಿಗೆ ಒಬ್ಬರನ್ನು ಕುಡಿಯುವ ನೀರಿನ ಸಮಸ್ಯೆಗೆ ನೋಡಲ್ ಇಂಜಿನಿಯರ್ ನೇಮಕ ಮಾಡಬೇಕು. ಅವರು ಪ್ರತಿ ದಿನ ವರದಿ ನೀಡಬೇಕು ಎಂದು ತಾಕೀತು ಮಾಡಿದರು. ಕುಡಿಯುವ ನೀರಿನ ಗುಣಮಟ್ಟ ಪರಿಶೀಲನೆ ಮಾಡಿ ನೀರು ಪೂರೈಸಬೇಕು ಎಂದು ಇದೇ ವೇಳೆ ಡಾ.ರಾಜೇಂದ್ರ ಸೂಚಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಕೆ.ಎಂ.ಗಾಯತ್ರಿ, ಅಪರ ಜಿಲ್ಲಾಧಿಕಾರಿ ಪಿ.ಶಿವರಾಜು ಸೇರಿದಂತೆ ಇತರೆ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಇಂದು ರಾಜ್ಯದ 28 ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಗಳ ಪಟ್ಟಿ ಬಿಡುಗಡೆ



ಶಿವಮೊಗ್ಗ: ರಾಜ್ಯದ 28 ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಗಳ ಪಟ್ಟಿ ಬುಧವಾರ ಬಿಡುಗಡೆಯಾಗಲಿದೆ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ತಿಳಿಸಿದರು. ಜಿಲ್ಲೆಯ ಸಾಗರದಲ್ಲಿ ಮಾಧ್ಯಮದವರ ಜೊತೆ ಮಾತನಾಡಿದ ಅವರು, ಲೋಕಸಭಾ ಚುನಾವಣೆಗೆ ಬಿಜೆಪಿ ಅಭ್ಯರ್ಥಿಗಳ ಮೊದಲ ಪಟ್ಟಿ ಬಿಡುಗಡೆಯಾಗಿದೆ. ಅದರಲ್ಲಿ ಕರ್ನಾಟಕದ ಹೆಸರು ಇಲ್ಲವಾಗಿದೆ. ಆದರೆ ನಾಳೆ (ಬುಧವಾರ) ಬಿಡುಗಡೆಯಾಗುವ ಎರಡನೇ ಪಟ್ಟಿಯಲ್ಲಿ ರಾಜ್ಯದ 28 ಲೋಕಸಭಾ ಕ್ಷೇತ್ರಗಳ ಅಭ್ಯರ್ಥಿಗಳ ಹೆಸರು ಇರಲಿವೆ ಎಂದು ತಿಳಿಸಿದರು. ದೆಹಲಿಯಲ್ಲಿ ನಾಳೆ ಚುನಾವಣಾ ಸಮಿತಿ ಮೀಟಿಂಗ್ ನಡೆಯಲಿದೆ. ಕರ್ನಾಟಕದ ಅಭ್ಯರ್ಥಿಗಳ ಫೈನಲ್

● 10ನೇ ಪುಟಕ್ಕೆ

ಕಾಂಗ್ರೆಸ್ ಅಭ್ಯರ್ಥಿಗಳ ಮೊದಲ ಪಟ್ಟಿ ನಾಳೆ ಅಂತಿಮ



ಬೆಂಗಳೂರು: ಮಾರ್ಚ್ 7ರಂದು ದೆಹಲಿಯಲ್ಲಿ ಕಾಂಗ್ರೆಸ್ ಪಕ್ಷದ ಕೇಂದ್ರ ಚುನಾವಣಾ ಸಮಿತಿಯ ಸಭೆ ನಡೆಯಲಿದ್ದು, ಲೋಕಸಭೆ ಚುನಾವಣೆಗೆ ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಅಂತಿಮಗೊಳಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಂಗಳವಾರ ಹೇಳಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರ್ನಾಟಕದ ಉಸ್ತುವಾರಿ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರೊಂದಿಗೆ ತಾವು ಸೋಮವಾರ ಸಭೆ ನಡೆಸಿದ್ದಾಗಿ ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಹೇಳಿದ್ದಾರೆ. ನಾವು ಮಾರ್ಚ್ 7 ರಂದು

● 10ನೇ ಪುಟಕ್ಕೆ

ನೀವು ನಮಗೆ 2.5 ಮಿಲಿಯನ್ ಡಾಲರ್ ಕೊಡದಿದ್ರೆ ರಾಜ್ಯಾದ್ಯಂತ ಸ್ಫೋಟಿಸುತ್ತೇವೆ...!

ರಾಮೇಶ್ವರಂ ಕೆಫೆ ಬಾಂಬ್ ಸ್ಫೋಟ ಬೆನ್ನಲ್ಲೇ ಸಿಎಂ, ಡಿಸಿಎಂ, ಗೃಹ ಸಚಿವ, ಪೊಲೀಸರಿಗೆ ಬಂತು ಮತ್ತೊಂದು ಬಾಂಬ್ ಬೆದರಿಕೆ!

ಬೆಂಗಳೂರು: ರಾಮೇಶ್ವರಂ ಕೆಫೆ ಬಾಂಬ್ ಸ್ಫೋಟ ಪ್ರಕರಣ ಬೆನ್ನಲ್ಲೆ ಇದೀಗ ಬೆಂಗಳೂರಿನಲ್ಲಿ ಮತ್ತೆ ಬಾಂಬ್ ಸ್ಫೋಟಿಸುವ ಬೆದರಿಕೆ ಇ–ಮೇಲ್ ಬಂದಿದೆ.

ಮುಖ್ಯಮಂತ್ರಿ, ಗೃಹ ಮಂತ್ರಿ, ಡಿಸಿಎಂ ಮತ್ತು ಬೆಂಗಳೂರು ನಗರ ಪೊಲೀಸ್ ಕಮಿಷನರ್‌ಗೆ ಬೆದರಿಕೆ ಇ–ಮೇಲ್ ಬಂದಿದ್ದು 2.5 ಮಿಲಿಯನ್ ಡಾಲರ್ ಕೊಟ್ಟಿಲ್ಲ ಅಂದರೆ ರಾಮೇಶ್ವರಂ ಕೆಫೆ ರೀತಿಯಲ್ಲೇ ಬಾಂಬ್ ಸ್ಫೋಟಿಸುವುದಾಗಿ ಅದರಲ್ಲಿ ಬೆದರಿಕೆ ಹಾಕಲಾಗಿದೆ.

ಈ ಇ–ಮೇಲ್ ಬೆದರಿಕೆ ಸಂಬಂಧ ಸಿಸಿಬಿ ಪೊಲೀಸರು ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡಿದ್ದಾರೆ. Shahidkhan10786@protonmail.com ಎನ್ನುವ ಮೇಲ್ ಐಡಿಯಿಂದ ಬೆದರಿಕೆ ಬಂದಿದ್ದು, ಸದ್ಯ ಪೊಲೀಸರು ತನಿಖೆ ನಡೆಸಿದ್ದಾರೆ. ರಾಮೇಶ್ವರಂ ಕೆಫೆ ಸ್ಫೋಟ ಬರೀ ಟ್ರೈಲರ್. ನೀವು ನಮಗೆ 2.5 ಮಿಲಿಯನ್ ಡಾಲರ್ ನೀಡದಿದ್ದರೆ, ನಾವು ಕರ್ನಾಟಕದಾದ್ಯಂತ ಬಸ್ಸುಗಳು, ರೈಲುಗಳು,

● 10ನೇ ಪುಟಕ್ಕೆ

ಕಾಲೇಜು, ತಾಂತ್ರಿಕ ಶಿಕ್ಷಣ ಅತಿಥಿ ಉಪನ್ಯಾಸಕರಿಗೆ ಭರವಸೆಯಂತೆ ಬಾಕಿ ಸೌಲಭ್ಯ ಕಲ್ಪಿಸುವಂತೆ ಒತ್ತಾಯ



ಮೈಸೂರು, ಮಾ.5–ಜನವರಿ 6ರಂದು ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಉನ್ನತ ಶಿಕ್ಷಣ ಇಲಾಖೆಯ ಸರ್ಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರಿಗೆ ರೂ. 5,000ದಿಂದ 8000ವರೆಗೆ ವೇತನ ಪರಿಷ್ಕರಣೆ, 60 ವರ್ಷ ಸೇವೆ ಸಲ್ಲಿಸಿ ನಿವೃತ್ತಿ ಹೊಂದುವ ಉಪನ್ಯಾಸಕರಿಗೆ 5 ಲಕ್ಷ ಇಡಗಂಟು, 5 ಲಕ್ಷದವರೆಗೆ ವಿಮೆ ಯೋಜನೆಗಳನ್ನು 1–1–2024ರಿಂದ ಜಾರಿಗೆ ಬರುವಂತೆ ಆದೇಶ ಹೊರಡಿಸಿರುವುದಕ್ಕೆ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರನ್ನು ವಿಧಾನಪರಿಷತ್ ಸದಸ್ಯ ಮರಿತಿಬ್ಬೇಗೌಡ ಅಭಿನಂದಿಸಿದ್ದಾರೆ.

ಸಮಾನ ಕೆಲಸಕ್ಕೆ ಸಮಾನ ವೇತನ ನೀಡುವುದಾಗಿ ಉನ್ನತ ಶಿಕ್ಷಣ ಸಚಿವರು ತಿಳಿಸಿದ್ದು, ತಾಂತ್ರಿಕ ಶಿಕ್ಷಣ ಇಲಾಖೆಯಡಿಯಲ್ಲಿನ ಸರ್ಕಾರಿ ಇಂಜಿನಿಯರಿಂಗ್ ಮತ್ತು ಪಾಲಿಟೆಕ್ನಿಕ್‌ನಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರಿಗೂ ಅನ್ವಯಿಸುವಂತೆ ವೇತನ ಪರಿಷ್ಕರಣೆ, 60 ವರ್ಷ ಸೇವೆ ಸಲ್ಲಿಸಿ ಸೇವೆಯಿಂದ ನಿವೃತ್ತಿ ಹೊಂದುವ ಉಪನ್ಯಾಸಕರಿಗೆ 5 ಲಕ್ಷ ಇಡಗಂಟು. 5 ಲಕ್ಷದವರೆಗೆ ವಿಮೆ ಯೋಜನೆಗಳನ್ನು ಯಥಾವತ್ತಾಗಿ ವಿಸ್ತರಿಸುವಂತೆ ಮನವಿ ಮಾಡಿದ್ದಾರೆ. ವಿಶ್ವವಿದ್ಯಾನಿಲಯಗಳು ಆರ್ಥಿಕ ಸಂಕಷ್ಟದಲ್ಲಿರುವುದರಿಂದ ವಿ.ವಿ.ಗಳು ನೇಮಕ ಮಾಡಿಕೊಳ್ಳುವ ಅತಿಥಿ ಉಪನ್ಯಾಸಕರಿಗೆ ನಿಯಮ ರೂಪಿಸಿ, ಸರ್ಕಾರವೇ ವೇತನ ಪಾವತಿಸಲು ಕ್ರಮ ವಹಿಸುವಂತೆ ಕೋರಿದ್ದಾರೆ.

ಉನ್ನತ ಶಿಕ್ಷಣ ಸಚಿವರು ನೀಡಿದ ಭರವಸೆಯಂತೆ ಪದವಿ ಕಾಲೇಜಿನ ಅತಿಥಿ ಉಪನ್ಯಾಸಕರಿಗೆ ತಿಂಗಳಿಗೆ ಒಂದು ಸಾಂದರ್ಭಿಕ ರಜೆ, ಮಹಿಳಾ ಉಪನ್ಯಾಸಕರಿಗೆ ವೇತನ ಸಹಿತ ಹೆರಿಗೆ ರಜೆ, ಸಹಾಯಕ ಪ್ರಾಧ್ಯಾಪಕರನ್ನು ನೇಮಕಾತಿ ಮಾಡುವಾಗ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದವರಿಗೆ ಕೃಪಾಂಕ ಮತ್ತು ವಿಶೇಷ ನಿಯಮಾವಳಿ ರೂಪಿಸಿ, ಸೇವಾ ಭದ್ರತೆ ನೀಡುವುದು ಈ ಭರವಸೆಗಳನ್ನು ತುರ್ತಾಗಿ ಈಡೇರಿಸುವುದು. ತಾಂತ್ರಿಕ ಶಿಕ್ಷಣ ಇಲಾಖೆಯಡಿ ಇಂಜಿನಿಯರಿಂಗ್ ಹಾಗೂ ಪಾಲಿಟೆಕ್ನಿಕ್ ಅತಿಥಿ ಉಪನ್ಯಾಸಕರಿಗೂ ಈ ಸೌಲಭ್ಯಗಳನ್ನು ವಿಸ್ತರಿಸುವಂತೆ ಉನ್ನತ ಶಿಕ್ಷಣ ಸಚಿವರನ್ನು ಅವರು ಒತ್ತಾಯಿಸಿದ್ದಾರೆ.

ಸಿಗ್ಮಾ ಆಸ್ಪತ್ರೆಯಲ್ಲಿ ಸ್ಥೂಲಕಾಯ ದಿನಾಚರಣೆ



ಮೈಸೂರು,ಮಾ.5–ಸ್ಥೂಲಕಾಯತೆ ದಿನದ ಅಂಗವಾಗಿ ನಗರದ ಸಿಗ್ಮಾ ನರ್ಸಿಂಗ್ ಕಾಲೇಜು ಮತ್ತು ಮೈಸೂರು ಅಡೋಲೆಸೆಂಟ್ ಹೆಲ್ತ್ ಅಕಾಡೆಮಿ ಸಹಭಾಗಿತ್ವದಲ್ಲಿ ರಾಜ್ಯದ ಇಂಡಿಯನ್ ಅಕಾಡೆಮಿ ಆಫ್ ಪೀಡಿಯಾಟ್ರಿಕ್ಸ್ ಸಾರ್ವಜನಿಕ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಸಿಗ್ಮಾ ಆಸ್ಪತ್ರೆಯಿಂದ ಸರಸ್ವತಿಪುರಂನ ಮುಖ್ಯ ರಸ್ತೆ ಮೂಲಕ ಶೈಕ್ಷಣಿಕ ಘೋಷಣೆ ಫಲಕಗಳೊಂದಿಗೆ ಸುಮಾರು ನೂರಾರು ಮಂದಿ ಪಾಲ್ಗೊಂಡಿದ್ದರು. ಮಕ್ಕಳು ಮತ್ತು ವಯಸ್ಕರಲ್ಲಿ ಸ್ಥೂಲಕಾಯತೆಯ ರೋಗದ ವಿರುದ್ಧ ಹೋರಾಡಲು ಪ್ರಮುಖ ಕ್ರಮವನ್ನು ಕರ್ನಾಟಕ ರಾಜ್ಯ ಐಎಪಿ ಕಾರ್ಯದರ್ಶಿ ಡಾ. ಶಶಿಕಿರಣ್, ಆಸ್ಪತ್ರೆ ಮುಖ್ಯ ಮಕ್ಕಳ ತಜ್ಞ ಡಾ.ರಾಜೇಶ್ವರಿ ಮಾದಪ್ಪ, ಐಎಪಿ ಮೈಸೂರು ಅಧ್ಯಕ್ಷ ಡಾ.ಎಂ.ಆರ್. ಪ್ರಶಾಂತ್ ಮತ್ತು ಹದಿಹರೆಯದ ಆರೋಗ್ಯದ ಅಕಾಡೆಮಿ ಅಧ್ಯಕ್ಷ ಡಾ. ಯು.ಜಿ. ಶೆಣೈ ವಿವರಿಸಿದರು.

ಎಎಪಿ ಮೈಸೂರು ಮಹಾಸಂಸ್ಥೆಯ ಪದಾಧಿಕಾರಿ ಡಾ.ಬಿ.ಎಚ್.ಶ್ರೀನಿವಾಸ್, ಡಾ.ತೃಪ್ತಿ, ಡಾ.ಶಿವು, ಡಾ.ಕನ್ಯಾ, ಡಾ.ಶಂಕರ್ ಪ್ರಸಾದ್, ಸಿಗ್ಮಾ ಆಸ್ಪತ್ರೆಯ ಡಾ.ಕೆ.ಎಂ. ಮಾದಪ್ಪ, ಜ್ಞಾನಶಂಕರ್ ಹಾಜರಿದ್ದರು.

ಜಿ.ಬಿ. ದೊರೆಸ್ವಾಮಿಗೆ ಪಿಎಚ್.ಡಿ



ಮೈಸೂರು: ಡಾ. ಎಸ್.ಯಶೋಧಾ ಅವರ ಮಾರ್ಗದರ್ಶನದಲ್ಲಿ ಜಿ.ಬಿ. ದೊರೆಸ್ವಾಮಿ ಅವರು ಸಮಾಜಶಾಸ್ತ್ರ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಪಿ.ಬಾಲಗಂಗಾಧರ ತಿಲಕ್



ಡಾ.ಆರ್.ಸಿ.ದೇವರಾಜು ಅವರ ಮಾರ್ಗದರ್ಶನದಲ್ಲಿ ಪಿ.ಬಾಲಗಂಗಾಧರ ತಿಲಕ್ ಅವರು ಕನ್ನಡ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ 'ಕನ್ನಡ ಚಲನಚಿತ್ರ ರಂಗಕ್ಕೆ ಮಂಡ್ಯ ಜಿಲ್ಲೆಯ ಕೊಡುಗೆ' ಮಹಾಪ್ರಬಂಧವನ್ನು ಮೈಸೂರು ವಿವಿ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ನಿಧನ

ಶತಾಯುಷಿ ಬೋರಮ್ಮ



ಮೈಸೂರು, ಮಾ.5– ಮೈಸೂರಿನ ನಜರ್‌ಬಾದ್ ನಿವಾಸಿ ಶತಾಯುಷಿ ಬೋರಮ್ಮ(100) ಮಂಗಳವಾರ ಮಧ್ಯಾಹ್ನ ನಿಧನರಾದರು. ಶಿಕ್ಷಕಿಯಾಗಿ ಸುದೀರ್ಘ ಸೇವೆ ಸಲ್ಲಿಸಿದ್ದ ಇವರು, ನಜರ್‌ಬಾದ್ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಮುಖ್ಯ ಶಿಕ್ಷಕಿಯಾಗಿ ನಿವೃತ್ತರಾಗಿದ್ದರು. ಇವರು ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು–ಬಳಗ, ಶಿಷ್ಯವೃಂದವನ್ನು ಅಗಲಿದ್ದಾರೆ. ಚಾಮುಂಡಿಬೆಟ್ಟ ತಪ್ಪಲಿನ ರುದ್ರಭೂಮಿಯಲ್ಲಿ ಬುಧವಾರ ಮಧ್ಯಾಹ್ನ 12ಕ್ಕೆ ಅಂತ್ಯಕ್ರಿಯೆ ನೆರವೇರಿಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಸೈಯದ್ ಶೌಕತ್ ಪೀರಾನ್ ಷಾ ಅಮಿರಿ



ಮೈಸೂರು,ಮಾ.5–ಮೈಸೂರಿನ ಅಶೋಕ ರಸ್ತೆಯಲ್ಲಿರುವ ಮಸೀದಿ–ಇ–ಆಝಮ್ ಮರ್ಕಾಝ್ ಅಹಲೆ ಸುನ್ನತ್ ವಲ್ ಜಮಾತ್‌ನ ಉಪಾಧ್ಯಕ್ಷರು, ಆಜಮ್ ಬೈತುಲ್ ಮಾಲ್ ನಿರ್ದೇಶಕರು, ಮೀನಾ ಬಜಾರ್ ಸಾಡೇ ರಸ್ತೆಯಲ್ಲಿರುವ ಶಬಾನಾ ಟೆಕ್ಸ್‌ಟೈಲ್ಸ್ ಮಾಲೀಕರಾದ ಹಝರತ್ ಸೈಯದ್ ಶೌಕತ್ ಪೀರಾನ್ ಷಾ ಅಮಿರಿ ಸೋಮವಾರ (ಮಾ.4) ಮಹಾರಾಷ್ಟ್ರದಲ್ಲಿ ಹೃದಯಾಘಾತದಿಂದ ನಿಧನರಾದರು.

ಮೃತರು ಪತ್ನಿ, ಐವರು ಪುತ್ರಿಯರು, ಓರ್ವ ಪುತ್ರ, ಓರ್ವ ಸಹೋದರ, ನಾಲ್ವರು ಸಹೋದರಿಯರು ಹಾಗೂ ಅಪಾರ ಬಂಧುವರ್ಗ ಅಗಲಿದ್ದಾರೆ. ಮಂಗಳವಾರ ಸಂಜೆ ಮಸೀದಿ–ಇ–ಆಝಮ್ ಮರ್ಕಾಝ್ ಅಹಲೆ ಸುನ್ನತ್ ವಲ್ ಜಮಾತ್‌ನಲ್ಲಿ ನಮಾಝ್–ಎ–ಜನಾಝ ನಡೆದು, ಮೈಸೂರಿನ ಟಿಪ್ಪು ಸರ್ಕಲ್‌ನಲ್ಲಿರುವ ಮುಸ್ಲಿಮರ ರುದ್ರಭೂಮಿ ಗೇಟ್ ನಂ.1ರಲ್ಲಿ ಅಂತ್ಯಕ್ರಿಯೆ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಅಬ್ದುಲ್ ರಶೀದ್



ಮೈಸೂರಿನ ಡಿಲಕ್ಸ್ ವಾಚ್ ವರ್ಕ್ಸ್ ಮಾಲೀಕರಾದ ಅಬ್ದುಲ್ ರಶೀದ್ (84) ಭಾನುವಾರ ಮಂಡಿಮೊಹಲ್ಲಾದ ತಮ್ಮ ನಿವಾಸದಲ್ಲಿ ವಯೋಸಹಜ ಖಾಯಿಲೆಯಿಂದ ನಿಧನರಾದರು. ದಿವಂಗತರು ಪತ್ನಿ, ಇಬ್ಬರು ಪುತ್ರರು, ಮೂವರು ಪುತ್ರಿಯರು ಸೇರಿದಂತೆ ಅಪಾರ ಬಂಧು–ಬಳಗ ಅಗಲಿದ್ದಾರೆ. ಟಿಪ್ಪು ಸರ್ಕಲ್ ಬಳಿಯಿರುವ ಖಬರಸ್ತಾನದಲ್ಲಿ ಭಾನುವಾರ ಸಂಜೆ ಅಂತ್ಯಕ್ರಿಯೆ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಯಜಮಾನ್ ಡಿ.ರಾಮಸ್ವಾಮಿ



ಮೈಸೂರಿನ ಪಡುವಾರಳ್ಳಿ ನಿವಾಸಿಯಾದ ಲೇಟ್ ಬೋರಯ್ಯ ಅವರ ಪುತ್ರ ಯಜಮಾನ್ ಡಿ.ರಾಮಸ್ವಾಮಿ ಅವರು ಮಂಗಳವಾರ ಸಂಜೆ ನಿಧನರಾದರು. ಇವರು ಪಡುವಾರಹಳ್ಳಿಯ ಶ್ರೀ ವಿಧ್ಯಾ ಗಣಪತಿ ದೇವಸ್ಥಾನದ ಖಜಾಂಚಿಯೂ ಆಗಿದ್ದರು. ಇವರು ಪತ್ನಿ, ಮಗ, ಮಗಳು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಮೈಸೂರಿನ ವಿಜಯನಗರ ಒಂದನೇ ಹಂತದ ಮನೆ ನಂ.258, 8ನೇ ಕ್ರಾಸ್‌ನಲ್ಲಿ ಮನೆಯಲ್ಲಿರುವ ಪುತ್ರನನಿವಾಸದಲ್ಲಿ ರಾಮಸ್ವಾಮಿ ಅವರ ಅಂತಿಮ ದರ್ಶನ ಪಡೆಯಬಹುದು. ಇವರ ಅಂತ್ಯಕ್ರಿಯೆ ನಾಳೆ (ಬುಧವಾರ)ಬೆಳಗ್ಗೆ 11.30ಕ್ಕೆ ಗೋಕುಲಂನ ರುದ್ರಭೂಮಿಯಲ್ಲಿ ನೆರವೇರಿಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಎಸ್.ಎ.ಮೋಹನ್



ಮೈಸೂರು, ಮಾ.5– ಮೈಸೂರಿನ ಟಿ.ಕೆ.ಲೇಔಟ್ ನಿವಾಸಿಯಾಗಿದ್ದ ಮೈಸೂರು ವೆಸ್ಟ್ ಲಯನ್ಸ್ ಕ್ಲಬ್‌ನ ಮಾಜಿ ಅಧ್ಯಕ್ಷ ಎಸ್.ಎ.ಮೋಹನ್(78) ಅವರು ಸೋಮವಾರ ಸಂಜೆ ಬೆಂಗಳೂರಿನ ತಮ್ಮ ನಿವಾಸದಲ್ಲಿ ನಿಧನರಾದರು. ಜೆಕೆ ಟೈರ್ಸ್‌ನ ಮಾಜಿ ಎವಿಪಿಯಾದ ಮೃತರು ಪತ್ನಿ ಜಯಂತಿ ಮೋಹನ್, ಪುತ್ರ ಪವಮಾನ್, ಪುತ್ರಿ ಭಾರತಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಮಂಗಳವಾರ ಬೆಳಗ್ಗೆ ಬೆಂಗಳೂರಿನಲ್ಲಿ ಅಂತ್ಯಕ್ರಿಯೆ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮನೆಗಳಿಂದಲೇ ಪರಿಸರ ಸಂರಕ್ಷಣೆ ಪಾಠ ಆರಂಭವಾಗಲಿ

ವಿಶ್ರಾಂತ ಕುಲಪತಿ ಪ್ರೊ. ಕೆ.ಎಸ್.ರಂಗಪ್ಪ ಸಲಹೆ

ಮೈಸೂರು,ಮಾ.5(ಬಿಎಲ್‌ಯು)–ಜಾಗತಿಕ ತಾಪಮಾನ ಹೆಚ್ಚಾಗುತ್ತಿರುವ ಕಾರಣ ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಹೊಣೆಯಾಗಿದೆ. ಈ ಹಿನ್ನೆಲೆಯಲ್ಲಿ ಪರಿಸರ ಸಂರಕ್ಷಣೆ ಬಗ್ಗೆ ಮನೆಗಳಿಂದಲೇ ಪಾಠ ಆರಂಭವಾಗಬೇಕು ಎಂದು ವಿಶ್ರಾಂತ ಕುಲಪತಿ ಪ್ರೊ.ಕೆ.ಎಸ್.ರಂಗಪ್ಪ ಸಲಹೆ ನೀಡಿದ್ದಾರೆ.

ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿ ಇಂದು ಆರಂಭವಾದ ಸುಸ್ಥಿರ ಅಭಿವೃದ್ಧಿ ಮತ್ತು ನಿರ್ವಹಣಾ ಶಾಸ್ತ್ರದ ನಾವೀನ್ಯ ಅನುಸರಣೆಗಳು ಕುರಿತ ಎರಡು ದಿನಗಳ ರಾಷ್ಟ್ರೀಯ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದ ಅವರು, ಪರಿಸರ ಸ್ನೇಹಿ ವಾತಾವರಣ ನಿರ್ಮಾಣ ಮಾಡುವ ನಿಟ್ಟಿನಲ್ಲಿ ಅತ್ಯವಶ್ಯ ಕ್ರಮ ಕೈಗೊಳ್ಳುವುದು ಅನಿವಾರ್ಯವಾಗಿದೆ ಎಂದರು.

ವ್ಯವಹಾರದ ಜೊತೆ ಜೊತೆಯಾಗಿ ಪರಿಸರದ ಮೇಲೆ ಕಡಿಮೆ ಹಾನಿ ಮಾಡುವ ವ್ಯವಸ್ಥೆ ಅಳವಡಿಸಿಕೊಳ್ಳಬೇಕು. ಈ ಹಿನ್ನೆಲೆ ಇದು ಸಾಕಾರಗೊಳ್ಳಲು ಹೊಸ ರೀತಿಯ ಆವಿಷ್ಕಾರಗಳು ನಡೆಯಬೇಕು ಎಂದು ಪ್ರೊ.ರಂಗಪ್ಪ ಹೇಳಿದರು.

ಮಾಲಿನ್ಯ ಮುಕ್ತ ಪರಿಸರ ನಿರ್ಮಾಣ ಮಾಡುವ ನಿಟ್ಟಿನಲ್ಲಿ ಸಮೂಹ ಸಾರಿಗೆ ಬಳಕೆ, ಕಡಿಮೆ ತ್ಯಾಜ್ಯ ಉತ್ಪಾದನೆ, ತ್ಯಾಜ್ಯ ವಸ್ತುಗಳ ಪುನರ್ ಬಳಕೆ, ಸಾವಯವ ಆಹಾರ ಉತ್ಪಾದನೆ ಸೇರಿದಂತೆ ನಾನಾ ಕ್ರಮಗಳ ಅನುಷ್ಠಾನಕ್ಕೆ ಮುಂದಾಗಬೇಕು ಎಂದು ಸಲಹೆ ನೀಡಿದರು. ಸುಸ್ಥಿರ ಅಭಿವೃದ್ಧಿ ಬಹಳ ಮುಖ್ಯವಾಗಿದ್ದು, ಇದನ್ನು ಕಾರ್ಯಗತಗೊಳಿಸಲು ಸುಸ್ಥಿರ ಅಭಿವೃದ್ಧಿ ಪ್ರತಿಯೊಬ್ಬ ನಾಗರಿಕನ ಕರ್ತವ್ಯ ಎಂದು ಭಾವಿಸಬೇಕು ಎಂದು ಪ್ರೊ.ರಂಗಪ್ಪ ಸಲಹೆ ನೀಡಿದರು.

ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ, ಕುಲಸಚಿವ ಪ್ರೊ.ಕೆ.ಎಲ್.ಎನ್. ಮೂರ್ತಿ, ಅಕಾಡೆಮಿಕ್ ಡೀನ್ ಪ್ರೊ.ಎನ್.ಲಕ್ಷ್ಮಿ, ಕಾರ್ಯಕ್ರಮದ ಸಂಯೋಜಕಿ ಡಾ.ಪಿ.ಸವಿತಾ, ಬಳ್ಳಾರಿಯ ವಿಜಯನಗರದ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿ ಪ್ರೊ.ಎಂ.ಎಸ್. ಸುಭಾಷ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.



ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿ ಮಂಗಳವಾರ ಆರಂಭವಾದ ಸುಸ್ಥಿರ ಅಭಿವೃದ್ಧಿ ಮತ್ತು ನಿರ್ವಹಣಾ ಶಾಸ್ತ್ರದ ನಾವೀನ್ಯ ಅನುಸರಣೆಗಳು ಕುರಿತ ಎರಡು ದಿನಗಳ ರಾಷ್ಟ್ರೀಯ ವಿಚಾರ ಸಂಕಿರಣವನ್ನು ವಿಶ್ರಾಂತ ಕುಲಪತಿ ಪ್ರೊ.ಕೆ.ಎಸ್.ರಂಗಪ್ಪ ಉದ್ಘಾಟಿಸಿದರು.

> "ಕಾರ್ಖಾನೆಗಳು ಇಂಗಾಲ ಉತ್ಪಾದನೆ ತಗ್ಗಿಸಬೇಕು, ಪರಿಸರ ಮಾಲಿನ್ಯ ಮುಕ್ತ ಮಾಡಲು ಉದ್ಯೋಗಿಗಳಿಗೆ ಅರಿವು ಕಾರ್ಯಕ್ರಮ ಮಾಡಬೇಕು. ಇಂತಹ ಹಲವು ರೀತಿಯ ಮಾರ್ಗೋಪಾಯ ಕೈಗೊಂಡರೆ ಪರಿಸರದ ಮೇಲಿನ ಹಾನಿ ತಡೆಗಟ್ಟಬಹುದು. ಇದನ್ನು ಅನುಷ್ಠಾನಗೊಳಿಸಲು ಸಂಶೋಧನೆ, ಯೋಜನಾ ವರದಿ ತಯಾರಿಸಲು ಇಂತಹ ಕಾರ್ಯಾಗಾರಗಳು ಬಹುಪಯೋಗಿಯಾಗಲಿದೆ. ಜೊತೆಗೆ ಭವಿಷ್ಯತ್ತಿನಲ್ಲಿ ಎದುರಾಗುವ ಸವಾಲುಗಳನ್ನು ಸಮರ್ಥವಾಗಿ ಎದುರಿಸಲು ಅನುಕೂಲವಾಗುತ್ತದೆ.
> –ಪ್ರೊ.ಕೆ.ಎಸ್.ರಂಗಪ್ಪ, ವಿಶ್ರಾಂತ ಕುಲಪತಿ

ಇಂದು ನರೇಂದ್ರ ಮೋದಿ ಭಾಷಣದ ನೇರ ಪ್ರಸಾರ




ಮೈಸೂರು ಬಿಜೆಪಿ ಕಚೇರಿಯಲ್ಲಿ ಮಹಿಳಾ ಮೋರ್ಚಾ ಅಧ್ಯಕ್ಷೆ ರೇಣುಕಾ ಮಾತನಾಡಿದರು.

ಮೈಸೂರು, ಮಾ.5(ಬಿಎಲ್‌ಯು)– ಪಶ್ಚಿಮ ಬಂಗಾಳದ ಸಂದೇಶ್ ಖಾಲಿ ರ್‍ಯಾಲಿಯಲ್ಲಿ ಪ್ರಧಾನಮಂತ್ರಿ ಮೋದಿ ಮಹಿಳೆಯರನ್ನು ಉದ್ದೇಶಿಸಿ ಮಾಡುವ ಭಾಷಣದ ನೇರ ಪ್ರಸಾರ ವ್ಯವಸ್ಥೆಯನ್ನು ಮೈಸೂರಿನ ಎಲ್ಲಾ ವಿಧಾನಸಭಾ ಕ್ಷೇತ್ರದಲ್ಲೂ ಮಾಡಲಾಗಿದೆ ಎಂದು ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆ ರೇಣುಕಾ ತಿಳಿಸಿದರು.

ನಗರ ಬಿಜೆಪಿ ಕಚೇರಿಯಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಈ ವಿಚಾರ ತಿಳಿಸಿದ ಅವರು, ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಆಯೋಜಿಸಿರುವ ಸಂದೇಶ್ ರ್‍ಯಾಲಿ ಸಮಾವೇಶದಲ್ಲಿ ಲಕ್ಷಾಂತರ ಮಹಿಳೆಯರು ಭಾಗವಹಿಸಲಿದ್ದು, ದೇಶದ ಎಲ್ಲಾ ಜನರು ಆ ಕಾರ್ಯಕ್ರಮ ವೀಕ್ಷಣೆಗೆ ನೇರ ಪ್ರಸಾರ ವ್ಯವಸ್ಥೆ ರೂಪಿಸಲಾಗಿದೆ ಎಂದರು.

ಕಳೆದೆರಡು ತಿಂಗಳಿನಿಂದ ರಾಜ್ಯಾದ್ಯಂತ ನಾರಿ ಶಕ್ತಿ ವಂದನಾ ಕಾರ್ಯಕ್ರಮ ನಡೆಯುತ್ತಿದ್ದು, ನಿನ್ನೆ ಮೋದಿಗಾಗಿ, ರಾಷ್ಟ್ರಕ್ಕಾಗಿ ಓಟ ನಡೆದಿದೆ. ಇಂದು ನಾರಿ ಶಕ್ತಿ ಹೆಸರಿನಲ್ಲಿ ಬೈಕ್ ರ್‍ಯಾಲಿ ನಡೆದಿದೆ ಎಂದರು. ಕಳೆದ ಹತ್ತು ವರ್ಷದ ಅವಧಿಯಲ್ಲಿ ಕೇಂದ್ರದ ಬಿಜೆಪಿ ಸರ್ಕಾರ ಜಾರಿಗೊಳಿಸಿರುವ ಮಹಿಳಾ ಸಬಲೀಕರಣ ಕಾರ್ಯಕ್ರಮಗಳು, ಮಹಿಳಾ ಮೀಸಲಾತಿ, ಆಯುಷ್ಮಾನ್ ಸೇರಿದಂತೆ ಹಲವು ಕಾರ್ಯಕ್ರಮಗಳ ಮಹತ್ವವನ್ನು ದೇಶದ ಜನರಿಗೆ ಮನವರಿಕೆ ಮಾಡಿಕೊಡುವುದು ಇದರ ಮೂಲ ಉದ್ದೇಶ ಎಂದು ರೇಣುಕಾ ತಿಳಿಸಿದರು.



ನಾಳೆ ಮಧ್ಯಾಹ್ನ ಮಹಿಳಾ ಸಮಾವೇಶ ಆಯೋಜಿಸಲಾಗಿದೆ. ಮಂಗಳೂರಿನಲ್ಲಿ ನಿನ್ನೆ ಮೂವರು ಯುವತಿಯರ ಮೇಲೆ ಆ್ಯಸಿಡ್ ಎರಚಿರುವ ಪ್ರಕರಣ ಸೇರಿದಂತೆ ಹಲವು ವಿಚಾರಗಳ ಬಗ್ಗೆ ದನಿ ಎತ್ತಲಾಗುವುದು ಎಂದು ರೇಣುಕಾ ಹೇಳಿದರು.

ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

ಮೈಸೂರು: ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ 2023–24ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಅರ್ಜಿಗಳನ್ನು ಸಲ್ಲಿಸಲು ಮಾ.10ರವರೆಗೆ ಅವಧಿ ವಿಸ್ತರಿಸಲಾಗಿದೆ. 2023–24ನೇ ಸಾಲಿಗೆ ಪೋಷಕರ ವಾರ್ಷಿಕ ವರಮಾನ 2.5 ಲಕ್ಷದೊಳಗಿರುವ ಮೈಸೂರು ತಾಲೂಕಿನ ಮೆಟ್ರಿಕ್ ನಂತರದ ಅರ್ಹ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ನಿಗದಿತ ಸಮಯದೊಳಗೆ www.ssp.postmatric.karnataka.gov.in ನಲ್ಲಿ ಅರ್ಜಿ ಸಲ್ಲಿಸಬಹುದು. ಮಾಹಿತಿಗೆ ದೂ.ಸಂ: 0821–2520910 ಅನ್ನು ಸಂಪರ್ಕಿಸಬಹುದು.

ಪ್ರಾಣಿ, ಪಕ್ಷಿ ಸಂಕುಲದ ಸಂರಕ್ಷಣೆ ನಮ್ಮ ಹೊಣೆ

ಉರಗ ತಜ್ಞ ಸ್ನೇಕ್ ಶಾಮ್ ಸಲಹೆ



ಮೈಸೂರು,ಮಾ.5–ಅನಾದಿ ಕಾಲದಿಂದಲೂ ಮನುಷ್ಯನಿಗೆ ಪ್ರಕೃತಿಯೊಂದಿಗೆ ಅವಿನಾಭಾವ ಸಂಬಂಧವಿದೆ. ಇಂದು ಪ್ರಕೃತಿಯ ಅಸಮತೋಲನ, ಮಾನವ ನಿರ್ಮಿತ ಕೆಲವು ತಪ್ಪುಗಳಿಂದ ಪಕ್ಷಿ ಸಂಕುಲ ನಾಶದ ಅಂಚಿನಲ್ಲಿದೆ. ಬೇಸಿಗೆಯ ತಾಪಮಾನದಲ್ಲಿ ಪ್ರಾಣಿ, ಪಕ್ಷಿಗಳು ನೀರಿಲ್ಲದೆ ಕಂಗೆಡುವ ಸ್ಥಿತಿ ಇದೆ. ಪರಿಸರದ ಜತೆಗೆ ಪ್ರಾಣಿ, ಪಕ್ಷಿಗಳ ಸಂರಕ್ಷಣೆ ನಮ್ಮ ಜವಾಬ್ದಾರಿಯಾಗಿದೆ ಎಂದು ಉರಗ ತಜ್ಞ ಸ್ನೇಕ್ ಶಾಮ್ ಹೇಳಿದರು.

ನಗರದ ಸರಸ್ವತಿಪುರಂನಲ್ಲಿರುವ ಟಿಟಿಎಲ್ ಟ್ರಸ್ಟ್ ಹಾಗೂ ಟಿಟಿಎಲ್ ವಾಣಿಜ್ಯ ವ್ಯವಹಾರ ನಿರ್ವಹಣಾ ಕಾಲೇಜು ಮತ್ತು ಟಿಟಿಎಲ್ ಸ್ವತಂತ್ರ ಪದವಿ ಪೂರ್ವ ಕಾಲೇಜು, ಯುವ ರೆಡ್‌ಕ್ರಾಸ್ ಘಟಕ ಹಾಗೂ ರಾಷ್ಟ್ರೀಯ ಸೇವಾ ಯೋಜನೆ ಘಟಕ ಮತ್ತು ಐಕ್ಯೂಎಸಿ ವತಿಯಿಂದ ಸುಡುಬಿಸಿಲ ತಾಪಕ್ಕೆ ತಲ್ಲಣಿಸುವ ಮೂಕ ಜೀವಿಗಳ ದಾಹಕ್ಕೆ ಮೌನ ಮಿಡಿತ ಪ್ರಾಣಿ–ಪಕ್ಷಿಗಳಿಗೆ ನೀರುಣಿಸುವ ಕಾರ್ಯಕ್ರಮವನ್ನು ಟಿಟಿಎಲ್ ಕಾಲೇಜ್ ಆವರಣದಲ್ಲಿ ಹಕ್ಕಿಗಳಿಗೆ ನೀರುಣಿಸಲು ಬಟ್ಟಲು ಹಾಗೂ ಸಿಮೆಂಟ್ ತೊಟ್ಟಿಗೆ ನೀರು ಹಾಕುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಭವಿಷ್ಯದ ರೂವಾರಿಗಳಾದ ವಿದ್ಯಾರ್ಥಿಗಳಲ್ಲಿ ಈ ಬಗ್ಗೆ ಅರಿವು ಮೂಡಿಸಿ ಪಕ್ಷಿಗಳಿಗೆ ನೀರುಣಿಸುವ ಕಾರ್ಯಕ್ಕೆ ಮುಂದಾಗಿರುವುದು ಮಾದರಿ ಸೇವೆಯಾಗಿದೆ. ವಿದ್ಯಾರ್ಥಿಗಳು ಹಾಗೂ ಯುವ ಸಂಘಟನೆಗಳು ಇದನ್ನು ಅಭಿಯಾನದ ಮಾದರಿಯಲ್ಲಿ ಜಿಲ್ಲೆಯ ಎಲ್ಲೆಡೆ ಹಮ್ಮಿಕೊಳ್ಳಬೇಕು. ತನ್ಮೂಲಕ ಪ್ರಾಣಿ, ಪಕ್ಷಿಗಳನ್ನು ಪ್ರೀತಿಸುವ ವಾತಾವರಣ ನಿರ್ಮಾಣವಾಗಬೇಕು ಎಂದು ಹೇಳಿದರು.

ಟಿಟಿಎಲ್ ಕಾಲೇಜಿನ ಪ್ರಾಂಶುಪಾಲರು, ಆಡಳಿತ ಮತ್ತು ನಿಯೋಜನಾ ಅಧಿಕಾರಿ ಡಾ.ಬಿ.ವಿ.ಪ್ರಶಾಂತ್ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಟಿಟಿಎಲ್ ಟ್ರಸ್ಟ್ ಡಾ.ಗೀತಾ ರಾಮ್‌ದಾಸ್, ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಮ ಅಯ್ಯಂಗಾರ್, ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಭ್ರಮರಾಂಭ, ಪದವಿ ಕಾಲೇಜಿನ ವಾಣಿಜ್ಯಶಾಸ್ತ್ರದ ಉಪನ್ಯಾಸಕ ಪ್ರೊ.ರಾಮಚಂದ್ರಯ್ಯ, ಯುವ ರೆಡ್ ಕ್ರಾಸ್ ಘಟಕದ ಸಂಚಾಲಕ ಎಚ್.ಆರ್.ಗಿರೀಶ್, ಪ್ರಜ್ಞಾವಂತ ನಾಗರಿಕ ವೇದಿಕೆ ಅಧ್ಯಕ್ಷ ಕಡಕೊಳ ಜಗದೀಶ್, ಸುಚೀಂದ್ರ, ಮಿರ್ಲೆ ಪನೀಶ್ ಹಾಗೂ ಶಾಲೆಯ ಶಿಕ್ಷಕ, ಶಿಕ್ಷಕೇತರ ವೃಂದ, ವಿದ್ಯಾರ್ಥಿಗಳು ಹಾಜರಿದ್ದರು.



ಮೈಸೂರಿನ ಜಯಚಾಮರಾಜ ತಾಂತ್ರಿಕ ವಿಶ್ವವಿದ್ಯಾನಿಲಯದ 2023–24ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ವಿಭಾಗದಲ್ಲಿ ಎಸ್.ಚಂದ್ರ ಮೋಹನ್ ನಾಯ್ಡು 2 ಚಿನ್ನದ ಪದಕದೊಂದಿಗೆ ಪ್ರಥಮ ರ್‍ಯಾಂಕ್ ಗಳಿಸಿದ್ದಾರೆ. ಕಾಲೇಜಿನಲ್ಲಿ ನಡೆದ 6ನೇ ಘಟಿಕೋತ್ಸವ ಸಮಾರಂಭದಲ್ಲಿ ಚಿನ್ನದ ಪದಕ ನೀಡಲಾಯಿತು. ಈ ವೇಳೆ ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಉಪಸ್ಥಿತರಿದ್ದರು. ಈತ ಬಂಬೂಬಜಾರ್ ನಿವಾಸಿ ಎಂ.ಸದಾಶಿವ ಮತ್ತು ಎಸ್.ಟಿ.ಸುಜಾತ ದಂಪತಿ ಪುತ್ರ.

ಯಡಹಳ್ಳಿ ಗ್ರಾಮದ ಮಹಿಳೆ ಪತ್ತೆಗೆ ಮನವಿ



ಮೈಸೂರು,ಮಾ.5–ತಿ.ನರಸೀಪುರ ತಾಲೂಕಿನ ಯಡಹಳ್ಳಿ ಗ್ರಾಮದ 26 ವರ್ಷದ ಗೀತಾ ಎಂಬ ಮಹಿಳೆ ಕಾಣೆಯಾಗಿದ್ದಾರೆ. ಕಾಣೆಯಾದ ಮಹಿಳೆಗೆ 26 ವರ್ಷ ವಯಸ್ಸಾಗಿದ್ದು, 5 ಅಡಿ ಎತ್ತರ, ಕೋಲುಮುಖ ಕೆಂಪು ಬಣ್ಣ ಹೊಂದಿದ್ದು, ಮಾನಸಿಕವಾಗಿ ಅಸ್ವಸ್ಥರಾಗಿರುತ್ತಾರೆ. ಕಾಣೆಯಾದ ವೇಳೆ ಕೆಂಪು ಬಣ್ಣದ ಚೂಡಿದಾರ್, ಕಪ್ಪು ಬಣ್ಣದ ಪ್ಯಾಂಟ್ ಹಾಗೂ ಕೆಂಪು ಬಣ್ಣದ ದುಪ್ಪಟ ಧರಿಸಿರುತ್ತಾರೆ. ಮಹಿಳೆ ಬಗ್ಗೆ ಮಾಹಿತಿ ತಿಳಿದು ಬಂದಲ್ಲಿ ಬನ್ನೂರು ಪೊಲೀಸ್ ಠಾಣೆ ಅಥವಾ ಮೈಸೂರು ಜಿಲ್ಲಾ ಕಂಟ್ರೋಲ್ ರೂಂ ದೂ.ಸಂ:08227–275632 ಅನ್ನು ಸಂಪರ್ಕಿಸಬಹುದು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

6.3.2024 ಬುಧವಾರ, ಮಳೆ ನಕ್ಷತ್ರ: ಪೂರ್ವಭಾದ್ರ 4.03.2024ರಿಂದ 16.03.2024
ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಮಾಘ ಮಾಸ, ಕೃಷ್ಣ ಪಕ್ಷ,
ತಿಥಿ: ಏಕಾದಶಿ, ನಕ್ಷತ್ರ: ಪೂಷಾ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

■ **ರಾಮ್‌ಸನ್ಸ್ ಬೊಂಬೆ ಮನೆ :** ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ ಸಂಜೆ 7ರವರೆಗೆ.

■ **ಕೊಂಕಣಿ ಕ್ರಿಶ್ಚಿಯನ್ ಅಸೋಸಿಯೇಷನ್ :** ಗ್ರಾಮೀಣ ಪ್ರದೇಶದ ಸರ್ಕಾರಿ ಶಾಲೆಯ 10ನೇ ತರಗತಿ ವಿದ್ಯಾರ್ಥಿಗಳಿಗೆ ಪರೀಕ್ಷೆಯ ಪೂರ್ವಭಾವಿ ಸಿದ್ಧತೆ ಶಿಬಿರ, ಉದ್ಘಾಟನೆ : ಕ್ಷೇತ್ರ ಶಿಕ್ಷಣಾಧಿಕಾರಿ ಎಂ. ವಿವೇಕಾನಂದ, ಶ್ರೀ ರಾಮಕೃಷ್ಣ ವಿದ್ಯಾಲಯದ ವ್ಯವಸ್ಥಾಪಕರಾದ ಶ್ರೀ ಯುಕ್ತೇಶಾನಂದ ಸ್ವಾಮೀಜಿ, ಸ್ಥಳ: ಕೊಂಕಣ್ ಭವನ, ಬೆಳಗ್ಗೆ 10 ರಿಂದ.

■ **ಮಹಾಜನ ಪ್ರಥಮ ದರ್ಜೆ ಕಾಲೇಜು, ಇತಿಹಾಸ, ಅರ್ಥಶಾಸ್ತ್ರ, ಭೂಗೋಳಶಾಸ್ತ್ರ, ಸಮಾಜಶಾಸ್ತ್ರ ಅಧ್ಯಯನ ವಿಭಾಗಗಳು :** ಅಡ್ವಾನ್ಸ್ಡ್ ರಿಸರ್ಚ್ ಮೆಥೆಡ್ಸ್ ಅಂಡ್ ಅಪ್ರೋಚಸ್ ಕುರಿತು ರಾಷ್ಟ್ರೀಯ ವಿಚಾರ ಸಂಕಿರಣ, ಉದ್ಘಾಟನೆ : ಮೈಸೂರು ವಿವಿ ಕುಲಪತಿ ಪ್ರೊ. ಎನ್.ಕೆ. ಲೋಕನಾಥ್, ಮುಖ್ಯ ಅತಿಥಿಗಳು : ಮಹಾಜನ ಎಜುಕೇಷನ್ ಸೊಸೈಟಿ ಅಧ್ಯಕ್ಷ ಟಿ. ಮುರಳೀಧರ್ ಭಾಗವತ್, ಪ್ರಾಸ್ತಾವಿಕ ನುಡಿ : ಮೈಸೂರು ವಿವಿ ಸಿಡಿಸಿ ನಿರ್ದೇಶಕ ಪ್ರೊ. ಡಿ. ಆನಂದ್, ಅಧ್ಯಕ್ಷತೆ : ಗೌರವ ಕಾರ್ಯದರ್ಶಿ ಡಾ. ಟಿ. ವಿಜಯಲಕ್ಷ್ಮಿ ಮುರಳೀದರ್, ಉಪಸ್ಥಿತರು : ಪ್ರಿನ್ಸಿಪಾಲ್ ಡಾ. ಬಿ.ಆರ್. ಜಯಕುಮಾರಿ, ನಿರ್ದೇಶಕ ಡಾ. ಸಿ.ಕೆ. ರೇಣುಕಾರ್ಯ, ಸ್ಥಳ: ವಿವೇಕಾನಂದ ಸಭಾಂಗಣ, ಬೆಳಗ್ಗೆ 10.15ಕ್ಕೆ.

■ **ಮೈಸೂರು ವಿಶ್ವವಿದ್ಯಾನಿಲಯ, ಡಾ. ಬಾಬು ಜಗಜೀವನರಾಮ್ ಅಧ್ಯಯನ, ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರ, ಕರ್ನಾಟಕ ದಲಿತರ ವೆಲ್‌ಫೇರ್ ಟ್ರಸ್ಟ್ :** ದಲಿತ ಐಕ್ಯತೆ ಸವಾಲುಗಳು ಮತ್ತು ಸಾಧ್ಯತೆಗಳು ಕುರಿತು ಕಾರ್ಯಾಗಾರ, ಉದ್ಘಾಟನೆ : ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಮುಖ್ಯ ಅತಿಥಿಗಳು : ವಿಧಾನಪರಿಷತ್ ಸದಸ್ಯ ಡಾ.ಡಿ. ತಿಮ್ಮಯ್ಯ, ಉಪಸ್ಥಿತರು : ಮೈಸೂರು ವಿವಿ ಕುಲಸಚಿವೆ ಶ್ರೀಮತಿ ವಿ.ಆರ್. ಶೈಲಜಾ, ವಕೀಲ ಹೆಚ್. ಮೋಹನ್‌ಕುಮಾರ್ ಅವರಿಂದ ದಲಿತ ಐಕ್ಯತೆಯ ವಿವಿಧ ಆಯಾಮಗಳು ಕುರಿತು ಉಪನ್ಯಾಸ, ಪ್ರಾಧ್ಯಾಪಕ ಪ್ರೊ. ಕೆ. ಸದಾಶಿವ ಅವರಿಂದ ದಲಿತ ಐಕ್ಯತೆಯ ಗತ–ವರ್ತಮಾನ ಅನುಸಂಧಾನ ಕುರಿತು ಉಪನ್ಯಾಸ, ಅಧ್ಯಕ್ಷತೆ : ಡಾ. ಬಾಬು ಜಗಜೀವನರಾಮ್ ಅಧ್ಯಯನ, ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರದ ನಿರ್ದೇಶಕ ಪ್ರೊ. ಆರ್. ತಿಮ್ಮರಾಯಪ್ಪ, ಪ್ರಾಸ್ತಾವಿಕ ನುಡಿ : ಕರ್ನಾಟಕ ದಲಿತರ ವೆಲ್‌ಫೇರ್ ಟ್ರಸ್ಟ್ ಗೌರವ ಅಧ್ಯಕ್ಷ ಪ್ರೊ. ಟಿ.ಎಂ. ಮಹೇಶ್, ಸ್ಥಳ: ಡಾ. ಬಾಬು ಜಗಜೀವನರಾಮ್ ಅಧ್ಯಯನ, ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರದ ಸಭಾಂಗಣ, ಮಾನಸಗಂಗೋತ್ರಿ, ಬೆಳಗ್ಗೆ 11ಕ್ಕೆ.

■ **ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿ :** ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ವೆಬಿನಾರ್, ಉಪಸ್ಥಿತರು : ಪ್ರೊ. ಸತೀನಾಥ್ ಮುಖ್ಯೋಪಾಧ್ಯಾಯ, ಡಾ. ಸುನೇತ್ರ ಮಂಡಲ್, ಡಾ. ಕುನಾಲ್ ಶರಣ್, ಬೆಳಗ್ಗೆ 11 ರಿಂದ.

■ **ವ್ಯವಸ್ಥಾಪಕರು :** ಕಾಶಿ ವಿಶ್ವನಾಥ ಮಂದಿರದ ಬಗ್ಗೆ ಡಾ. ವಿಕ್ರಂ ಸಂಪತ್ ಅವರು ಬರೆದಿರುವ ಪುಸ್ತಕ ಬಿಡುಗಡೆ ಸಮಾರಂಭ, ಪುಸ್ತಕ ಬಿಡುಗಡೆ : ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ, ಸ್ಥಳ: ಮೈಸೂರಿನ ಅವಧೂತ ದತ್ತ ಪೀಠದ ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ, ಬೆಳಿಗ್ಗೆ 11.30ಕ್ಕೆ


■ **ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ :** 88ನೇ ತ್ರಿಮೂರ್ತಿ ಶಿವಜಯಂತಿ ಮಹೋತ್ಸವ, ಅತಿಥಿಗಳು : ಮಾಜಿ ಮೇಯರ್ ಶಿವಕುಮಾರ್, ಈವಿವಿ, ಕುವೆಂಪುನಗರ ಕೇಂದ್ರ ಸಂಚಾಲಕರಾದ ಬಿ.ಕೆ.ಯೋಗೇಶ್ವರಿ ಅವರಿಂದ ನಿಜ ಜೀವನದಲ್ಲಿ ಆಧ್ಯಾತ್ಮದ ಅವಶ್ಯಕತೆ ಕುರಿತು ಪ್ರವಚನ, ಚಂದನ್ ಮತ್ತು ತಂಡದಿಂದ ಹಾಡುಗಾರಿಕೆ, ಸ್ಥಳ: ಓಂ ಶಾಂತಿ ಮಂಟಪ, ಕಾಳಿದಾಸ ರಸ್ತೆ, ಚಂದ್ರಕಲಾ ಆಸ್ಪತ್ರೆ ಬಳಿ, ಸಂಜೆ 6ರಿಂದ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ–ಡಾ. ವಿ.ರಂಗನಾಥ್, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಚಾಯ್ಸ್ ಈಕ್ವಿಟಿ ಗಳಿಕೆ–ಉಳಿಕೆ– ಹೂಡಿಕೆ–ಹಣಕಾಸಿನ ಮಾಹಿತಿಯ ಬಾನುಲಿ ಸರಣಿ, ಪ್ರಸ್ತುತಿ–ಮೂಕನಹಳ್ಳಿ ರಂಗಸ್ವಾಮಿ, 6.40 ಪದ ಸಂಸ್ಕೃತಿ–ಡಾ. ಟಿ.ವಿ. ಸತ್ಯನಾರಾಯಣ, 6.50 ರೈತರಿಗೆ ಸಲಹೆ, 7.15 ಆರೋಗ್ಯವಾಣಿ –ಪ್ರಾಯೋಜಿತ ಕಾರ್ಯಕ್ರಮ, 10.00 ಜಿ.ಉಷಾ–ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.30 ದೇವರನಾಮ–ಶೇಷಗಿರಿದಾಸ್, ಮಾಲತೀ ಶರ್ಮ, 12.45 ಜನಪದ ಸಂಗೀತ, 1.20 ಭಾವಗೀತೆಗಳು–ಶೈಲಾ ಸಿದ್ಧರಾಮಪ್ಪ, 3.00 ಬಿ.ನಾಗೇಂದ್ರಪ್ಪ–ಕ್ಲಾರಿಯೋನೆಟ್ ವಾದನ, 4.00 ಮಹಿಳಾರಂಗ–ಯಶಸ್ವಿನಿ ಮಹಿಳಾ ಸಂಘದ ಸದಸ್ಯೆಯರಿಂದ ಮಹಿಳಾ ದಿನಾಚರಣೆ ಕುರಿತು ವಿಶೇಷ ಕಾರ್ಯಕ್ರಮ ವೈವಿಧ್ಯ, 4.45 ಹಿಂದಿ ಪಾಠ, ಪ್ರಸ್ತುತಿ– ಅನೂರಾಧಾಮೂರ್ತಿ, 6.50 ಕೃಷಿರಂಗ – ಸಮಗ್ರ ಸಾವಯವ ಕೃಷಿಯ ಪ್ರಾಮುಖ್ಯತೆ ಕುರಿತು ಪಿ.ದಯಾನಂದ ಅವರೊಂದಿಗೆ ಸಂದರ್ಶನ, 8.00 ಕ್ಷಿತಿಜ–ಸಾಹಿತ್ಯ ಸಾಧಕರೊಂದಿಗೆ ಸಂವಾದ, 9.30 ನಾಟಕ: 'ಅಭಿಜ್ಞಾನ ಶಾಕುಂತಲ' ಮೂಲ ಸಂಸ್ಕೃತ ಮಹಾಕವಿ ಕಾಳಿದಾಸ ಕನ್ನಡ ಅನುವಾದ ಡಾ.ಜಿ.ತಿಪ್ಪೇಸ್ವಾಮಿ, ರೇಡಿಯೋ ರಾಂತರ ಅಂಜಲಿ ಶರ್ಮ, ನಿರ್ಮಾಣ–ಪ್ರಭುಸ್ವಾಮಿ ಮಳಿಮಠ, 10.00 ಹಳ್ಳೀಹಾಡು, 10.30 ಸವಿನೆನಪು

ಬಹುರೂಪಿ ನಾಟಕೋತ್ಸವ



ಕಿಂದರಿ ಜೋಗಿ (ಸಂಜೆ 5.30ಕ್ಕೆ)

ಜನಪದ ಸಂಭ್ರಮ

ರಂಗಾಯಣ: ಇವ ನಮ್ಮವ ಇವ ನಮ್ಮವ ಬಹುರೂಪಿ ರಾಷ್ಟ್ರೀಯ ನಾಟಕೋತ್ಸವ, ಉದ್ಘಾಟನೆ: ಹಿರಿಯ ಜನಪದ ಗಾಯಕ ಡಾ. ಮಳವಳ್ಳಿ ಮಹದೇವಸ್ವಾಮಿ, ಮುಖ್ಯ ಅತಿಥಿಗಳು: ಜನಪದ ವಿದ್ವಾಂಸ ಡಾ. ಜಯಲಕ್ಷ್ಮಿ ಸೀತಾಪುರೆ. ಜ್ಯೋಗತಿ ನೃತ್ಯ: ಜೀವನ ಬೆಳಕು ಕಲಾ ತಂಡ, ರೋಣ, ಗದಗ; ಗೀಗೀ ಪದ : ಜೈಭೀಮ್ ಗೀಗೀ ಕಲಾ ತಂಡ, ನೀಲಗುಂಡ, ಗದಗ

ವನರಂಗ (ಸಂಜೆ 7ಕ್ಕೆ)

ಮೈಸೂರಿನ ಶ್ರೀರಾಮಚಂದ್ರ ಹಡಪದ ಮತ್ತು ತಂಡದಿಂದ ವಚನ ಗಾಯನ


ಚಾಮುಂಡಿಬೆಟ್ಟದ ನಂದಿ ರಸ್ತೆಯ ಮೂರು ಕಡೆ ಭೂ ಕುಸಿತ

ಎರಡೂವರೆ ವರ್ಷವಾದರೂ ತಡೆಗೋಡೆ ಕಾಮಗಾರಿ ಪೂರ್ಣಗೊಂಡಿಲ್ಲ





- ಇನ್ನೂ 3 ತಿಂಗಳು ಬೇಕೆನ್ನುವ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು
- ದೊಡ್ಡ ಬಂಡೆ ತೆರವುಗೊಳಿಸುವ ಕಾರ್ಯ ಪ್ರಗತಿಯಲ್ಲಿದೆಯಂತೆ



ಚಾಮುಂಡಿಬೆಟ್ಟದ ನಂದಿಗೆ ಹೋಗುವ ರಸ್ತೆಯಲ್ಲಿ ಭೂ ಕುಸಿತವಾಗಿದ್ದ ಸ್ಥಳದಲ್ಲಿ ತಡೆಗೋಡೆ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿರುವುದು.ಚಿತ್ರಗಳು: ಲಕ್ಷ್ಮಿನಾರಾಯಣ ಯಾದವ್

ಮೈಸೂರು, ಮಾ. 5(ಆರ್‌ಕೆ)– ಕಳೆದ ಎರಡೂವರೆ ವರ್ಷದ ಹಿಂದೆ ಕುಸಿದಿದ್ದ ಚಾಮುಂಡಿಬೆಟ್ಟದ ನಂದಿಗೆ ಹೋಗುವ ರಸ್ತೆ ತಡೆಗೋಡೆ ನಿರ್ಮಾಣ ಕಾಮಗಾರಿ ಇನ್ನೂ ಪೂರ್ಣಗೊಂಡಿಲ್ಲ.

ವ್ಯೂ ಪಾಯಿಂಟ್ ಮತ್ತು ನಂದಿ ವಿಗ್ರಹದ ನಡುವೆ 3 ಕಡೆ ಭಾರೀ ಮಳೆಯಿಂದ ಭೂ ಕುಸಿತವಾಗಿತ್ತು. ಆ ಪೈಕಿ ಎರಡನೇ ವ್ಯೂ ಪಾಯಿಂಟ್ ಬಳಿ ಸುಸ್ವಾಗತ ಫಲಕದ ಕೆಳಗೆ ಕುಸಿದಿದ್ದ ರಸ್ತೆಗೆ ತಡೆಗೋಡೆ ನಿರ್ಮಿಸುವ ಕಾಮಗಾರಿ ಭರದಿಂದ ನಡೆಯುತ್ತಿದೆಯಾದರೂ, ಅಡಿಯಿಂದ ತಂತ್ರಜ್ಞಾನ ಬಳಸಿ ಸಿಮೆಂಟ್ ಕಾಂಕ್ರಿಟ್ ತಡೆಗೋಡೆ ನಿರ್ಮಾಣ ಮಾಡಬೇಕಾಗಿರುವುದರಿಂದ ಕಾಮಗಾರಿ ಇನ್ನೂ ಪೂರ್ಣಗೊಂಡಿಲ್ಲ. ಅಂದಿನಿಂದ ನಂದಿ ಮಾರ್ಗದ ರಸ್ತೆಯನ್ನು ಬಂದ್ ಮಾಡಿ, ವಾಹನ ಸಂಚಾರ ನಿಷೇಧಿಸಲಾಗಿದೆ. ಪರಿಣಾಮ ಪ್ರವಾಸಿಗರು ಭೇಟಿ ನೀಡಲು ಸಾಧ್ಯವಾಗುತ್ತಿಲ್ಲ. ರೀಟೇನಿಂಗ್ ವಾಲ್ ನಿರ್ಮಿಸುತ್ತಿರುವ ಲೋಕೋಪಯೋಗಿ ಇಲಾಖೆ ಎಕ್ಸಿಕ್ಯೂಟಿವ್ ಇಂಜಿನಿಯರ್ ರಾಜು, ಮೇ ಅಂತ್ಯದೊಳಗಾಗಿ ಕೆಲಸ ಪೂರ್ಣಗೊಳಿಸುತ್ತೇವೆಂದು ಹೇಳಿದರಾದರೂ, ಕಾಮಗಾರಿಯ ಸ್ವರೂಪ, ಪ್ರಗತಿಯನ್ನು ನೋಡಿದರೆ 3 ತಿಂಗಳಲ್ಲಿ ಯೋಜನೆ ಪೂರ್ಣಗೊಳಿಸುವುದು ಅಸಾಧ್ಯ. ಆ ನಡುವೆ ಮಳೆಗಾಲ ಆರಂಭವಾದರೆ ತಡೆಗೋಡೆ ನಿರ್ಮಾಣ ಕಾಮಗಾರಿಗೆ ತೊಂದರೆಯಾಗುತ್ತದೆ. 2021ರ ಅಕ್ಟೋಬರ್ 20ರಂದು ಮೊದಲನೇ ಬಾರಿ ನಂದಿಗೆ ಹೋಗುವ ರಸ್ತೆ ಕುಸಿದಿತ್ತು. 2021ರ ಅಕ್ಟೋಬರ್ 31ರಂದು ಎರಡನೇ ಕುಸಿತ ಸಂಭವಿಸಿತ್ತು. ನಂತರ ನವೆಂಬರ್ 4ರಂದು ಅದೇ ರಸ್ತೆಯಲ್ಲಿ 3ನೇ ಕುಸಿತವಾಗಿತ್ತು.

ಭಾರೀ ಪ್ರಮಾಣದಲ್ಲಿ ಕುಸಿದಿದ್ದ 2ನೇ ವ್ಯೂ ಪಾಯಿಂಟ್ ಬಳಿಯಲ್ಲಿ ತಡೆಗೋಡೆ ನಿರ್ಮಿಸಲು ಸರ್ಕಾರ 9.75 ಕೋಟಿ ರೂ. ಅನುದಾನ ಮಂಜೂರು ಮಾಡಿದ್ದರಿಂದ 2022ರ ಆಗಸ್ಟ್ ಮೊದಲ ವಾರ ತಡೆಗೋಡೆ ನಿರ್ಮಿಸುವ ಕಾರ್ಯ ಆರಂಭಿಸಲಾಗಿತ್ತು. ಇಂದು 'ಮೈಸೂರು ಮಿತ್ರ' ಪ್ರತಿನಿಧಿ ಸ್ಥಳಕ್ಕೆ ಭೇಟಿ ನೀಡಿದಾಗ ಕೇವಲ ಐದಾರು ಮಂದಿ ಕಾರ್ಮಿಕರು ಕೆಲಸ ಮಾಡುತ್ತಿರುವುದು ಕಂಡುಬಂದಿತು. ಹಾಗಾಗಿ ಲೋಕೋಪಯೋಗಿ ಇಲಾಖೆ ಇಂಜಿನಿಯರ್‌ಗಳು ಹೇಳುವಂತೆ 2 ಅಥವಾ 3 ತಿಂಗಳಲ್ಲಿ ಈ ಕಾಮಗಾರಿ ಮುಗಿಯುವ ಲಕ್ಷಣಗಳು ಕಾಣುತ್ತಿಲ್ಲ.

ವಿದ್ಯುತ್ ಸಂಪರ್ಕವಿಲ್ಲದ ಕಾರಣ, ಬಂಡೆಗಳನ್ನು ತೆರವುಗೊಳಿಸಲು ಡೀಸೆಲ್ ಜನರೇಟರ್ ಬಳಸಿ ಯಂತ್ರದ ಮೂಲಕ ಬಂಡೆ ಕೊರೆಯುವ ಕೆಲಸ ಮುಂದುವರಿದಿದೆ. ಮಳೆ ನೀರು ಸರಾಗವಾಗಿ ಹರಿದು ಹೋಗಲು ಜಲ್ಲಿ ಹಾಕಿ ಕಾಂಕ್ರಿಟ್ ಡ್ರೇನ್ ಮಾಡುವ ಹಾಗೂ ರೀಟೇನಿಂಗ್ ವಾಲ್ ಸುರಕ್ಷತೆಗೆ ತಂತ್ರಜ್ಞಾನ ಬಳಸಿ ಹಿಡಿದಿಡುವ ಕೆಲಸವೂ ಪ್ರಗತಿಯಲ್ಲಿದೆ.

ಈ ನಡುವೆ ಅನುದಾನ ಬಿಡುಗಡೆಯಾಗುವುದು ತಡವಾಗಿದ್ದರಿಂದ ಗುತ್ತಿಗೆದಾರ ರಾಮಾಂಜನೇಯಲು ಕೆಲ ದಿನ ಕಾಮಗಾರಿ ಸ್ಥಗಿತಗೊಳಿಸಿದರು. ಈಗ ಅವರ ಖಾತೆಗೆ ಹಣ ವರ್ಗಾವಣೆ ಮಾಡಿದ್ದೇವೆ. ಅತೀ ಜರೂರಾಗಿ ಕಾಮಗಾರಿ ನಡೆಯುತ್ತಿರುವುದರಿಂದ ಎರಡೂವರೆ ಅಥವಾ ಮೂರು ತಿಂಗಳಲ್ಲಿ ಯೋಜನೆ ಪೂರ್ಣಗೊಳಿಸುತ್ತೇವೆ ಎಂದು ಪಿಡಬ್ಲ್ಯೂಡಿ ಎಕ್ಸಿಕ್ಯೂಟಿವ್ ಇಂಜಿನಿಯರ್ ರಾಜು ಭರವಸೆ ನೀಡಿದ್ದಾರೆ.

ಬೆಂಗಳೂರಿನ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಸೈನ್ಸ್ ಸಂಸ್ಥೆ (ಐಐಎಸ್‌ಸಿ) ತಂತ್ರಜ್ಞರು ಸ್ಥಳಕ್ಕೆ ಭೇಟಿ ನೀಡಿ ಜಿಯೋಟ್ರಿಯಲ್ ಟೆಕ್ನಾಲಜಿ ಬಳಸಿ ತಡೆಗೋಡೆ ನಿರ್ಮಿಸಬೇಕೆಂದು ಶಿಫಾರಸು ನೀಡಿದ್ದಂತೆಯೇ ಅತ್ಯಾಧುನಿಕ ತಂತ್ರಜ್ಞಾನದೊಂದಿಗೆ ತಡೆಗೋಡೆ ನಿರ್ಮಾಣ ಕಾಮಗಾರಿ ನಡೆಯುತ್ತಿದೆ. ಮುಂದೆ ಎಷ್ಟೇ ಮಳೆ ಬಂದು ಬೆಟ್ಟದಿಂದ ನೀರು ಹರಿದರೂ ರಸ್ತೆ ಕುಸಿಯದಂತೆ ಸುಮಾರು 50 ಅಡಿ ಪಾಯದಿಂದ ಕಬ್ಬಿಣ ಅಳವಡಿಸಿ, ಸಿಮೆಂಟ್ ಕಾಂಕ್ರಿಟ್ ಗೋಡೆ ನಿರ್ಮಿಸಲಾಗುತ್ತಿದೆ. ಅಡಿಯಿಂದ ಕೆಲಸ ಮಾಡುವುದು ತ್ರಾಸದಾಯಕವಾಗಿದ್ದರಿಂದ ತಡವಾಯಿತು. ಇನ್ನು ಮುಂದೆ ತ್ವರಿತವಾಗಿ ಕೆಲಸ ನಡೆಯುತ್ತದೆ ಎಂದು ರಾಜು ತಿಳಿಸಿದ್ದಾರೆ.

ನಂದಿ ರಸ್ತೆಯಲ್ಲಿ ಅಗ್ನಿಗೆ ಆಹ್ವಾನ!



ಮೈಸೂರು, ಮಾ. 5(ಆರ್‌ಕೆ)– ಭೂ ಕುಸಿತ ಉಂಟಾಗಿರುವ ನಂದಿ ರಸ್ತೆ ಬದಿ ಒಣಗಿದ ಹುಲ್ಲಿನಿಂದಾಗಿ ಚಾಮುಂಡಿಬೆಟ್ಟಕ್ಕೆ ಬೆಂಕಿ ಬೀಳುವ ಅಪಾಯವಿದೆ.

ವ್ಯೂ ಪಾಯಿಂಟ್ ಮತ್ತು ನಂದಿ ಪ್ರತಿಮೆ ನಡುವೆ ತಡೆಗೋಡೆ ನಿರ್ಮಿಸುವ ಕಾಮಗಾರಿ ಪ್ರಗತಿಯಲ್ಲಿರುವುದರಿಂದ ನಂದಿಗೆ ಹೋಗುವ ರಸ್ತೆ ಸಂಚಾರ ಬಂದ್ ಮಾಡಲಾಗಿದೆ. ಈಗ ಎರಡೂ ಬದಿಯಲ್ಲಿ ಬೆಳೆದಿರುವ ಹುಲ್ಲು, ಗಿಡಗಂಟಿಗಳನ್ನು ತೆರವುಗೊಳಿಸಿಲ್ಲ.

ಅವು ಒಣಗಿ ತರಗಿನಂತಾಗಿರುವುದರಿಂದ ಅಲ್ಲಿ ಓಡಾಡುವ ಯಾರಾದರೂ ಬೀಡಿ, ಸಿಗರೇಟ್ ಹಚ್ಚಿ, ಕಡ್ಡಿ ಬಿಸಾಡಿದರೆ ಬೆಂಕಿ ಹೊತ್ತಿಕೊಂಡು ಬೆಟ್ಟಕ್ಕೆ ಹರಡುವ ಅಪಾಯವಿದೆ. ಬೇಸಿಗೆ ಸುಡು ಬಿಸಿಲಿನಿಂದಾಗಿ ಬೆಂಕಿ ಕೆನ್ನಾಲಿಗೆ ಬಲು ಬೇಗ ಹರಡುವ ಸಾಧ್ಯತೆ ಇರುವುದರಿಂದ ನಂದಿ ರಸ್ತೆಯ ಇಕ್ಕೆಲಗಳಲ್ಲಿ ಬೆಳೆದಿರುವ ಪೊದೆ ಹಾಗೂ ಗಿಡಗಂಟಿಯನ್ನು ತೆರವುಗೊಳಿಸಿ ನಿರ್ವಹಿಸುವುದು ಅವಶ್ಯವಾಗಿದೆ. ಆ ಮಾರ್ಗ ವಾಹನ ಸಂಚಾರ ನಿರ್ಬಂಧಿಸಿರುವುದರಿಂದ ಬೆಂಕಿ ಕಾಣಿಸಿಕೊಂಡರೂ, ಅದು ವ್ಯಾಪಕವಾಗಿ ಆವರಿಸುವವರೆಗೆ ಯಾರಿಗೂ ತಿಳಿಯುವುದಿಲ್ಲ ಹಾಗೂ ತಡೆಗೋಡೆ ನಿರ್ಮಾಣ ಕಾಮಗಾರಿ ನಡೆಯುತ್ತಿರುವುದರಿಂದ ಅಗ್ನಿಶಾಮಕ ಠಾಣಾ ವಾಹನಗಳು ಹೋಗಲು ಸಾಧ್ಯವಾಗುವುದಿಲ್ಲ. ಆದ್ದರಿಂದ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳು ರಸ್ತೆ ಬದಿಯ ಒಣಗಿದ ಗಿಡಗಂಟಿ, ಹುಲ್ಲಿನ ಪೊದೆಯನ್ನು ತೆರವುಗೊಳಿಸಿ ಉಂಟಾಗಬಹುದಾದ ಚಾಮುಂಡಿಬೆಟ್ಟದ ಅಗ್ನಿ ಅವಘಡವನ್ನು ತಪ್ಪಿಸುವುದು ಅಗತ್ಯವಾಗಿದೆ.

ಅಗ್ರಹಾರದಲ್ಲಿ ಶಾಸಕ ಶ್ರೀವತ್ಸ ಪಾದಯಾತ್ರೆ ಮೂಲಕ ಸಾರ್ವಜನಿಕರ ಅಹವಾಲು ಸ್ವೀಕಾರ



ಶಾಸಕ ಟಿ.ಎಸ್.ಶ್ರೀವತ್ಸ ಅವರು ಅಗ್ರಹಾರದಲ್ಲಿ ಚರಂಡಿ ಕಾಮಗಾರಿ ಪರಿಶೀಲಿಸಿದರು.

ಮೈಸೂರು, ಮಾ.5(ಎಸ್‌ಬಿಡಿ)– ಮೈಸೂರಿನ ಕೃಷ್ಣರಾಜ ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಅವರು ಮಂಗಳವಾರ 51ನೇ ವಾರ್ಡ್ ಅಗ್ರಹಾರದಲ್ಲಿ ಪಾದಯಾತ್ರೆ ನಡೆಸಿ, ಸಾರ್ವಜನಿಕರ ಅಹವಾಲು ಆಲಿಸಿದರು. ಮುಖ್ಯ ರಸ್ತೆ ಹಾಗೂ ಕ್ರಾಸ್‌ಗಳಲ್ಲಿ ಸಂಚರಿಸಿ, ಅಲ್ಲಿನ ಮೂಲ ಸೌಕರ್ಯಗಳ ವ್ಯವಸ್ಥೆ ಪರಿಶೀಲಿಸುವುದರ ಜೊತೆಗೆ ಸಾರ್ವಜನಿಕರ ಸಮಸ್ಯೆಗಳ ಬಗ್ಗೆ ಕೇಳಿ ತಿಳಿದುಕೊಂಡರು. ಅತ್ಯಗತ್ಯ ಸೌಕರ್ಯಗಳ ಕೊರತೆ ಇದ್ದ ಕಡೆ ಕೂಡಲೇ ಕ್ರಮ ವಹಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮೈಸೂರಿನ ರಾಮಾನುಜ ರಸ್ತೆಯಲ್ಲಿ ಚರಂಡಿಗೆ ಕಲ್ಲು ಹಾಸು ಅಳವಡಿಸುವ ಕಾಮಗಾರಿಯನ್ನು ಪರಿಶೀಲಿಸಿದ ಅವರು ಶೀಘ್ರ ಕಾಮಗಾರಿ ಪೂರ್ಣಗೊಳಿಸುವಂತೆ ಗುತ್ತಿಗೆದಾರರಿಗೆ ತಿಳಿಸಿದರು. ಇಲ್ಲಿನ ರಸ್ತೆ ಅಭಿವೃದ್ಧಿ ಕಾಮಗಾರಿ ಆಮೆಗತಿಯಲ್ಲಿ ಸಾಗಿರುವುದರಿಂದ ತುಂಬಾ ತೊಂದರೆಯಾಗುತ್ತಿದೆ ಎಂದು ಸ್ಥಳೀಯರು ದೂರಿದರು. ಜನ ಓಡಾಡುವುದಕ್ಕೂ ಕಷ್ಟವಾಗಿದೆ. ನಗರ ಸಾರಿಗೆ ಬಸ್ ಸಂಚರಿಸಲು ಸಾಧ್ಯವಾಗುತ್ತಿಲ್ಲ. ಮಳೆಯಾದರೆ ಇನ್ನೂ ತೊಂದರೆಯಾಗುತ್ತದೆ. ಹಾಗಾಗಿ ತ್ವರಿತ ಗತಿಯಲ್ಲಿ ಕಾಮಗಾರಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರು. ಈ ವೇಳೆ ವೇಗವಾಗಿ ಕಾಮಗಾರಿ ಪೂರ್ಣಗೊಳಿಸಲು ಸೂಚಿಸುವುದಾಗಿ ಶಾಸಕರು ಭರವಸೆ ನೀಡಿದರು. ನಗರ ಪಾಲಿಕೆ ಸದಸ್ಯರ ಅಧಿಕಾರ ಮುಗಿದಿದೆ ಎಂದು ಅಧಿಕಾರಿಗಳು ನಿರ್ಲಕ್ಷ್ಯ ಧೋರಣೆ ತಾಳಬಾರದು. ಸಾರ್ವಜನಿಕ ಸಮಸ್ಯೆಗಳನ್ನು ಯಾರೇ ಗಮನಕ್ಕೆ ತಂದರೂ ಅಧಿಕಾರಿಗಳೂ ಕೂಡಲೇ ಕ್ರಮ ವಹಿಸಬೇಕು. ಮೂಲ ಸೌಕರ್ಯಕ್ಕೆ ಆದ್ಯತೆ ನೀಡಬೇಕು. ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು ಎಂದು ಶಾಸಕರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ವೇಳೆ ನಗರ ಪಾಲಿಕೆ ಮಾಜಿ ಸದಸ್ಯ ಬಿ.ವಿ.ಮಂಜುನಾಥ್, ಬಿಜೆಪಿ ಮುಖಂಡ ಜೋಗಿ ಮಂಜು ಸೇರಿದಂತೆ ಮುಖಂಡರು ಉಪಸ್ಥಿತರಿದ್ದರು.

ಇಂದು ಶಾಸಕರ ಕಚೇರಿ ಉದ್ಘಾಟನೆ

ಮೈಸೂರು: ಮಹಾನಗರ ಪಾಲಿಕೆ ಮುಖ್ಯ ಕಚೇರಿಯಲ್ಲಿ ಕೃಷ್ಣರಾಜ ಕ್ಷೇತ್ರದ ಶಾಸಕರ ಕಚೇರಿ 'ಕರ್ತವ್ಯ ಭವನ' ಬುಧವಾರ ಸಂಜೆ 5ಕ್ಕೆ ಉದ್ಘಾಟನೆಗೊಳ್ಳಲಿದೆ. ಇನ್ನು ಮುಂದೆ ಕ್ಷೇತ್ರದ ಸಾರ್ವಜನಿಕರು ಕಚೇರಿಗೆ ಭೇಟಿ ನೀಡಿ ತಮ್ಮ ಅಹವಾಲು ಸಲ್ಲಿಸಬಹುದು ಎಂದು ಶಾಸಕ ಟಿ.ಎಸ್.ಶ್ರೀವತ್ಸ ತಿಳಿಸಿದ್ದಾರೆ.

ನಿಧನ



ಯಜಮಾನ್. ಬಿ ರಾಮಸ್ವಾಮಿರವರು

(ಶ್ರೀ ವಿದ್ಯಾಗಣಪತಿ ದೇವಸ್ಥಾನ ಟ್ರಸ್ಟ್ ಖಜಾಂಚಿ, ಪಡುವಾರಹಳ್ಳಿ)

ಇಂದು ದಿನಾಂಕ: 05.03.2024 ಸಂಜೆ ನಿಧನ ಹೊಂದಿರುತ್ತಾರೆ. ಹಾಲಿ ವಾಸ ವಿಜಯನಗರ ಒಂದನೇ ಹಂತ, ಮನೆ ನಂ. 258, 9ನೇ ಕ್ರಾಸ್ ಇವರ ಅಂತಿಮ ವಿಧಿ ವಿಧಾನಗಳನ್ನು ದಿನಾಂಕ: 06.03.2024ರ ಬೆಳಗ್ಗೆ 11:30ಕ್ಕೆ ಗೋಕುಲಂ ರುದ್ರ ಭೂಮಿಯಲ್ಲಿ ನೆರವೇರಿಸಲಾಗುವುದು.

ದುಃಖತಪ್ತರು: ಪತ್ನಿ, ಮಕ್ಕಳು, ತಮ್ಮಂದಿರು, ಅಳಿಯಂದಿರು ಹಾಗೂ ಬಂಧುಮಿತ್ರರು

ಪಿಎಚ್.ಡಿ ಪದವೀಧರೆ

ಕೆ.ಎಂ. ಜ್ಯೋತಿ



ಡಾ.ಎಂ.ರಾಮಕೃಷ್ಣ ಅವರ ಮಾರ್ಗದರ್ಶನದಲ್ಲಿ ಕೆಎಂ.ಜ್ಯೋತಿ ಅವರು ಕನ್ನಡ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ 'ಕೆ.ಸಿ.ಶಿವಪ್ಪ ಅವರ ಸಾಹಿತ್ಯ' ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ನಕ್ಕರೆ ಅದೇ ಸ್ವರ್ಗ

ಆತ : "ಏನಿದು, ಎರಡೂ ಕೈಗಳಲ್ಲಿ ವಾಚ್ ಕಟ್ಟಿದ್ದೀಯಾ?"
ಈತ : "ಒಂದೇ ಸಮಯಗಳಿಲ್ಲ. ಬಲಗೈ ವಾಚ್ ಒಂದು ಗಂಟೆ ಹಿಂದಿದೆ. ದಿನಕ್ಕೆ ಒಂದು ಗಂಟೆ ಉಳಿತಾಯವಾಗುತ್ತದೆ"
ಆತ : "ಹೇಗೆ?"
ಈತ : "ಎಡಗೈ ವಾಚ್ ಪ್ರಕಾರ ಕಚೇರಿಗೆ ಹೋಗಿ ಬಲಗೈ ಗಡಿಯಾರದ ಪ್ರಕಾರ ಮನೆಗೆ ಬಂದು ಬಿಡ್ತೀನಿ!"

ಮೈಸೂರು ಮಿತ್ರ
ಬುಧವಾರ, 6 ಮಾರ್ಚ್ 2024
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ಇಂದಿನ ಕಷ್ಟಗಳನ್ನೆದುರಿಸುವವನೆದುರು ನಾಳಿನ ಕಷ್ಟಗಳು ಹೋಗಲು ಹೆದರುತ್ತವೆ –ಸುಭಾಷಿತ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಒಡುಕು ಬಾಯಿ ದದ್ದು ಕೈ

ನಿಮ್ಮ ಪತ್ರಗಳು

■ ಮೈಸೂರು ನಗರ ಪಾಲಿಕೆಯ ಗಮನಕ್ಕೆ!



ಮಾನ್ಯರೆ,

ಸರಕಾರಿ ಶಾಲೆಗಳೆಂದರೆ ನಮ್ಮ ಜಿಲ್ಲಾಡಳಿತಕ್ಕೆ ಅಸಡ್ಡೆ! ಬಹುತೇಕ ಸರಕಾರಿ ಶಾಲೆಗಳ ಪ್ರವೇಶ ದ್ವಾರದಲ್ಲಿ ಕಸದ ತಿಪ್ಪೆ ನಿರ್ಮಾಣವಾಗಿರುತ್ತದೆ. ಜೊತೆಗೆ ಧೂಮಕೇತುಗಳ ಕಾಟ ಬೇರೆ. ಮೈಸೂರಿನ ಅಶೋಕಪುರಂ ಬಡಾವಣೆಯ ಡಾ.ಬಿ.ಆರ್.ಅಂಬೇಡ್ಕರ್ ರಸ್ತೆಯಲ್ಲಿರುವ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಕಾಂಪೌಂಡಿಗೆ ಹೊಂದಿಕೊಂಡಂತೆ ಮೈಸೂರು ಮಹಾನಗರ ಪಾಲಿಕೆಯ ವತಿಯಿಂದ ಸಾರ್ವಜನಿಕ ಶೌಚಾಲಯವನ್ನು ನಿರ್ಮಿಸಲಾಗಿದೆ.

ಈ ಶೌಚಾಲಯದ ದುಸ್ಥಿತಿ ಹೇಗಿದೆಯೆಂದರೆ ಇದರ ಒಳಗೆ ಪ್ರವೇಶಿಸಿದವರು ಜೀವನದ ಮೇಲೆ ಜಿಗುಪ್ಸೆ ಹೊಂದಿ ಆತ್ಮಹತ್ಯೆಗೆ ಶರಣಾಗುವುದು ಖಂಡಿತಾ! ಅಷ್ಟೇ ಅಲ್ಲ. ಈ ಶೌಚಾಲಯದ ಎದುರು ಸಂಚರಿಸಿದವರು ಮತ್ತೆಂದೂ ಈ ಭಾಗದ ಕಡೆ ತಲೆ ಹಾಕಿಯೂ ಮಲಗಾರರು! ಏಕೆಂದರೆ ಈ ಶೌಚಾಲಯದ ಒಳಗೆ ಪ್ರವೇಶಿಸಲು ಸಾಧ್ಯವಾಗದೇ ಇರುವುದರಿಂದ ಈ ರಸ್ತೆಯೇ ಶೌಚಾಲಯವಾಗಿ ಮಾರ್ಪಟ್ಟಿದೆ. ಈ ರಸ್ತೆಯಲ್ಲಿ ಓಡಾಡುವ ವಿದ್ಯಾರ್ಥಿಗಳಿಗೆ ಪ್ರತಿನಿತ್ಯ ಮುಜುಗರ ತಪ್ಪಿದ್ದಲ್ಲ. ಇನ್ನು ಈ ಸರಕಾರಿ ಶಾಲೆಯ ಮಕ್ಕಳ ಸ್ಥಿತಿ ಹೇಗಿದ್ದೀತು? ನಮ್ಮ ಮೈಸೂರು ಮಹಾನಗರ ಪಾಲಿಕೆಯು ಸಾರ್ವಜನಿಕ ಶೌಚಾಲಯ ಮತ್ತು ಸರಕಾರಿ ಶಾಲೆಗಳಿಗೆ ನೀಡುವ ಅಗೌರವಕ್ಕೆ ಇದೇ ಸಾಕ್ಷಿ! ನಂ 1 ಸ್ವಚ್ಛನಗರಿ ಎಂಬ ಪಟ್ಟವನ್ನು ನಮ್ಮ ಮೈಸೂರು ಪಡೆಯದಿರಲೆಂದೇ ಈ ಶೌಚಾಲಯವನ್ನು ನಿರ್ಮಿಸಿರಬೇಕು.

ನಂ 1 ಸ್ವಚ್ಛ ನಗರಿ ಎಂಬ ಬಿರುದು ಪಡೆಯಲು ಹಾತೊರೆಯುವ ನಮ್ಮ ನಗರ ಪಾಲಿಕೆಯ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಈ ಸಾರ್ವಜನಿಕ ಶೌಚಾಲಯಕ್ಕೆ ಭೇಟಿ ನೀಡಿದರೆ ಅದರ ಹೀನಾಯ ಸ್ಥಿತಿ ತಿಳಿಯುತ್ತದೆ. ಈ ಕೂಡಲೇ ಪಾಲಿಕೆಯು ಎಚ್ಚೆತ್ತು ಈ ಶೌಚಾಲಯವನ್ನು ನಂ 1 ಮಾದರಿ ಶೌಚಾಲಯವನ್ನಾಗಿ ಪರಿವರ್ತಿಸಿ ವಿದ್ಯಾರ್ಥಿಗಳಿಗೆ ನ್ಯಾಯ ಒದಗಿಸಬೇಕಾಗಿದೆ. ಇದು ಸಾಧ್ಯವಾಗದಿದ್ದರೆ ಈ ರಸ್ತೆಯನ್ನೇ ಬಂದ್ ಮಾಡುವುದು ಒಳಿತು.

–ಪಿ.ಜೆ.ರಾಘವೇಂದ್ರ, ನ್ಯಾಯವಾದಿ, ಮೈಸೂರು

■ ಈ ಅಪಾಯಕಾರಿ ರಸ್ತೆ ಡುಬ್ಬ ತೆರವುಗೊಳಿಸಿ

ಮಾನ್ಯರೆ,

ಮೈಸೂರಿನ ವಿ.ವಿ. ಮೊಹಲ್ಲಾ 8ನೇ ಕ್ರಾಸ್, ಜಿ.ಟಿ. ದೇವೇಗೌಡರ ಮನೆಯ ಎದುರು ರಸ್ತೆಯಲ್ಲಿ ಕನ್ಸರ್‌ವೆನ್ಸಿ ಮ್ಯಾನ್‌ಹೋಲ್ ಪೈಪ್‌ಲೈನ್ ಕಾಮಗಾರಿ ಮಾಡುವಾಗ ರಸ್ತೆ ಅಗೆದು ಸರಿಯಾಗಿ ಮುಚ್ಚದೇ ಮಣ್ಣಿನ ರಸ್ತೆ ಡುಬ್ಬವೊಂದು ಸೃಷ್ಟಿಯಾಗಿದೆ. ಮೊದಲೇ ಇಳಿಜಾರು ರಸ್ತೆಯಾದ್ದರಿಂದ ರಾತ್ರಿ ಸಮಯದಲ್ಲಿ ಅನೇಕ ದ್ವಿಚಕ್ರ ವಾಹನ ಚಾಲಕರು ಬಿದ್ದು ಗಾಯಗೊಂಡು ಆಸ್ಪತ್ರೆ ಸೇರಿದ್ದಾರೆ. ಮುಂದೆ ಇದು ಪ್ರಾಣಾಪಾಯಕ್ಕೆ ತಿರುಗಬಹುದು. ಮುಂದಾಗಬಹುದಾದ ಅನಾಹುತ ತಪ್ಪಿಸಲು ಮನವಿ. **– ನೊಂದ ವಾಹನ ಚಾಲಕರು, ಮೈಸೂರು.**

■ ಸಕಾಲಿಕ ಮತ್ತು ಸಮಯೋಚಿತ ಸಲಹೆ

ಮಾನ್ಯರೆ,

ತಮ್ಮ ಅಳಿಯ ಖ್ಯಾತ ಹೃದ್ರೋಗ ತಜ್ಞ ಹಾಗೂ ಜಯದೇವ ಆಸ್ಪತ್ರೆಯ ನಿವೃತ್ತ ಮುಖ್ಯಸ್ಥ ಡಾ.ಸಿ.ಎನ್.ಮಂಜುನಾಥ್, ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸದಿರುವಂತೆ ತಾವು ಅವರಿಗೆ ಸಲಹೆ ನೀಡುವುದಾಗಿ ಮಾಜಿ ಪ್ರಧಾನ ಮಂತ್ರಿ ಹೆಚ್ ಡಿ. ದೇವೇಗೌಡ ಹೇಳಿರುವುದು ಸ್ವಾಗತಾರ್ಹ. ಡಾ. ಮಂಜುನಾಥ್ ಅವರನ್ನು ರಾಜಕೀಯಕ್ಕೆ ಎಳೆತಂದು, ಮುಂದಿನ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸುವಂತೆ ಮಾಡುವ ಪ್ರಯತ್ನ ಈಗಾಗಲೇ ತೆರೆಮರೆಯಲ್ಲಿ ನಡೆಯುತ್ತಿದೆ. ಆದರೆ ಓರ್ವ ಜನಪ್ರಿಯ ವೈದ್ಯರಾಗಿ ಡಾ.ಮಂಜುನಾಥ, ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಹೆಸರು ಗಳಿಸಿದ್ದಾರೆ. ಈ ವಯಸ್ಸಿನಲ್ಲಿ ಅವರು ಚುನಾವಣಾ ರಾಜಕೀಯ ಪ್ರವೇಶಿಸುವುದು ಅಷ್ಟೇನೂ ಸರಿ ಕಾಣದು. ಏತನ್ಮಧ್ಯೆ ಡಾ.ಮಂಜುನಾಥ್ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಬೆಂಗಳೂರು ಉತ್ತರ ಅಥವಾ ಮಂಡ್ಯ ಕ್ಷೇತ್ರದಿಂದ ಸ್ಪರ್ಧಿಸಬಹುದು ಎಂಬ ಊಹಾಪೋಹ ಕಳೆದ ಹಲವಾರು ದಿನಗಳಿಂದ ಕೇಳಿ ಬರುತ್ತಿದೆ. ಇಂತಹ ಸಂದರ್ಭದಲ್ಲಿ ದೇವೇಗೌಡರ ಸಲಹೆ ಸಕಾಲಿಕ ಮತ್ತು ಸಮಯೋಚಿತವಾಗಿದೆ.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು, ಮೊ.9341731661

■ ಪಾಕ್ ಪರ ಘೋಷಣೆ ಸ್ಪಷ್ಟ ನೀತಿ; ಕಠಿಣ ಶಿಕ್ಷೆ ಅಗತ್ಯ

ಮಾನ್ಯರೆ,


ರಾಜ್ಯಸಭಾ ಚುನಾವಣೆಯಲ್ಲಿ ಗೆದ್ದ ಅಭ್ಯರ್ಥಿ ಸೈಯದ್ ನಾಸಿರ್ ಹುಸೇನ್‌ರ ಅಭಿಮಾನಿಗಳು ಪಾಕ್ ಪರ ಘೋಷಣೆ ಕೂಗಿದ್ದು, ಪೊಲೀಸ್ ಎಫ್ಐಆರ್‌ನಿಂದ ಸಾಬೀತಾಗಿದ್ದು, ಕೊನೆಗೂ ಮೂವರು ಆರೋಪಿಗಳನ್ನು ಬಂಧಿಸಿದ್ದಾರೆ. ಆದರೆ ಸದರಿ ರಾಜ್ಯಸಭಾ ಸದಸ್ಯರು ಅಂದು ಅವರನ್ನು ಸಮರ್ಥಿಸಿಕೊಂಡಿದ್ದು, ಮಾಧ್ಯಮದವರ ಮೇಲೆ ಹರಿಹಾಯ್ದಿದ್ದು ಖಂಡನೀಯ. ಹಾಗೆಯೇ ಕಾಂಗ್ರೆಸ್ ಪಕ್ಷದವರು ಕೂಡ ಹಾಗೆ ಕೂಗಿಯೇ ಇಲ್ಲಾ ಎಂದು ತಳ್ಳಿ ಹಾಕುತ್ತಿದ್ದರು. (ಮುಖ್ಯ ಮಂತ್ರಿಗಳು ಮಾತ್ರ ಈ ಬಗ್ಗೆ ಹಾಗೆ ಕೂಗಿರುವುದು ಎಫ್ಎಸ್ಎಲ್ ವರದಿಯಲ್ಲಿ ಸಾಬೀತಾದರೆ ಕ್ರಮ ಕೈಗೊಳ್ಳುವುದಾಗಿ ಸ್ಪಷ್ಟವಾಗಿ ತಿಳಿಸಿದ್ದರು)

ಬಿಜೆಪಿ ಆಡಳಿತದ ಅವಧಿಯಲ್ಲೂ ಮೈಸೂರು ಜಿಲ್ಲೆಯ ಕೌಲಂದೆಯಲ್ಲಿ ಮೆರವಣಿಗೆಯೊಂದರಲ್ಲಿ ಕೆಲವರು ಪಾಕ್ ಪರ ಘೋಷಣೆ ಕೂಗಿದ್ದು ವರದಿಯಾಗಿತ್ತು. ಆದರೆ ಅವರು ಬಾಯಿತಪ್ಪಿ ಹಾಗೆ ಹೇಳಿದ್ದಾರೆ ಎಂದು ಅವರಿಂದ ಮುಚ್ಚಳಿಕೆ ಬರೆಸಿಕೊಂಡು ಬಿಡುಗಡೆ ಮಾಡಿದ್ದಾಗಿಯೂ ವರದಿಯಾಗಿತ್ತು. ಇದು ಕೂಡ ಅಕ್ಷಮ್ಯ ಅಪರಾಧವೆ.

ಪಾಕ್ ಪರ ಘೋಷಣೆ ಕೂಗುವುದು, ಪಾಕ್ ಧ್ವಜ ಹಾರಿಸುವುದು ಈ ದೇಶದ ಸ್ವತಂತ್ರ್ಯದ 75 ವರ್ಷದ ಇತಿಹಾಸದಲ್ಲಿ ಹಲವಾರು ಬಾರಿ ನಡೆದಿದೆ. ಆದರೆ ಅವರ ವಿರುದ್ಧ ಕಠಿಣ ಕ್ರಮ ಕೈಗೊಂಡ ನಿದರ್ಶನಗಳಿಲ್ಲ.

ಇಲ್ಲಿ ಗಮನಿಸಬೇಕಾದ ಮುಖ್ಯ ಅಂಶವೆಂದರೆ ಭಾರತದಲ್ಲೇ ಹುಟ್ಟಿ ಭಾರತದ ಅನ್ನ ತಿಂದು, ನೀರು ಕುಡಿದು ಬೆಳೆದರೂ ಸರ್ಕಾರಗಳು ಅವರ ಏಳಿಗೆಗಾಗಿಯೇ ತೆರಿಗೆ ಹಣದಲ್ಲಿ ಖರ್ಚು ಮಾಡುತ್ತಿದ್ದರೂ ಈ ರೀತಿ ಪಾಕ್ ಪರ ಘೋಷಣೆ ಕೂಗುತ್ತಾರೆ, ಧ್ವಜ ಹಾರಿಸುತ್ತಾರೆ ಎಂದರೆ ಅದು ನಿಜಕ್ಕೂ ಅಕ್ಷಮ್ಯ ಅಪರಾಧವೇ ಸರಿ. ಇನ್ನು ಮುಂದಾದರೂ ಇಂತಹವರ ವಿರುದ್ಧ ದೇಶದ್ರೋಹ ಪ್ರಕರಣ ದಾಖಲಿಸಿ ಕಠಿಣ ಶಿಕ್ಷೆ ವಿಧಿಸುವುದು ಅವಶ್ಯವಿದೆ.

–ಮುಳ್ಳೂರು ಪ್ರಕಾಶ್, ಮೈಸೂರು.



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು

ಸಂಸ್ಕೃತಿ ಚಿಂತನಾ

ವಿಷ್ಣು ಸಹಸ್ರನಾಮ ಸ್ತೋತ್ರ

ಮಹಾಭಾರತದ ಎರಡು ಕಣ್ಣುಗಳೆಂದರೆ ಭಗವದ್ಗೀತೆ ಮತ್ತು ವಿಷ್ಣು ಸಹಸ್ರನಾಮ ಸ್ತೋತ್ರ. ಭಗವದ್ಗೀತೆಯು ಭೀಷ್ಮ ಪರ್ವದ ಆದಿಯಲ್ಲಿದೆ. ವಿಷ್ಣು ಸಹಸ್ರನಾಮ ಸ್ತೋತ್ರವು ಅನುಶಾಸನ ಪರ್ವದಲ್ಲಿದೆ. ಭಗವದ್ಗೀತೆಯಲ್ಲಿರುವ ಒಟ್ಟು ಶ್ಲೋಕಗಳ ಸಂಖ್ಯೆ ಏಳು ನೂರು. ವಿಷ್ಣು ಸಹಸ್ರನಾಮ ಸ್ತೋತ್ರದ ಶ್ಲೋಕ ಸಂಖ್ಯೆ ಒಂದು ನೂರ ನಲವತ್ತೆರಡು ಮಾತ್ರ. ಅವುಗಳಲ್ಲಿ ಪೀಠಿಕಾ ಭಾಗದಲ್ಲಿ ಹದಿಮೂರು ಶ್ಲೋಕಗಳಿದ್ದು ನಾಮಗಳನ್ನು ಹೇಳುವ ಶ್ಲೋಕಗಳ ಸಂಖ್ಯೆ ಒಂದು ನೂರ ಏಳು. ಕೊನೆಯ ಇಪ್ಪತ್ತೆರಡು ಶ್ಲೋಕಗಳು ಫಲಶ್ರುತಿಗೆ ಸೇರಿವೆ.

ಮಹಾಭಾರತ ಯುದ್ಧಾನಂತರ ಪಟ್ಟಾಭಿಷಿಕ್ತನಾದ ಯುಧಿಷ್ಠಿರನು ತನ್ನ ರಾಜ್ಯಭಾರದಲ್ಲಿ ಧರ್ಮವಿರಲೆಂಬ ಆಶೆಯಿಂದ ಧರ್ಮದ ಸ್ವರೂಪವನ್ನು, ರಹಸ್ಯವನ್ನೂ ತಿಳಿದುಕೊಳ್ಳಲು ಭೀಷ್ಮನ ಬಳಿಗೆ ತೆರಳಿ ಕೇಳಿಕೊಂಡಾಗ ಅವನು ಮಾಡಿದ ಉಪದೇಶವೇ ಅನುಶಾಸನ. ಶರಶಯ್ಯೆಯಲ್ಲಿ ಮಲಗಿದ್ದ ಭೀಷ್ಮನು ಹೀಗೆ ವಿಷ್ಣು ಸಹಸ್ರನಾಮ ಸ್ತೋತ್ರವನ್ನು ಯುಧಿಷ್ಠಿರನಿಗೂ ತನ್ಮೂಲಕವಾಗಿ ಸಮಸ್ತ ಮಾನವರಿಗೂ ಉಪದೇಶಿಸಿದನೆಂದು ತಿಳಿಯಬೇಕು.

ಪ್ರಾರಂಭದಲ್ಲಿ ಯುಧಿಷ್ಠಿರನು ಕೇಳಿದ ಪ್ರಶ್ನೆಯು ಇಂತಿದೆ–

ಕಿಮೇಕಂ ದೈವತಂ ಲೋಕೇ? ಕಿಂ ವಾಪ್ಯೇಕಂ ಪರಾಯಣಮ್।
ಸ್ತುವಂತಃ ಕಂ ಕಮರ್ಚಂತಃ ಪ್ರಾಪ್ನುಯುರ್ಮಾನವಾಃ ಶುಭಮ್॥
ಕೋ ಧರ್ಮಃ ಸರ್ವಧರ್ಮಾಣಾಂ ಭವತಃ ಪರಮೋ ಮತಃ?
ಕಿಂ ಜಪನ್ ಮುಚ್ಯತೇ ಜಂತುರ್ಜನ್ಮಸಂಸಾರ ಬಂಧನಾತ್॥

ಇಲ್ಲಿ ಆರು ಪ್ರಶ್ನೆಗಳಿವೆ.

1. ಈ ಜಗತ್ತಿನಲ್ಲಿ ಮುಖ್ಯನಾದ ದೇವನು ಯಾರು?
2. ಮನವರು ಆಶ್ರಯಿಸಬೇಕಾದ ಮಾರ್ಗ ಅಥವಾ ಗುರಿ ಯಾವುದು?
3. ಯಾರನ್ನು ಸ್ತುತಿಸುವುದರಿಂದ ಮಾನವರು ಶುಭವನ್ನು ಪಡೆಯಬಹುದು?
4. ಯಾರನ್ನು ಪೂಜಿಸುವುದರಿಂದ ಮಾನವರಿಗೆ ಶುಭವಾಗುವುದು?
5. ಎಲ್ಲಾ ಧರ್ಮಗಳಲ್ಲಿ ಯಾವುದು ಶ್ರೇಷ್ಠವೆಂದು ನಿನ್ನ ಅಭಿಪ್ರಾಯ?
6. ಯಾವುದನ್ನು ಜಪಿಸುವುದರಿಂದ ಮನುಷ್ಯನು ಜನ್ಮ–ಮರಣ–ಸಂಸಾರ ಎಂಬ ಬಂಧನದಿಂದ ಮುಕ್ತನಾಗುವನು?

ಈ ಪ್ರಶ್ನೆಗಳಿಗೆ ಉತ್ತರವಾಗಿ ಭೀಷ್ಮನು ಹೇಳಿದುದಿಷ್ಟು–

ಜಗತ್ಪ್ರಭುಂ ದೇವದೇವಮನಂತಂ ಪುರುಷೋತ್ತಮಮ್।
ಸ್ತುವನ್ನಾಮ ಸಹಸ್ರೇಣ ಪುರುಷಃ ಸತತೋತ್ಥಿತಃ॥
ತಮೇವ ಚಾರ್ಚಯನ್ನಿತ್ಯಂ ಭಕ್ತ್ಯಾ ಪುರುಷಮವ್ಯಯಮ್।
ಧ್ಯಾಯನ್ ಸ್ತುವನ್ ನಮಸ್ಯಂಶ್ಚ ಯಜಮಾನಸ್ತಮೇವ ಚ॥
ಅನಾದಿನಿಧನಂ ವಿಷ್ಣುಂ ಸರ್ವಲೋಕ ಮಹೇಶ್ವರಮ್ ।
ಲೋಕಾಧ್ಯಕ್ಷಂ ಸ್ತುವನ್ನಿತ್ಯಂ ಸರ್ವದುಃಖಾತಿಗೋ ಭವೇತ್॥
ಏಷ ಮೇ ಸರ್ವಧರ್ಮಾಣಾಂ ಧರ್ಮೋಽಧಿಕತಮೋ ಮತಃ॥
ಯದ್ ಭಕ್ತ್ಯಾ ಪುಂಡರೀಕಾಕ್ಷಂ ಸ್ತವೈರರ್ಚೇನ್ನರಃ ಸದಾ॥
ಪರಮಂ ಯೋ ಮಹತ್ತೇಜಃ ಪರಮಂ ಯೋ ಮಹತ್ತಪಃ॥
ಪರಮಂ ಯೋ ಮಹದ್ ಬ್ರಹ್ಮ ಪರಂ ಯಃ ಪರಾಯಣಮ್ ॥
ಪವಿತ್ರಾಣಾಂ ಪವಿತ್ರಂ ಯೋ ಮಂಗಲಾನಾಂ ಚ ಮಂಗಲಮ್।
ದೈವತಂ ದೇವತಾನಾಂ ಚ ಭೂತಾನಾಂ ಯೋಽವ್ಯಯಃ ಪಿತಾ॥

ಪ್ರಶ್ನೆಗಳಿಗೆ ಈ ಶ್ಲೋಕಗಳಿಂದ ಲಭಿಸುವ ಉತ್ತರಗಳೇನೆಂದರೆ –

1. ಜಗತ್ಪ್ರಭುವೂ, ದೇವರುಗಳಿಗೂ ದೇವರು ಆದ ವಿಷ್ಣುವೇ ಮುಖ್ಯನಾದ ದೇವನು.
2. ಮಾನವರು ಆಶ್ರಯಿಸಬೇಕಾದ ಶ್ರೇಷ್ಠ ಮಾರ್ಗವೂ ಗುರಿಯೂ ಪರಮಾತ್ಮ ವಿಷ್ಣುವೇ.
3. ವಿಷ್ಣುವನ್ನು ಸಾವಿರ ನಾಮ (ಹೆಸರು)ಗಳಿಂದ ಸ್ತುತಿಸಿ ಮಾನವರು ಶುಭವನ್ನು ಪಡೆಯಬಹುದು.
4. ಆ ಭಗವಂತನಾದ ವಿಷ್ಣುವನ್ನು ಧ್ಯಾನದಿಂದ, ಸ್ತೋತ್ರದಿಂದ, ನಮಸ್ಕಾರದಿಂದ, ಯಜ್ಞದಿಂದ ಪೂಜಿಸಿ ಮಂಗಳವನ್ನು ಹೊಂದಬೇಕು.
5. ಭಕ್ತಿಯಿಂದ ಆ ಪುಂಡರೀಕಾಕ್ಷ ವಿಷ್ಣುವನ್ನು ನಾನಾ ಸ್ತೋತ್ರಗಳಿಂದ ಅರ್ಚಿಸುವುದೇ ಎಲ್ಲ ಧರ್ಮಗಳಲ್ಲಿ ಶ್ರೇಷ್ಠ ಧರ್ಮವೆಂಬುದು ನನ್ನ ಅಭಿಪ್ರಾಯ.
6. ವಿಷ್ಣು ಸಹಸ್ರನಾಮವನ್ನು ಭಕ್ತಿಯಿಂದ ಜಪಿಸುವುದರಿಂದ ಮನುಷ್ಯರು ಜನ್ಮ–ಜರಾ–ಮರಣಗಳ ಬಂಧನವನ್ನು ಕಳಚಿ ಹಾಕಿ ಮುಕ್ತರಾಗುತ್ತಾರೆ.

ಈ ಉತ್ತರಗಳ ಜೊತೆಗೆ ಭೀಷ್ಮನು ಸಹಸ್ರನಾಮಗಳ ವಿಶೇಷವನ್ನು ತಿಳಿಸಿದ್ದಾನೆ–

ಯಾನಿ ನಾಮಾನಿ ಗೌಣಾನಿ ವಿಖ್ಯಾತಾನಿ ಮಹಾತ್ಮನಃ।
ಋಷಿಭಿಃ ಪರಿಗೀತಾನಿ ತಾನಿ ವಕ್ಷ್ಯಾಮಿ ಭೂತಯೇ॥

ಈ ಸಹಸ್ರನಾಮ ಸ್ತೋತ್ರದಲ್ಲಿರುವ ಒಂದೊಂದು ಹೆಸರೂ ಋಷಿಗಳು ಹೇಳಿರುವ ಹೆಸರು. ಅವು ಗುಣಪ್ರಯುಕ್ತವಾಗಿ ಹೇಳಲ್ಪಟ್ಟಿವೆ. ಅವನ್ನು ಪಠಿಸುವುದರಿಂದ ಭೂತಿ ಎಂದರೆ ಐಶ್ವರ್ಯವು ಲಭಿಸುತ್ತದೆ. ಯಾವ ಕಾರಣದಿಂದ ಯಾವ ಹೆಸರು ಬಂದಿದೆ ಎಂಬುದನ್ನು ಅರಿತುಕೊಳ್ಳಬೇಕು. ಉದಾಹರಣೆಗೆ ಸ್ತೋತ್ರದ ಮೊದಲನೆಯ ಶ್ಲೋಕವನ್ನು ತೆಗೆದುಕೊಳ್ಳೋಣ.

ವಿಶ್ವಂ ವಿಷ್ಣುರ್ವಷಟ್ಕಾರೋ ಭೂತಭವ್ಯಭವತ್‌ಪ್ರಭುಃ।
ಭೂತಕೃದ್ ಭೂತಭೃದ್ ಭಾವೋ ಭೂತಾತ್ಮಾ ಭೂತಭಾವನಃ॥

ಇಲ್ಲಿ ಒಂಬತ್ತು ನಾಮಗಳನ್ನು ಹೇಳಿದ್ದಾರೆ. ಮೊದಲನೆಯದು ವಿಶ್ವಂ. ಸಕಲ ಜಗತ್ತೂ ಆ ವಿಷ್ಣುವೇ. ವಿಶತೀತಿ ವಿಶ್ವಮ್. ಜಗತ್ತಿನ ಎಲ್ಲ ಚರಾಚರಗಳಲ್ಲೂ ಪ್ರವೇಶಿಸಿರುವವನು, ಅಂತರ್ಯಾಮಿಯಾಗಿ ಎಲ್ಲರನ್ನೂ ಎಲ್ಲವನ್ನೂ ನಿಯಂತ್ರಿಸುತ್ತಿರುವವನು ಆ ನಾರಾಯಣನೇ. ಆದುದರಿಂದಲೇ ಅವನನ್ನು ವಿಶ್ವಂ ಎಂದು ಮೊದಲನೆಯ ನಾಮದಿಂದ ಕರೆದಿದ್ದಾರೆ. ಎರಡನೆಯ ಹೆಸರು ವಿಷ್ಣು. ವೇವೇಷ್ಟಿ ವ್ಯಾಪ್ನೋತಿ ಸರ್ವಮಿತಿ ವಿಷ್ಣು. ಎಲ್ಲವನ್ನೂ ವ್ಯಾಪಿಸಿಕೊಂಡಿರುವವನು. ಅವನಿಲ್ಲದ ಅಣುಮಾತ್ರವೂ ಇಲ್ಲ.

ಯಚ್ಚ ಕಿಂಚಿಜ್ಜಗತ್ ಸರ್ವಂ ದೃಶ್ಯತೇ ಶ್ರೂಯತೇಽಪಿವಾ।
ಅಂತರ್ಬಹಿಶ್ಚ ತತ್ಸರ್ವಂ ವ್ಯಾಪ್ಯ ನಾರಾಯಣಃ ಸ್ಥಿತಃ॥

ನಾವು ನೋಡಿದುದು, ಕೇಳಿದುದು ಏನೇನು ಜಗತ್ತಿನಲ್ಲಿ ದೆಯೋ ಅದೆಲ್ಲದರ ಒಳಗೆ ಹೊರಗೆ ವ್ಯಾಪಿಸಿಕೊಂಡು ನಾರಾಯಣನೇ ಇದ್ದಾನೆ ಎಂಬ ಶ್ರುತಿವಾಕ್ಯವನ್ನು ಇಲ್ಲಿ ನೆನಪಿಸಿಕೊಳ್ಳಬೇಕು.

ವಷಟ್ಕಾರ : ಎಂಬುದು ಮೂರನೆಯ ನಾಮ. ವಷಟ್ ಎಂಬ ಮಂತ್ರವು ದೇವತೆಗಳಿಗೆ ಮಾಡುವ ಅರ್ಪಣೆಯನ್ನು ಧ್ವನಿಸುತ್ತದೆ. ಇಂದ್ರಾಯ ವಷಟ್ ಎಂದರೆ ಇಂದ್ರನಿಗೆ ಮಾಡಿದ ಅರ್ಪಣೆ. ಯಜ್ಞವನ್ನೂ ಯಜ್ಞದೇವತೆಯನ್ನೂ ವಷಟ್ ಎನ್ನುತ್ತಾರೆ. ಎಲ್ಲಾ ಯಜ್ಞಗಳಲ್ಲಿ ಹವಿಸ್ಸನ್ನು ಸಕಲ ದೇವತೆಗಳ ರೂಪದಲ್ಲಿ ಸ್ವೀಕರಿಸುವವನು ವಿಷ್ಣುವೇ.

'ಅಹಂ ಹಿ ಸರ್ವಯಜ್ಞಾನಾಂ ಭೋಕ್ತಾ ಚ ಪ್ರಭುರೇವ ಚ'

ಎಂದು ಈ ಅಂಶವನ್ನೇ ಭಗವದ್ಗೀತೆಯಲ್ಲಿ ಶ್ರೀ ಕೃಷ್ಣ ಪರಮಾತ್ಮನು ಪ್ರತಿಪಾದಿಸಿದ್ದಾನೆ.

ಭೂತಭವ್ಯಭವತ್‌ಪ್ರಭುಃ ಎಂಬುದು ನಾಲ್ಕನೆಯ ನಾಮ. ಭೂತ ಎಂದರೆ ಹಿಂದೆ ನಡೆದುದು, ಭವ್ಯ ಎಂದರೆ ಭವಿಷ್ಯತ್, ಮುಂದೆ ನಡೆಯಲಿರುವುದು, ಭವತ್ ಎಂದರೆ ಈಗ ನಡೆಯುತ್ತಿರುವುದು, ವರ್ತಮಾನ. ಭೂತ–ಭವಿಷ್ಯತ್–ವರ್ತಮಾನ ಎಂಬ ಮೂರು ಕಾಲಗಳ ಕಾರ್ಯಗಳನ್ನೆಲ್ಲ ನಿಯಂತ್ರಿಸುವ ಪ್ರಭು ವಿಷ್ಣು. ಅವನನ್ನು ಭೂತಭವ್ಯಭವತ್‌ಪ್ರಭು ಎಂದು ಕರೆದಿರುವುದು ಉಚಿತವಾಗಿದೆ. ಭೂತಕೃತ್ ಎಂಬುದು ಐದನೆಯ ನಾಮ. ಜಗತ್ತಿನಲ್ಲಿರುವ ಎಂಬತ್ತು ನಾಲ್ಕು ಲಕ್ಷ ಜೀವಿಗಳನ್ನೆಲ್ಲ ಭೂತ ಎಂದು ಕರೆಯುತ್ತಾರೆ. ಅವುಗಳನ್ನೆಲ್ಲ ಸೃಷ್ಟಿಸಿದವನು ಆ ವಿಷ್ಣುವೇ. ಯತೋ ವಾ ಇಮಾನಿ ಭೂತಾನಿ ಜಾಯಂತೇ ಎಂಬ ತೈತ್ತಿರೀಯೋಪನಿಷದ್ವಾಕ್ಯವು ಇದನ್ನೇ ಹೇಳುತ್ತಿದೆ.

ಭೂತಭೃದ್ ಎಂಬ ನಾಮವು ಸೃಷ್ಟಿಗೆ ಗೋಚರವಾದ ಎಲ್ಲ ಜೀವಿಗಳ ಭರಣೆಯನ್ನು, ಎಂದರೆ ಪೋಷಣೆಯನ್ನು ಮಾಡುತ್ತಿರುವವನು ಆ ವಿಷ್ಣು ಪರಮಾತ್ಮನೇ. ಯೇನ ಜಾತಾನಿ ಜೀವಂತಿ ಎಂಬ ತೈತ್ತಿರೀಯೋಪನಿಷತ್ತಿನ ವಾಕ್ಯವನ್ನು ಇಲ್ಲಿ ಸ್ಮರಿಸಿಕೊಳ್ಳಬೇಕು.

ಭಾವ ಎಂಬುದು ಏಳನೆಯ ನಾಮ. 'ಭವತೀತ ಭಾವ', ಯಾವನು ಎಲ್ಲರಲ್ಲೂ ಇದ್ದಾನೋ, ಯಾವನೊಬ್ಬನೇ ಸರ್ವಕಾಲಗಳಲ್ಲೂ ಸರ್ವದೇಶಗಳಲ್ಲೂ ಇರುವನೋ ಅವನನ್ನು ಭಾವ ಎಂದು ಕರೆದಿದ್ದಾರೆ. ಈಶಾವಾಸ್ಯಮ್ ಇದಂ ಸರ್ವಂ ಯತ್‌ಕಿಂಚ ಜಗತ್ಯಾಂ ಜಗತ್ ಎಂಬ ಈಶಾವಾಸ್ಯೋಪನಿಷತ್ತಿನ ಮೊದಲನೆಯ ವಾಕ್ಯವನ್ನು ಇಲ್ಲಿ ಅನುಸಂಧಾನ ಮಾಡಿಕೊಳ್ಳಬೇಕು. ಭೂತಾತ್ಮಾ ಎಂಬುದು ಎಂಟನೆಯ ನಾಮ. ಎಲ್ಲ ಜೀವಿಗಳಲ್ಲಿ ಕ್ಷೇತ್ರಜ್ಞನಾಗಿ ಇರುವವನು ವಿಷ್ಣುವೇ. 'ಕ್ಷೇತ್ರಜ್ಞಂ ಚಾಪಿ ಮಾಂ ವಿದ್ಧಿ ಸರ್ವಕ್ಷೇತ್ರೇಷು ಭಾರತ' ಎಲ್ಲ ಶರೀರಗಳಲ್ಲಿರುವ ಕ್ಷೇತ್ರಜ್ಞನು ನಾನೇ ಎಂಬುದನ್ನು ತಿಳಿದುಕೋ ಎಂದು ಭಗವದ್ಗೀತೆಯಲ್ಲಿ ಕೃಷ್ಣನು ಹೇಳಿರುವುದನ್ನು ಇಲ್ಲಿ ಜ್ಞಾಪಿಸಿಕೊಳ್ಳಬೇಕು.

ಭೂತಭಾವನಃ ಎಂಬುದು ಒಂಬತ್ತನೆಯ ನಾಮ. ಭಾವಯತೀತಿ ಭಾವನಃ ಎಂದು ವ್ಯುತ್ಪತ್ತಿ. ಎಲ್ಲ ಜೀವಿಗಳು ಈ ಪ್ರಪಂಚದಲ್ಲಿ ಎಷ್ಟು ಕಾಲ ಇರಬೇಕು, ಹೇಗೆ ಇರಬೇಕು, ಎಲ್ಲಿರಬೇಕು ಎಂಬುದನ್ನೆಲ್ಲ ನಿರ್ಧರಿಸುವ ಪ್ರಭು ವಿಷ್ಣುವೇ. ಅವನೇ ಭೂತಭಾವನ.

ಹೀಗೆ ಪ್ರತಿಯೊಂದು ಹೆಸರಿನ ಅರ್ಥವನ್ನು ಅನುಸಂಧಾನ ಮಾಡಿಕೊಂಡು ಹೇಳುವ ಭಕ್ತವರೇಣ್ಯರಿಗೆ ಸಾವಿರ ನಮಸ್ಕಾರಗಳು.

ನಾರಿ ಶಕ್ತಿ ವಂದನೆ ಯಾತ್ರೆ ಅಭಿಯಾನ ಪ್ರಯುಕ್ತ ಮಹಿಳಾ ಬೈಕ್ ಜಾಥಾ



ನಾರಿ ಶಕ್ತಿ ವಂದನೆ ಯಾತ್ರೆ ಅಭಿಯಾನ ಪ್ರಯುಕ್ತ ಬಿಜೆಪಿ ಚಾಮುಂಡೇಶ್ವರಿ ಕ್ಷೇತ್ರದ ವತಿಯಿಂದ ಮಹಿಳಾ ಬೈಕ್ ಜಾಥಾ ನಡೆಯಿತು. ಜನತಾನಗರ ಬಿಸಿಲುಮಾರಮ್ಮ ವೃತ್ತದಿಂದ ಪ್ರಾರಂಭವಾದ ಜಾಥಾ ಬೋಗಾದಿ ಗ್ರಾಮದ ಗಣಪತಿ ದೇವಸ್ಥಾನದ ವರೆಗೂ ಮಹಿಳೆಯರ ಭಾರತ್ ಮಾತಾ ಕೀ ಜೈ, ನರೇಂದ್ರ ಮೋದಿ ಕೀ ಜೈ, ನಾರಿ ಶಕ್ತಿ ದೇಶದ ಶಕ್ತಿ, ಘೋಷಣೆಗಳು ರಸ್ತೆಯುದ್ದಕ್ಕೂ ಮೊಳಗಿತು. ಕಾರ್ಯಕ್ರಮದಲ್ಲಿ ನಗರ ಬಿಜೆಪಿ ಪ್ರಧಾನ ಕಾರ್ಯದರ್ಶಿ ಬಿ.ಎಂ.ರಘು, ನಗರ ಮಹಿಳಾ ಮೋರ್ಚಾ ಅಧ್ಯಕ್ಷೆ ರೇಣುಕಾರಾಜು, ಹಿರಿಯ ಮುಖಂಡರಾದ ಗೋಪಾಲ್‌ರಾವ್, ಕೆ.ಎಂ.ಶಂಕರ್, ಶ್ರೀನಿವಾಸ್, ಮಂಜುಳಾ, ನಾರಾಯಣ, ಕ್ಷೇತ್ರ ಅಧ್ಯಕ್ಷರಾದ ಪೈ.ಟಿ.ರವಿ, ನಗರ ಮಂಡಲ ಅಧ್ಯಕ್ಷ ರಾಕೇಶ್ ಭಟ್, ಪ್ರಧಾನ ಕಾರ್ಯದರ್ಶಿ ಹೇಮಂತ್, ಈರೇಗೌಡ, ಶಿವು ಚಿಕ್ಕಕಾನ್ಯ, ಸೋಮಶೇಖರ್, ಲಕ್ಷ್ಮಿ ಕಿರಣ್, ಹೆಚ್.ಜಿ.ರಾಜಮಣಿ, ಜಾನ್ಸಿರಾಣಿ, ವಿಜಯಮಂಜುನಾಥ್, ಗೀತಾ ಮಹೇಶ್, ವಿನುತಾ, ಕಲಾವತಿ, ರಾಮಬಾಯಿ, ಲಲಿತ, ಅನಿತಾ, ಜೀವಿತಾ, ಶಾಲಿನಿ, ನೇಹಾ ನಯನ, ಸುಮಾ, ರಾಧಾ ಮುತಾಲಿಕ್, ಹಿರಿಯಣ್ಣ, ಪ್ರತಾಪ್, ರವಿ ಮುಂತಾದವರು ಉಪಸ್ಥಿತರಿದ್ದರು.

ಪಾಕ್ ಪರ ಘೋಷಣೆ ಪ್ರಕರಣದಲ್ಲಿ ಬಂಧಿತರೆಲ್ಲಾ ಕಾಂಗ್ರೆಸ್ ಕಾರ್ಯಕರ್ತರು

ಓರ್ವ ಲೋಕಸಭೆ ಚುನಾವಣೆ ಟಿಕೆಟ್ ಆಕಾಂಕ್ಷಿ

ಬೆಂಗಳೂರು: ವಿಧಾನಸೌಧದ ಆವರಣದಲ್ಲಿ ಪಾಕಿಸ್ತಾನ ಪರ ಘೋಷಣೆ ಕೂಗಿದ ಆರೋಪದ ಮೇಲೆ ಬಂಧಿತರಾಗಿರುವ ಮೂವರು ಆರೋಪಿಗಳೂ ಕಾಂಗ್ರೆಸ್ ಕಾರ್ಯಕರ್ತರಾಗಿದ್ದು, ಪೊಲೀಸರು ಅವರನ್ನು ವಿಚಾರಣೆ ನಡೆಸುತ್ತಿದ್ದಾರೆ. ಬಂಧಿತರಲ್ಲಿ ಒಬ್ಬಾತ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸಲು ಬಯಸಿದ್ದನು ಎಂದು ಮಂಗಳವಾರ ಮೂಲಗಳು ತಿಳಿಸಿವೆ.

ಪೊಲೀಸ್ ಮೂಲಗಳ ಪ್ರಕಾರ, ಆರೋಪಿಗಳಲ್ಲಿ ಒಬ್ಬಾತ 'ಪಾಕಿಸ್ತಾನ' ಎಂದು ಕೂಗಿದ್ದಾನೆ ಮತ್ತು ಇನ್ನಿಬ್ಬರು 'ಜಿಂದಾಬಾದ್' ಘೋಷಣೆಗಳನ್ನು ಕೂಗಿದ್ದಾರೆ. ವಿಧಿವಿಜ್ಞಾನ ಪ್ರಯೋಗಾಲಯ (ಎಫ್ಎಸ್ಎಲ್) ಪರೀಕ್ಷೆಗಳಲ್ಲಿ ಆರೋಪಿಗಳ ಧ್ವನಿ ಮಾದರಿಗಳೊಂದಿಗೆ ಆಡಿಯೋ, ವಿಡಿಯೋ ಮಾದರಿಗಳು ಹೊಂದಾಣಿಕೆಯಾಗುತ್ತಿವೆ ಎಂದು ತಿಳಿಸಿದ್ದಾರೆ. ಆರೋಪಿ ಮೊಹಮ್ಮದ್ ನಾಶಿಪುಡಿ, ಬ್ಯಾಡಗಿಯ ಶ್ರೀಮಂತ ಮೆಣಸಿನಕಾಯಿ ವ್ಯಾಪಾರಿಯಾಗಿದ್ದು, ಹಾವೇರಿ ಲೋಕಸಭಾ ಕ್ಷೇತ್ರದ ಟಿಕೆಟ್ ಮೇಲೆ ಕಣ್ಣಿಟ್ಟಿದ್ದ. ಮುನ್ನಾವರ್ ಅಹ್ಮದ್ ಬೆಂಗಳೂರಿನ ಜಯಮಹಲ್ ಪ್ರದೇಶದ ಸ್ಥಳೀಯ ಕಾಂಗ್ರೆಸ್ ಕಾರ್ಯಕರ್ತನಾಗಿದ್ದಾನೆ. ಮತ್ತೋರ್ವ ಆರೋಪಿ ಮೊಹಮ್ಮದ್ ಇಲ್ತಾಜ್ ದೆಹಲಿಯ ಕಿಶನ್‌ಗಂಜ್ ಪ್ರದೇಶದವನಾಗಿದ್ದಾನೆ.

ಆರೋಪಿಗಳನ್ನು 39ನೇ ಎಸಿಎಂಎಂ ನ್ಯಾಯಾಲಯದ ನ್ಯಾಯಾಧೀಶರು ಮಾರ್ಚ್ 6ರವರೆಗೆ ಪೊಲೀಸ್ ಕಸ್ಟಡಿಗೆ ಒಪ್ಪಿಸಿದ್ದಾರೆ. ಆರೋಪಿಗಳ ಸಾಮಾಜಿಕ ಜಾಲತಾಣಗಳಾದ ವಾಟ್ಸಾಪ್, ಟೆಲಿಗ್ರಾಂ ಮತ್ತಿತರ ಖಾತೆಗಳಿಂದ ವಿಧಾನಸೌಧ ಠಾಣೆ ಪೊಲೀಸರು ಮಾಹಿತಿ ಪಡೆಯುತ್ತಿದ್ದಾರೆ. ಹೆಚ್ಚಿನ ತನಿಖೆಗಾಗಿ ಆರೋಪಿಗಳ ಮೊಬೈಲ್‌ಗಳನ್ನು ಎಫ್ಎಸ್ಎಲ್‌ಗೆ ಕಳುಹಿಸಲಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು 40 ಮಂದಿಯನ್ನು ವಿಚಾರಣೆಗೊಳಪಡಿಸಿದ್ದು, 15ಕ್ಕೂ ಹೆಚ್ಚು ಜನರ ಧ್ವನಿ ಮಾದರಿಗಳನ್ನು ಸಂಗ್ರಹಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಭಾರತ ಒಂದು ದೇಶವೇ ಅಲ್ಲ; ನಾವು ರಾಮನ ಶತ್ರುಗಳು

ಮತ್ತೆ ನಾಲಿಗೆ ಹರಿಬಿಟ್ಟ ಡಿಎಂಕೆ ಸಂಸದ ಎ.ರಾಜಾ

ನವದೆಹಲಿ: ಭಾರತ ಒಂದು ದೇಶವೇ ಅಲ್ಲ. ಇದು ವೈವಿಧ್ಯಮಯ ಆಚರಣೆಗಳು ಮತ್ತು ಸಂಸ್ಕೃತಿಗಳ ತವರೂರಿನ ಉಪಖಂಡವಾಗಿದೆ. ನಾವು ಎಂದಿಗೂ ಜೈ ಶ್ರೀರಾಮ್ ಎಂದು ಹೇಳುವುದಿಲ್ಲ ಎಂದು ಹೇಳುವ ಮೂಲಕ ಡಿಎಂಕೆ ಸಂಸದ ಎ ರಾಜಾ ಮತ್ತೆ ನಾಲಿಗೆ ಹರಿಬಿಟ್ಟಿದ್ದಾರೆ.

ತಮಿಳುನಾಡಿನ ಕೊಯಮತ್ತೂರಿನಲ್ಲಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿದ ರಾಜಾ, ಹಿಂದೂ ನಂಬಿಕೆಗಳನ್ನು ಟೀಕಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರನ್ನು ಗುರಿಯಾಗಿಸಿದರು. ಇದೇ ವೇಳೆ ಮಣಿಪುರದ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿದ್ದು ಮಾತ್ರವಲ್ಲದೆ ಭಾರತವನ್ನು ಒಂದು ದೇಶವಾಗಿ ಒಪ್ಪಿಕೊಳ್ಳಲು ಸಾಧ್ಯವಿಲ್ಲ ಎಂದರು.

ನನಗೆ ರಾಮಾಯಣ ಮತ್ತು ರಾಮನಲ್ಲಿ ನಂಬಿಕೆ ಇಲ್ಲ. ಇದು ನಿಮ್ಮ ಜೈ ಶ್ರೀ ರಾಮ್ ಆಗಿದ್ದರೆ, ಇದು ನಿಮ್ಮ ಭಾರತ್ ಮಾತಾ ಕೀ ಜೈ ಆಗಿದ್ದರೆ ನಾವು ಎಂದಿಗೂ ಒಪ್ಪಿಕೊಳ್ಳುವುದಿಲ್ಲ. ತಮಿಳುನಾಡು ಇದನ್ನು ಒಪ್ಪಿಕೊಳ್ಳುವುದಿಲ್ಲ ಎಂದು ಸಂಸದ ರಾಜಾ ಹೇಳಿದ್ದಾರೆ.



ಪ್ರಧಾನಿ ಮೋದಿ ವಿರುದ್ಧ ವಾಗ್ದಾಳಿ: ಇದಾದ ನಂತರ ಅವರು ಹಿಂಡೆನ್‌ಬರ್ಗ್ ವರದಿಯನ್ನು ಉಲ್ಲೇಖಿಸಿ ಪ್ರಧಾನಿ ಮೋದಿಯನ್ನು ಗುರಿಯಾಗಿಸಿದರು. ಸಾಮಾನ್ಯ ಜನರನ್ನು ಲೂಟಿ ಮಾಡಲು ಮೋದಿ ಗೌತಮ್ ಅದಾನಿಗೆ ಸಹಾಯ ಮಾಡಿದ್ದಾರೆ ಎಂದು ರಾಜಾ ಆರೋಪಿಸಿದರು. ಹಿಂಸಾಚಾರ ಪೀಡಿತ ಮಣಿಪುರಕ್ಕೆ ಪ್ರಧಾನಿ ಭೇಟಿ ನೀಡಿಲ್ಲ ಎಂದು ಟೀಕಿಸಿದ ಅವರು, ಭ್ರಷ್ಟಾಚಾರದ ಆರೋಪಗಳ ಬಗ್ಗೆ ಸ್ಪಷ್ಟನೆ ನೀಡುವಂತೆ ಸವಾಲು ಹಾಕಿದರು. ಅಷ್ಟೇ ಅಲ್ಲ, ಡಿಎಂಕೆ ಸಂಸದರು ತಮ್ಮ ಭಾಷಣದಲ್ಲಿ ಭಾರತವು ಒಂದು ರಾಷ್ಟ್ರವಲ್ಲ ಆದರೆ ಒಂದು ಉಪಖಂಡವಾಗಿದೆ ಎಂದು ಹೇಳಿದರು. ಅವರು ತಮ್ಮ ಹಕ್ಕುಗಳನ್ನು ಬೆಂಬಲಿಸುವ ಸಂವಿಧಾನದ ಪೀಠಿಕೆಯನ್ನು ಸಹ ಉಲ್ಲೇಖಿಸಿದ್ದಾರೆ.

ವಿವಾದಾತ್ಮಕ ಹೇಳಿಕೆ ನೀಡಿರುವ ರಾಜಾ ಅವರನ್ನು ಬಂಧಿಸಬೇಕು ಎಂದು ತಮಿಳುನಾಡಿನ ಬಿಜೆಪಿ ವಕ್ತಾರ ನಾರಾಯಣನ್ ತಿರುಪತಿ ಆಗ್ರಹಿಸಿದ್ದಾರೆ. ದೇಶದ ನಿಯಮಗಳು ಮತ್ತು ಕಾನೂನುಗಳಿಗೆ ಬದ್ಧರಾಗಿರುತ್ತೇನೆ ಎಂದು ಭಾರತದ ಸಂವಿಧಾನದ ಅಡಿಯಲ್ಲಿ ಪ್ರಮಾಣ ವಚನ ಸ್ವೀಕರಿಸಿದ ಮುಖ್ಯಮಂತ್ರಿ ಎಂ ಕೆ ಸ್ಟಾಲಿನ್ ಅವರ ಮುಖ್ಯ ಕರ್ತವ್ಯವಾಗಿದೆ. ಈ ರೀತಿ ಹೇಳಿಕೆ ನೀಡಿರುವ ರಾಜಾ ಅವರನ್ನು ಬಂಧಿಸಬೇಕು ಎಂದು ಬಿಜೆಪಿ ಆಗ್ರಹಿಸಿದೆ.



ಮೈಸೂರು ತಾಲೂಕು ಕಡಕೊಳ ಗ್ರಾಮದಲ್ಲಿ ಪಲ್ಸ್ ಪೋಲಿಯೋ ಲಸಿಕೆ ಅಭಿಯಾನಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರದ ಹಿರಿಯ ವೈದ್ಯಾಧಿಕಾರಿ ಡಾ.ಅರುಣ್‌ಕುಮಾರ್ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ದಿ ಯೂನಿಯನ್ ರೈತ ಸಹಕಾರ ಬ್ಯಾಂಕ್ ಉಪಾಧ್ಯಕ್ಷ ಕಡಕೊಳ ಕುಮಾರಸ್ವಾಮಿ, ಆರೋಗ್ಯ ನಿರೀಕ್ಷಣಾಧಿಕಾರಿ ಶ್ಯಾಮ್ ಮಹೇಶ್, ಶುಶ್ರೂಷಕಿ ಜಯಲಕ್ಷ್ಮಿ, ಆಶಾ ಕಾರ್ಯಕರ್ತೆಯರು, ಮತ್ತಿತರರು ಉಪಸ್ಥಿತರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Vishweswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಇಂದಿನಿಂದ ಬಹುರೂಪಿ ನಾಟಕೋತ್ಸವ ಸಂಭ್ರಮ

ವಿಶ್ವಗುರು ಬಸವಣ್ಣನವರ 'ಇವ ನಮ್ಮವ ಇವ ನಮ್ಮವ' ಆಶಯದಲ್ಲಿ ಮಾ.11ರವರೆಗೆ ಉತ್ಸವ



ಮೈಸೂರು ರಂಗಾಯಣ ಆವರಣ ಬಹುರೂಪಿ ನಾಟಕೋತ್ಸವಕ್ಕಾಗಿ ಶೃಂಗಾರಗೊಂಡಿರುವುದು.



ಇಂದು ಜನಪದ ಸಂಭ್ರಮಕ್ಕೆ ಚಾಲನೆ...

ಜನಪದ ಸಂಭ್ರಮ ಉದ್ಘಾಟನೆಗೊಳ್ಳುವ ಮೂಲಕ ಮಾ.6ರಂದು ನಾಟಕೋತ್ಸವಕ್ಕೆ ಚಾಲನೆ ದೊರೆಯಲಿದೆ. ಸಂಜೆ 5.30ಕ್ಕೆ ರಂಗಾಯಣದ ಕಿಂದರಿಜೋಗಿ ಆವರಣದಲ್ಲಿ ಹಿರಿಯ ಜನಪದ ಗಾಯಕ ಡಾ.ಮಳವಳ್ಳಿ ಮಹದೇವಸ್ವಾಮಿ ಜನಪದ ಸಂಭ್ರಮ ಉದ್ಘಾಟಿಸಲಿದ್ದಾರೆ.

ಮೈಸೂರು, ಮಾ.5(ಪಿಎಂ)– ಮೈಸೂರು ರಂಗಾಯಣದ ಅಂಗಳ ಬಹುರೂಪಿ ರಾಷ್ಟ್ರೀಯ ನಾಟಕೋತ್ಸವಕ್ಕೆ ಸಜ್ಜುಗೊಂಡಿದ್ದು, ನಾಳೆಯಿಂದ (ಮಾ.6) ರಂಗೋತ್ಸವದ ಸಂಭ್ರಮ ಕಳೆಗಟ್ಟಲಿದೆ. ರಂಗಾಯಣ ಆವರಣ ಈಗಾಗಲೇ ಸಿಂಗಾರಗೊಂಡಿದೆ.

ಪ್ರಸಕ್ತ ಸಾಲಿನ ಬಹುರೂಪಿ ನಾಟಕೋತ್ಸವವು ಸಮಸಮಾಜದ ಮಹಾನ್ ಕನಸುಗಾರ ವಿಶ್ವಗುರು ಬಸವಣ್ಣನವರ 'ಇವ ನಮ್ಮವ ಇವ ನಮ್ಮವ' ಎಂಬ ವಚನದ ಸಾಲಿನ ಆಶಯ ಶೀರ್ಷಿಕೆಯೊಂದಿಗೆ ಮಾ.6ರಿಂದ 11ರವರೆಗೆ ನಡೆಯಲಿದೆ. ರಂಗಾಯಣದ ಆವರಣದಲ್ಲಿ ಸ್ವಚ್ಛತಾ ಕಾರ್ಯ, ಬಣ್ಣದ ಲೇಪನ, ವೇದಿಕೆ ವಿನ್ಯಾಸ, ನಾಟಕಗಳ ತಾಲೀಮು, ಶಿಲ್ಪಗಳ ಕೆತ್ತನೆ, ಬ್ಯಾನರ್ ಅಳವಡಿಕೆ ಕಾರ್ಯಗಳು ಬಹುತೇಕ ಪೂರ್ಣಗೊಂಡಿವೆ.

ಮಾ.7ರಂದು ಸಂಜೆ 4.30ಕ್ಕೆ ವನರಂಗದಲ್ಲಿ ನಾಟಕೋತ್ಸವಕ್ಕೆ ಕನ್ನಡದ ಹಿರಿಯ ಲೇಖಕ, ಕವಿ ಹಾಗೂ ನಾಟಕಕಾರ ಜಯಂತ್ ಕಾಯ್ಕಿಣಿ ಚಾಲನೆ ನೀಡಲಿದ್ದಾರೆ. ಇವರೊಂದಿಗೆ ನಾಡಿನ ಹೆಸರಾಂತ ಸಾಹಿತಿಗಳು, ಕಲಾವಿದರು ಹಾಗೂ ಜನಪ್ರತಿನಿಧಿಗಳು ಭಾಗವಹಿಸಲಿದ್ದಾರೆ. ನಾಟಕೋತ್ಸವದಲ್ಲಿ ಉತ್ತರ ಪ್ರದೇಶ, ಮುಂಬೈ, ಕೊಲ್ಕೊತ್ತಾ, ಮಣಿಪುರ, ಕೇರಳ ಹಾಗೂ ಮಹಾರಾಷ್ಟ್ರ ರಾಜ್ಯಗಳ 6 ನಾಟಕಗಳು, ಕನ್ನಡ ಭಾಷೆಯ 10 ಮತ್ತು ತುಳು ಭಾಷೆಯ 1 ನಾಟಕ ಸೇರಿದಂತೆ ಒಟ್ಟು 17 ನಾಟಕಗಳು ಪ್ರದರ್ಶನಗೊಳ್ಳಲಿವೆ. ಜೊತೆಗೆ ಮಹಿಳಾ ಆಶಯವುಳ್ಳ ಒಂದು ಯಕ್ಷಗಾನ ಪ್ರದರ್ಶನ ಇರಲಿದೆ. ಇದರೊಂದಿಗೆ ಮಧ್ಯಪ್ರದೇಶ ಮತ್ತು ಮಹಾರಾಷ್ಟ್ರ ಜಾನಪದ ಪ್ರಕಾರಗಳಲ್ಲದೆ, ನಾಡಿನ ವಿವಿಧ ಜಿಲ್ಲೆಗಳ 16 ಜಾನಪದ ಕಲಾತಂಡಗಳು ಕಿಂದರಿಜೋಗಿ ವೇದಿಕೆಯಲ್ಲಿ ಪ್ರದರ್ಶನ ನೀಡಲಿವೆ. ಎರಡು ದಿನಗಳ ರಾಷ್ಟ್ರೀಯ ವಿಚಾರ ಸಂಕಿರಣವು ಮಾ.9 ಮತ್ತು 10ರಂದು ನಡೆಯಲಿದೆ. ರಂಗಾಯಣದ ಆವರಣದಲ್ಲಿ ಪುಸ್ತಕ ಮೇಳ, ಕರಕುಶಲ ಪ್ರಾತ್ಯಕ್ಷಿಕೆ ಹಾಗೂ ಚಿತ್ರಕಲಾ ಪ್ರದರ್ಶನಕ್ಕೆ ಸಿದ್ಧತೆ ಪೂರ್ಣಗೊಂಡಿದೆ.

ಮೈಸೂರು ವಿಭಾಗಕ್ಕೆ 60 ಹೊಸ ಬಸ್‌ಗೆ ಪ್ರಸ್ತಾವನೆ

ಹಳೆಯ 40 ಬಸ್ ಗುಜರಿಗೆ ಕಳಿಸಲು ತೀರ್ಮಾನ


ಸಂಗ್ರಹ ಚಿತ್ರ

ಮೈಸೂರು, ಮಾ.5(ಬಿಎಲ್‌ಯು)– ಶಕ್ತಿ ಯೋಜನೆಯಡಿ ಮಹಿಳಾ ಪ್ರಯಾಣಿಕರ ಸಂಖ್ಯೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಒತ್ತಡ ಕಡಿಮೆ ಮಾಡಲು ರಾಜ್ಯ ಸರ್ಕಾರ 6,100 ಹೊಸ ಬಸ್‌ಗಳನ್ನು ಖರೀದಿ ಮಾಡುತ್ತಿದ್ದು, ಇದರಲ್ಲಿ 60 ಬಸ್‌ಗಳನ್ನು ಮೈಸೂರು ವಿಭಾಗಕ್ಕೆ ನೀಡುವಂತೆ ಪ್ರಸ್ತಾವನೆ ಸಲ್ಲಿಸಲಾಗಿದೆ.

ಶಕ್ತಿ ಯೋಜನೆ ಜಾರಿಯಾದ ಮೇಲೆ ಬಸ್‌ಗಳಲ್ಲಿ ನೂಕುನುಗ್ಗಲು ಆರಂಭವಾಗಿದೆ. ಫುಟ್‌ಬೋರ್ಡ್‌ನಲ್ಲಿ ನಿಂತು ಪ್ರಯಾಣ ಮಾಡುವ ಪರಿಸ್ಥಿತಿ ಈಗ ಮತ್ತೆ ಎದುರಾಗಿದೆ. ಮಹಿಳಾ ಪ್ರಯಾಣಿಕರೇ ಅಧಿಕವಾಗಿರುವ ಕಾರಣ ಪುರುಷರು ಮಹಿಳೆಯರಿಗೆ ಪೈಪೋಟಿ ನೀಡಿ ಒಳ ನುಗ್ಗಲು ಹರಸಾಹಸಪಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಇನ್ನು ಶಾಲಾ–ಕಾಲೇಜಿಗೆ ಹೋಗುವ ವಿದ್ಯಾರ್ಥಿಗಳ ಪರಿಸ್ಥಿತಿ ಇದಕ್ಕಿಂತ ಭಿನ್ನವಾಗಿಲ್ಲ.

ಆದ ಕಾರಣ ಸಮರ್ಪಕ ಬಸ್ ವ್ಯವಸ್ಥೆ ಕಲ್ಪಿಸಲು ರಾಜ್ಯ ಸರ್ಕಾರ 6,100 ಹೊಸ ಬಸ್‌ಗಳನ್ನು ಖರೀದಿ ಮಾಡುತ್ತಿದೆ. ತತ್‌ಕ್ಷಣಕ್ಕೆ 260 ಬಸ್ ಖರೀದಿ ಮಾಡಲಾಗುತ್ತಿದ್ದು, ಇದರಲ್ಲಿ 100 ಪಲ್ಲಕ್ಕಿ ನಾನ್ ಓಸಿ ಬಸ್, 120 ಸಾಮಾನ್ಯ ಬಸ್ ಹಾಗೂ 40 ಎಸಿ ಬಸ್‌ಗಳು ಸೇರಿವೆ.

ಸರ್ಕಾರ ಖರೀದಿ ಮಾಡುತ್ತಿರುವ ಒಟ್ಟಾರೆ ಬಸ್‌ನಲ್ಲಿ 60 ಬಸ್ ಮೈಸೂರು ವಿಭಾಗಕ್ಕೆ ನೀಡುವಂತೆ ಕೇಳಲಾಗಿದೆ. ಇನ್ನು ಮೂರ್ನಾಲ್ಕು ತಿಂಗಳಲ್ಲಿ ಹೊಸ ಬಸ್‌ಗಳು ಬರುವ ಸಾಧ್ಯತೆ ಇದೆ. ಈಗ ಬರುವ 60 ಬಸ್‌ಗಳಲ್ಲಿ ಅಶ್ವಮೇಧ ಹಾಗೂ ಸಾಮಾನ್ಯ ಬಸ್‌ಗಳಿರುತ್ತವೆ ಎಂದು ಕೆಎಸ್‌ಆರ್‌ಟಿಸಿಯ ಮೈಸೂರು ವಿಭಾಗೀಯ ನಿಯಂತ್ರಣಾಧಿಕಾರಿ ಶ್ರೀನಿವಾಸ್ ತಿಳಿಸಿದ್ದಾರೆ.

ಸದ್ಯ ಮೈಸೂರು ವಿಭಾಗದಲ್ಲಿ 718 ಬಸ್‌ಗಳಿವೆ. ಇವುಗಳಲ್ಲಿ ಸತ್ವ ಕಳೆದುಕೊಂಡಿರುವ ಹಳೆಯ 40 ಬಸ್‌ಗಳನ್ನು ಸ್ಕ್ರ್ಯಾಪ್‌ಗೆ ಹಾಕಲು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಅನುಮತಿ ಕೇಳಲಾಗಿದೆ. ನಿಗಮ ಅನುಮತಿ ಕೊಟ್ಟ ನಂತರ 40 ಬಸ್‌ಗಳನ್ನು ಸ್ಕ್ರ್ಯಾಪ್‌ಗೆ ಹಾಕಲಾಗುವುದು. ಅಷ್ಟರೊಳಗೆ ಹೊಸ ಬಸ್‌ಗಳು ಬರುವ ಕಾರಣ ಯಾವುದೇ ತೊಂದರೆ ಆಗುವುದಿಲ್ಲ ಎಂದು ಶ್ರೀನಿವಾಸ್ ಸ್ಪಷ್ಟಪಡಿಸಿದರು.

> "ಶಕ್ತಿ ಯೋಜನೆ ಜಾರಿಗೊಂಡ ನಂತರ ಪ್ರಯಾಣಿಕರ ಸಂಖ್ಯೆ ಹೆಚ್ಚಾಗಿದೆ. ಇದರಿಂದ ಸಹಜವಾಗಿ ಪರೀಕ್ಷಾ ಸಮಯದಲ್ಲಿ ಶಾಲಾ–ಕಾಲೇಜಿಗೆ ಹೋಗುವ ವಿದ್ಯಾರ್ಥಿಗಳಿಗೆ ತೊಂದರೆ ಆಗುತ್ತದೆ. ಆದ ಕಾರಣ ಪರೀಕ್ಷಾ ಸಮಯದಲ್ಲಿ ನಮ್ಮ ಅಧಿಕಾರಿಗಳು ಬಸ್ ನಿಲ್ದಾಣದಲ್ಲೇ ಇದ್ದು, ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ಆಗದಂತೆ ನಿರ್ವಹಣೆ ಮಾಡುತ್ತಿದ್ದಾರೆ.
> –ಶ್ರೀನಿವಾಸ್, ಕೆಎಸ್‌ಆರ್‌ಟಿಸಿಯ ಮೈಸೂರು ವಿಭಾಗೀಯ ನಿಯಂತ್ರಣಾಧಿಕಾರಿ

ಮೈಸೂರು ವಿಭಾಗಕ್ಕೆ ಈಗಾಗಲೇ 14 ಎಲೆಕ್ಟ್ರಿಕ್ ಬಸ್ ಹಾಗೂ 25 ಇತರೆ ಬಸ್‌ಗಳೂ ಬಂದಿವೆ. ಸಮರ್ಪಕ ಬಸ್ ಇಲ್ಲ ಎಂಬ ದೂರು ಬಂದಿಲ್ಲ. ಜೊತೆಗೆ ಹೆಚ್ಚು ಬಸ್‌ಗಳು ಬೇಕೆಂದು ಯಾವ ಸ್ಥಳದಿಂದಲೂ ಬೇಡಿಕೆ ಕೂಡ ಬಂದಿಲ್ಲ ಎಂದು ಹೇಳಿದರು.

ರೈತರಿಗೆ ತರಬೇತಿ

ಮೈಸೂರು, ಮಾ.5– ಮಾ.12ರಂದು ನಾಗನಹಳ್ಳಿ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ 'ಜೇನು ಸಾಕಾಣಿಕೆ–ಕೃಷಿಯಲ್ಲಿ ಪ್ರಾಮುಖ್ಯತೆ, ಜೇನು ಉತ್ಪಾದನೆ, ಸಂಸ್ಕರಣೆ ಮತ್ತು ಮಾರಾಟ' ವಿಷಯದ ಕುರಿತು ರೈತರು ಅಥವಾ ರೈತ ಮಹಿಳೆಯರಿಗೆ ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ. ತರಬೇತಿಯಲ್ಲಿ ಭಾಗವಹಿಸುವ ರೈತರು ಅಥವಾ ರೈತ ಮಹಿಳೆಯರಿಗೆ ಊಟದ ವ್ಯವಸ್ಥೆ ಒದಗಿಸಲಾಗುವುದು. ಆಸಕ್ತ ರೈತರು ಅಥವಾ ರೈತಮಹಿಳೆಯರು ತರಬೇತಿ ಸಂಯೋಜಕಿ ಸಹಾಯಕ ಕೃಷಿ ನಿರ್ದೇಶಕಿ ಮಮತಾ ಎಸ್.ಬಿ. ದೂ.ಸಂ: 8277933180ಗೆ ಕರೆಮಾಡಿ ತಮ್ಮ ಹೆಸರುಗಳನ್ನು ನೋಂದಾಯಿಸತಕ್ಕದ್ದು. ಕೇವಲ ಮೈಸೂರು ಜಿಲ್ಲೆಯ 50 ರೈತರು ಅಥವಾ ರೈತಮಹಿಳೆಯರಿಗೆ ಮಾತ್ರ ಅವಕಾಶವಿದ್ದು, ಮೊದಲು ನೋಂದಣಿ ಮಾಡಿದವರಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತದೆ ಎಂದು ನಾಗನಹಳ್ಳಿ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಉಪ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಾಮಾಜಿಕ ನ್ಯಾಯಕ್ಕಾಗಿ ಕಾಂತರಾಜು ಆಯೋಗದ ವರದಿ ಜಾರಿಗೆ ತನ್ನಿ

- ಮುಖ್ಯಮಂತ್ರಿಗಳಿಗೆ ಪ್ರೊ.ಮಹೇಶ್ ಚಂದ್ರಗುರು ಒತ್ತಾಯ
- ವರದಿ ಅವೈಜ್ಞಾನಿಕ ಎನ್ನುವವರು ಜಾತಿವಾದಿಗಳು

ಮೈಸೂರು,ಮಾ.5(ಜಿಎ)–ಪ್ರತಿಯೊಂದು ಜನಾಂಗಕ್ಕೂ ಶಿಕ್ಷಣ, ಆರ್ಥಿಕ, ರಾಜಕೀಯ ಹಕ್ಕುಬೇಕು. ಅದಕ್ಕಾಗಿ ಸಾಮಾಜಿಕ ನ್ಯಾಯ ಒದಗಿಸುವ ಕಾಂತರಾಜು ಆಯೋಗದ ವರದಿ ಜಾರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಮುಂದಾಗಬೇಕು. ಈ ವಿಚಾರದಲ್ಲಿ ಯಾರ ಮಾತಿಗೂ ಕಿವಿಕೊಡಬಾರದು ಎಂದು ಪ್ರಗತಿಪರ ಚಿಂತಕ ಪ್ರೊ.ಮಹೇಶ್‌ಚಂದ್ರ ಗುರು ಒತ್ತಾಯಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 160 ಕೋಟಿ ರೂ. ವೆಚ್ಚದಲ್ಲಿ 5 ವರ್ಷಗಳ ಕಾಲ ವೈಜ್ಞಾನಿಕವಾಗಿ ಸಿದ್ಧಪಡಿಸಿರುವ ವರದಿಯನ್ನು ಅವೈಜ್ಞಾನಿಕ ಎಂದು ಹೇಳುತ್ತಿರುವವರು ಜಾತಿವಾದಿಗಳು. ಶಾಮನೂರು ಶಿವಶಂಕರಪ್ಪ ಸೇರಿದಂತೆ ಹಲವರು ಇದೇ ಮನಸ್ಥಿತಿಯಿಂದ ವರದಿಗೆ ವಿರೋಧಿಸುತ್ತಿದ್ದಾರೆ. ತಲತಲಾಂತರದಿಂದ ಅಧಿಕಾರ ಅನುಭವಿಸುತ್ತಿರುವ ಪ್ರಬಲ ಜಾತಿಗಳಿಗೆ ಸಾಮಾಜಿಕ ನ್ಯಾಯ ಬೇಕಿಲ್ಲ ಎಂದು ಕಿಡಿಕಾರಿದರು.


ಪ್ರೊ.ಮಹೇಶ್ ಚಂದ್ರ ಗುರು

ಪ್ರತಿಯೊಂದು ಜನಾಂಗಕ್ಕೂ ಶಿಕ್ಷಣ, ಆರ್ಥಿಕ, ರಾಜಕೀಯ ಹಕ್ಕು ಬೇಕು. ಅವರವರ ಜನಸಂಖ್ಯೆಗೆ ತಕ್ಕ ಮೀಸಲಾತಿ ನೀಡಿದರೆ ಉತ್ತಮ ಬದುಕು ನಿರ್ಮಾಣ ಸಾಧ್ಯ. ದೊಡ್ಡ ಜಾತಿಗಳ ಮುಖಂಡರು ಸಂವಿಧಾನಕ್ಕೆ ಅನುಗುಣವಾಗಿ ನಡೆಯದಿದ್ದರೆ, ಬಹು ಜನರು ಸುಮ್ಮನಿರುವುದಿಲ್ಲ. ಸಂಖ್ಯೆಯ ಆಟದಲ್ಲೂ ನೀವು ನಮ್ಮನ್ನು ಮೀರಿಸಲು ಸಾಧ್ಯವಿಲ್ಲ. ವರದಿ ಜಾರಿಯ ದಿಟ್ಟ ನಿರ್ಧಾರಕ್ಕೆ ಮುಖ್ಯಮಂತ್ರಿ ಮುಂದಾಗಬೇಕು. ಅಧಿಕಾರ ಇರಲಿ, ಇಲ್ಲದಿರಲಿ ನಿಮ್ಮೊಂದಿಗೆ ಬಹು ಜನರಿದ್ದಾರೆ ಎಂದರು.

ಬಿಜೆಪಿ ಮತ್ತು ಜೆಡಿಎಸ್ ಒಂದು ಮಾರಣಾಂತಿಕ ಗುಂಪು. ಒಬ್ಬರು ಕೋಮುವಾದಿ, ಮತ್ತೊಬ್ಬರು ಜಾತಿವಾದಿ. ಅವರ ಕಾಲದಲ್ಲಿ ವರದಿಯತ್ತ ಮುಖ ಹಾಕಲಿಲ್ಲ. ಮುಸ್ಲಿಮರನ್ನು ಬಯ್ಯದಿದ್ದರೆ ಬಿಜೆಪಿಗೆ ನಿದ್ದೆ ಬರುವುದಿಲ್ಲ. ಕಾಂಗ್ರೆಸ್ ಸರ್ಕಾರವನ್ನು ತಾಲಿಬಾನಿ ಎನ್ನುವ ಸಂಸದ ಪ್ರತಾಪ ಸಿಂಹನೇ ನಿಜವಾದ ತಾಲಿಬಾನಿ. ತಾವು ಅಧಿಕಾರದಲ್ಲಿದ್ದಾಗ ಸುಮ್ಮನಿರುವುದು, ಕಾಂಗ್ರೆಸ್ ಬಂದಾಗ ಮುಸ್ಲಿಮರ ತುಷ್ಟೀಕರಣ ಎಂದು ಕೂಗುವುದೇ ಅವರ ಸ್ವಭಾವ ಎಂದು ಅವರು ವಾಗ್ದಾಳಿ ನಡೆಸಿದರು.

ಮಾಜಿ ಮೇಯರ್ ಪುರುಷೋತ್ತಮ್ ಮಾತನಾಡಿ, ಶೇ.20ರಿಂದ 30ರಷ್ಟು ಜನರು ಎಲ್ಲ ಸೌಲಭ್ಯ ಪಡೆಯುತ್ತಿದ್ದು, ಉಳಿದವರು ಅವಕಾಶ ವಂಚಿತರಾಗಿದ್ದಾರೆ. ಸಾಮಾಜಿಕ ನ್ಯಾಯಕ್ಕೆ ವರದಿ ಅಗತ್ಯವಾಗಿದ್ದು, ಲೋಕಸಭೆ ಚುನಾವಣೆಗೂ ಮುನ್ನವೇ ಜಾರಿಯಾಗಬೇಕು. ಜೊತೆಗೆ ಸಂವಿಧಾನ ಪೀಠಿಕೆಯನ್ನು ಶೇ.70ರಷ್ಟು ಖಾಸಗಿ ಶಾಲೆಗಳಲ್ಲಿ ಓದುತ್ತಿಲ್ಲ. ಈ ಬಗ್ಗೆ ಸರ್ಕಾರ ಕ್ರಮವಹಿಸಬೇಕು ಎಂದು ಆಗ್ರಹಿಸಿದರು. ಸುದ್ದಿಗೋಷ್ಠಿಯಲ್ಲಿ ಲೇಖಕ ಸಿದ್ದಸ್ವಾಮಿ, ಪತ್ರಕರ್ತ ಸೋಮಯ್ಯ ಮಲೆಯೂರು, ವಿಷಕಂಠ ಉಪಸ್ಥಿತರಿದ್ದರು.


ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ನೂತನ ಅಧ್ಯಕ್ಷ ಕೆ.ಮರಿಗೌಡ ಅವರನ್ನು ಮುಡಾ ಮಾಜಿ ಸದಸ್ಯ ನವೀನ್‌ಕುಮಾರ್, ಮುಖಂಡರಾದ ಮಹದೇವ್, ಭಾಸ್ಕರ, ರಾಜು, ಹರೀಶ್‌ಗೌಡ, ರವಿಚಂದ್ರ, ಚಂದ್ರು, ಲೋಕೇಶ್, ಮಂಜುನಾಥ್, ರಾಹುಲ್, ರವಿ, ಶಾಂತ ಮತ್ತಿತರರು ಅಭಿನಂದಿಸಿದರು.

ಕಟ್ಟಡ ತ್ಯಾಜ್ಯದ ವಿಲೇವಾರಿಗೆ ಪ್ರದೇಶ ನಿಗದಿ

ಮೈಸೂರು, ಮಾ.5– ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಟ್ಟಡ ನಿರ್ಮಾಣ, ದುರಸ್ತಿ ಮತ್ತು ನೆಲಸಮದಿಂದ ಉತ್ಪತ್ತಿಯಾಗುವ ಕಟ್ಟಡ ತ್ಯಾಜ್ಯವನ್ನು ಅನೇಕ ಕಡೆ ಸಾರ್ವಜನಿಕರು ರಸ್ತೆಬದಿಯಲ್ಲಿ, ಖಾಲಿ ನಿವೇಶನಗಳಲ್ಲಿ ಹಾಕುತ್ತಿರುವುದನ್ನು ನಿಯಂತ್ರಿಸಲು ಪಾಲಿಕೆ ಮೈಸೂರು ನಗರದ ಹೊರವಲಯದಲ್ಲಿ ಸಿ.ಎ 05, ಹಂಚ್ಯಾ–ಸಾತಗಳ್ಳಿ 'ಎ' ವಲಯದಲ್ಲಿ ಖಾಲಿ ಪ್ರದೇಶವನ್ನು ಕಟ್ಟಡ ತ್ಯಾಜ್ಯದ ವಿಲೇವಾರಿಗಾಗಿ ಗುರುತಿಸಲಾಗಿದೆ. ಇನ್ನು ಮುಂದೆ ಸಾರ್ವಜನಿಕರು ಹಾಗೂ ಖಾಸಗಿ ವ್ಯಕ್ತಿಗಳು ಪಾಲಿಕೆಯಿಂದ ನಿಗದಿಗೊಳಿಸಿರುವ ಈ ಸ್ಥಳದಲ್ಲೇ ಕಡ್ಡಾಯವಾಗಿ ಕಟ್ಟಡ ತ್ಯಾಜ್ಯವನ್ನು ವಿಲೇವಾರಿ ಮಾಡಬೇಕೆಂದು ಸೂಚಿಸಿದ್ದು, ಮುಂದಿನ ದಿನಗಳಲ್ಲಿ ನಗರ ಪ್ರದೇಶದ ಇತರೆ ಸ್ಥಳಗಳಲ್ಲಿ ಎಲ್ಲೆಂದರಲ್ಲಿ ಕಟ್ಟಡ ತ್ಯಾಜ್ಯವನ್ನು ವಿಲೇವಾರಿ ಮಾಡುವುದು ಕಂಡುಬಂದಲ್ಲಿ ಸಂಬಂಧಪಟ್ಟ ಕಟ್ಟಡದ ಮಾಲೀಕರಿಗೆ ಮತ್ತು ವಾಹನದ ಮಾಲೀಕರಿಗೆ ಭಾರಿ ಮೊತ್ತದ ದಂಡವನ್ನು ವಿಧಿಸುವುದಲ್ಲದೇ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುತ್ತದೆ ಎಂದು ಮೈಸೂರು ಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದಿಂದ ಯತೀಂದ್ರ, ಸೂರಜ್ ಹೆಗಡೆ, ವಿಶ್ವನಾಥ್ ಈ ಮೂವರಲ್ಲಿ ಒಬ್ಬರಿಗೆ ಟಿಕೆಟ್ ನೀಡಿ

ಮೈಸೂರು, ಮಾ.5(ಜಿಎ)–ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದಿಂದ ಯತೀಂದ್ರ ಸಿದ್ದರಾಮಯ್ಯ ಅವರಿಗೆ ಕಾಂಗ್ರೆಸ್ ಪಕ್ಷದಿಂದ ಟಿಕೆಟ್ ನೀಡಬೇಕು. ಇಲ್ಲದಿದ್ದರೆ ದೇವರಾಜ ಅರಸು ಮೊಮ್ಮಗ ಸೂರಜ್ ಹೆಗಡೆ ಅಥವಾ ವಿಧಾನಪರಿಷತ್ ಸದಸ್ಯ ಎ.ಎಚ್.ವಿಶ್ವನಾಥ್ ಅವರಿಗೆ ನೀಡಬೇಕು ಎಂದು ಹುಣಸೂರು ತಾಲೂಕು ಕಾಂಗ್ರೆಸ್ ಮುಖಂಡ ಸೈಯದ್ ಅಬ್ಬಾಸ್ ಒತ್ತಾಯಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗಾಗಲೇ ಟಿಕೆಟ್‌ಗಾಗಿ ಹಲವು ಮಂದಿಯ ಹೆಸರನ್ನು ಹೈಕಮಾಂಡ್‌ಗೆ ಕಳುಹಿಸಲಾಗಿದೆ. ಸ್ಥಳೀಯವಾಗಿ ಪರಿಚಯವಿರುವ ಮುಖಂಡರಿಗೆ ಆದ್ಯತೆ ನೀಡಬೇಕು ಎನ್ನುವುದು ನಮ್ಮ ಒತ್ತಾಯ. ರಾಜ್ಯಕ್ಕೆ ಕೊಡುಗೆ ನೀಡಿದ ಕುಟುಂಬದ ಹಿನ್ನೆಲೆ ಹೊಂದಿರುವವರು ಹೆಚ್ಚು ಸೂಕ್ತವಾಗುತ್ತಾರೆ ಎಂದು ಹೇಳಿದರು.

ಮೈಸೂರಿನಿಂದ ಹುಣಸೂರು–ಪಿರಿಯಾಪಟ್ಟಣ ಮಾರ್ಗವಾಗಿ ಕುಶಲನಗರ ತಲುಪುವ ರೈಲ್ವೆ ಮಾರ್ಗವನ್ನು ತ್ವರಿತವಾಗಿ ನಿರ್ಮಿಸಬೇಕು ಹಾಗೂ ರಸ್ತೆಗಳಿಲ್ಲದ ರೈತರ ಜಮೀನುಗಳಿಗೆ ಶೀಘ್ರವೇ ರಸ್ತೆ ಒದಗಿಸಲು ಸರ್ಕಾರ ಕ್ರಮವಹಿಸಬೇಕು ಎಂದು ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ಹುಣಸೂರಿನ ಕಾಂಗ್ರೆಸ್ ಮುಖಂಡರಾದ ಶ್ರೀನಿವಾಸ್‌ಗೌಡ, ಮಲ್ಲೇಶ್, ಮಹಮ್ಮದ್ ಗೌಸ್ ಇದ್ದರು.

ಮನರೇಗಾ ಪ್ರಗತಿ ಕುರಿತು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ವಿಡಿಯೋ ಸಂವಾದ


ಮೈಸೂರು ಜಿಪಂ ಮಿನಿ ಸಭಾಂಗಣದಲ್ಲಿ ಸಿಇಓ ಕೆ.ಎಂ.ಗಾಯತ್ರಿ ಅಧ್ಯಕ್ಷತೆಯಲ್ಲಿ ಗ್ರಾಪಂ ಅಭಿವೃದ್ಧಿ ಅಧಿಕಾರಿಗಳಿಗೆ ವಿಡಿಯೋ ಸಂವಾದದ ಮೂಲಕ ಸಭೆ ನಡೆಯಿತು.

ಮೈಸೂರು, ಮಾ.5– ಮೈಸೂರು ಜಿಲ್ಲಾ ಪಂಚಾಯಿತಿಯ ಮಿನಿ ಸಭಾಂಗಣದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಎಂ.ಗಾಯತ್ರಿ ಅಧ್ಯಕ್ಷತೆಯಲ್ಲಿ ಗ್ರಾಮೀಣ ಪ್ರದೇಶದ ಜನರಿಗೆ ಮುಂದಿನ ಮೂರು ತಿಂಗಳು ಬರ ಪರಿಸ್ಥಿತಿ, ಕುಡಿಯುವ ನೀರಿನ ಸಮಸ್ಯೆ ಹಾಗೂ ಮೇವಿನ ಸಮಸ್ಯೆಯನ್ನು ನಿವಾರಿಸಲು ಕೈಗೊಂಡಿರುವ ಕ್ರಮದ ಕುರಿತು ಹಾಗೂ ಮನರೇಗಾ ಪ್ರಗತಿಯ ಕುರಿತು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ವಿಡಿಯೋ ಸಂವಾದದ ಮೂಲಕ ಸಭೆ ನಡೆಸಲಾಯಿತು. ಸಭೆಯಲ್ಲಿ ಉಪ ಕಾರ್ಯದರ್ಶಿ(ಅಭಿವೃದ್ಧಿ), ಕಾರ್ಯಪಾಲಕ ಅಭಿಯಂತರರು, ಸಹಾಯಕ ಯೋಜನಾ ಅಧಿಕಾರಿಗಳು ಹಾಗೂ ವಿಡಿಯೋ ಸಂವಾದದ ಮೂಲಕ ಎಲ್ಲಾ ಎಲ್ಲಾ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಕಾರ್ಯಪಾಲಕ ಅಭಿಯಂತರರು ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು.

ಕೃಷಿ ವಿವಿಗಳಲ್ಲಿನ ಖಾಲಿ ಹುದ್ದೆ ಭರ್ತಿಗೆ ಕ್ರಮ

ಕೃಷಿ ಸಚಿವ ಚಲುವರಾಯಸ್ವಾಮಿ ಭರವಸೆ



ಬೆಂಗಳೂರು, ಮಾ.5(ಕೆಎಂಶಿ)– ರಾಜ್ಯದ ನಾಲ್ಕು ಕೃಷಿ ವಿಶ್ವವಿದ್ಯಾಲಯಗಳಲ್ಲಿನ ಖಾಲಿ ಹುದ್ದೆಗಳ ಭರ್ತಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ತಿಳಿಸಿದ್ದಾರೆ.

ವಿಶ್ವವಿದ್ಯಾಲಯಗಳ ಪ್ರಗತಿ ಪರಿಶೀಲನೆ ನಡೆಸಿದ ಸಚಿವರು, ಕೃಷಿ ವಿಶ್ವವಿದ್ಯಾಲಯಗಳಲ್ಲಿ ಗುಣಾತ್ಮಕವಾಗಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಬೇಕು, ಶೇ.100 ಅನುದಾನಿತ ಹುದ್ದೆಗಳಿಗೆ ಆರ್ಥಿಕ ಇಲಾಖೆಗೆ ಕೇವಲ ಮಾಹಿತಿ ನೀಡಿ ನೇಮಕಾತಿ ಮಾಡಿಕೊಳ್ಳಲು ಅನುಕೂಲವಾಗುವಂತೆ ಸೂಕ್ತ ಮಾರ್ಗಸೂಚಿ ಹೊರಡಿಸಬೇಕಿದೆ ಎಂದು ತಿಳಿಸಿದರು.

ಕೃಷಿ ವಿಶ್ವವಿದ್ಯಾಲಯಗಳು ಕೇವಲ ಸಂಶೋಧನೆಗೆ ಸೀಮಿತವಾಗದೆ ಕೃಷಿ ಹಾಗೂ ಕೃಷಿಕರ ಶ್ರೇಯೋಭಿವೃದ್ಧಿಗೆ ಬಳಕೆಯಾಗಬೇಕು, ಕೃಷಿ ವಿವಿಗಳಿಗೆ ಸರ್ಕಾರ ಹೆಚ್ಚಿನ ನೆರವು ಹಾಗೂ ಪ್ರೋತ್ಸಾಹ ನೀಡುತ್ತಿದೆ, ಇದರ ಫಲ ರೈತರಿಗೆ ವರ್ಗಾವಣೆಯಾಗಬೇಕು. ಐಸಿಎಆರ್ ಮಾರ್ಗಸೂಚಿ ಮಾನದಂಡ ಪೂರೈಸುವ ಕೃಷಿ ಕಾಲೇಜು ಮತ್ತು ಕೃಷಿ ಸಂಸ್ಥೆಗಳಿಗೆ ಮಾತ್ರ ಸಂಬಂಧಪಟ್ಟ ಕೃಷಿ ವಿವಿ ವ್ಯಾಪ್ತಿಯಲ್ಲಿ ಅಫಿಲಿಯೇಷನ್ ನೀಡುವ ಬಗ್ಗೆ ಪರಿಶೀಲಿಸಿ ಕ್ರಮ ವಹಿಸುವಂತೆ ಸೂಚಿಸಿದರು. ಡಿಪ್ಲೊಮಾ ಕಾಲೇಜುಗಳ ಪುನರ್ ಸ್ಥಾಪನೆ ಬೇಡಿಕೆ ಬಗ್ಗೆ ಪರಿಶೀಲಿಸಿ ವರದಿ ನೀಡುವಂತೆ ಕಾರ್ಯದರ್ಶಿಗಳಿಗೆ ಸಚಿವರು ನಿರ್ದೇಶನ ನೀಡಿದರು.

ವಿವಿಧ ಕೌಶಲ್ಯ ತರಬೇತಿಗೆ ಅರ್ಜಿ ಆಹ್ವಾನ

ಮೈಸೂರು,ಮಾ.5–ರುಡ್‌ಸೆಟ್ ಸಂಸ್ಥೆ, ಮೈಸೂರಿನಲ್ಲಿ ಗ್ರಾಮೀಣ ಪ್ರದೇಶದ ನಿರುದ್ಯೋಗಿ ಯುವಕ ಯುವತಿಯರಿಗಾಗಿ ಸ್ವಉದ್ಯೋಗಕ್ಕೆ ಸಂಬಂಧಿಸಿದಂತೆ ವಿವಿಧ ರೀತಿಯ ಕೌಶಲ್ಯ ತರಬೇತಿಗಳನ್ನು ಪ್ರಾರಂಭಿಸಲಾಗುತ್ತಿದ್ದು, ಈ ಸಂಬಂಧ ಅರ್ಜಿ ಆಹ್ವಾನಿಸಲಾಗಿದೆ ಮೊಬೈಲ್ ರಿಪೇರಿ ಮತ್ತು ಸರ್ವೀಸ್ (06.03.2024ರಿಂದ 04.04.2024ರವರೆಗೆ (30 ದಿನಗಳು)

ತರಬೇತಿಯು ಊಟ ಮತ್ತು ವಸತಿ ಸಹಿತವಾಗಿ ಸಂಪೂರ್ಣ ಉಚಿತವಾಗಿರುತ್ತದೆ. ಆಸಕ್ತರು ಸಂಸ್ಥೆಗೆ ಬಂದು, ದೂರವಾಣಿ ಮುಖಾಂತರ ತರಬೇತಿಗೆ ಹೆಸರು ನೋಂದಾಯಿಸಲು ಕೋರಲಾಗಿದೆ. ಆಸಕ್ತ ಅಭ್ಯರ್ಥಿಗಳು ತಮ್ಮ ಮೊಬೈಲ್ ನಂಬರ್‌ವುಳ್ಳ ಸ್ವವಿಳಾಸದ ಅರ್ಜಿಯೊಂದಿಗೆ, ಆಧಾರ್‌ಕಾರ್ಡ್, ಬಿ.ಪಿ.ಎಲ್. ರೇಷನ್‌ಕಾರ್ಡ್ ಜೆರಾಕ್ಸ್ ಪ್ರತಿಗಳೊಂದಿಗೆ ಪ್ರಾರಂಭಿಕ ದಿನಾಂಕದೊಳಗಾಗಿ ಸಂಪರ್ಕಿಸಿ ರುಡ್‌ಸೆಟ್ ಸಂಸ್ಥೆಯಲ್ಲಿ ತರಬೇತಿಯಲ್ಲಿ ಪಾಲ್ಗೊಳ್ಳಲು ತಿಳಿಸಲಾಗಿದೆ. ತರಬೇತಿಗೆ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಯನ್ನು ನೇರ ಸಂದರ್ಶನ ಮೂಲಕ ನಡೆಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ದೂ. 0821–2519663, 9449860466, 9844013948 ಸಂಪರ್ಕಿಸಬಹುದು.

ಅಭ್ಯರ್ಥಿಗಳ ಅರ್ಹತೆ
- 18ರಿಂದ 45 ವರ್ಷಗಳ ವಯೋಮಿತಿ ಹೊಂದಿರಬೇಕು.
- ಕನ್ನಡ ಓದು ಬರಹ ಬಲ್ಲವರಾಗಿರಬೇಕು.
- ಸ್ವ ಉದ್ಯೋಗ ಮಾಡಬೇಕೆಂಬ ಆಸಕ್ತಿ ಹೊಂದಿರಬೇಕು.



ವಿಶ್ವ ಶ್ರವಣ ದಿನದ ಅಂಗವಾಗಿ ವಾಕಥಾನ್

ಮೈಸೂರು,ಮಾ.5–ನಗರದ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಆವರಣದ ಮುಂಭಾಗ ವಿಶ್ವ ಶ್ರವಣ ದಿನದ ಅಂಗವಾಗಿ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆ (ಎಐಐಎಸ್‌ಎಚ್), ಜೆಎಸ್‌ಎಸ್ ವಾಕ್ ಮತ್ತು ಶ್ರವಣ ಸಂಸ್ಥೆ (ಜೆಎಸ್‌ಎಸ್‌ಐಎಸ್‌ಎಚ್) ಮತ್ತು ಭಾರತೀಯ ವಾಕ್ ಮತ್ತು ಶ್ರವಣ ಅಸೋಸಿಯೇಷನ್ (ಐಎಸ್‌ಎಚ್‌ಎ) ಮೈಸೂರು ವಿಭಾಗದ ಸಹ ಯೋಗದಲ್ಲಿ 'ವಾಕ ಥಾನ್' ನಡೆಯಿತು. ಶ್ರವಣ ಆರೋಗ್ಯ ನಮ್ಮ ಜೀವನದಲ್ಲಿ ಪ್ರಮುಖ ಪಾತ್ರವನ್ನು ವಹಿಸುತ್ತದೆ. ಶ್ರವಣ ದೋಷ ಮತ್ತು ಶಬ್ದಮಾಲಿನ್ಯದ ದುಷ್ಪರಿಣಾಮಗಳಿಂದ ಉಂಟಾಗುವ ಶ್ರವಣ ಸಂಬಂಧಿತ ಸಮಸ್ಯೆಗಳ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸುವುದು ಈ ವಾಕಥಾನ್ ಮುಖ್ಯ ಉದ್ದೇಶ. ಆಯಿಷ್ ನಿರ್ದೇಶಕಿ ಡಾ.ಎಂ.ಪುಷ್ಪಾ ವತಿ ವಾಕಥಾನ್‌ಗೆ ಚಾಲನೆ ನೀಡಿದರು. ಆಯಿಷ್ ಮತ್ತು ಜೆಎಸ್‌ಎಸ್ ವಾಕ್ ಮತ್ತು ಶ್ರವಣ ಸಂಸ್ಥೆ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿ ಸೇರಿದಂತೆ ನೂರಾರು ಮಂದಿ ವಾಕಥಾನ್‌ನಲ್ಲಿ ಭಾಗವಹಿಸಿದ್ದರು.


ಮೈಸೂರು ನಗರ BJP ST ಬಿಜೆಪಿ ಎಸ್‌ಟಿ ಮೋರ್ಚಾ ನೂತನ ಅಧ್ಯಕ್ಷ ಪಡುವಾರಹಳ್ಳಿಯ ಎಂ.ರಾಮಕೃಷ್ಣ, ಪ್ರಧಾನ ಕಾರ್ಯದರ್ಶಿ ನಾರಾಯಣ ಲೋಲಪ್ಪ, ಸುಣ್ಣದಕೇರಿ ಕೃಷ್ಣಕುಮಾರ್ ನಾಯಕ ಇನ್ನಿತರರು ಮಾಜಿ ಶಾಸಕರೂ ಆದ ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ ಅವರನ್ನು ಅಭಿನಂದಿಸಿದರು. ಈ ವೇಳೆ ಕಿರಣ್‌ಗೌಡ, ಚಿಕ್ಕವೆಂಕಟು, ಜೀವನ್ ಇನ್ನಿತರರಿದ್ದರು.

ಎಂಹೆಚ್‌ಎಂಬಿಪಿಎಲ್‌ನಿಂದ ಎಲ್‌ಪಿಜಿ ಗ್ಯಾಸ್ ಪೈಪ್‌ಲೈನ್ ಬಗ್ಗೆ ಪ್ರಾತ್ಯಕ್ಷಿಕೆ





ಮೈಸೂರು,ಮಾ.5–ಎಂಹೆಚ್‌ಎಂಬಿಪಿಎಲ್ ಸಂಸ್ಥೆಯು ಹಿಂದೂಸ್ಥಾನ್ ಪೆಟ್ರೋಲಿಯಂ ಕಾರ್ಪೋರೇಷನ್ ಸಹಯೋಗದಲ್ಲಿ ಮೈಸೂರು ಜಿಲ್ಲೆಯ ಗುಂಗ್ರಾಲ್ ಛತ್ರ ಗ್ರಾಪಂ ವ್ಯಾಪ್ತಿಯ ದಡದಕಲ್ಲಹಳ್ಳಿಯಲ್ಲಿ ಅನಿಲ ಕೊಳವೆ ಮಾರ್ಗದಲ್ಲಿ ಏನಾದರೂ ಅನಾಹುತ ಸಂಭವಿಸಿದಲ್ಲಿ ಹೇಗೆ ನಿಭಾಯಿಸುವುದು ಎಂಬುದರ ಕುರಿತಂತೆ ಪ್ರಾತ್ಯಕ್ಷಿಕೆ ಮೂಲಕ ಗ್ರಾಮಸ್ಥರಿಗೆ ಮನವರಿಕೆ ಮಾಡಿಕೊಡಲಾಯಿತು. ಈ ವೇಳೆ ಗ್ರಾಮಸ್ಥರು, ಎಂಹೆಚ್‌ಎಂಬಿಪಿಎಲ್ ಜನರಲ್ ಮ್ಯಾನೇಜರ್, ಕೈಗಾರಿಕೆಗಳ ಇಲಾಖೆ ಉಪನಿರ್ದೇಶಕರು, ಜಿಲ್ಲಾ ಅಗ್ನಿಶಾಮಕ ಅಧಿಕಾರಿಗಳು, ಗ್ರಾಪಂ ಅಭಿವೃದ್ಧಿ ಅಧಿಕಾರಿಗಳು, ಬಿಇಎಂಎಲ್, ಎಕ್ಸೊ ಅಂಡ್ ಪಿ, ಆಟೋಮೋಟಿವ್ ಆಕ್ಸೆಲ್ ಮತ್ತು ಜೆ.ಕೆ. ಟೈರ್ಸ್ ಸಿಬ್ಬಂದಿ ಭಾಗವಹಿಸಿದ್ದರು.

ಮಹಿಳಾ ದಿನಾಚರಣೆ ಅಂಗವಾಗಿ ನಾರಿಯರಿಗೆ ವಿವಿಧ ಸ್ಪರ್ಧೆ


ಮೈಸೂರಿನ ಚಾಮುಂಡಿವಿಹಾರ ಕ್ರೀಡಾಂಗಣದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಮಂಗಳವಾರ ನಡೆದ ಮಹಿಳೆಯರ ಕ್ರೀಡಾಕೂಟವನ್ನು ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಜಿ.ಎಂ.ಸವಿತಾ ಉದ್ಘಾಟಿಸಿದರು.

ಮೈಸೂರು, ಮಾ.5(ಬಿಎಲ್‌ಯು)– ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಮೈಸೂರಿನ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಇಂದು ಮಹಿಳೆಯರಿಗಾಗಿ ವಿವಿಧ ಕ್ರೀಡಾ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು.

ಮೈಸೂರು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಜಿ.ಎಂ.ಸವಿತಾ, ಸ್ಪರ್ಧಾ ಕಾರ್ಯಕ್ರಮ ಉದ್ಘಾಟಿಸಿದರು. ಮಹಿಳಾ ಸಬಲೀಕರಣ ಆಗಬೇಕು. ಈ ಮೂಲಕ ಮಹಿಳೆ ತಾನು ಯಾರಿಗೂ ಕಡಿಮೆ ಇಲ್ಲ ಎಂದು ಸಾಧಿಸಿ ತೋರಿಸಬೇಕು. ಇಂತಹ ಕ್ರೀಡಾ ಚಟುವಟಿಕೆಗಳಲ್ಲಿ ಮಹಿಳೆಯರು ಉತ್ಸಾಹದಿಂದ ಭಾಗಿಯಾಗಬೇಕು ಎಂದು ಸಲಹೆ ನೀಡಿದರು.

ದೈಹಿಕವಾಗಿ ಸದೃಢವಾಗಿರಲು ಕ್ರೀಡೆ ಬಹಳ ಮುಖ್ಯವಾಗಿದ್ದು, ಪ್ರತಿಯೊಬ್ಬ ಮಹಿಳೆ ಯಾವುದಾದರೊಂದು ಕ್ರೀಡೆಯಲ್ಲಿ ಭಾಗವಹಿಸಬೇಕು ಎಂದು ಹೇಳಿದರು.

ಮಹಿಳೆಯರು ಮನೆ ಹಾಗೂ ಕಚೇರಿಯಲ್ಲಿ ಎರಡು ಕಡೆ ಸಮನಾಗಿ ಕೆಲಸ ಮಾಡುತ್ತಾರೆ. ಇದರಿಂದ ಒತ್ತಡಗಳು ಸಹಜ. ಆದರೆ ಒತ್ತಡ ಮರೆಯಲು ಕ್ರೀಡೆ ಅನಿವಾರ್ಯವಾಗಿದೆ. ಈ ಮೂಲಕ ಕ್ರೀಡಾ ಚಟುವಟಿಕೆಗಳಲ್ಲಿ ಸಕ್ರಿಯರಾಗಿ ಪಾಲ್ಗೊಳ್ಳಬೇಕು. ಸೋಲು–ಗೆಲುವನ್ನು ಸಮಚಿತ್ತದಿಂದ ಸ್ವೀಕರಿಸಬೇಕು ಎಂದು ಸವಿತಾ ಹೇಳಿದರು.

ಮೈಸೂರು ಜಿಲ್ಲೆಯ ಎಲ್ಲಾ ತಾಲೂಕಿನಿಂದ ಬಂದಿದ್ದ ನೂರಾರು ಮಹಿಳೆಯರು ವಿವಿಧ ಕ್ರೀಡೆಗಳಲ್ಲಿ ಭಾಗವಹಿಸಿದ್ದರು. ಕ್ರೀಡಾ ಇಲಾಖೆಯಿಂದ ಪ್ರತಿಯೊಬ್ಬ ಸ್ಪರ್ಧಿಗೂ ಪಿಂಕ್ ಬಣ್ಣದ ಟೀ ಶರ್ಟ್ ಹಾಗೂ ಬಿಳಿ ಬಣ್ಣದ ಟೋಪಿ ನೀಡಲಾಗಿತ್ತು.

ಮಹಿಳಾ ಸ್ಪರ್ಧಿಗಳಿಗೆ ಓಟದ ಸ್ಪರ್ಧೆ, ಬಾಸ್ಕೆಟ್ ಬಾಲ್, ವಾಲಿಬಾಲ್, ಹಾಕಿ, ಮ್ಯೂಜಿಕಲ್ ಛೇರ್, ಥ್ರೋಬಾಲ್, ಹಗ್ಗಜಗ್ಗಾಟ, ಲಾಂಗ್‌ಜಂಪ್, ಶಾಟ್‌ಪುಟ್ ಸೇರಿದಂತೆ ಹಲವು ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿಯ ಉಪ ಕಾರ್ಯದರ್ಶಿ ಕೃಷ್ಣಂರಾಜು, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಭಾಸ್ಕರ್ ನಾಯಕ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಕೆಆರ್‌ಎಸ್ ಸಮೀಪ ಉದ್ದೇಶಿತ ಟ್ರಯಲ್ ಬ್ಲಾಸ್ಟ್‌ಗೆ ವಿರೋಧ; ರೈತರು, ಬಿಜೆಪಿ ಕಾರ್ಯಕರ್ತರ ಬೃಹತ್ ಪ್ರತಿಭಟನೆ

ಸ್ಥಳ ಪರಿಶೀಲನೆ ಕೈಬಿಟ್ಟು ಮರಳಿದ ಜಾರ್ಖಂಡ್ ವಿಜ್ಞಾನಿಗಳ ತಂಡ




ಕೆಆರ್‌ಎಸ್ ಬಳಿ ಟ್ರಂಯಲ್ ಬ್ಲಾಸ್ಟ್ ನಡೆಸಲು ಬಂದಿದ್ದ ಅಧಿಕಾರಿಗಳ ವಿರುದ್ಧ ರೈತ ಸಂಘ ಹಾಗೂ ಬಿಜೆಪಿ ಕಾರ್ಯಕರ್ತರು ಪ್ರತ್ಯೇಕವಾಗಿ ಪ್ರತಿಭಟನೆ ನಡೆಸಿದರು.

ಶ್ರೀರಂಗಪಟ್ಟಣ, ಮಾ.5– ಕೆಆರ್‌ಎಸ್ ಬಳಿ ಟ್ರಂಯಲ್ ಬ್ಲಾಸ್ಟ್‌ಗೆ ಬಂದ ವಿಜ್ಞಾನಿಗಳು, ಅಧಿಕಾರಿಗಳ ವಿರುದ್ಧ ರೈತ ಸಂಘ ಹಾಗೂ ಬಿಜೆಪಿ ಕಾರ್ಯಕರ್ತರು ಪ್ರತ್ಯೇಕವಾಗಿ ಆಕ್ರೋಶ ವ್ಯಕ್ತಪಡಿಸಿದರು. ಇದರಿಂದಾಗಿ ಜಾರ್ಖಂಡ್ ವಿಜ್ಞಾನಿಗಳ ತಂಡ ಟ್ರಯಲ್ ಬ್ಲಾಸ್ಟ್ ಸ್ಥಳ ಪರಿಶೀಲನೆಯನ್ನು ಕೈಬಿಟ್ಟು ಮರಳಿತು.

ಬೃಂದಾವನ ಪ್ರವೇಶದ್ವಾರ ರಸ್ತೆಯಲ್ಲಿ ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ, ಜಿಲ್ಲಾಧ್ಯಕ್ಷ ಎ.ಎಲ್ ಕೆಂಪೂಗೌಡ, ಮತ್ತೊಂದೆಡೆ ಬಿಜೆಪಿ ಜಿಲ್ಲಾಧ್ಯಕ್ಷ ಡಾ.ಇಂದ್ರೇಶ್ ನೇತೃತ್ವದಲ್ಲಿ ಬಿಜೆಪಿ ಕಾರ್ಯಕರ್ತರು ಜಮಾವಣೆಗೊಂಡು, ಟ್ರಯಲ್ ಬ್ಲಾಸ್ಟ್ ಪರಿಶೀಲನೆಗೆ ಆಗಮಿಸಿದ್ದ ಹಿರಿಯ ವಿಜ್ಞಾನಿ ಆದಿತ್ಯಾ ರಾಣಾ ನೇತೃತ್ವದ ತಂಡದ ವಿರುದ್ಧ ಗೋ ಬ್ಯಾಕ್ ಚಳವಳಿ ನಡೆಸಿ ರಾಜ್ಯ ಸರ್ಕಾರ, ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ವಿರುದ್ಧ ಘೋಷಣೆ ಕೂಗಿದರು.

ಬಿಜೆಪಿ ಹಾಗೂ ರೈತ ಸಂಘದ ಕಾರ್ಯಕರ್ತರ ಗೋಬ್ಯಾಕ್ ಚಳವಳಿಗೆ ಪಾಂಡವಪುರ ಶಾಸಕ ದರ್ಶನ್ ಪುಟ್ಟಣ್ಣಯ್ಯ ಸಾಥ್ ನೀಡಿ, ಪ್ರತಿಭಟನೆಯಲ್ಲಿ ಪಾಲ್ಗೊಂಡು ಬೇಬಿಬೆಟ್ಟದಲ್ಲಿ ಯಾವುದೇ ಟ್ರಯಲ್ ಬ್ಲಾಸ್ಟ್ ಮಾಡದಂತೆ ಆಕ್ರೋಶ ವ್ಯಕ್ತಪಡಿಸಿದರು.

ಸಭೆಗೆ ಆಹ್ವಾನ: ಬೃಂದಾವನದ ಬಳಿ ಹಿರಿಯ ವಿಜ್ಞಾನಿ ಆದಿತ್ಯಾ ರಾಣಾ ನೇತೃತ್ವದಲ್ಲಿ ಕಾವೇರಿ ನೀರಾವರಿ ನಿಗಮ, ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಹಾಗೂ ಅಣೆಕಟ್ಟೆ ಸುರಕ್ಷತೆ ತಂಡದ ಜೊತೆಗೂಡಿ ನಡೆಸುತ್ತಿರುವ ಟ್ರಂಯಲ್ ಬ್ಲಾಸ್ಟ್ ಸಂಬಂಧಿತ ಸಭೆಗೆ ಜಿಲ್ಲಾಡಳಿತ, ಮೇಲುಕೋಟೆ ಕ್ಷೇತ್ರದ ಶಾಸಕ ದರ್ಶನ್ ಪುಟ್ಟಣ್ಣಯ್ಯರಿಗೆ ಆಹ್ವಾನ ನೀಡಿತ್ತು. ಜೊತೆಗೆ ಮೂವರು ರೈತ ಮುಖಂಡರಿಗೂ ಅವಕಾಶ ಕಲ್ಪಿಸಿತ್ತು.

ಮಾತಿನ ಚಕಮಕಿ: ಟ್ರಯಲ್ ಬ್ಲಾಸ್ಟ್ ವಿರೋಧಿಸಿ ಬಿಜೆಪಿ ಜಿಲ್ಲಾಧ್ಯಕ್ಷ ಇಂದ್ರೇಶ್ ನೇತೃತ್ವದಲ್ಲಿ ನೂರಾರು ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸುತ್ತಿದ್ದ ವೇಳೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ಹಾಗೂ ಮೂವರು ರೈತ ಮುಖಂಡರೊಂದಿಗೆ ಅಧಿಕಾರಿಗಳು ಸಭೆ ನಡೆಸುತ್ತಿದ್ದ ಸ್ಥಳಕ್ಕೆ ತೆರಳಲು ಮುಂದಾದ ಬಿಜೆಪಿ ಕಾರ್ಯಕರ್ತರನ್ನು ಪೊಲೀಸರು ತಡೆಯಲು ಮುಂದಾದರು. ಈ ವೇಳೆ ಪೊಲೀಸರು ಹಾಗೂ ಬಿಜೆಪಿ ಕಾರ್ಯಕರ್ತರ ನಡುವೆ ಮಾತಿನ ಚಕಮಕಿ ನಡೆದು ತಳ್ಳಾಟ–ನೂಕಾಟ ಉಂಟಾಯಿತು.

ಈ ವೇಳೆ ಜಿಲ್ಲಾಧ್ಯಕ್ಷ ಇಂದ್ರೇಶ್, ರೈತ ಮೋರ್ಚಾ ಅಧ್ಯಕ್ಷ ಅಶೋಕ್ ಜಯರಾಂ. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅನಂದ್ ಸೇರಿದಂತೆ ನೂರಾರು ಕಾರ್ಯಕರ್ತರು, ನಾವು ಬೇಬಿಬೆಟ್ಟದ ಸಮಸ್ಯೆಗಳನ್ನು ತಜ್ಞರಿಗೆ ತಿಳಿಸಲು ಅವಕಾಶ ನೀಡಿ ಎಂದು ಪಟ್ಟು ಹಿಡಿದರು. ನಂತರ ನೀರಾವರಿ ಇಲಾಖೆ ಅಧಿಕಾರಿಗಳು ಬಿಜೆಪಿ ಮುಖಂಡರನ್ನು ಸಭೆಯಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಿಕೊಟ್ಟರು.

ಟ್ರಯಲ್ ಬ್ಲಾಸ್ಟ್ ಮಾಡಲು ಸೂಚನೆ ಇಲ್ಲ: ಸಭೆ ನಂತರ ಶಾಸಕ ದರ್ಶನ್ ಪುಟ್ಟಣ್ಣಯ್ಯ ಮಾತನಾಡಿ, ಹೈಕೋರ್ಟ್ ನೀಡಿರುವ ತೀರ್ಪಿನಲ್ಲಿ ಟ್ರಯಲ್ ಬ್ಲಾಸ್ಟ್ ನಡೆಸುವ ವಿಚಾರ ಪ್ರಸ್ತಾಪಿಸಿಲ್ಲ. ಅದೇ ವಿಷಯವಾಗಿ ಸಭೆಯಲ್ಲಿ ಚರ್ಚಿಸಲಾಗಿದ್ದು, ತಾತ್ಕಾಲಿಕವಾಗಿ ಟ್ರಯಲ್ ಬ್ಲಾಸ್ಟ್ ಸ್ಥಳ ಪರಿಶೀಲನೆ ಹಾಗೂ ಯಾವುದೇ ಕೆಲಸ ಮಾಡುವುದಿಲ್ಲ ಎಂದು ವಿಜ್ಞಾನಿಗಳು ಮತ್ತು ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳು ತಿಳಿಸಿದ್ದಾರೆ ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ಇಂದ್ರೇಶ್ ಮಾತನಾಡಿ, ಪ್ರಭಾವಿಗಳ ಒತ್ತಡಕ್ಕೆ ಮಣಿದಿರುವ ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳು ಹೈಕೋರ್ಟ್ ಆದೇಶವನ್ನು ತಿರುಚಿ ವಿಜ್ಞಾನಿಗಳು ಮತ್ತು ತಜ್ಞರನ್ನು ಕರೆಸಿ ಟ್ರಯಲ್ ಬ್ಲಾಸ್ಟ್ ಮಾಡಲು ಮುಂದಾಗಿರುವುದು ಆದೇಶಕ್ಕೆ ವಿರುದ್ಧವಾಗಿದೆ. ಜೊತೆಗೆ ಇಂದಿನ ಸಭೆಗೆ ಜಿಲ್ಲಾ ಅಧಿಕಾರಿಗಳು ಆಗಮಿಸಿಲ್ಲ, ಜಿಲ್ಲಾಧಿಕಾರಿಗಳ ಸಹಿತ ಜನಪ್ರತಿನಿಧಿಗಳಿಂದಲೂ ಟ್ರಯಲ್ ಬ್ಲಾಸ್ಟ್‌ಗೆ ಹೈಕೋರ್ಟ್ ಆದೇಶ ಇಲ್ಲದಿರುವುದು ಸಭೆಯಿಂದ ಬಯಲಾಗಿದೆ ಎಂದರು.

ಶಾಸಕ ದರ್ಶನ್ ಪುಟ್ಟಣ್ಣಯ್ಯ ಹಾಗೂ ಬಿಜೆಪಿ ಜಿಲ್ಲಾಧ್ಯಕ್ಷ ಇಂದ್ರೇಶ್ ಸಭೆಯಿಂದ ಹೊರ ಬಂದು ಪ್ರತಿಭಟನೆ ನಡೆಸುತ್ತಿದ್ದ ಪ್ರತಿಭಟನಾಕಾರರಿಗೆ ಟ್ರಯಲ್ ಬ್ಲಾಸ್ಟ್ ಸ್ಥಳ ಪರಿಶೀಲನೆ ನಡೆಯುವುದಿಲ್ಲ ಎಂಬ ಮಾಹಿತಿ ನೀಡಿದ ಮೇರೆಗೆ ಪ್ರತ್ಯೇಕವಾಗಿ ನಡೆಯುತ್ತಿದ್ದ ಪ್ರತಿಭಟನೆಯನ್ನು ಕೈಬಿಡಲಾಯಿತು.

ಸಾಲ ಮರು ಪಾವತಿಗೆ ನೋಟಿಸ್ ಜಾರಿ

ಕರ್ನಾಟಕ ಗ್ರಾಮೀಣ ಬ್ಯಾಂಕ್ ಮುಂದೆ ರೈತರ ಪ್ರತಿಭಟನೆ, ಮ್ಯಾನೇಜರ್‌ಗೆ ತರಾಟೆ



ಕರ್ನಾಟಕ ಗ್ರಾಮೀಣ ಬ್ಯಾಂಕ್ ಮುಂದೆ ಪ್ರತಿಭಟನೆ ನಡೆಸುತ್ತಿರುವ ರೈತರು.

ಪೋಷಕರು ಕಟ್ಟಬೇಕಾದ ಬ್ಯಾಂಕಿನ ಸಾಲಕ್ಕೆ 15 ವರ್ಷದ ಹೆಣ್ಣು ಮಗುವಿಗೂ ಸಹ ಬ್ಯಾಂಕ್ ನೋಟಿಸ್ ನೀಡಿರುವುದು ಖಂಡನೀಯ. ಈ ರೀತಿ ನೋಟಿಸ್ ನೀಡಿ ಬೆದರಿಸಿದರೆ ಮುಂದೆ ಏನಾದರೂ ಅನಾಹುತ ಸಂಭವಿಸಿದರೆ ನಿಮ್ಮನ್ನೇ ಹೊಣೆಗಾರರನ್ನಾಗಿ ಮಾಡಬೇಕಾಗುತ್ತದೆ.

-ರೈತರ ಎಚ್ಚರಿಕೆ

ಮಂಡ್ಯ, ಮಾ.5– ಬರಗಾಲದಿಂದ ಸಂಕಷ್ಟದಲ್ಲಿರುವ ರೈತರಿಗೆ ಕರ್ನಾಟಕ ಗ್ರಾಮೀಣ ಬ್ಯಾಂಕ್ ಸಾಲ ಮರುಪಾವತಿಗಾಗಿ ನೋಟಿಸ್ ನೀಡಿರುವುದನ್ನು ಖಂಡಿಸಿ ರೈತರು, ವಿವಿಧ ಪಕ್ಷಗಳ ಮುಖಂಡರು ಪಕ್ಷಾತೀತವಾಗಿ ಬ್ಯಾಂಕ್ ಎದುರು ಪ್ರತಿಭಟನೆ ನಡೆಸಿದರು.

ತಾಲೂಕಿನ ತಗ್ಗಹಳ್ಳಿಯ ಕರ್ನಾಟಕ ಗ್ರಾಮೀಣ ಬ್ಯಾಂಕ್‌ಗೆ ಮುತ್ತಿಗೆ ಹಾಕಿ ಮ್ಯಾನೇಜರ್ ಅವರನ್ನು ತರಾಟೆ ತೆಗೆದುಕೊಂಡ ರೈತರು ಹಾಗೂ ಮುಖಂಡರು, ನಾಲೆಗಳಲ್ಲಿ ನೀರಿಲ್ಲದೇ ಬೆಳೆ ಬೆಳೆಯಲು ಆಗದೇ ಸಂಕಷ್ಟದಲ್ಲಿರುವ ರೈತರಿಗೆ ನೋಟಿಸ್ ನೀಡಿ ಬೆದರಿಕೆ ತಂತ್ರ ಅನುಸರಿಸುತ್ತಿದ್ದೀರಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಬಾರಿ ಮಳೆ ಕಡಿಮೆಯಾಗಿ, ನಾಲೆಗಳಲ್ಲೂ ನೀರು ಬಿಡದೆ ರೈತರು ಬೆಳೆ ಬೆಳೆಯಲು ಸಾಧ್ಯವಾಗಿಲ್ಲ. ಇದರಿಂದ ಜೀವನ ನಿರ್ವಹಣೆ ಮಾಡುವುದಕ್ಕೂ ಆಗದೇ ತೊಂದರೆಯಲಿದ್ದಾರೆ. ಇಂತಹ ಸಂದರ್ಭದಲ್ಲಿ ಬ್ಯಾಂಕುಗಳಲ್ಲಿ ಪಡೆದಿರುವ ಸಾಲವನ್ನು ತೀರಿಸಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದರು.


ಮಂಡ್ಯ ಜಿಲ್ಲೆಯ 7 ತಾಲೂಕುಗಳನ್ನು ಸರ್ಕಾರ ಬರ ಎಂದು ಘೋಷಣೆ ಮಾಡಿದೆ. ಆದ್ದರಿಂದ ಬ್ಯಾಂಕುಗಳು ಯಾವುದೇ ಕಾರಣಕ್ಕೂ ರೈತರಿಗಾಗಲಿ ಅಥವಾ ಶೈಕ್ಷಣಿಕ ಸಾಲ ಪಡೆದಿರುವ ವಿದ್ಯಾರ್ಥಿಗಳಿಗಾಗಲಿ ಸಾಲ ಮರುಪಾವತಿಗಾಗಿ 2025ರ ಮೇ ವರೆಗೆ ಯಾವುದೇ ನೋಟಿಸ್ ಅಥವಾ ಒತ್ತಡವನ್ನು ಹಾಕುವುದಾಗಲಿ ಮಾಡಬಾರದು ಎಂದು ಆಗ್ರಹಿಸಿದರು. ಸರ್ಕಾರದ ವಿವಿಧ ಯೋಜನೆಗಳ ಮೂಲಕ ಫಲಾನುಭವಿಗಳಿಗೆ ಬರುತ್ತಿರುವ ಹಣವನ್ನು ಬ್ಯಾಂಕಿನವರು ಸಾಲಕ್ಕೆ ವಜಾ ಮಾಡುವುದು ಸರಿಯಲ್ಲ. ಕೂಡಲೇ ಫಲಾನುಭವಿಗಳಿಗೆ ಹಣ ನೀಡಬೇಕು. ಮತ್ತೆ ಇಂತಹ ಘಟನೆಗಳು ಜರುಗದಂತೆ ಕ್ರಮ ವಹಿಸಬೇಕು. ಇಲ್ಲದಿದ್ದರೆ ಬ್ಯಾಂಕಿನ ಎದುರು ಉಗ್ರ ಪ್ರತಿಭಟನೆ ನಡೆಸುವ ಎಚ್ಚರಿಕೆ ನೀಡಿದರು.

ರೈತರು, ಮುಖಂಡರ ಮನವಿ ಆಲಿಸಿದ ಬ್ಯಾಂಕ್ ಮ್ಯಾನೇಜರ್, ನೀವು ಕೇಳಿರುವ ಕಾಲಾವಕಾಶದ ಬಗ್ಗೆ ಮೇಲಾಧಿಕಾರಿಗಳ ಗಮನಕ್ಕೆ ತರುತ್ತೇನೆ. ಅವರ ಸೂಚನೆಯಂತೆ ಕ್ರಮ ವಹಿಸುವುದಾಗಿ ಭರವಸೆ ನೀಡಿದರು.

ಪ್ರತಿಭಟನೆಯಲ್ಲಿ ಸರ್ವೋದಯ ಕರ್ನಾಟಕ ರಾಜ್ಯ ಪ್ರಧಾನ ಕಾರ್ಯದರ್ಶಿ ತಗ್ಗಹಳ್ಳಿ ಪ್ರಸನ್ನ, ರಾಜ್ಯ ರೈತ ಸಂಘದ ಖಜಾಂಚಿ ಕೃಷ್ಣೇಗೌಡ, ಪಿಎಲ್‌ಡಿ ಬ್ಯಾಂಕಿನ ಮಾಜಿ ನಿರ್ದೇಶಕ ಟಿ.ಎಂ.ವೆಂಕಟೇಶ್, ರೈತ ಮುಖಂಡರಾದ ಯರಹಳ್ಳಿ ಬೊಮ್ಮೇಗೌಡ, ಪಾಂಡು, ಎಂ.ಬಿ.ಲೋಕೇಶ್, ಹಳುವಾಡಿ ನಾಗೇಂದ್ರ, ಯೋಗಾನಂದ, ಮಂಚೇಗೌಡ, ದೇವರಾಜು, ಚಿಕ್ಕಲಿಂಗೇಗೌಡ, ಎಂ.ಪಿ.ವಿನೋದ್ ಸೇರಿದಂತೆ ಇನ್ನಿತರರು ಭಾಗವಹಿಸಿದ್ದರು.

ಮದ್ದೂರಿನ ವಿವಿಧ ಗ್ರಾಮಗಳಲ್ಲಿ ಜನತಾ ದರ್ಶನ

ಸ್ವೀಕೃತ ಅರ್ಜಿಗಳು ತಿಂಗಳಲ್ಲಿ ವಿಲೇವಾರಿ



ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಜನರಿಂದ ಅಹವಾಲು ಸ್ವೀಕರಿಸುತ್ತಿರುವುದು.

ಮದ್ದೂರು, ಮಾ.5– ಜನತಾ ದರ್ಶನದಲ್ಲಿ ಸ್ವೀಕಾರವಾಗುವ ಕುಂದುಕೊರತೆ ಅರ್ಜಿಗಳೊಂದಿಗೆ ಸೂಕ್ತ ದಾಖಲಾತಿ ಲಗತ್ತಿಸಿ ಸಾರ್ವಜನಿಕರು ಸಲ್ಲಿಸಿದರೆ ಒಂದು ತಿಂಗಳೊಳಗಾಗಿ ಸಮಸ್ಯೆ ಪರಿಹರಿಸಲಾಗುವುದು ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದರು.

ತಾಲೂಕಿನ ವಿವಿಧ ಗ್ರಾಮಗಳಲ್ಲಿ ಜನತಾ ದರ್ಶನ ನಡೆಸಿದ ಸಂದರ್ಭದಲ್ಲಿ ಮರಳಿಗ ಗ್ರಾಮದ ಜನತಾ ದರ್ಶನದಲ್ಲಿ ಮಾತನಾಡಿದರು. ಲೋಕಸಭಾ ಚುನಾವಣೆ ನಡೆಯುವ ಹಿನ್ನೆಲೆ ಈ ಬಾರಿ ಸ್ವೀಕಾರವಾಗುವ ಅರ್ಜಿ ವಿಲೇವಾರಿ ತಡವಾಗಬಹುದು. ಚುನಾವಣೆಯ ನಂತರ ಜನತಾ ದರ್ಶನ ನಿರಂತರವಾಗಿ ನಡೆಯಲಿದೆ. ಸಾರ್ವಜನಿಕರ ಸಮಸ್ಯೆಗಳನ್ನು ಶೀಘ್ರವಾಗಿ ಪರಿಹರಿಸಲಾಗುವುದು ಎಂದರು.

ಗ್ರಾಮದ 5047 ಕುಟುಂಬಗಳು ಒಂದಲ್ಲ ಒಂದು ಗ್ಯಾರಂಟಿ ಯೋಜನೆಯ ಲಾಭ ಪಡೆಯುತ್ತಿದ್ದಾರೆ. ಪ್ರತಿ ಕುಟುಂಬಕ್ಕೆ ಪ್ರತಿ ಮಾಹೆ ಗ್ಯಾರಂಟಿ ಯೋಜನೆಗಳ ಮೂಲಕ ಕನಿಷ್ಠ 5 ರಿಂದ 6 ಸಾವಿರ ರೂ ಗಳ ಸೌಲಭ್ಯ ಪಡೆಯುತ್ತಿದ್ದಾರೆ. ಜನಸಾಮಾನ್ಯರನ್ನು ಸಬಲೀಕರಣಗೊಳಿಸಲು ಐದು ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಕ್ಕೆ ಚಾಲನೆಯನ್ನು ನೀಡಲಾಗಿದ್ದು, ಜಿಲ್ಲಾಡಳಿತ ಮತ್ತು ತಾಲೂಕು ಆಡಳಿತದ ಸಹ ಜನರ ಸಮಸ್ಯೆಗಳಿಗೆ ಸ್ಪಂದಿಸುವಂತಹ ಕೆಲಸವನ್ನು ಮಾಡುತ್ತಿದೆ ಎಂದು ತಿಳಿಸಿದರು.

ಸ್ತ್ರೀಯರನ್ನು ಆರ್ಥಿಕವಾಗಿ ಸಬಲರನ್ನಾಗಿಸಲು ಪ್ರತಿ ಕುಟುಂಬದ ಒಬ್ಬ ಮಹಿಳೆಗೆ ತಲಾ 2000 ರೂನಂತೆ ಗೃಹಲಕ್ಷ್ಮಿ ಯೋಜನೆಯಡಿ ನೀಡಲಾಗುತ್ತಿದೆ. ಗ್ರಾಮದಲ್ಲಿ ಒಟ್ಟು 1880 ಮಹಿಳೆಯರು ಗೃಹಲಕ್ಷ್ಮಿ ಯೋಜನೆಯ ಲಾಭ ಪಡೆಯುತ್ತಿದ್ದಾರೆ. ಅನ್ನಭಾಗ್ಯ ಯೋಜನೆಯಡಿ ಒಟ್ಟು 2492 ಬಿಪಿಎಲ್ ಕಾರ್ಡನ್ನು ಹೊಂದಿರುವಂತಹ ಕುಟುಂಬಗಳಿಗೆ ತಲಾ 5 ಕೆಜಿ ಅಕ್ಕಿ ಹಾಗೂ 5 ಕೆ ಜಿ ಅಕ್ಕಿಯನ್ನು ನಗದು ರೂಪದಲ್ಲಿ ಒಟ್ಟು 10 ಕೆಜಿ ಅಕ್ಕಿಯನ್ನು ನೀಡುತ್ತಿದ್ದೇವೆ ಎಂದರು.

ಗೃಹಜ್ಯೋತಿ ಯೋಜನೆಯಲ್ಲಿ ಒಟ್ಟು 1300 ಕುಟುಂಬಗಳಿಗೆ ಉಚಿತ ವಿದ್ಯುತ್ ಅನ್ನು ನೀಡುತ್ತಿದ್ದು, ಎಲ್ಲಾ ಮಹಿಳೆಯರಿಗೆ ಶಕ್ತಿ ಯೋಜನೆ ಅಡಿಯಲ್ಲಿ ಉಚಿತವಾಗಿ ಪ್ರಯಾಣಿಸುವಂತೆ ಮಾಡಿದ್ದೇವೆ. ಜನವರಿ ತಿಂಗಳಿನಿಂದ ಯುವನಿಧಿ ಯೋಜನೆಯನ್ನು ಅನುಷ್ಠಾನಗೊಳಿಸಿದ್ದು, ಒಟ್ಟು ಐದು ಯೋಜನೆಗಳನ್ನು ನಮ್ಮ ಸರ್ಕಾರ ಚಾಲನೆ ನೀಡಿ ಜನರಿಗೆ ಅರ್ಪಣೆ ಮಾಡಿದೆ. ಜಿಲ್ಲೆಯಲ್ಲಿ ಬರ ಉಂಟಾಗಿರುವುದರಿಂದ ಪ್ರತಿ ರೈತರಿಗೆ ರಾಜ್ಯ ಸರ್ಕಾರದಿಂದ ಬೆಳೆ ಪರಿಹಾರವಾಗಿ 2000 ರೂ ಹಣವನ್ನು ನೇರವಾಗಿ ಖಾತೆಗೆ ಜಮೆ ಮಾಡಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಡಿ.ಸಿ.ಸಿ ಬ್ಯಾಂಕ್ ಅಧ್ಯಕ್ಷ ಜೋಗಿಗೌಡ, ಉಪವಿಭಾಗಾಧಿಕಾರಿ ಮಹೇಶ್, ತಹಶೀಲ್ದಾರ್ ಸೋಮಶೇಖರ್ ಸೇರಿದಂತೆ ಇನ್ನಿತರೆ ಗಣ್ಯರು ಉಪಸ್ಥಿತರಿದ್ದರು.

ಮೇಲುಕೋಟೆಯಲ್ಲಿ ಸ್ವಚ್ಛತಾ ಅಭಿಯಾನ

ಮೇಲುಕೋಟೆ, ಮಾ.5– ವೈರಮುಡಿ ಬ್ರಹ್ಮೋತ್ಸವ ಆರಂಭಕ್ಕೂ ಮುನ್ನ ಮೇಲುಕೋಟೆಯಲ್ಲಿ ಮಾ.9ರಂದು ಶಾಸಕ ದರ್ಶನ್ ಪುಟ್ಟಣ್ಣಯ್ಯ ನೇತೃತ್ವದಲ್ಲಿ ಬೃಹತ್ ಸ್ವಚ್ಛತಾ ಅಭಿಯಾನದ ಕೈಂಕರ್ಯ ಹಮ್ಮಿಕೊಳ್ಳಲಾಗಿದೆ.

ಮಾ.21 ರಂದು ಪ್ರಖ್ಯಾತ ವೈರಮುಡಿ ಕಿರೀಟಧಾರಣ ಮಹೋತ್ಸವ ನಡೆದರೆ ಮಾ.16ರಿಂದ ಜಾತ್ರಾ ಮಹೋತ್ಸವ ಆರಂಭವಾಗಲಿದೆ. ಈ ಮಹೋತ್ಸವಕ್ಕೆ ಪೂರ್ವಭಾವಿಯಾಗಿ ಭಕ್ತಾದಿಗಳು, ಕಾಲೇಜು ವಿದ್ಯಾರ್ಥಿಗಳು, ರೈತಸಂಘದ ಕಾರ್ಯಕರ್ತರು, ದೇವಾಲಯದ ಸಿಬ್ಬಂದಿ, ಪೌರ ಕಾರ್ಮಿಕರು ಸೇರಿದಂತೆ 500ಕ್ಕೂ ಹೆಚ್ಚು ಸ್ವಯಂ ಸೇವಕರನ್ನೊಳಗೊಂಡ ಸ್ವಚ್ಛತಾ ಕಾರ್ಯಪಡೆ ಮೇಲುಕೋಟೆಯಲ್ಲಿ ಸಮಗ್ರ ರೀತಿಯ ಸ್ವಚ್ಛತಾ ಕೈಂಕರ್ಯ ನಡೆಸಲಿದೆ.

ಅರ್ಥಪೂರ್ಣವಾಗಿ ವೈರಮುಡಿ ಉತ್ಸವ ಆಚರಣೆಗೆ ಸಿದ್ಧತೆ



ಪೂರ್ವ ಸಿದ್ಧತಾ ಸಭೆಯಲ್ಲಿ ಮಾತನಾಡುತ್ತಿರುವ ಶಾಸಕ ದರ್ಶನ್ ಪುಟ್ಟಣ್ಣಯ್ಯ.

ಮೇಲುಕೋಟೆ, ಮಾ.5– ಜಿಲ್ಲೆಯ ಎಲ್ಲಾ ತಾಲೂಕುಗಳನ್ನು ಬರ ಪೀಡಿತ ಎಂದು ಘೋಷಣೆ ಮಾಡಲಾಗಿದ್ದು, ಕಡಿಮೆ ಅನುದಾನದಲ್ಲಿ ಈ ಬಾರಿ ಮಾ.16ರಿಂದ 28 ರವರೆಗೆ ವೈರಮುಡಿ ಉತ್ಸವದ ವಿವಿಧ ಪೂಜಾ ಕೈಂಕರ್ಯಗಳನ್ನು ವ್ಯವಸ್ಥಿತ ಹಾಗೂ ಅರ್ಥಪೂರ್ಣವಾಗಿ ಆಚರಣೆ ಮಾಡಲು ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಶಾಸಕ ದರ್ಶನ್ ಪುಟ್ಟಣ್ಣಯ್ಯ ತಿಳಿಸಿದರು.

ಮೇಲುಕೋಟೆ ಪ್ರವಾಸಿ ಮಂದಿರದಲ್ಲಿ ಪೂರ್ವ ಸಿದ್ಧತಾ ಸಭೆ ನಡೆಸಿ ಮಾತನಾಡಿದ ಅವರು, ಮಾ.21 ರಂದು ವೈರಮುಡಿ ಉತ್ಸವ ನಡೆಯಲಿದ್ದು, 2 ಲಕ್ಷಕ್ಕೂ ಹೆಚ್ಚು ಭಕ್ತಾದಿಗಳು ಭಾಗವಹಿಸಲಿದ್ದಾರೆ. ಭಕ್ತಾದಿಗಳಿಗೆ ಕಾರ್ಯಕ್ರಮದ ನಿಖರ ಮಾಹಿತಿ ದೊರಕಬೇಕು. ಭಕ್ತಾದಿಗಳಿಗೆ ಕುಡಿಯುವ ನೀರು, ಶೌಚಾಲಯ, ವಾಹನ ನಿಲುಗಡೆ, ಬ್ಯಾರಿಕೇಡ್, ವಿದ್ಯುತ್ ದೀಪಗಳು,ಕಲ್ಯಾಣಿಗಳ ಸ್ವಚ್ಛತೆ, ತುರ್ತು ಆರೋಗ್ಯ ಸೇವೆ, ಪೊಲೀಸ್ ಬಂದೋಬಸ್ತ್ ವ್ಯವಸ್ಥೆಯಾಗಬೇಕು ಎಂದರು.

ಮೇಲುಕೋಟೆಗೆ ಸಂಪರ್ಕ ರಸ್ತೆಗಳ ದುರಸ್ತಿಯಾಗಬೇಕು, ಮಂಡ್ಯ ಹಾಗೂ ವಿವಿಧ ಜಿಲ್ಲೆಗಳಿಂದ ಬರುವ ಭಕ್ತಾದಿಗಳಿಗೆ ಅನುಕೂಲವಾಗುವಂತೆ ಹೆಚ್ಚಿನ ಕೆಎಸ್‌ಆರ್‌ಟಿಸಿ ಬಸ್ ವ್ಯವಸ್ಥೆಯಾಗಬೇಕು. ಬೆಟ್ಟದ ಕೆಳಭಾಗದಿಂದ ದೇವಸ್ಥಾನದವರೆಗೆ ಭಕ್ತಾದಿಗಳಿಗೆ ಉಚಿತ ಬಸ್ ಅಥವಾ ಮಿನಿ ಬಸ್ ವ್ಯವಸ್ಥೆಯಾಗಬೇಕು. ವೈರಮುಡಿಯ ಬ್ರಹ್ಮೋತ್ಸವ ನಡೆಯುವ ದೇವಸ್ಥಾನದ ಸುತ್ತ ವಾಹನ ನಿಲುಗಡೆಯಾಗದಂತೆ ಎಚ್ಚರಿಕೆ ವಹಿಸಿ. ದೇವಸ್ಥಾನದ ಸುತ್ತ ಶಾಶ್ವತ ಕಸದ ತೊಟ್ಟಿಗಳ ವ್ಯವಸ್ಥೆ ಮಾಡಿ ಎಂದು ಹೇಳಿದರು.

ಅಪರ ಜಿಲ್ಲಾಧಿಕಾರಿ ಡಾ.ಹೆಚ್.ಎಲ್.ನಾಗರಾಜು ಮಾತನಾಡಿ, ಪ್ರತಿ ವರ್ಷ ವೈರಮುಡಿ ಉತ್ಸವ ನಡೆಯಲಿದೆ. ಇಲ್ಲಿ ತಾತ್ಕಾಲಿಕ ಶೌಚಾಲಯ, ಸಿ.ಸಿ.ಟಿ.ವಿ ವ್ಯವಸ್ಥೆಯನ್ನು ಶಾಶ್ವತವಾಗಿ ಮಾಡುವುದರಿಂದ ಹಣ ಪ್ರತಿ ಬಾರಿ ವೆಚ್ಚವಾಗುವುದು ತಪ್ಪುತ್ತದೆ ಎಂದರು.

ದಾನಿಗಳು ಕುಡಿಯುವ ನೀರಿನ ವ್ಯವಸ್ಥೆ ಮಾಡಿ: ಮಾ.21 ರಂದು ಶ್ರೀ ಚಲುವರಾಯಸ್ವಾಮಿ ವೈರಮುಡಿ ಆಭರಣಗಳನ್ನು ಬೆಳಗ್ಗೆ ಜಿಲ್ಲಾ ಖಜಾನೆಯಿಂದ ದೇವಸ್ಥಾನದವರೆಗೆ ಹಸ್ತಾಂತರ ಮಾಡಲಾಗುವುದು. ವೈರಮುಡಿ ತೆಗೆದುಕೊಂಡು ಹೋಗುವ ಲಕ್ಷ್ಮಿ ಜನಾರ್ಧನ ದೇವಸ್ಥಾನ, ಕಿರಂಗೂರು, ದರಸಕುಪ್ಪೆ, ಜಕ್ಕನಹಳ್ಳಿ ಕ್ರಾಸ್ ಮುಂತಾದ ಸ್ಥಳಗಳಲ್ಲಿ ಪೂಜೆ ಸಲ್ಲಿಸಲಾಗುವುದು. ಬೇಸಿಗೆಯ ಬಿಸಿಲಿನ ತಾಪ ಹೆಚ್ಚಿದ್ದು, ದಾನಿಗಳು ಪೂಜೆ ಸಲ್ಲಿಸುವ ಸ್ಥಳಗಳಲ್ಲಿ ಕುಡಿಯುವ ನೀರು, ಮಜ್ಜಿಗೆ ಹಾಗೂ ಪ್ರಸಾದದ ವ್ಯವಸ್ಥೆ ಮಾಡುವಂತೆ ಮನವಿ ಮಾಡಿದರು. ಸಭೆಯಲ್ಲಿ ದೇವ ಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ಸಂತೋಷ್, ಡಿವೈಎಸ್‌ಪಿ ಮುರುಳಿ, ಗ್ರಾಪಂ ಅಧ್ಯಕ್ಷ ಸೋಮಶೇಖರ್, ಪಾಂಡವಪುರ ತಹಶೀಲ್ದಾರ್ ಶ್ರೇಯಸ್, ಮುಜರಾಯಿ ತಹಶೀಲ್ದಾರ್ ತಮ್ಮೇಗೌಡ ಇನ್ನಿತರರು ಉಪಸ್ಥಿತರಿದ್ದರು.

ಅಗ್ರಹಾರ ಬಾಚಹಳ್ಳಿಯಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮ



ಪಲ್ಸ್ ಪೋಲಿಯೋ ಕಾರ್ಯಕ್ರಮ ಉದ್ಘಾಟಿಸುತ್ತಿರುವುದು.

ಕೆ.ಆರ್.ಪೇಟೆ, ಮಾ.5– ಮಕ್ಕಳಿಗೆ ಶಾಶ್ವತ ಅಂಗವಿಕಲತೆಯನ್ನು ತರಬಲ್ಲ ಪೋಲಿಯೋ ಕಾಯಿಲೆಯನ್ನು ನಿರ್ಮೂಲನೆ ಮಾಡಲು ಐದು ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಕಡ್ಡಾಯವಾಗಿ ಪಲ್ಸ್ ಪೋಲಿಯೋ ಹನಿ ಹಾಕಿಸಬೇಕು ಎಂದು ಗ್ರಾಮ ಪಂಚಾಯಿತಿ ಸದಸ್ಯ ಆರ್.ಶ್ರೀನಿವಾಸ್ ಪೋಷಕರಲ್ಲಿ ಮನವಿ ಮಾಡಿದರು.

ತಾಲೂಕಿನ ಅಗ್ರಹಾರ ಬಾಚಹಳ್ಳಿ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ತಾಲೂಕು ಆರೋಗ್ಯ ಇಲಾಖೆಯ ವತಿಯಿಂದ ಆಯೋಜಿಸಿದ್ದ ಪಲ್ಸ್ ಪೋಲಿಯೋ ಹನಿ ಹಾಕುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಭಾರತವು ಈಗಾಗಲೇ ಪೋಲಿಯೋ ಮುಕ್ತ ದೇಶವಾಗಿದೆ. ಆದರೆ ನಮ್ಮ ಅಕ್ಕ ಪಕ್ಕದ ಕೆಲವು ದೇಶಗಳಲ್ಲಿ ಇನ್ನೂ ಕೂಡ ಪೋಲಿಯೋ ಭೀತಿಯನ್ನು ಉಂಟು ಮಾಡುತ್ತಿದೆ. ಈ ಹಿನ್ನೆಲೆಯಲ್ಲಿ ನಮ್ಮ ದೇಶದಲ್ಲಿಯೂ ಈ ಭೀತಿ ಆವರಿಸಬಹುದೆಂಬ ಮುಂಜಾಗ್ರತಾ ಕ್ರಮವಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಮಾರ್ಚ್ 3 ಅನ್ನು ಪೋಲಿಯೋ ದಿನವನ್ನಾಗಿ ಆಚರಿಸುತ್ತಿದೆ. ಐದು ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಅಂಗನವಾಡಿ ಕೇಂದ್ರಗಳಲ್ಲಿ ಪೋಲೀಯೋ ಲಸಿಕೆ ಹಾಕುವ ಮೂಲಕ ಮಕ್ಕಳ ಸುರಕ್ಷತೆಗೆ ಒತ್ತು ನೀಡಲಾಗುತ್ತಿದೆ ಎಂದರು.

ಒಂದೂವರೆ ವರ್ಷದ ಹಿಂದೆ ಮಂಡ್ಯದಲ್ಲಿ ಕೇಳಿಬಂದಿದ್ದ 'ಪಾಕಿಸ್ತಾನ್ ಜಿಂದಾಬಾದ್' ಘೋಷಣೆ

ಈಗ ಬಿಜೆಪಿ ಕಾರ್ಯಕರ್ತನ ಬಂಧನ

ವಿಧಾನಸೌಧದಲಿ ಪಾಕ್ ಪರ ಘೋಷಣೆ ಕೂಗಿದವರ ಬಂಧನವಾಗುತ್ತಿದ್ದಂತೆಯೇ ಬಿಜೆಪಿ ಕಾರ್ಯಕರ್ತನ ಮೇಲೂ ಕ್ರಮ



ಪ್ರತಿಭಟನೆ ವೇಳೆ ಪಾಕಿಸ್ತಾನ ಪರ ಘೋಷಣೆ ಕೂಗಿದ (ವೃತ್ತದಲ್ಲಿರುವ) ಬಿಜೆಪಿ ಕಾರ್ಯಕರ್ತ.

ಮಂಡ್ಯ, ಮಾ.5– ಒಂದೂವರೆ ವರ್ಷದ ಹಿಂದೆ ಪಾಕಿಸ್ತಾನ್ ಜಿಂದಾಬಾದ್ ಎಂದು ಘೋಷಣೆ ಕೂಗಿದ್ದ ಬಿಜೆಪಿ ಕಾರ್ಯಕರ್ತನನ್ನು ನಗರದ ಪಶ್ಚಿಮ ಠಾಣೆಯ ಪೊಲೀಸರು ಸೋಮವಾರ ತಡರಾತ್ರಿ ಬಂಧಿಸಿದ್ದಾರೆ.

ತಾಲೂಕಿನ ಡಣಾಯಕನಪುರ ಗ್ರಾಮದ ರವಿ ಅಲಿಯಾಸ್ ಬುಲೆಟ್ ರವಿ ಬಂಧಿತ ಬಿಜೆಪಿ ಕಾರ್ಯಕರ್ತ. ರಾಜ್ಯಸಭೆ ಚುನಾವಣೆಯ ಗೆಲುವಿನ ನಂತರ ಸೈಯದ್ ನಾಸಿರ್‌ಹುಸೇನ್ ಪರ ವಿಧಾನಸಭೆಯಲ್ಲಿ ಘೋಷಣೆ ಕೂಗಿದ್ದವರ ಬಂಧನಕ್ಕೆ ಆಗ್ರಹಿಸಿ, ಪ್ರತಿಪಕ್ಷ ಬಿಜೆಪಿ ಭಾರೀ ಪ್ರತಿಭಟನೆ ನಡೆಸಿತ್ತು. ಎಫ್‌ಎಸ್‌ಎಲ್ ವರದಿಯ ಆಧರಿಸಿ, ನಿನ್ನೆ ಮೂವರನ್ನು ಬಂಧಿಸಲಾಗಿತ್ತು. ಅವರ ಬಂಧನವಾಗುತ್ತಿದ್ದಂತೆ ಇತ್ತ ಒಂದೂವರೆ ವರ್ಷದ ಹಿಂದೆ ಪಾಕ್ ಪರ ಬಿಜೆಪಿ ಕಾರ್ಯಕರ್ತ ರವಿ ಘೋಷಣೆ ಕೂಗಿದ್ದ ಸಂಬಂಧ ಕಾಂಗ್ರೆಸ್ ಕಾರ್ಯಕರ್ತ ಹಾಗೂ ವಕೀಲ ಕನ್ನಂಬಾಡಿ ಕುಮಾರ್ ನಗರ ಪಶ್ಚಿಮ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಈ ದೂರಿನ ಆಧಾರದ ಮೇಲೆ ಎಫ್‌ಐಆರ್ ದಾಖಲಿಸಿಕೊಂಡು ಪೊಲೀಸರು ರವಿ ಎಂಬಾತನನ್ನು ಬಂಧಿಸಿ, ವಿಚಾರಣೆ ನಡೆಸುತ್ತಿದ್ದಾರೆ

ಘಟನೆ ಹಿನ್ನೆಲೆ: ಕಳೆದ 2022ರ ಡಿಸೆಂಬರ್ 18ರಂದು ನಗರದ ಜೆ.ಸಿ.ವೃತ್ತದಲ್ಲಿ ಬಿಜೆಪಿ ಕಾರ್ಯಕರ್ತರು ವಿಶ್ವಸಂಸ್ಥೆಯ ಭದ್ರತಾ ಮಂಡಳಿ ಸಭೆಯ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ್ದ ಪಾಕಿಸ್ತಾನ ವಿದೇಶಾಂಗ ಸಚಿವ ಬಿಲಾವಲ್ ಭುಟ್ಟೋ, ಬಿನ್ ಲಾಡೆನ್ ಸತ್ತಿದ್ದಾನೆ. ಆದರೆ ಗುಜರಾತಿನ ಕಟುಕ ಇನ್ನೂ ಬದುಕಿದ್ದಾನೆ. ಅವನು ಭಾರತದ ಪ್ರಧಾನಿಯಾಗಿದ್ದಾನೆ ಎಂಬ ವಿವಾದಾತ್ಮಕ ಹೇಳಿಕೆ ನೀಡಿದ್ದನು. ಅದನ್ನು ಖಂಡಿಸಿ ಪ್ರತಿಭಟನೆ ನಡೆಸಲಾಗಿತ್ತು.

ಆ ಸಂದರ್ಭದಲ್ಲಿ ಪಾಕಿಸ್ತಾನದ ವಿರುದ್ಧ ಪ್ರತಿಭಟನೆ ಮಾಡಿದ್ದ ಬಿಜೆಪಿ ಕಾರ್ಯಕರ್ತರು 'ಹಿಂದುಸ್ತಾನ್ ಜಿಂದಾಬಾದ್, ಪಾಕಿಸ್ತಾನ್ ಮುರ್ದಾಬಾದ್' ಘೋಷಣೆ ಕೂಗುತ್ತಿದ್ದರು. ಆಗ ಡಣಾಯಕನಪುರ ರವಿ ಎಂಬಾತ 'ಪಾಕಿಸ್ತಾನ್ ಜಿಂದಾಬಾದ್' ಎಂದು ಘೋಷಣೆ ಕೂಗಿದ್ದನು. ತಕ್ಷಣ ಮತ್ತೊಬ್ಬ ಕಾರ್ಯಕರ್ತ ಆತನ ಬಾಯಿ ಮುಚ್ಚಿಸುವ ಕೆಲಸ ಮಾಡಿದ್ದರು. ಆಗ ಬಿಜೆಪಿ ಸರ್ಕಾರ ಇದ್ದುದ್ದರಿಂದ ಯಾವುದೇ ರೀತಿಯ ಕ್ರಮ ಆಗಿರಲಿಲ್ಲ ಎಂದು ಈಗ ಕಾಂಗ್ರೆಸ್ ಕಾರ್ಯಕರ್ತರು ಅಭಿಪ್ರಾಯಪಡುತ್ತಿದ್ದಾರೆ.

ಬೆಂಗಳೂರು ಜೈಲಿನಲ್ಲಿದ್ದುಕೊಂಡೇ ಸಹ ಕೈದಿಗಳನ್ನು ಸೆಳೆದು ಉಗ್ರ ಚಟುವಟಿಕೆಗೆ ಬಳಕೆ


ದೇಶದ 17 ಕಡೆ ಎನ್‌ಐಎ ದಾಳಿ

ಬೆಂಗಳೂರು/ನವದೆಹಲಿ: ಜೈಲಿನಲ್ಲಿ ಸಹ ಕೈದಿಗಳನ್ನು ಸೆಳೆದು ಉಗ್ರ ಚಟುವಟಿಕೆಗೆ ಬಳಕೆ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ತನಿಖಾ ದಳ (NIA) ಕರ್ನಾಟಕ ಸೇರಿದಂತೆ ದೇಶದ 17 ಕಡೆ ದಾಳಿ ನಡೆಸಿದೆ.

ಕಳೆದ ಜುಲೈನಲ್ಲಿ ಆರ್‌ಟಿ ನಗರದ ಮನೆ ಮೇಲೆ ದಾಳಿ ಮಾಡಿದ ಬೆಂಗಳೂರು ಸಿಸಿಬಿ ಪೊಲೀಸರು ಐವರು ಆರೋಪಿಗಳನ್ನು ಬಂಧಿಸಿದ್ದರು. ಈ ವೇಳೆ ಜೀವಂತ ಗ್ರೆನೇಡ್ ಪತ್ತೆಯಾಗಿತ್ತು. ಈ ಪ್ರಕರಣದ ಆರೋಪಿಗಳ ಜೊತೆ ಜೈಲಿನಲ್ಲಿದ್ದ ಉಗ್ರ ಟಿ.ನಾಸೀರ್ ಸಂಪರ್ಕ ಬೆಳೆಸಿದ್ದ ವಿಚಾರ ತನಿಖೆಯಿಂದ ಬಯಲಾಗಿತ್ತು. ನಂತರ ಈ ಪ್ರಕರಣ ಎನ್‌ಐಎಗೆ ವರ್ಗಾವಣೆಯಾಗಿತ್ತು. ಈ ವರ್ಷದ ಜನವರಿ 12 ರಂದು ಎನ್‌ಐಎ ಈ ಪ್ರಕರಣದ ಸಂಬಂಧ 8 ಮಂದಿ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಕೆ ಮಾಡಿತ್ತು. ಚಾರ್ಜ್‌ಶೀಟ್ ಮಾಡಿರುವ ಆರೋಪಿಗಳಲ್ಲಿ ಕೇರಳದ ಕಣ್ಣೂರು ಜಿಲ್ಲೆಯ ಟಿ ನಾಸೀರ್ 2013 ರಿಂದ ಬೆಂಗಳೂರಿನ ಸೆಂಟ್ರಲ್ ಜೈಲಿನಲ್ಲಿ ಜೀವಾವಧಿ ಶಿಕ್ಷೆ ಅನುಭವಿಸುತ್ತಿದ್ದಾನೆ. ಉಳಿದ ಇಬ್ಬರು ಆರೋಪಿಗಳಾದ ಜುನೈದ್ ಅಹ್ಮದ್ ಅಲಿಯಾಸ್ ಜೆಡಿ ಮತ್ತು ಸಲ್ಮಾನ್ ಖಾನ್ ವಿದೇಶಕ್ಕೆ ಪರಾರಿಯಾಗಿದ್ದಾರೆ ಎಂದು ಶಂಕಿಸಲಾಗಿದೆ.

ಸಹ ಕೈದಿಗಳನ್ನು ಸೆಳೆದು ಉಗ್ರ ಕೃತ್ಯಕ್ಕೆ ಪ್ರೇರೇಪಣೆ ನೀಡಿದ ಹಿನ್ನೆಲೆಯಲ್ಲಿ ಇಂದು ಏಳು ರಾಜ್ಯದಲ್ಲಿ ಎನ್‌ಐಎ ದಾಳಿ ನಡೆಸಿದೆ. ಬೆಂಗಳೂರಿನ ಹೆಣ್ಣೂರು ಠಾಣಾ ವ್ಯಾಪ್ತಿಯ ತೂಬಾ ಲೇಔಟ್ ಮತ್ತು ಸರಾಯಿ ಪಾಳ್ಯದಲ್ಲಿ ದಾಳಿ ನಡೆಸಿ ಪರಿಶೀಲನೆ ನಡೆಸುತ್ತಿದೆ.

ವಿಶ್ವವೇ ಒಪ್ಪಿದ ಮೋದಿ ವಿರುದ್ಧ ಮಾತಾಡೋಕೆ ಸಿದ್ದರಾಮಯ್ಯ ಯಾರು?



ಬೆಂಗಳೂರು: ಬರ ಪರಿಹಾರ ಕೊಡಲಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿಯವರ ವಿರುದ್ಧ ಮಾತನಾಡಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಮಾಜಿ ಪ್ರಧಾನಿ ದೇವೇಗೌಡರು ವಾಗ್ದಾಳಿ ನಡೆಸಿದ್ದಾರೆ.

ನಗರದಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಕೇಂದ್ರದಿಂದ ನಮಗೆ ಹಣ ಬಂದಿಲ್ಲ ಎಂದು ಸಿದ್ದರಾಮಯ್ಯ ಹೇಳ್ತಾರೆ. ನಾನು ಸಿಎಂ ಆಗಿದ್ದಾಗ ರಾಜ್ಯದ ರೈತರ ಸಾಲಮನ್ನಾ ಮಾಡ್ತೀನಿ ಎಂದು ಅಂದಿನ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದ್ದೆ. ಅದಕ್ಕೆ ಕೇಂದ್ರ ಸರ್ಕಾರ ಒಪ್ಪಿಗೆ ಕೊಡಲಿಲ್ಲ. ಆಗ ಸಿದ್ದರಾಮಯ್ಯ ಹಣಕಾಸು ಮಂತ್ರಿ ಆಗಿದ್ದರು. ನಿಮಗೆ ಪ್ರಾಮಾಣಿಕತೆ ಇದ್ದರೆ ಅವತ್ತು ಏನು ನಡೀತು ಎಂದು ಹೇಳಿ. ಈಗ ಯಾಕೆ ಮೋದಿ ಬಗ್ಗೆ ಮಾತಾಡ್ತೀರಾ ಎಂದು ಕಿಡಿಕಾರಿದ್ದಾರೆ.

ಬೆಳಗ್ಗೆ ಎದ್ದರೆ ಮೋದಿ ಹಣ ಕೊಟ್ಟಿಲ್ಲ ಎನ್ನುತ್ತಾರೆ. ಯಾಕೆ ಕೊಡಬೇಕು? ಮನಮೋಹನ್ ಸಿಂಗ್ ಏನು ಕೊಟ್ಟಿದ್ದಾರೆ? ವಾಜಪೇಯಿ ಏನು ಕೊಟ್ಟಿದ್ದಾರೆ ಎಂದು ಹೇಳಿ. ಸಿದ್ದರಾಮಯ್ಯನವರೇ ಸತ್ಯ ಹೇಳಿ. ಬೆಳಗ್ಗೆಯಿಂದ ಸಂಜೆಯವರೆಗೂ ಮೋದಿ ಮೋದಿ ಎನ್ನುತ್ತೀರಿ, ಮೋದಿ ಈ ದೇಶದ ಸಮರ್ಥ ನಾಯಕ ಎಂಬುದನ್ನು ಇಲ್ಲ ಎನ್ನಲು ಇವರು ಯಾರು ಎಂದು ಪ್ರಶ್ನಿಸಿದ್ದಾರೆ. Who is he? ಮೋದಿಯನ್ನು ಇಡೀ ವಿಶ್ವ ಒಪ್ಪಿದೆ. ಮಾತಾಡೋಕು ಇತಿಮಿತಿ ಇರಬೇಕು ಎಂದು ಸಿದ್ದರಾಮಯ್ಯ ವಿರುದ್ಧ ಗೌಡರು ಗುಡುಗಿದ್ದಾರೆ.

ಚುನಾವಣೆ ಹೊಸ್ತಿಲಲ್ಲಿ ಡಿಕೆಶಿಗೆ ಬಿಗ್ ರಿಲೀಫ್

ಇಡಿ ದಾಖಲಿಸಿದ್ದ ಪ್ರಕರಣ ರದ್ದುಗೊಳಿಸಿದ ಸುಪ್ರೀಂಕೋರ್ಟ್!





ನವದೆಹಲಿ: ಉಪಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ನಾಯಕ ಡಿ.ಕೆ. ಶಿವಕುಮಾರ್ ವಿರುದ್ಧ ಜಾರಿ ನಿರ್ದೇಶನಾಲಯ (ಇ.ಡಿ) 120 ಬಿ ಅಡಿ ದಾಖಲಿಸಿದ್ದ ಪ್ರಕರಣವನ್ನು ಸುಪ್ರೀಂ ಕೋರ್ಟ್ ಮಂಗಳವಾರ ರದ್ದುಗೊಳಿಸಿದೆ.

ಇದರಿಂದಾಗಿ ಡಿಸಿಎಂ ಡಿಕೆ ಶಿವಕುಮಾರ್ ಅವರಿಗೆ ಬಿಗ್ ರಿಲೀಫ್ ಸಿಕ್ಕಂತಾಗಿದೆ. ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ಪೀಠದಿಂದ ಈ ತೀರ್ಪು ಹೊರಬಿದ್ದಿದೆ. ಬೆಂಗಳೂರು ಸೇರಿದಂತೆ ಇತರೆಡೆ ಡಿ.ಕೆ.ಶಿವಕುಮಾರ್ ಅವರಿಗೆ ಸೇರಿದ ಮನೆಗಳ ಮೇಲೆ 2017ರ ಆಗಸ್ಟ್ 2ರಂದು ಆದಾಯ ತೆರಿಗೆ ಇಲಾಖೆ ದಾಳಿ ನಡೆಸಿತ್ತು. ಈ ವೇಳೆ ಅವರ ನಿಕಟವರ್ತಿಗಳ ಮನೆಯಲ್ಲಿ ದೊರೆತಿದ್ದ ಹಣವನ್ನು, ಶಿವಕುಮಾರ್ ಬೇನಾಮಿಯಾಗಿ ಇರಿಸಿದ್ದಾರೆ ಎಂದು ಆರೋಪಿಸಿ ಸಿಬಿಐ 2020ರ ಅ. 3ರಂದು ಎಫ್ಐಆರ್ ದಾಖಲಿಸಿತ್ತು.

120 'ಬಿ' ಅಡಿಯಲ್ಲಿ ಇಡಿ ದಾಖಲಿಸಿರುವ ಈ ಕ್ರಿಮಿನಲ್ ಪ್ರಕರಣದಿಂದ ತಮ್ಮನ್ನು ದೋಷಮುಕ್ತಗೊಳಿಸಬೇಕು ಎಂದು ಕೋರಿ ಡಿ.ಕೆ. ಶಿವಕುಮಾರ್ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಹೈಕೋರ್ಟ್‌ನಲ್ಲಿ ಜಯ ಸಿಗದ ಹಿನ್ನೆಲೆಯಲ್ಲಿ ಡಿಕೆಶಿವಕುಮಾರ್ ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಿದ್ದರು.

ದೇಶದ ಮೊದಲ ನೀರೊಳಗಿನ ಮೆಟ್ರೋ ಸೇವೆಗೆ ಪ್ರಧಾನಿ ಮೋದಿ ಇಂದು ಚಾಲನೆ





ಕೋಲ್ಕತ್ತಾ: ಭಾರತದ ಮೊದಲ ನದಿಯೊಳಗಿನ ಮೆಟ್ರೋ ಸೇವೆಯನ್ನು ಪ್ರಧಾನಿ ಮೋದಿ ನಾಳೆ(ಮಾ.6) ಉದ್ಘಾಟಿಸಲಿದ್ದಾರೆ. ಹೂಗ್ಲಿ ನದಿಯ ಅಡಿಯಲ್ಲಿ ನಿರ್ಮಿಸಲಾದ ಸುರಂಗವು ಪೂರ್ವ–ಪಶ್ಚಿಮ ಕಾರಿಡಾರ್‌ನ ಹೌರಾ ಮೈದಾನ್ –ಎಸ್ ಪ್ಲೇನೇಡ್ ಸಂಪರ್ಕಿಸಲಿದೆ. ಹೌರಾ ಮೈದಾನ್–ಎಸ್ಪ್ಲೇನೇಡ್ ಮೆಟ್ರೋ ಮಾರ್ಗ ಭಾರತದ ಯಾವುದೇ ಪ್ರಬಲ ನದಿಯ ಅಡಿಯಲ್ಲಿ ಮೊದಲ ಸಾರಿಗೆ ಸುರಂಗ ಹೊಂದಿದೆ. ಆದರೆ, ಹೌರಾ ಮೆಟ್ರೋ ನಿಲ್ದಾಣ ದೇಶದಲ್ಲಿಯೇ ಅತ್ಯಂತ ಆಳವಾದದ್ದು ಎನ್ನಲಾಗಿದೆ. ಹೂಗ್ಲಿ ನದಿಯು ಕೋಲ್ಕತ್ತಾ ಮತ್ತು ಹೌರಾ ಅವಳಿ ನಗರಗಳನ್ನು ಕ್ರಮವಾಗಿ ಪೂರ್ವ ಮತ್ತು ಪಶ್ಚಿಮ ದಂಡೆಗಳಲ್ಲಿ ಪ್ರತ್ಯೇಕಿಸುತ್ತದೆ. ಈ ಸಾಧನೆಯು ಎಂಜಿನಿಯರಿಂಗ್ ಜಾಣ್ಮೆಗೆ ಸಾಕ್ಷಿಯಾಗಿದೆ. ಏಪ್ರಿಲ್ 9, 2003ರಲ್ಲಿ ಹೂಗ್ಲಿ ನದಿಯ ನೀರೊಳಗಿನ ಸುರಂಗದ ಅಡಿಯಲ್ಲಿ ಮೆಟ್ರೋ ರೈಲುಗಳ ಪ್ರಾಯೋಗಿಕ ಸಂಚಾರ ನಡೆಸಿತ್ತು. ಉದ್ಘಾಟನೆ ನಾಳೆ ನಡೆದರೂ ಪ್ರಯಾಣಿಕರ ಸೇವೆಗಳು ಒಂದಷ್ಟು ದಿನಗಳ ನಂತರ ಪ್ರಾರಂಭವಾಗುತ್ತದೆ ಮೆಟ್ರೋ ರೈಲ್ವೇ ಸಿಪಿಆರ್‌ಒ ಕೌಶಿಕ್ ಮಿತ್ರಾ ತಿಳಿಸಿದ್ದಾರೆ.

ಪಾಕ್ ಪರ ಘೋಷಣೆ ಕೂಗಿದವರ ಬಂಧನ; ಪೊಲೀಸರಿಗೆ ಸಂಪೂರ್ಣ ಸ್ವಾತಂತ್ರ್ಯ: ಡಿಕೆಶಿ

ಬೆಂಗಳೂರು: ಆಡಳಿತ ಶಕ್ತಿ ಕೇಂದ್ರ ವಿಧಾನಸೌಧದಲ್ಲಿ ಪಾಕಿಸ್ತಾನ ಪರ ಘೋಷಣೆ ಕೂಗಿದ ರಾಜ್ಯಸಭಾ ಸದಸ್ಯ ನಾಸೀರ್ ಹುಸೇನ್ ಅವರ ಮೂವರು ಬೆಂಬಲಿಗರ ಬಂಧನ ವಿಚಾರದಲ್ಲಿ ಪೊಲೀಸರಿಗೆ ಸಂಪೂರ್ಣ ಸ್ವಾತಂತ್ರ್ಯ ನೀಡಿದ್ದೇವೆ. ಇದರಲ್ಲಿ ನಾವು ಮಧ್ಯ ಪ್ರವೇಶಿಸಲ್ಲ ಎಂದು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ತಿಳಿಸಿದ್ದಾರೆ. ಸದಾಶಿವ ನಗರದ ನಿವಾಸದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಡಿಕೆಶಿ, ಎಫ್ಎಸ್ಎಲ್ ವರದಿಯಲ್ಲಿ ಪಾಕ್ ಪರ ಘೋಷಣೆ ಕೂಗಿರುವುದು ದೃಢಪಟ್ಟ ನಂತರ ಪೊಲೀಸರು ಮೂವರನ್ನು ಬಂಧಿಸಿ, ನ್ಯಾಯಾಲಯಕ್ಕೆ ಹಾಜರುಪಡಿಸಿದ ನಂತರ ಧ್ವನಿ ಸ್ಯಾಂಪಲ್ ಮತ್ತು ವಿಚಾರಣೆಗಾಗಿ ವಶಕ್ಕೆ ಪಡೆದಿದ್ದಾರೆ. ಇದೊಂದು ಗಂಭೀರ ವಿವಾದವಾಗಿದ್ದು, ರಾಜ್ಯದ ವರ್ಚಸ್ಸನ್ನು ಹಾಳು ಮಾಡಲು ನಾವು ಬಯಸುವುದಿಲ್ಲ. ಪೊಲೀಸರು ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಿದ್ದಾರೆ ಎಂದರು.

ಬರ ಪರಿಸ್ಥಿತಿ ಹಿನ್ನೆಲೆ

ಜಿಪಂನಲ್ಲಿ ಕಂಟ್ರೋಲ್ ರೂಮ್ ತೆರೆಯಲು ಆದೇಶ



ಮೈಸೂರು, ಮಾ.5(ಬಿಎಲ್‌ಯು)– ರಾಜ್ಯದ ಬರ ಪರಿಸ್ಥಿತಿಯನ್ನು ಸಮರ್ಪಕವಾಗಿ ನಿರ್ವಹಿಸಲು ಪ್ರತಿ ಜಿಲ್ಲಾ ಪಂಚಾಯಿತಿಗಳಲ್ಲಿ 24/7 ಕಂಟ್ರೋಲ್ ರೂಮ್ ತೆರೆಯಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ಯ ಸಚಿವ ಪ್ರಿಯಾಂಕ್ ಖರ್ಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ ಆದೇಶ ನೀಡಿದ್ದಾರೆ.

ಇದಲ್ಲದೆ ಎಲ್ಲಾ ತಾಲೂಕು ಮಟ್ಟದಲ್ಲೂ ಕಾರ್ಯ ನಿರ್ವಾಹಕ ಅಧಿಕಾರಿಗಳ ಮೂಲಕ ಕ್ಷಿಪ್ರ ಕಾರ್ಯಪಡೆ ರಚಿಸಿ, ಬರ ಪರಿಸ್ಥಿತಿಯನ್ನು ಸಮರ್ಪಕವಾಗಿ ನಿರ್ವಹಣೆ ಮಾಡುವಂತೆ ಸೂಚನೆ ನೀಡಿದ್ದಾರೆ. ಮುಂದಿನ ಮೂರು ತಿಂಗಳ ಕಾಲ 2ನೇ ಮತ್ತು 4ನೇ ಸೋಮವಾರ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಜೊತೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಕುರಿತು ವಸ್ತುಸ್ಥಿತಿ ಬಗ್ಗೆ ಸಭೆ ನಡೆಸಬೇಕು ಎಂದು ಹೇಳಿದ್ದಾರೆ. ಈ ಸಂಬಂಧ ಪ್ರತಿ 2ನೇ ಮತ್ತು 4ನೇ ಮಂಗಳವಾರ ಕಡ್ಡಾಯವಾಗಿ ಪತ್ರಿಕಾಗೋಷ್ಠಿ ಕರೆದು ಜಿಲ್ಲೆಯ ಬರ ಪರಿಸ್ಥಿತಿ ಮತ್ತು ಕುಡಿಯುವ ನೀರಿನ ಸಮಸ್ಯೆ ನಿವಾರಿಸಲು ಕೈಗೊಂಡ ಕ್ರಮದ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡುವಂತೆಯೂ ಪ್ರಿಯಾಂಕ್ ಖರ್ಗೆ ಸೂಚನೆ ನೀಡಿದ್ದಾರೆ.

ನಾಸೀರ್ ಹುಸೇನ್‌ಗೆ ಪ್ರಮಾಣ ವಚನ ಬೋಧಿಸದಂತೆ ಉಪರಾಷ್ಟ್ರಪತಿಗೆ ಬಿಜೆಪಿ ಪತ್ರ



ಬೆಳಗಾವಿ: ಪಾಕಿಸ್ತಾನ ಪರ ಘೋಷಣೆ ಕೂಗಿದ ಪ್ರಕರಣದಲ್ಲಿ ನಾಸೀರ್ ಹುಸೇನ್ ಅವರನ್ನು ನಾಲ್ಕನೇ ಅಪರಾಧಿಯನ್ನಾಗಿ ಮಾಡಬೇಕು. ತನಿಖೆ ಪೂರ್ಣಗೊಳ್ಳುವವರೆಗೂ ನಾಸೀರ್ ಹುಸೇನ್ ಅವರಿಗೆ ಪ್ರಮಾಣ ವಚನ ಬೋಧನೆ ಮಾಡದಂತೆ ಉಪರಾಷ್ಟ್ರಪತಿಗೆ ಬಿಜೆಪಿ ಪತ್ರ ಬರೆಯಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು.

ತಾಲೂಕಿನ ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಮಾಧ್ಯಮಗಳಿಗೆ ಮಾತನಾಡಿದ ಅವರು, ದೇಶದ್ರೋಹಿಗಳಿಗೆ ಸೂತ್ರಧಾರಿಗಳು ಯಾರು, ಪಾತ್ರಧಾರಿಗಳು ಯಾರು ಎಂದು ಸಮಗ್ರ ತನಿಖೆ ನಡೆಸಿ ಸ್ಪಷ್ಟಪಡಿಸಬೇಕು. ನಾಸೀರ್ ಹುಸೇನ್ ಅವರನ್ನೂ ತನಿಖೆಗೊಳಪಡಿಸಬೇಕು. ಪ್ರಕರಣದಲ್ಲಿ ನಿರ್ದೋಶಿಯಾಗಿ ಹೊರಬರುವವರೆಗೆ ಪ್ರಮಾಣವಚನ ಸ್ವೀಕಾರ ಮಾಡಲು ಅವಕಾಶ ಕೊಡಬಾರದು ಎಂದು ಒತ್ತಾಯಿಸಿದರು. ಪೊಲೀಸರ ಮೇಲೆ ಸರಕಾರ ಒತ್ತಡ ಹಾಕುತ್ತಿದೆ. ಎಫ್ಎಸ್ಎಲ್ ವರದಿಯನ್ನು ಯಾಕೆ ಬಹಿರಂಗಗೊಳಿಸುತ್ತಿಲ್ಲ. ಪಾಕಿಸ್ತಾನ ಜಿಂದಾಬಾದ್ ಎಂದು ಯಾರೇ ಕೂಗಿದರೂ ಅವರು ದ್ರೋಹಿಗಳೇ.ಅಲ್ಲಿ ಜಾತಿ ಧರ್ಮ ಹಿಂದೂ ಮುಸ್ಲಿಂ ಅಂತ ಯಾವುದೂ ಬರಲ್ಲ ಎಂದು ವಿಜಯೇಂದ್ರ ಹೇಳಿದರು.

ಇನ್ಮುಂದೆ ಮಾಲ್ಡೀವ್ಸ್‌ನಲ್ಲಿ ಭಾರತೀಯ ಸೇನೆಯೇ ಇರಲ್ಲ

ಚೀನಾದೊಂದಿಗಿನ ಸೇನಾ ಒಪ್ಪಂದದ ಬಳಿಕ ಅಧ್ಯಕ್ಷ ಮುಯಿಝು ಘೋಷಣೆ



ಮಾಲೆ: ಭಾರತ ವಿರೋಧಿ ಹೇಳಿಕೆಯನ್ನು ತೀವ್ರಗೊಳಿಸಿರುವ ಮಾಲ್ಡೀವ್ಸ್ ಅಧ್ಯಕ್ಷ ಮೊಹಮ್ಮದ್ ಮುಯಿಝು ಮೇ 10ರ ನಂತರ ತಮ್ಮ ದೇಶದಲ್ಲಿ ಒಬ್ಬ ಭಾರತೀಯ ಸೇನಾ ಸಿಬ್ಬಂದಿ ಆಗಲಿ ಅಥವಾ ಸಾಮಾನ್ಯ ಉಡುಪಿನಲ್ಲೂ ಇರುವುದಿಲ್ಲ ಎಂದು ಹೇಳಿದ್ದಾರೆ. ಮಾರ್ಚ್ 10ರೊಳಗೆ ಮಿಲಿಟರಿ ಸಿಬ್ಬಂದಿಯ ಮೊದಲ ಬ್ಯಾಚ್ ಮಾಲ್ಡೀವ್ಸ್‌ನಿಂದ ಹೊರಡುವ ಮೊದಲು ಭಾರತೀಯ ತಾಂತ್ರಿಕ ಸಿಬ್ಬಂದಿಯ ಮೊದಲ ತಂಡವು ದ್ವೀಪ ರಾಷ್ಟ್ರಕ್ಕೆ ಆಗಮಿಸಿದ ಸಮಯದಲ್ಲಿ ಮುಯಿಝು ಹೇಳಿಕೆ ನೀಡಿದ್ದಾರೆ.

ಸಿಎಂ ಸಿದ್ದರಾಮಯ್ಯ ಓದಿದ ಸಿದ್ದರಾಮನಹುಂಡಿ, ಕುಪ್ಪೇಗಾಲ ಶಾಲೆಗೆ 10 ಲಕ್ಷ ರೂ. ದೇಣಿಗೆ

- ಸ್ವತಃ ಈ ಶಾಲೆಗಳ ಮಕ್ಕಳೊಂದಿಗೆ ಸಂವಾದ; ಶಾಲಾ ದಿನಗಳ ಮೆಲುಕು
- ಸಂವಿಧಾನವನ್ನು ಸಂಪೂರ್ಣ ಅರ್ಥೈಸಿಕೊಂಡು, ಅಳವಡಿಸಿಕೊಳ್ಳಲು ಸೂಚನೆ



ಬೆಂಗಳೂರಿನ ಗೃಹ ಕಚೇರಿ ಕೃಷ್ಣಾದಲ್ಲಿ ಮೈಸೂರು ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ವತಿಯಿಂದ ನಮ್ಮ ಶಾಲೆ, ನಮ್ಮ ಜವಾಬ್ದಾರಿ ಹಾಗೂ ಬಲವರ್ಧನೆ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದರು. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಮಧು ಬಂಗಾರಪ್ಪ, ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್, ಕಂದಾಯ ಸಚಿವ ಕೃಷ್ಣಭೈರೇಗೌಡ, ಉನ್ನತ ಶಿಕ್ಷಣ ಸಚಿವ ಸುಧಾಕರ್, ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್, ಅಭಿವೃದ್ಧಿ ಆಯುಕ್ತರು ಹಾಗೂ ಅಪರ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಬೆಂಗಳೂರು, ಮಾ.5(ಕೆಎಂಶಿ)– ಮುಖ್ಯಮಂತ್ರಿ ಸಿದ್ದರಾಮಯ್ಯ ತಾವು ಕಲಿತ ಮೈಸೂರಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಕುಪ್ಪೇಗಾಲ ಹಾಗೂ ಕೆಪಿಎಸ್ ಸಿದ್ದರಾಮನಹುಂಡಿ ಶಾಲೆಗಳ ಅಭಿವೃದ್ಧಿಗೆ 10 ಲಕ್ಷ ರೂ. ದೇಣಿಗೆ ನೀಡಿದ್ದಾರೆ.

ಗೃಹ ಕಚೇರಿ ಕೃಷ್ಣಾದಲ್ಲಿ ಮೈಸೂರು ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ವತಿಯಿಂದ ನಮ್ಮ ಶಾಲೆ, ನಮ್ಮ ಜವಾಬ್ದಾರಿ ಹಾಗೂ ಬಲವರ್ಧನೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಮುಖ್ಯಮಂತ್ರಿ ಅವರು, ತಾವು ಶಿಕ್ಷಣ ಪಡೆದ ಶಾಲೆಗಳ ಅಭಿವೃದ್ಧಿಗೆ ಮೊದಲು ದೇಣಿಗೆ ನೀಡಿ ಇತರರಿಗೆ ಮಾದರಿಯಾಗಿದ್ದಾರೆ.

ಮುಖ್ಯಮಂತ್ರಿಗಳು ತಾವು ಕಲಿತ ಸಿದ್ದರಾಮನಹುಂಡಿ ಹಾಗೂ ಕುಪ್ಪೆಗಾಲ ಸರ್ಕಾರಿ ಶಾಲೆಯ ಮಕ್ಕಳೊಡನೆ ವಿಡಿಯೊ ಸಂವಾದ ನಡೆಸಿ, ಸರ್ಕಾರಿ ಶಾಲೆಗಳಲ್ಲಿ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರೆಯಬೇಕು, ವೈಚಾರಿಕತೆ, ವೈಜ್ಞಾನಿಕತೆ ಬೆಳೆಸಿಕೊಳ್ಳಬೇಕು, ಜ್ಞಾನದ ವಿಕಾಸವಾಗಬೇಕು ಎಂದು ತಿಳಿಸಿದರು.

ಸಂವಿಧಾನ ಏನು ಹೇಳುತ್ತದೆ ಹೇಳಿ ನೋಡೋಣ ಎಂದು ಮಕ್ಕಳನ್ನು ಕೇಳಿದಾಗ, ಮಕ್ಕಳು ಸಂವಿಧಾನದ ಪೂರ್ಣ ಪೀಠಿಕೆಯನ್ನು ಹೇಳಿದರು. ಕೇವಲ ಕಂಠಪಾಠ ಮಾಡಿದರೆ ಸಾಲದು, ಅದರ ತಿರುಳನ್ನು ಅರಿತು ಅದರಂತೆ ನಡೆಯಬೇಕು ಎಂದರು.

ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ ಸಂವಿಧಾನದ ತಿರುಳು, ಸಮಾನತೆ, ಸಮ ಸಮಾಜ ನಿರ್ಮಾಣವಾಗಬೇಕು, ಬುದ್ಧ, ಬಸವ, ಅಂಬೇಡ್ಕರ್ ಅವರು ಇದನ್ನೇ ಹೇಳಿಕೊಂಡು ಬಂದಿದ್ದರಾದರೂ ಇದು ಪೂರ್ಣವಾಗಿಲ್ಲ, ಇದೆಲ್ಲ ಓದಿ ಅರ್ಥ ಮಾಡಿಕೊಂಡು ಮಕ್ಕಳು ಮನುಷ್ಯತ್ವ ಬೆಳೆಸಿಕೊಳ್ಳಬೇಕು ಎಂದು ಮುಖ್ಯಮಂತ್ರಿ ಮಕ್ಕಳಿಗೆ ಕಿವಿಮಾತು ಹೇಳಿದರು.

ಸರ್ಕಾರಿ ಶಾಲೆಗಳಲ್ಲಿ ಕೆಲವು ವಿನೂತನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ, ಶಾಲೆಯ ಅಭಿವೃದ್ಧಿ ದೃಷಿಯಿಂದ ಸರ್ಕಾರ ಉಚಿತ ಶಿಕ್ಷಣ ನೀಡುತ್ತಿದೆ, ಸಂವಿಧಾನ ಜಾರಿಗೆ ಬಂದ ನಂತರ ಉಚಿತ ಶಿಕ್ಷಣವನ್ನು ಮೂಲಭೂತ ಹಕ್ಕನ್ನಾಗಿ ಮಾಡಿದೆ, ಎಲ್ಲರಿಗೂ ಶಿಕ್ಷಣ ಕಡ್ಡಾಯವಾಗಿದೆ ಎಂದರು.

ಶಾಲೆಗಳಲ್ಲಿ ಮೊಟ್ಟೆ, ಹಾಲು ಕೊಡ್ತಾ ಇದ್ದಾರೆಯೇ, ವಾರದಲ್ಲಿ ಎಷ್ಟು ದಿನ ಕೊಡುತ್ತಿದ್ದಾರೆ ಎಂದು ಪ್ರಶ್ನಿಸಿದಾಗ, "ಕೊಡುತ್ತಿದ್ದಾರೆ. ವಾರದಲ್ಲಿ ಮೂರು ದಿನ ನೀಡಲಾಗುತ್ತಿದೆ" ಎಂದು ಮಕ್ಕಳು ಉತ್ತರಿಸಿದರು.

"ನಾನು ಓದುವಾಗ ಸಂವಿಧಾನ ಜಾರಿಗೆ ಬಂದಿತ್ತು, ನಾನು ಹುಟ್ಟಿದ್ದು ಸ್ವಾತಂತ್ರ್ಯ ಪೂರ್ವದಲ್ಲಿ, ನಂಜೇಗೌಡ ಎಂಬುವರು ನನಗೆ ಅಕ್ಷರಾಭ್ಯಾಸ ಮಾಡಿಸಿದರು, ಕನ್ನಡ ಓದು, ಬರೆಯುವುದು, ಲೆಕ್ಕ ಮಾಡುವುದನ್ನು ಹೇಳಿಕೊಟ್ಟಿದ್ದರು. ಅವರು ಶಾಲೆ ಬಿಟ್ಟ ನಂತರ ಎಮ್ಮೆ ಮೇಯಿಸುತ್ತಿದ್ದ ನನ್ನನ್ನು ರಾಜಪ್ಪ ಎಂಬ ಮೇಷ್ಟ್ರು ಮನೆಗೆ ಬಂದು ಕರೆದುಕೊಂಡು ಹೋಗಿ ನೇರವಾಗಿ 5ನೇ ತರಗತಿಗೆ ಸೇರಿಸಿದ್ದರು ಎಂದು ಮುಖ್ಯಮಂತ್ರಿ ಸ್ಮರಿಸಿಕೊಂಡರು.

8ನೇ ತರಗತಿ ಓದಲು ಕುಪ್ಪೆಗಾಲಕ್ಕೆ ಹೋಗುತ್ತಿದ್ದೆ. ಪ್ರೌಢಶಾಲೆಗೆ ವಿದ್ಯಾವರ್ಧಕ ಶಾಲೆಗೆ ಸೇರಿದ್ದೆ, ಶಾಲೆಯ ದಾಖಲೆಗಳಲ್ಲಿ ನನ್ನ ಹುಟ್ಟಿದ ದಿನಾಂಕ 3–8–1947 ಎಂದು ನಮೂದಾಗಿದೆ, ಈಶ್ವರಾಚಾರ್ ಹೇಳಿಕೊಟ್ಟಿದ್ದ ಕನ್ನಡ ವ್ಯಾಕರಣವನ್ನು ನಾನು ಈಗಲೂ ಮರೆತಿಲ್ಲ ಎಂದು ಸಿದ್ದರಾಮಯ್ಯ ಹೇಳಿದರು.

ಈಗ ಸರ್ಕಾರ ಹಾಲು, ಮೊಟ್ಟೆ, ಚಿಕ್ಕಿ, ಬಿಸಿಯೂಟ, ಸಮವಸ್ತ್ರ ನೀಡುತ್ತಿದೆ, ನಿಮಗಿರುವ ಸೌಲಭ್ಯ ನಮಗಿರಲಿಲ್ಲ. ನಮ್ಮ ಕಾಲದಲ್ಲಿ ಶಿಕ್ಷಕರಿಂದ ಏಟನ್ನೂ ತಿನ್ನುತ್ತಿದ್ದೆವು. ಅಂದಿನ ಹೆಣ್ಣು ಮಕ್ಕಳು ಹೆಚ್ಚಾಗಿ ಓದುತ್ತಿರಲಿಲ್ಲ ಎಂದು ಮುಖ್ಯಮಂತ್ರಿ ಅಂದಿನ ತಮ್ಮ ಶಾಲಾ ದಿನಗಳನ್ನು ನೆನೆಸಿಕೊಂಡರು.

ಇದೇ ಸಂದರ್ಭದಲ್ಲಿ ಪ್ರಾಥಮಿಕ ಶಿಕ್ಷಣ ಸಚಿವ ಮಧು ಬಂಗಾರಪ್ಪ ಮಾತನಾಡಿ, ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ದೊಡ್ಡ ಗುರಿಯನ್ನು ಹೊಂದಿದ್ದೇವೆ. 44 ಸಾವಿರ ಕೋಟಿ ರೂ.ಗಳನ್ನು ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಮೀಸಲಿಡಲಾಗಿದೆ. ಸಿಎಸ್‌ಆರ್‌ನಿಂದಲೂ ಇತರೆ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗಿದೆ ಎಂದರು.

'ಪಾಕಿಸ್ತಾನ್ ಜಿಂದಾಬಾದ್' ಸರ್ಕಾರಕ್ಕೇನು ಮುಜುಗರವಿಲ್ಲ

- ಗೃಹ ಸಚಿವ ಡಾ.ಪರಮೇಶ್ವರ್ ಪ್ರತಿಕ್ರಿಯೆ
- ಎಫ್‌ಎಸ್‌ಎಲ್ ವರದಿ ಆಧರಿಸಿ ಮೂವರ ಬಂಧಿಸಿದ್ದೇವೆ



ಬೆಂಗಳೂರು, ಮಾ.5(ಕೆಎಂಶಿ)–ರಾಜ್ಯಸಭಾ ಚುನಾವಣಾ ಫಲಿತಾಂಶದ ನಂತರ ವಿಜಯೋತ್ಸವ ಸಂದರ್ಭದಲ್ಲಿ ಪಾಕಿಸ್ತಾನ್ ಜಿಂದಾಬಾದ್ ಎಂದಿರುವುದು ಸರ್ಕಾರಕ್ಕೆ ಮುಜುಗರ ತಂದಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಇಂದಿಲ್ಲಿ ಸ್ಪಷ್ಟಪಡಿಸಿದ್ದಾರೆ.

ಸರ್ಕಾರ ಈ ರೀತಿ ಕೂಗಲು ಯಾರನ್ನೂ ಪ್ರಚೋದಿಸಿಲ್ಲ, ಅವನ್ಯಾರೋ ಬಂದಿದ್ದಾನೆ, ಕೂಗಿದ್ದಾನೆ, ಅವನನ್ನು ಬಂಧಿಸಿದ್ದೇವೆ. ಇದುವರೆಗೂ ಆತ ಕೂಗಿರುವುದರ ಬಗ್ಗೆ ಖಚಿತಪಡಿಸಿಕೊಳ್ಳಲು ಕಾಯುತ್ತಿದ್ದೆವು, ಮಾಹಿತಿ ಖಚಿತವಾಗುತ್ತಿದ್ದಂತೆ ಆರೋಪಿಗಳನ್ನು ಬಂಧಿಸಿದ್ದೇವೆ ಎಂದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರಕ್ಕೆ ಮುಜುಗರ ಆಗುವಂತದ್ದು ಏನೂ ಮಾಡಿಲ್ಲ. ತಪ್ಪಿತಸ್ಥರ ವಿರುದ್ಧ ಮುಲಾಜಿಲ್ಲದೆ ಕ್ರಮ ತೆಗೆದುಕೊಂಡು ಒಳ್ಳೆ ಕೆಲಸ ಮಾಡಿದೆ. ಇದಕ್ಕೆ ಸರ್ಕಾರವನ್ನು ಪ್ರಶಂಸಿಸಬೇಕು. ವಿಧಾನಸೌಧದ ಭದ್ರತಾ ವೈಫಲ್ಯ ಕಂಡುಬಂದರೆ ಇಲಾಖಾ ಅಧಿಕಾರಿಗಳು ಖಂಡಿತವಾಗಿಯೂ ಕ್ರಮ ತೆಗೆದುಕೊಳ್ಳುತ್ತಾರೆ, ಯಾರನ್ನೋ ಕೇಳಿ ಕೆಲಸ ಮಾಡುವ ಅಗತ್ಯತೆ ಇಲ್ಲ ಎಂದರು.

ಪಾಕಿಸ್ತಾನ ಪರ ಘೋಷಣೆ ಕೂಗಿದ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಇಲಾಖೆ ಅಧಿಕೃತ ಎಫ್ಎಸ್ಎಲ್ ವರದಿಯನ್ನು ಆಧಾರವಾಗಿಟ್ಟುಕೊಂಡು ಆರೋಪಿಗಳನ್ನು ಬಂಧಿಸಲಾಗಿದೆ. ಎಫ್ಎಸ್ಎಲ್ ವರದಿ ಬಂದ ನಂತರ ತಪ್ಪಿತಸ್ಥರ ವಿರುದ್ಧ ಮುಲಾಜಿಲ್ಲದೆ ಕ್ರಮ ಕೈಗೊಳ್ಳುವುದಾಗಿ ಸದನದಲ್ಲಿ ಉತ್ತರಿಸಿದ್ದೆನು. ವರದಿಯಲ್ಲಿ ಖಚಿತವಾದ ಹಿನ್ನೆಲೆಯಲ್ಲಿ ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಖಾಸಗಿಯವರೂ ಎಫ್ಎಸ್ಎಲ್ ವರದಿ ಬಿಡುಗಡೆ ಮಾಡಿದ್ದರು. ನಾವು ಅದನ್ನು ಅಧಿಕೃತ ಎಂದು ಪರಿಗಣಿಸುವುದಿಲ್ಲ. ಖಾಸಗಿಯವರಿಗೆ ಯಾವುದೇ ರೀತಿಯ ಮಾನ್ಯತೆ ನೀಡಿಲ್ಲ. ನಮ್ಮ ಇಲಾಖೆಯ ಎಫ್ಎಸ್ಎಲ್ ವರದಿಯಲ್ಲಿ ಆರೋಪಿಗಳು ಪಾಕಿಸ್ತಾನ ಪರ ಘೋಷಣೆ ಕೂಗಿರುವುದು ಖಚಿತವಾಗಿದೆ, ಈ ಆಧಾರದ ಮೇಲೆ ಆರೋಪಿಗಳನ್ನು ಬಂಧಿಸಲಾಗಿದೆ. ಆರೋಪಿಗಳನ್ನು ಕೋರ್ಟ್ ಮುಂದೆ ಹಾಜರುಪಡಿಸಿ, ಹೆಚ್ಚಿನ ವಿಚಾರಣೆಗಾಗಿ ವಶಕ್ಕೆ ಪಡೆದುಕೊಂಡಿದ್ದಾರೆ, ಪ್ರಕರಣದ ತನಿಖೆ ಮುಂದುವರಿಯಲಿದ್ದು, ತನಿಖೆಯಿಂದ ಬರುವ ಮಾಹಿತಿ ಆಧರಿಸಿ ಮುಂದಿನ ಕ್ರಮ ತೆಗೆದುಕೊಳ್ಳಲಿದ್ದಾರೆ ಎಂದರು. ವಿರೋಧ ಪಕ್ಷದವರು ದಿನಕ್ಕೊಂದು ರೀತಿ ಹೇಳಿಕೆ ನೀಡುತ್ತಾರೆ. ಸಾಕ್ಷ್ಯ ಇಲ್ಲದೆ ಯಾರನ್ನೂ ಬಂಧಿಸಲಾಗದು. ವರದಿ ಆಧರಿಸಿ ಆರೋಪಿಗಳನ್ನು ಬಂಧಿಸಲಾಗಿದ್ದು ಇನ್ನೇನು ಬಹಿರಂಗಪಡಿಸಬೇಕು. ಪ್ರಕರಣವನ್ನು ಮುಚ್ಚಿಡುತ್ತಿದ್ದಾರೆ ಎಂದು ಆರೋಪಿಸುತ್ತಿದ್ದ ಬಿಜೆಪಿಯವರು ಈಗ ಏನು ಹೇಳುತ್ತಾರೆ ಎಂದು ಮರು ಪ್ರಶ್ನಿಸಿದರು.

ಮಂಡ್ಯದಲ್ಲಿ 2022ರ ನವೆಂಬರ್‌ನಲ್ಲಿ ಬಿಜೆಪಿ ಕಾರ್ಯಕರ್ತರು ಪಾಕಿಸ್ತಾನ ಜಿಂದಾಬಾದ್ ಎಂದು ಘೋಷಣೆ ಕೂಗಿದ್ದರು, ಆಗ ಅಧಿಕಾರದಲ್ಲಿದ್ದ ಬಿಜೆಪಿಯವರು ಯಾಕೆ ಕ್ರಮ ತೆಗೆದುಕೊಳ್ಳಲಿಲ್ಲ. ಹಳೆಯ ಪ್ರಕರಣ ಈಗ ಬೆಳಕಿಗೆ ಬಂದಿರುವ ಹಿನ್ನೆಲೆಯಲ್ಲಿ ಮಂಡ್ಯ ಪೊಲೀಸರು ಓರ್ವನನ್ನು ಬಂಧಿಸಿದ್ದಾರೆ. ಪಾಕಿಸ್ತಾನ ಜಿಂದಾಬಾದ್ ಎಂದು ಕೂಗಿದ ಮೇಲೆ ಕಾನೂನು ಎಲ್ಲರಿಗೂ ಒಂದೇ, ಯಾವ ಸಂದರ್ಭದಲ್ಲಿ ಕೂಗಿದ್ದಾರೆ ಎಂಬುದು ತನಿಖೆಯಿಂದ ಹೊರಬರುತ್ತೆ ಎಂದರು.

ಪ್ರಕರಣ ಕುರಿತು ಬೇರೆ ಇಲಾಖೆಯ ಸಚಿವರಿಗೆ ಸ್ಪಷ್ಟ ಮಾಹಿತಿ ಇರುವುದಿಲ್ಲ, ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ, ಇಲಾಖೆಯ ಅಧಿಕಾರಿಗಳು ಹಾಗೂ ಸಂಬಂಧಿಸಿದ ಸಚಿವರ ಹೇಳಿಕೆ ಮಾತ್ರ ಅಧಿಕೃತ. ಈಗ ನಾನು ಹೇಳುವುದು ಅಧಿಕೃತ. ಯುಎಪಿಎ ಪ್ರಕರಣಗಳು ನೇರವಾಗಿ ಕೇಂದ್ರದ ತನಿಖಾ ಸಂಸ್ಥೆಗಳಾದ ಎನ್‌ಐಎ ಅಥವಾ ಸಿಬಿಐಗೆ ಬರುತ್ತದೆ. ಈ ಹಿನ್ನೆಲೆಯಲ್ಲಿ ಎನ್‌ಐಎ ಅವರು ಸುಮೋಟೋ ಪ್ರಕರಣ ದಾಖಲಿಸಿಕೊಂಡಿದ್ದಾರೆ, ಸಿಸಿಬಿ ಪೊಲೀಸರು ಸಹ ತನಿಖೆ ಮುಂದುವರಿಸುತ್ತಾರೆ. ನಮ್ಮಲ್ಲಿರುವ ಮಾಹಿತಿಯನ್ನು ಎನ್‌ಐಎಯೊಂದಿಗೆ ಹಂಚಿಕೊಳ್ಳಲಾಗುವುದು. ಪ್ರಕರಣ ನಡೆದ ಮರುದಿನ ಸಿಸಿಬಿ ಪೊಲೀಸರು ಜೈಲಿನಲ್ಲಿರುವವರ ವಿಚಾರಣೆಯನ್ನೂ ನಡೆಸಿದ್ದಾರೆ. ಯಾರೇ ತನಿಖೆ ನಡೆಸಿದರು ಒಟ್ಟಾರೆಯಾಗಿ ಆರೋಪಿಯನ್ನು ಪತ್ತೆ ಹಚ್ಚುವುದಷ್ಟೆ ಮುಖ್ಯ ಎಂದರು.

ಮಾ.8ರಂದು ಮಾಂಸದ ಅಂಗಡಿ ಮುಚ್ಚಲು ಆದೇಶ

ಮೈಸೂರು,ಮಾ.5– ಮಾ.8ರಂದು ಮಹಾಶಿವರಾತ್ರಿ ಹಬ್ಬದ ಪ್ರಯುಕ್ತ ಮೈಸೂರು ಮಹಾನಗರಪಾಲಿಕೆಗೆ ಸೇರಿದ ಕುರಿ, ಮೇಕೆಗಳ ಕಸಾಯಿಖಾನೆ ಮತ್ತು ಇತರೆ ಎಲ್ಲಾ ಮಾಂಸದ ಅಂಗಡಿಗಳನ್ನು ಮುಚ್ಚಲು ಆದೇಶ ನೀಡಲಾಗಿದೆ. ಈ ದಿನ (ಕುರಿ ಅಥವಾ ಮೇಕೆ, ಕೋಳಿ ಮಾಂಸ, ಹಂದಿ ಮಾಂಸ ಮತ್ತು ಮೀನು) ವ್ಯಾಪಾರವನ್ನು ಮೈಸೂರು ನಗರದಲ್ಲಿ ಕಡ್ಡಾಯವಾಗಿ ನಿಷೇಧಿಸಲಾಗಿದೆ ಎಂದು ನಗರಪಾಲಿಕೆ ಆರೋಗ್ಯಾಧಿಕಾರಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಿಹೆಚ್.ಡಿ ಪದವಿ



ಮೈಸೂರು: ಡಾ.ಬಿ.ಶಂಕರ್ ಅವರ ಮಾರ್ಗದರ್ಶನದಲ್ಲಿ ಕೊಸೂರು ಶ್ರೀವಲ್ಲಿ ಅವರು ನಗರ ಮತ್ತು ಪ್ರಾದೇಶಿಕ ಯೋಜನೆ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿವಿ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಗ್ಯಾರಂಟಿಗಳ ಸಮೀಕ್ಷೆಗೆ ಆಶಾ, ಅಂಗನವಾಡಿ ಕಾರ್ಯಕರ್ತರ ನಿಯೋಜನೆಗೆ ಕುಮಾರಸ್ವಾಮಿ ಟೀಕೆ



ಬೆಂಗಳೂರು,ಮಾ.5(ಕೆಎಂಶಿ)– ಗ್ಯಾರಂಟಿಗಳ ಸಮೀಕ್ಷೆಗೆ ಅಂಗನವಾಡಿ, ಆಶಾ ಕಾರ್ಯಕರ್ತೆಯರ ನಿಯೋಜನೆ ಮಾಡಿರುವ ರಾಜ್ಯ ಕಾಂಗ್ರೆಸ್ ಸರಕಾರದ ಕಾರ್ಯವೈಖರಿಯನ್ನು ಲಜ್ಜೆಗೇಡಿತನದ ಪರಮಾವಧಿ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಟೀಕಿಸಿದ್ದಾರೆ.

ಈ ಬಗ್ಗೆ ಎಕ್ಸ್ ಜಾಲತಾಣದಲ್ಲಿ ತಮ್ಮ ಅಭಿಪ್ರಾಯ ಹಂಚಿಕೊಂಡಿರುವ ಅವರು, ಪಲ್ಸ್ ಪೋಲಿಯೋ ಲಸಿಕೆ ಅಭಿಯಾನಕ್ಕೆ ನಿಯೋಜಿತವಾಗಿರುವ ಅಂಗನವಾಡಿ, ಆಶಾ ಕಾರ್ಯಕರ್ತೆಯರಿಂದ ರಾಜ್ಯ ಸರಕಾರ ಮಾಡಿಸುತ್ತಿರುವ ಗ್ಯಾರಂಟಿ ಸಮೀಕ್ಷೆ ಲಜ್ಜೆಗೇಡಿತನದ ಪರಮಾವಧಿ. ಈ ಮಹಿಳೆಯರಿಗೆ 'ಗ್ಯಾರಂಟಿ ಸ್ವಯಂ ಸೇವಕರು' ಅಂತ ಹೆಸರಿಡಿ. ಹಾಗಾದರೆ, ಗ್ಯಾರಂಟಿ ಸಮೀಕ್ಷೆ ಹೆಸರಿನಲ್ಲಿ ತಮಗೆ ಬೇಕಾದ ಸಂಸ್ಥೆಗಳಿಗೆ ಕೋಟಿ–ಕೋಟಿ ಲೆಕ್ಕದಲ್ಲಿ ಸುರಿದ ಜನರ ತೆರಿಗೆ ಹಣ ಎಲ್ಲಿಗೆ ಹೋಯಿತು ಎಂದು ಪ್ರಶ್ನಿಸಿದ್ದಾರೆ.

ಹೆಚ್.ಎಂ.ರೇವಣ್ಣ ಅವರಿಗೆ ಸಂಪುಟ ದರ್ಜೆ ಕೊಟ್ಟು ರಚಿಸಲಾಗಿರುವ 'ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ' ಏನು ಮಾಡುತ್ತಿದೆ. ಜಿಲ್ಲೆ, ತಾಲೂಕು, ವಿಧಾನ ಸಭೆ ಕ್ಷೇತ್ರಗಳ ಮಟ್ಟದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗಳು ಸಮೀಕ್ಷೆ ಮಾಡುತ್ತಿಲ್ಲವೇ. ಗ್ಯಾರಂಟಿ ಅನುಷ್ಠಾನ ನಿರ್ವಹಣೆಗೆ ವಾರ್ಷಿಕ 16 ಕೋಟಿ ರೂ. ವೆಚ್ಚ ಮಾಡುತ್ತೇವೆ ಎಂದಿದ್ದಾರೆ. ಹಾಗಾದರೆ, ಇದಕ್ಕೆ ಆಗುತ್ತಿರುವ ವೇತನ, ಭತ್ಯೆಗಳೆಲ್ಲಾ ವ್ಯರ್ಥವೇ ಎಂದಿದ್ದಾರೆ.

ಒಬ್ಬ ಕಾರ್ಯಕರ್ತೆಗೆ 120ರಿಂದ 150 ಮನೆ ಹಂಚಿಕೆ ಮಾಡಿದ್ದು, 10–15 ದಿನದಲ್ಲಿ ಸಮೀಕ್ಷೆ ಮುಗಿಸಬೇಕಿದೆ. ಬೆಳಗ್ಗೆ 9ರಿಂದ ಸಂಜೆ 4ರವರೆಗೂ ಉರಿಬಿಸಿಲಿನಲ್ಲಿ ಮಾಡುವ ಈ ಕೆಲಸಕ್ಕೆ ಅವರಿಗೆ ಸಿಗುವ ಗೌರವಧನ ಕೇವಲ 1,000 ರೂ., ಎಸಿ ರೂಂನಲ್ಲಿ ಕುಳಿತು ಸಮೀಕ್ಷೆ ಮಾಡುವವರಿಗೆ ಕೋಟಿ ಕೋಟಿ ಹಣ ಹೋಗುತ್ತಿದೆ ಎಂದು ಕಿಡಿಕಾರಿದ್ದಾರೆ.

ಜನರ ತೆರಿಗೆ ಹಣದಿಂದಲೇ ಗ್ಯಾರಂಟಿ ಸಮಾವೇಶಗಳನ್ನು (ಚುನಾವಣಾ ಪ್ರಚಾರ ಸಭೆಗಳು) ಸಾಲು ಸಾಲಾಗಿ ನಡೆಸುತ್ತಿರುವ ಸರಕಾರಕ್ಕೆ ಸಮೀಕ್ಷೆಗಳ ಮೂಲಕವೂ ದುಡ್ಡು ಮಾಡುವ ಹಪಾಹಪಿ ಕಂಡು ಬರುತ್ತಿದೆ. ಜೊತೆಗೆ ಅಂಗನವಾಡಿಗೆ ಬರುವ ಮಕ್ಕಳ ಲಾಲನೆ ಪಾಲನೆ, ಗರ್ಭಿಣಿಯರು–ಬಾಣಂತಿಯರಿಗೆ ಊಟ, ಪ್ರತಿ ತಿಂಗಳ ಮೊದಲ ಮತ್ತು 3ನೇ ಶುಕ್ರವಾರ ಪೋಷಣ್ ಅಭಿಯಾನ, 3ನೇ ಶನಿವಾರ ಬಾಲವಿಕಾಸ ಸಮಿತಿ ಸಭೆಗೆ ಹಾಜರಿ, ಜತೆಗೆ ಇಲಾಖೆ ನಿಯೋಜಿಸುವ ಕೆಲಸಗಳನ್ನೂ ನಿರ್ವಹಿಸಬೇಕು. ಬರ, ಕುಡಿಯುವ ನೀರಿನ ಹಾಹಾಕಾರದ ನಡುವೆಯೂ ಇವರ ಗ್ಯಾರಂಟಿ ರಾಜಕೀಯಕ್ಕೆ ಬರವಿಲ್ಲ, ಪ್ರಚಾರಕ್ಕೂ ಬರವಿಲ್ಲ ಎಂದು ಟೀಕಿಸಿದ್ದಾರೆ.

ಮಹಿಳೆಯರ ಬ್ಯಾಡ್ಮಿಂಟನ್ ಪಂದ್ಯಾವಳಿ ಉದ್ಘಾಟನೆ



ಮೈಸೂರು, ಮಾ. 5– ಮೈಸೂರು ವಿಶ್ವವಿದ್ಯಾನಿಲಯದ ದೈಹಿಕ ಶಿಕ್ಷಣ ವಿಭಾಗ ಮತ್ತು ಟೆರೆಷಿಯನ್ ಕಾಲೇಜು ಸಂಯುಕ್ತಾಶ್ರಯದಲ್ಲಿ 2023–24ನೇ ಸಾಲಿನ ಶ್ರೀಮತಿ ಕಲ್ಯಾಣಮ್ಮ ಮತ್ತು ಬಿ.ಬಸವರಾಜು ಹೆಸರಿನಲ್ಲಿ ಮೈಸೂರು ನಗರ ಅಂತರ ಕಾಲೇಜುಗಳ ಪುರುಷ ಮತ್ತು ಮಹಿಳೆಯರ ಬ್ಯಾಡ್ಮಿಂಟನ್ ಕ್ರೀಡಾಕೂಟವನ್ನು ಮಾನಸಗಂಗೋತ್ರಿಯ ಒಳಾಂಗಣ ಕ್ರೀಡಾಂಗಣದಲ್ಲಿ ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ. ಲೋಕನಾಥ್ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಶಾಸಕ ಕೆ.ಹರೀಶ್ ಗೌಡ, ರಾಷ್ಟ್ರೀಯ ಖೋ–ಖೋ ಆಟಗಾರ ಕುಮಾರ್, ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕ ಡಾ.ಸಿ.ವೆಂಕಟೇಶ್, ನಿವೃತ್ತ ಪ್ರಾಧ್ಯಾಪಕ ಪ್ರೊ.ಎಂ.ಚಂದ್ರ ಕುಮಾರ್, ಡಾ.ಪಿ.ಕೃಷ್ಣಯ್ಯ, ಅಂಥೋನಿ ಮೊಸಸ್ (ಸಂಚಾಲಕರು) ಮತ್ತು ಇನ್ನಿತರರು ಉಪಸ್ಥಿತರಿದ್ದರು.

ನಮ್ಮ ಸಂಗೀತ, ಸಾಂಸ್ಕೃತಿಕ ಪರಂಪರೆ ರಕ್ಷಿಸಬೇಕಿದೆ

ಡಾ.ಗಂಗೂಬಾಯಿ ಹಾನಗಲ್ 111ನೇ ಜನ್ಮದಿನೋತ್ಸವ ಉದ್ಘಾಟಿಸಿದ ಮುಡಾ ಅಧ್ಯಕ್ಷ ಕೆ.ಮರೀಗೌಡ ಅಭಿಮತ



ಮೈಸೂರಿನ ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ವಿವಿಯಲ್ಲಿ ಮಂಗಳವಾರ ಆಯೋಜಿಸಿದ್ದ ಡಾ.ಗಂಗೂಬಾಯಿ ಹಾನಗಲ್ ಅವರ 111ನೇ ಜನ್ಮದಿನೋತ್ಸವ ಕಾರ್ಯಕ್ರಮವನ್ನು ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಮುಡಾ ಅಧ್ಯಕ್ಷ ಕೆ.ಮರೀಗೌಡ ಉದ್ಘಾಟಿಸಿದರು. ಕುಲಪತಿ ಡಾ.ನಾಗೇಶ್ ವಿ.ಬೆಟ್ಟಕೋಟೆ, ಡಾ.ಏಂಜಲ್‌ರಾಜ್, ಡಾ.ಮಳವಳ್ಳಿ ಮಹದೇವಸ್ವಾಮಿ ಇನ್ನಿತರರಿದ್ದಾರೆ.

ಮೈಸೂರು, ಮಾ. 5(ಆರ್‌ಕೆ)– ನಮ್ಮ ಸಂಗೀತ, ಕಲೆ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿ, ಪೋಷಿಸಬೇಕಿದೆ ಎಂದು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದ ಅಧ್ಯಕ್ಷ ಕೆ.ಮರೀಗೌಡ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾನಿಲಯದಲ್ಲಿ ಇಂದು ಆಯೋಜಿಸಿದ್ದ ಪದ್ಮವಿಭೂಷಣ ಡಾ. ಗಂಗೂಬಾಯಿ ಹಾನಗಲ್ ಅವರ 111ನೇ ಜನ್ಮದಿನೋತ್ಸವ ಹಾಗೂ ಸಾಂಸ್ಕೃತಿಕ ಉತ್ಸವ ಉದ್ಘಾಟಿಸಿ, ಅವರು ಮಾತನಾಡುತ್ತಿದ್ದರು.

ರಾಜ ಮಹಾರಾಜರು ಪ್ರೋತ್ಸಾಹಿಸಿ ಪ್ರೇರಣೆ ನೀಡುತ್ತಿದ್ದ ಸಂಗೀತ, ನೃತ್ಯ, ನಾಟಕ, ಕಲೆಗೆ ಐತಿಹಾಸಿಕ ಹಿನ್ನೆಲೆ ಇದೆ. ನಮ್ಮ ರಾಜ್ಯದಲ್ಲಿ ಡಾ. ಗಂಗೂಬಾಯಿ ಹಾನಗಲ್‌ರಂತಹ ಸಂಗೀತ ದಿಗ್ಗಜರು ತಮ್ಮ ಕಲಾ ಪ್ರದರ್ಶನ ನೀಡಿ ಸಾಧನೆಗೈದಿದ್ದಾರೆ. ಅದನ್ನು ಸಂರಕ್ಷಿಸಿ, ಪೋಷಿಸುವ ಮೂಲಕ ಮುಂದಿನ ಪೀಳಿಗೆಗೂ ಪರಿಚಯಿಸಬೇಕು ಎಂದರು.

ಪದ್ಮವಿಭೂಷಣ ಡಾ.ಗಂಗೂಬಾಯಿ ಹಾನಗಲ್ ಅವರ ಹೆಸರಿನಲ್ಲಿರುವ ಸಂಗೀತ ವಿಶ್ವವಿದ್ಯಾನಿಲಯವು ರಾಜ್ಯದ ಉದ್ದಗಲಕ್ಕೂ ಶಿಕ್ಷಣ, ತರಬೇತಿ ನೀಡಿ ಲಕ್ಷಾಂತರ ಯುವ ಸಮೂಹಕ್ಕೆ ಈ ಪ್ರದರ್ಶಕ ಕಲೆಯನ್ನು ಮೈಗೂಡಿಸುತ್ತಿರುವುದು ಶ್ಲಾಘನೀಯ ಎಂದು ಮರೀಗೌಡರು ನುಡಿದರು.

ಈಗಾಗಲೇ ವಿಶ್ವವಿದ್ಯಾನಿಲಯಕ್ಕೆ ಆಲನಹಳ್ಳಿ ಬಳಿ ಐದು ಎಕರೆ ಜಾಗವನ್ನು ಮುಡಾದಿಂದ ನೀಡಿದ್ದು, ವಿದ್ಯಾರ್ಥಿನಿಲಯ ನಿರ್ಮಿಸಲು ಹೆಚ್ಚುವರಿಯಾಗಿ ಎರಡು ಎಕರೆ ಕೋರಿ ಪ್ರಸ್ತಾವನೆ ಸಲ್ಲಿಸಿರುವುದರಿಂದ ಈ ಬಗ್ಗೆ ಚರ್ಚಿಸಿ ಅಗತ್ಯ ಕ್ರಮ ವಹಿಸುತ್ತೇನೆ ಎಂದು ಭರವಸೆ ನೀಡಿದರು. ಅಂಚೆ ಇಲಾಖೆಯ ಹಿರಿಯ ಅಂಚೆ ಅಧೀಕ್ಷಕ ಡಾ.ಏಂಜಲ್‌ರಾಜ್, ಖ್ಯಾತ ಜನಪದ ಗಾಯಕ ಡಾ.ಮಳವಳ್ಳಿ ಮಹದೇವಸ್ವಾಮಿ, ಕರ್ನಾಟಕ ರಾಜ್ಯ ಗಂಗೂಬಾಯಿ ಹಾನಗಲ್ ವಿಶ್ವವಿದ್ಯಾನಿಲಯದ ಕುಲಪತಿ ಡಾ. ನಾಗೇಶ್ ವಿ.ಬೆಟ್ಟಕೋಟೆ ಹಾಗೂ ಇತರರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಹುಲಿ ದಾಳಿಗೆ ಹಸು ಬಲಿ



ಮಡಿಕೇರಿ, ಮಾ.5– ಪೊನ್ನಂಪೇಟೆ ತಾಲೂಕಿನ ಶ್ರೀಮಂಗಲ ಹೋಬಳಿಯ ತಾವಳಗೇರಿ ಗ್ರಾಮದಲ್ಲಿ ಮೇಯಲು ಬಿಟ್ಟಿದ್ದ ಹಸುವನ್ನು ಹುಲಿ ದಾಳಿ ನಡೆಸಿ ಕೊಂದುಹಾಕಿದೆ.

ತಾವಳಗೇರಿ ಗ್ರಾಮದ ತಡಿಯಂಗಡ ಕಂಬ ಕರುಂಬಯ್ಯ ಎಂಬವರಿಗೆ ಸೇರಿದ ಸುಮಾರು 50 ಸಾವಿರ ರೂ. ಬೆಲೆಬಾಳುವ ತೆನೆ ಹಸು ಹುಲಿಗೆ ಬಲಿಯಾಗಿದೆ.

ಸೋಮವಾರ ಹಸುವನ್ನು ಸಮೀಪದ ಗದ್ದೆಯಲ್ಲಿ ಮೇಯಲು ಬಿಡಲಾಗಿತ್ತು. ಸಂಜೆಯಾದರೂ ಹಸು ಮನೆಗೆ ಬಾರದ ಹಿನ್ನೆಲೆಯಲ್ಲಿ ಹುಡುಕಾಟ ನಡೆಸಲಾಗಿತ್ತು. ಆದರೆ, ಮಂಗಳವಾರ ಬೆಳಗ್ಗೆ ಗ್ರಾಮದ ನೂರೇರ ಪೂಣಚ್ಚ ಅವರ ಗದ್ದೆಯಲ್ಲಿ ಹಸುವಿನ ಕಳೇಬರಹ ಪತ್ತೆಯಾಗಿದೆ.

ಶ್ರೀಮಂಗಲ ಅರಣ್ಯ ಅಧಿಕಾರಿಗಳು ಮತ್ತು ಸಿಬ್ಬಂದಿ ಸ್ಥಳ ಪರಿಶೀಲನೆ ನಡೆಸಿದರು. ಹಸುವನ್ನು ಕೊಂದು ಹಾಕಿರುವ ಜಾಗದಲ್ಲಿ ಬೋನು ಇರಿಸಲಾಗಿದ್ದು, ಹುಲಿ ಸೆರೆಗೆ ಕೂಂಬಿಂಗ್ ಕಾರ್ಯಾಚರಣೆ ನಡೆಸಲು ಅರಣ್ಯ ಇಲಾಖೆ ಮುಂದಾಗಿದೆ. ಶ್ರೀಮಂಗಲ ಪಶು ವೈದ್ಯಾಧಿಕಾರಿ ಗಿರೀಶ್ ಹಸುವಿನ ಮರಣೋತ್ತರ ಪರೀಕ್ಷೆ ನಡೆಸಿದರು. ಪೊನ್ನಂಪೇಟೆ ವಲಯ ಅರಣ್ಯಾಧಿಕಾರಿ ಬಿ.ಎಂ.ಶಂಕರ್, ಉಪ ವಲಯ ಅರಣ್ಯಾಧಿಕಾರಿಗಳಾದ ರವಿ ಕಿರಣ್, ರಕ್ಷಿತ್, ಗಸ್ತು ಅರಣ್ಯ ಪಾಲಕರಾದ ಅಂಥೋಣಿ ಪ್ರಕಾಶ್, ಚೇತನ್ ಕುಮಾರ್, ಆರ್‌ಆರ್‌ಟಿ ಸಿಬ್ಬಂದಿ ಇದ್ದರು.

ಕೇಂದ್ರದಿಂದ ಪ್ರತಿ ಗ್ರಾಪಂಗೆ 38 ಲಕ್ಷ ಅನುದಾನ

- ಸಂಸದ ಪ್ರತಾಪ್ ಸಿಂಹ ಮಾಹಿತಿ
- ಗಾಳಿಬೀಡು ಗ್ರಾಪಂ ಕಟ್ಟಡ ಉದ್ಘಾಟನೆ



ಗಾಳಿಬೀಡು ಗ್ರಾಪಂ ಕಟ್ಟಡವನ್ನು ಸಂಸದ ಪ್ರತಾಪ್ ಸಿಂಹ, ಶಾಸಕ ಡಾ.ಮಂತರ್‌ಗೌಡ ಗ್ರಾಪಂ ಅಧ್ಯಕ್ಷೆ ಉಷಾ, ಉಪಾಧ್ಯಕ್ಷ ಪೆಮ್ಮಯ್ಯ ಉದ್ಘಾಟಿಸಿದರು.

ಮಡಿಕೇರಿ, ಮಾ.5– ಕೇಂದ್ರ ಸರ್ಕಾರದಿಂದ ಪ್ರತಿ ಗ್ರಾಮ ಪಂಚಾಯಿತಿಗೆ 38 ಲಕ್ಷ ರೂ. ಅನುದಾನ ನೇರವಾಗಿ ಬಿಡುಗಡೆಯಾಗುತ್ತಿದ್ದು, ಗ್ರಾಪಂಗಳು ಆರ್ಥಿಕವಾಗಿ ಸಬಲತೆ ಹೊಂದುವ ಜೊತೆಗೆ ಗ್ರಾಮಗಳ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಸಂಸದ ಪ್ರತಾಪ್ ಸಿಂಹ ತಿಳಿಸಿದರು.

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಹಾಗೂ ವಿವಿಧ ಯೋಜನೆಯಡಿ 47 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಿರುವ ಗಾಳಿಬೀಡು ಗ್ರಾಪಂ ಕಟ್ಟಡವನ್ನು ಮಂಗಳವಾರ ಉದ್ಘಾಟಿಸಿ ಮಾತನಾಡಿದ ಅವರು, ಕೇಂದ್ರದಿಂದ 14–15ನೇ ಹಣಕಾಸು ಆಯೋಗದಿಂದ ಪಂಚಾಯತ್ ಸೇವಾ ಕೇಂದ್ರದಡಿ ಗ್ರಾಪಂಗಳ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗಿದೆ. ಕುಡಿಯುವ ನೀರು, ವಿದ್ಯುತ್ ಸಂಪರ್ಕ, ಗ್ರಾಮೀಣ ರಸ್ತೆ, ಚರಂಡಿ ಮತ್ತಿತರ ಮೂಲಸೌಲಭ್ಯಕ್ಕೆ ಒತ್ತು ನೀಡಲಾಗಿದೆ ಎಂದರು.

ಗಾಳಿಬೀಡು ಗ್ರಾಪಂ ಸೇರಿದಂತೆ ಕೊಡಗು ಜಿಲ್ಲೆಯ 60ಕ್ಕೂ ಹೆಚ್ಚು ಕಡೆಗಳಲ್ಲಿ ಮೊಬೈಲ್ ಟವರ್‌ಗಳನ್ನು ನಿರ್ಮಿಸಲಾಗಿದೆ. ಗ್ರಾಪಂ ಅಭಿವೃದ್ಧಿಗೆ ಸಂಬಂಧಿಸಿದಂತೆ ಮುಂದಿನ ದಿನಗಳಲ್ಲಿ ಸಂಸದರ ನಿಧಿಯಿಂದ ಹೆಚ್ಚಿನ ಅನುದಾನ ಬಿಡುಗಡೆ ಮಾಡಲಾಗುವುದು. ಶ್ರೀರಂಗಪಟ್ಟಣ ಚತುಷ್ಪಥ ರಸ್ತೆ ನಿರ್ಮಾಣಕ್ಕೆ ಚಾಲನೆ ನೀಡಲಾಗಿದ್ದು, ಸಂಪಾಜೆ–ಮಾಣಿ ರಸ್ತೆ ಹಾಗೂ ಕುಕೆ-ಭಾಗಮಂಡಲ ರಸ್ತೆ ಅಭಿವೃದ್ಧಿಗೆ ಕ್ರಮ ವಹಿಸಲಾಗುವುದು. ಅಮೃತ ಯೋಜನೆಯಡಿ 146 ಕೋಟಿ ರೂ. ಬಿಡುಗಡೆಯಾಗಿದ್ದು, ಟೆಂಡರ್ ಪ್ರಕ್ರಿಯೆ ಹಂತದಲ್ಲಿದೆ. ನಲ್ಲಿ ನೀರು ಸಂಪರ್ಕ, ಪೈಪ್‌ಲೈನ್ ಮೂಲಕ ಅಡುಗೆ ಅನಿಲ ಪೂರೈಸಲಾಗುವುದು. 15ನೇ ಹಣಕಾಸು ಯೋಜನೆಯಡಿ ಕೊಡಗು ಜಿಲ್ಲೆಗೆ ಹೆಚ್ಚಿನ ಅನುದಾನ ಒದಗಿಸಲಾಗುವುದು ಎಂದು ತಿಳಿಸಿದರು.

ಶಾಸಕ ಡಾ.ಮಂತರ್‌ಗೌಡ ಮಾತನಾಡಿ, ಮಡಿಕೇರಿ ವಿಧಾನಸಭಾ ಕ್ಷೇತ್ರದಲ್ಲಿ ಒಂದು ಸಾವಿರ ಮನೆ ನಿರ್ಮಾಣಕ್ಕೆ ವಸತಿ ಸಚಿವ ಜಮೀರ್ ಅಹ್ಮದ್ ಅನುಮೋದನೆ ನೀಡಿದ್ದಾರೆ. ಮಡಿಕೇರಿ ನಗರಕ್ಕೆ ನೀರು ಪೂರೈಕೆಯಾಗುವ ಕೂಟುಹೊಳೆ, ಕುಂಡಾ ಮೇಸ್ತ್ರಿ ಕುಡಿಯುವ ನೀರು ಯೋಜನೆ ಸಂಬಂಧಿಸಿದಂತೆ ಪಂಚಾಯತ್ ರಾಜ್ ಇಲಾಖೆಯಿಂದ 300 ಕೋಟಿ ರೂ. ಬಿಡುಗಡೆಗೆ ಒಪ್ಪಿಗೆ ನೀಡಿದ್ದು, ಬೇಸಿಗೆಯಲ್ಲಿ ಕುಡಿಯುವ ನೀರು ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ಗಮನಹರಿಸುವಂತೆ ತಿಳಿಸಿದರು. ಜಲಜೀವನ್ ಮಿಷನ್ ಯೋಜನೆಯಡಿ ಕುಡಿಯುವ ನೀರು ಪೂರೈಸಬೇಕು. ಗ್ರಾಮ ಪಂಚಾಯಿತಿಗೆ ಸಾರ್ವಜನಿಕರು ಭೇಟಿ ನೀಡಿದ ಸಂದರ್ಭದಲ್ಲಿ ಸ್ಪಂದಿಸಬೇಕು. ಸಾರ್ವಜನಿಕರಿಗೆ ತೊಂದರೆಯಾಗದಂತೆ ಗಮನಹರಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ತಾಪಂ ಇಓ ಶೇಖರ್, ಗ್ರಾಪಂ ಅಧ್ಯಕ್ಷೆ ಉಷಾ, ಉಪಾಧ್ಯಕ್ಷ ಪೆಮ್ಮಯ್ಯ, ಪಿಡಿಓ ಶಶಿಕಿರಣ, ಸದಸ್ಯರಾದ ಸುಭಾಷ್ ಸೋಮಯ್ಯ ಇತರರು ಇದ್ದರು.

ರಾಜ್ಯ ಸರ್ಕಾರದಿಂದ ಹಿಂದೂ, ದಲಿತ ವಿರೋಧಿ ನೀತಿ

ಮಡಿಕೇರಿ, ಮಾ.5–ರಾಜ್ಯದಲ್ಲಿ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಸರ್ಕಾರ ಹಿಂದೂ ಮತ್ತು ದಲಿತ ವಿರೋಧಿ ನೀತಿ ಅನುಸರಿಸುತ್ತಿದೆ ಎಂದು ಸಂಸದ ಪ್ರತಾಪ್ ಸಿಂಹ ಆರೋಪಿಸಿದರು.

ಮಂಗಳವಾರ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಿಂದೂ ಸಂಘಟನೆಗಳ ಕಾರ್ಯಕರ್ತರ ವಿರುದ್ಧ ರೌಡಿಶೀಟರ್ ಪ್ರಕರಣ ದಾಖಲಿಸುವ ಮೂಲಕ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಚುನಾವಣಾ ಸಮಯದಲ್ಲಿ ಕಾರ್ಯಕರ್ತರ ಎದೆಗುಂದಿಸುವ ಕೆಲಸ ಮಾಡುತ್ತಿದೆ. ಮಂಡ್ಯ ಜಿಲ್ಲೆಯ ಕೆರಗೋಡುವಿನಲ್ಲಿ ಹನುಮ ಧ್ವಜ ಇಳಿಸುವ ಪ್ರಯತ್ನ ನಡೆಸಲಾಯಿತು. ಇದೀಗ ವ್ಯವಸ್ಥಿತವಾಗಿ ಕುತಂತ್ರದ ಕೇಸ್ ದಾಖಲಿಸಲಾಗುತ್ತಿದೆ. ಅಧಿಕಾರದ ಆಸೆಯಿಂದ ಕಳೆದ 8 ತಿಂಗಳ ಅವಧಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಡಿರೋದೆ ಇದನ್ನು ಎಂದು ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ದಲಿತ ಅಭಿವೃದ್ಧಿಗೆ ಮೀಸಲಿಟ್ಟಿದ್ದ 11 ಸಾವಿರ ಕೋಟಿ ರೂ. ಅನ್ನು ಬೇರೆ ಕಡೆಗೆ ವರ್ಗಾವಣೆ ಮಾಡಿದ್ದಾರೆ. ದಲಿತ ಉದ್ಧಾರಕ್ಕೆ ಸಿದ್ದರಾಮಯ್ಯ ಯಾವತ್ತು ಮನಸ್ಸು ಮಾಡಲ್ಲ. ಅವರಿಗೆ ದಲಿತರ ಮೇಲೆ ಕಾಳಜಿ ಇದ್ದಿದ್ದರೆ 2013–18ರ ಅವಧಿಯಲ್ಲೇ ಗೃಹ ಸಚಿವ ಪರಮೇಶ್ವರ್ ಅವರನ್ನು ಡಿಸಿಎಂ ಮಾಡುತ್ತಿದ್ದರು. ಜೆಡಿಎಸ್ ಮೈತ್ರಿ ಸರ್ಕಾರ ಬಂದಾಗ ಪರಮೇಶ್ವರ್ ಅವರಿಗೆ ಡಿಸಿಎಂ ಸ್ಥಾನ ನೀಡಲಾಗಿತ್ತು. ಮಲ್ಲಿಕಾರ್ಜುನ ಖರ್ಗೆ ಅವರನ್ನು ಪ್ರಧಾನಿ ಅಭ್ಯರ್ಥಿ ಮಾಡುವ ಮನಸ್ಸು ಸಿದ್ದರಾಮಯ್ಯ ಅವರಿಗೆ ಇದೆಯಾ? ದಲಿತರ ಬಗ್ಗೆ ಸಿದ್ದರಾಮಯ್ಯ ಹೃದಯದಲ್ಲಿ ಯಾವುದೇ ಸ್ಥಾನ ಇಲ್ಲ. ಚುನಾವಣೆಗೋಸ್ಕರ ದಲಿತ ನಾಯಕರನ್ನು ಸಿದ್ದರಾಮಯ್ಯ ಬಳಸಿಕೊಳ್ಳುತ್ತಿದ್ದಾರೆ ಎಂದು ತಿಳಿಸಿದರು.

ರಾಮೇಶ್ವರ ಕೆಫೆ ಬಾಂಬ್ ಬ್ಲಾಸ್ಟ್ ಪ್ರಕರಣದ ಎಫ್‌ಎಸ್‌ಎಲ್ ವರದಿ ವಿಳಂಬ ಕುರಿತು ಪ್ರತಿಕ್ರಿಯಿಸಿದ ಪ್ರತಾಪ್ ಸಿಂಹ, ಎಫ್‌ಎಸ್‌ಎಲ್ ವರದಿ ನೀಡಲು ರಾಜ್ಯ ಸರ್ಕಾರಕ್ಕೆ ಎಷ್ಟು ಸಮಯ ಬೇಕು? ಗೃಹ ಸಚಿವರು ಕೂಡ ಸಿದ್ದರಾಮಯ್ಯ ಅವರನ್ನು ಓಲೈಸಲು ನಿಂತಿದ್ದಾರೆ. ಗೃಹ ಸಚಿವರು ಸುಳ್ಳು ಹೇಳೋದನ್ನು ಕಲಿತು ಬಿಟ್ಟಿದ್ದಾರೆ. ನನ್ನ ತಮ್ಮನ ಪ್ರಕರಣದಲ್ಲೂ ಗೃಹ ಸಚಿವರು ಅದನ್ನೆ ಹೇಳಿದ್ರು, ಕೊನೆಗೆ ಏನು ಮಾಡಲಾಗದೆ ಕೋರ್ಟ್‌ನಲ್ಲಿ ಛೀಮಾರಿ ಹಾಕಿಕೊಂಡರು. ಗೃಹ ಸಚಿವರ ಬಗ್ಗೆ ವೈಯಕ್ತಿಕವಾಗಿ ನನಗೆ ಅಪಾರ ಗೌರವ ಇದೆ ಎಂದರು.

ಕೊಡಗಿನ ತೆಕ್ಕಡ ಭವಾನಿಗೆ 3 ಚಿನ್ನದ ಪದಕ

ಮಡಿಕೇರಿ, ಮಾ.5–ಕಾಶ್ಮೀರದ ಗುಲ್ಮಾರ್ಗ್‌ನಲ್ಲಿ ನಡೆದ ಖೇಲೋ ಇಂಡಿಯಾ ವಿಂಟರ್ ಗೇಮ್ಸ್‌ನ ಸ್ಕೀಯಿಂಗ್‌ನ ಪ್ರತ್ಯೇಕ ವಿಭಾಗಗಳಲ್ಲಿ ಕೊಡಗಿನ ತೆಕ್ಕಡ ಭವಾನಿ 3 ಚಿನ್ನದ ಪದಕ ಗಳಿಸಿದ್ದಾರೆ.



ಸ್ಕೀಯಿಂಗ್‌ನಲ್ಲಿ ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿ ಕರ್ನಾಟಕದ ಕೀರ್ತಿ ಪತಾಕೆ ಹಾರಿಸುತ್ತಿದ್ದಾರೆ. ಫೆ.21ರಿಂದ 25ರವರೆಗೆ ಕಾಶ್ಮೀರದ ಗುಲ್ಮಾರ್ಗ್‌ನಲ್ಲಿ 4ನೇ ಖೇಲೋ ಇಂಡಿಯಾ ವಿಂಟರ್ ಗೇಮ್ಸ್ ಆಯೋಜಿಸಲಾಗಿತ್ತು. ಗೇಮ್ಸ್‌ನ ಸ್ಪ್ರಿಂಟ್ ಕ್ರಾಸ್ ಕಂಟ್ರಿ ಸ್ಕೀಯಿಂಗ್‌ನಲ್ಲಿ ತೆಕ್ಕಡ ಭವಾನಿ, ಕ್ರಮವಾಗಿ 10 ಕಿ.ಮೀ, 5 ಕಿ.ಮೀ ಹಾಗೂ 1.6 ಕಿ.ಮೀ.ನಲ್ಲಿ ಪ್ರಥಮ ಸ್ಥಾನ ಪಡೆದು 3 ಚಿನ್ನದ ಪದಕ ಪಡೆದಿದ್ದಾರೆ. ಈ ಮೂಲಕ 2026ರಲ್ಲಿ ನಡೆಯಲಿರುವ ಒಲಂಪಿಕ್ಸ್‌ನಲ್ಲಿ ಭಾಗವಹಿಸಲು ಕಠಿಣ ಸಿದ್ಧತೆ ನಡೆಸುತ್ತಿದ್ದಾರೆ.

ಅಂತಾರಾಷ್ಟ್ರೀಯ ಮಟ್ಟದ ಚಾಂಪಿಯನ್ಸ್‌ನಲ್ಲಿ ಭಾಗವಹಿಸಿ ಭಾರತವನ್ನು ಪ್ರತಿನಿಧಿಸಿದ ಮೊದಲ ಮಹಿಳೆ ಎಂಬ ದಾಖಲೆಗೂ ಪಾತ್ರರಾಗಿದ್ದಾರೆ. ಇವರು ನಾಪೋಕ್ಲು ಸಮೀಪದ ಪೆರೂರು ಗ್ರಾಮದ ನಿವಾಸಿ ತೆಕ್ಕಡ ನಂಜುಂಡ ಹಾಗೂ ಪಾರ್ವತಿ ದಂಪತಿಯ ಪುತ್ರಿ. ತೆಕ್ಕಡ ಭವಾನಿ ಡಾರ್ಜಲಿಂಗ್‌ನ ಹಿಮಾಲಯ ಮೌಂಟೇನಿಯರಿಂಗ್ ಇನ್‌ಸ್ಟಿಟ್ಯೂಟ್‌ನಲ್ಲಿ ಬೋಧಕರಾಗಿ ಕರ್ತವ್ಯ ನಿರ್ವಹಿಸಿದ್ದಾರೆ.

ನಿವೇಶನಕ್ಕಾಗಿ ಪೊನ್ನಂಪೇಟೆಯಲ್ಲಿ ಪ್ರತಿಭಟನೆ



ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ಆಲ್ ಇಂಡಿಯಾ ದಲಿತ ರೈಟ್ಸ್ ಮೂವ್‌ಮೆಂಟ್ ವತಿಯಿಂದ ಪೊನ್ನಂಪೇಟೆಯಲ್ಲಿ ಪ್ರತಿಭಟನೆ ನಡೆಸಲಾಯಿತು.

ಮಡಿಕೇರಿ, ಮಾ.5– ಲೈನ್ ಮನೆಗಳಲ್ಲಿ ವಾಸಿಸುತ್ತಿರುವ ಆದಿವಾಸಿ ಕುಟುಂಬಗಳಿಗೆ ನಿವೇಶನ ನೀಡುವುದು ಸೇರಿದಂತೆ ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ಆಲ್ ಇಂಡಿಯಾ ದಲಿತ ರೈಟ್ಸ್ ಮೂವ್‌ಮೆಂಟ್ ವತಿಯಿಂದ ಪೊನ್ನಂಪೇಟೆಯಲ್ಲಿ ಪ್ರತಿಭಟನೆ ನಡೆಸಲಾಯಿತು.

ಪೊನ್ನಂಪೇಟೆ ಬಸ್ ನಿಲ್ದಾಣದಿಂದ ತಾಲೂಕು ಪಂಚಾಯಿತಿ ಕಚೇರಿ ವರೆಗೆ ನಡೆದ ಪ್ರತಿಭಟನಾ ಮೆರವಣಿಗೆಯಲ್ಲಿ ಸುಡು ಬಿಸಿಲನ್ನು ಲೆಕ್ಕಿಸದೇ ಪುಟ್ಟ ಮಕ್ಕಳನ್ನು ಎತ್ತಿಕೊಂಡ ಮಹಿಳೆಯರು ಪಾಲ್ಗೊಂಡು ನಿವೇಶನ ನೀಡುವಂತೆ ಒತ್ತಾಯಿಸಿದರು. ಬಳಿಕ ತಾಲೂಕು ಪಂಚಾಯಿತಿ ಕಚೇರಿ ಎದುರು ಸಮಾವೇಶಗೊಂಡು, ಸರ್ಕಾರದ ವಿರುದ್ಧ ಘೋಷಣೆ ಕೂಗಿದರು.

ಲೈನ್‌ಮನೆಗಳಲ್ಲಿ ವಾಸಿಸುತ್ತಿರುವ ಆದಿವಾಸಿ ಕುಟುಂಬಗಳಿಗೆ 2 ತಿಂಗಳೊಳಗೆ ನಿವೇಶನ ನೀಡಬೇಕು. ಭೂ ಮಾಲೀಕರು ಮಾಡಿಕೊಂಡಿರುವ ಒತ್ತುವರಿ ಭೂಮಿ ಹಾಗೂ ಜಿಪಂ ಸಿಇಓ ಮತ್ತು ತಾಪಂ ಇಓ ಹೆಸರಿನಲ್ಲಿರುವ ಎಲ್ಲಾ ಭೂಮಿಯನ್ನು ವಶಕ್ಕೆ ಪಡೆಯಬೇಕು ಎಂದು ಒತ್ತಾಯಿಸಿದರು. ಆಲ್ ಇಂಡಿಯಾ ದಲಿತ ರೈಟ್ಸ್ ಮೂವ್‌ಮೆಂಟ್‌ನ ರಾಜ್ಯ ಸಂಚಾಲಕ ರಮೇಶ್ ಮಾಯಮುಡಿ ಮಾತನಾಡಿ, ಜಿಲ್ಲೆಯಲ್ಲಿ ಸುಮಾರು 4500 ಕುಟುಂಬಗಳು ನಿವೇಶನ ರಹಿತವಾಗಿದ್ದು, ಈ ಆದಿವಾಸಿಗಳಿಗೆ ನಿವೇಶನ ನೀಡುವಂತೆ 18 ವರ್ಷಗಳಿಂದ ಹೋರಾಟ ನಡೆಸುತ್ತಾ ಬಂದಿದ್ದರೂ ಯಾವುದೇ ಪ್ರಯೋಜನವಾಗಿಲ್ಲ ಎಂದರು. ತಾಪಂ ಇಓ ಕೋಣಿಯಂಡ ಅಪ್ಪಣ್ಣಗೆ ಮನವಿ ಸಲ್ಲಿಸಲಾಯಿತು. ಸಂಘಟನೆಯ ಜೆ.ಜಿ.ತಿಮ್ಮ, ಜೆ.ಎಂ. ಅಶ್ವಥ್, ಪಿ.ರಾಣಿ, ಪಿ.ಎ.ಗೌರಿ, ಪಿ.ಸೀತೆ, ಪಿ.ಮಲ್ಲಿಗೆ, ಜೆ.ಶಾಂತಿ ಪಾಲ್ಗೊಂಡಿದ್ದರು.

ವಿರಾಜಪೇಟೆ ಪುರಸಭೆ ಬಜೆಟ್ ಪೂರ್ವಭಾವಿ ಸಭೆ



ಎಸಿ ನರ್ವಾಡೆ ವಿನಾಯಕ್ ಕಾರ್ಬಾರಿ ಅಧ್ಯಕ್ಷತೆಯಲ್ಲಿ ನಡೆದ ಆಯವ್ಯಯ ಪೂರ್ವಭಾವಿ ಸಭೆಯಲ್ಲಿ ಸದಸ್ಯರು ತಮ್ಮ ಅಭಿಪ್ರಾಯ ತಿಳಿಸಿದರು.

ವಿರಾಜಪೇಟೆ, ಮಾ.5–ವಿರಾಜಪೇಟೆ ಪುರಸಭೆ ವ್ಯಾಪ್ತಿಯ 18 ವಾರ್ಡ್‌ಗಳಿಗೆ ಕುಡಿಯುವ ನೀರು, ವಿದ್ಯುತ್ ದೀಪ, ಶೌಚಾಲಯ, ರುದ್ರಭೂಮಿ ಹಾಗೂ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಲು ಪುರಸಭೆ ಆಡಳಿತಾಧಿಕಾರಿ ನರ್ವಾಡೆ ವಿನಾಯಕ್ ಕಾರ್ಬಾರಿ ಅಧ್ಯಕ್ಷತೆಯಲ್ಲಿ ಪುರಸಭೆ ಸಭಾಂಗಣದಲ್ಲಿ ನಡೆದ 2024–25ನೇ ಸಾಲಿನ ಆಯವ್ಯಯ ಪೂರ್ವಭಾವಿ ಸಭೆಯಲ್ಲಿ ತೀರ್ಮಾನಿಸಲಾಯಿತು.

ಸಭೆಯ ಮೊದಲಿಗೆ ಸದಸ್ಯ ಡಿ.ಪಿ.ರಾಜೇಶ್ ಮಾತನಾಡಿ, ನಗರದ ಬಹುತೇಕ ವಾರ್ಡ್‌ಗಳ ಮುಖ್ಯರಸ್ತೆಗಳಲ್ಲಿ ವಿದ್ಯುತ್ ದೀಪಗಳಿಲ್ಲದೆ ರಾತ್ರಿ ವೇಳೆ ಜನರು ನಡೆದಾಡಲು ಹರಸಾಹಸ ಪಡುವಂತಾಗಿದೆ. ಪ್ರತಿ ತಿಂಗಳು ವಿದ್ಯುತ್ ಬಿಲ್ ಮಾತ್ರ ಹೆಚ್ಚುತ್ತಿದೆ. ವಿದ್ಯುತ್ ದೀಪಗಳು ಉರಿಯುತ್ತಿಲ್ಲ. ಟೆಂಡರ್ ಕರೆದು ಗುತ್ತಿಗೆ ನೀಡಲಾಗಿದ್ದ ವ್ಯಕ್ತಿ ಕೆಲಸ ಮಾಡುತ್ತಿಲ್ಲ. ಸದಸ್ಯರಿಗೆ ಸಿಗುತ್ತಿಲ್ಲ. ಮುಂದಿನ ದಿನದಲ್ಲಿ ಪುರಸಭೆ 23 ವಾರ್ಡ್‌ಗಳು ಆಗಲಿದ್ದು, ಹೆಚ್ಚಿನ ಕೆಲಸ ನಡೆಯಬೇಕು. ಇಂತಹವರನ್ನು ನಂಬಿ ಏನು ಕೆಲಸಗಳು ಸಾಧ್ಯವಾದಿತು? ಎಂದು ಪ್ರಶ್ನಿಸಿದರು.

ಸದಸ್ಯೆ ಎಂ.ಕೆ.ದೇಚಮ್ಮ ಮಾತನಾಡಿ, 7ನೇ ವಾರ್ಡ್‌ನ ಮೊಗರಗ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗಿದೆ. ವಾರದಲ್ಲಿ ಎರಡು ಬಾರಿ ಮಾತ್ರ ನೀರು ಬರುತ್ತದೆ. ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು, ರಸ್ತೆಯಲ್ಲಿ ಓಡಾಡಲು ಭಯಪಡುವಂತಾಗಿದೆ. ಈ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದರು. ಸಭೆಯಲ್ಲಿ ಮುಖ್ಯಾಧಿಕಾರಿ ಚಂದ್ರ ಕುಮಾರ್, ಸದಸ್ಯರಾದ ಎಸ್.ಹೆಚ್. ಮತೀನ್, ಪಿ.ರಂಜಿ ಪೂಣಚ್ಚ, ಸಿ.ಕೆ. ಪೃಥ್ವಿನಾಥ್, ಮಹದೇವ್, ರಜನಿಕಾಂತ್, ಸುನೀತಾ ಜೂನ, ಆಶಾ ಸುಬ್ಬಯ್ಯ, ಅನಿತಾ, ಅಬ್ದುಲ್ ಜಲೀಲ್ ಇದ್ದರು.

ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ ಅಧಿಕಾರ ಸ್ವೀಕಾರ



ಕಾಡಾ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಪಿ.ಮರಿಸ್ವಾಮಿ ಅವರನ್ನು ಶಾಸಕ ಎಚ್.ಎಂ.ಗಣೇಶ ಪ್ರಸಾದ್, ಮಾಜಿ ಶಾಸಕರಾದ ಎಸ್.ಜಯಣ್ಣ, ಆರ್.ನರೇಂದ್ರ, ಜಿ.ಎನ್. ನಂಜುಂಡಸ್ವಾಮಿ ಮತ್ತಿತರರು ಅಭಿನಂದಿಸಿದರು.

ಚಾಮರಾಜನಗರ, ಮಾ.5– ಕಾವೇರಿ ಜಲಾನಯನ ಅಚ್ಚುಕಟ್ಟು ಅಭಿವೃದ್ಧಿ ಪ್ರಾಧಿಕಾರದ(ಕಾಡಾ) ಅಧ್ಯಕ್ಷರಾಗಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಪಿ.ಮರಿಸ್ವಾಮಿ ಸೋಮವಾರ ಮೈಸೂರಿನ ಕಾಡಾ ಕಚೇರಿಯಲ್ಲಿ ಅಧಿಕಾರ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಶಾಸಕರಾದ ಎ.ಆರ್. ಕೃಷ್ಣಮೂರ್ತಿ, ಎಚ್.ಎಂ.ಗಣೇಶ ಪ್ರಸಾದ್, ದರ್ಶನ್ ಧ್ರುವನಾರಾಯಣ್, ಡಾ.ತಿಮ್ಮಯ್ಯ, ಮಾಜಿ ಶಾಸಕರಾದ ಎಸ್.ಜಯಣ್ಣ, ಆರ್.ನರೇಂದ್ರ, ಕಳಲೆ ಕೇಶವಮೂರ್ತಿ, ಜಿ.ಎನ್.ನಂಜುಂಡಸ್ವಾಮಿ ಹಾಗೂ ಅನೇಕ ಮುಖಂಡರು ಶುಭ ಕೋರಿದರು.

ಬಳಿಕ ಮಾತನಾಡಿದ ಅಧ್ಯಕ್ಷ ಪಿ.ಮರಿಸ್ವಾಮಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ನನ್ನ ಸೇವೆ ಗುರುತಿಸಿ ಕಾಡಾ ಅಧ್ಯಕ್ಷ ಸ್ಥಾನ ನೀಡಿದ್ದಾರೆ. ನನ್ನ ಹೆಸರನ್ನು ಶಿಫಾರಸ್ಸು ಮಾಡಿದ ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಯ ಉಸ್ತುವಾರಿ ಸಚಿವರು, ಎಲ್ಲಾ ಶಾಸಕರು, ಮುಖಂಡರಿಗೆ ನಾನು ಆಭಾರಿಯಾಗಿದ್ದೇನೆ ಎಂದು ತಿಳಿಸಿದರು.

ರೈತರ ಅಭಿವೃದ್ಧಿಗೆ ಒತ್ತು: ಕಾಡಾ ಅಚ್ಚುಕಟ್ಟು ಪ್ರದೇಶ ವ್ಯಾಪ್ತಿಯ ರೈತರ ಅನುಕೂಲಕ್ಕಾಗಿ ಅನೇಕ ಯೋಜನೆ ಹಾಗೂ ಸವಲತ್ತು ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ನಾಡಿಗೆ ಉತ್ತಮ ಮಳೆ ಬೆಳೆಯಾಗಿ ಸಮಸ್ತ ರೈತರು ಸುಖ ಶಾಂತಿ ನೆಮ್ಮದಿಯಿಂದ ಜೀವನ ನಡೆಸುವಂತಾಗಲಿ. ನಾಡು ಸುಭೀಕ್ಷೆಯಿಂದ ಕೂಡಿರಲಿ ಎಂದು ತಾಯಿ ಚಾಮುಂಡೇಶ್ವರಿಗೆ ಪೂಜೆ ಸಲ್ಲಿಸಿ, ಅಧಿಕಾರ ಸ್ವೀಕರಿಸಿದ್ದೇನೆ. ಜಿಲ್ಲೆಯ ಕೆರೆಗಳು, ನಾಲೆ ಹಾಗೂ ಸಂಪರ್ಕ ರಸ್ತೆಗಳ ಅಭಿವೃದ್ಧಿಪಡಿಸಿ, ಸರ್ಕಾರದ ಜನಪರ ಯೋಜನೆಗಳನ್ನು ತಲುಪಿಸುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಮಾಜಿ ಸಂಸದ ಎಂ.ಶಿವಣ್ಣ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷೆ ಡಾ.ಪುಷ್ಪಾ ಅಮರನಾಥ್, ಮೈಸೂರು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಮೂರ್ತಿ, ಚಾ.ನಗರ ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ.ಕೆ. ರವಿಕುಮಾರ್, ರಾಜ್ಯ ಕಾರ್ಯದರ್ಶಿ ಎಚ್.ಸಿ.ಬಸವರಾಜು, ಜಿಪಂ ಮಾಜಿ ಸದಸ್ಯರಾದ ಸದಾಶಿವಮೂರ್ತಿ, ಬಸವರಾಜು, ಕೊಪ್ಪಾಳಿ ಮಹದೇವನಾಯಕ, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಗಳಾದ ಚಿಕ್ಕಮಹದೇವ್, ಆರ್.ಮಹದೇವ್, ಬ್ಲಾಕ್ ಅಧ್ಯಕ್ಷರಾದ ಎ.ಎಸ್.ಗುರುಸ್ವಾಮಿ, ಮುನ್ನಾ, ತೋಟೇಶ್, ಹೊಂಗನೂರು ಚಂದ್ರು, ರಾಜಶೇಖರ್, ಮುನಿರಾಜು, ಎಪಿಎಂಸಿ ಮಾಜಿ ಅಧ್ಯಕ್ಷ ಶಿವಸ್ವಾಮಿ, ರಾಜಣ್ಣ, ಶೇಖರ್, ರಾಜ್ಯ ಕನಿಷ್ಠ ವೇತನ ಸಲಹಾ ಮಂಡಳಿ ಮಾಜಿ ಅಧ್ಯಕ್ಷ ಆರ್.ಉಮೇಶ್, ಎಪಿಎಂಸಿ ನಿರ್ದೇಶಕ ಆಲೂರು ಪ್ರದೀಪ್, ಗ್ರಾಪಂ ಮಾಜಿ ಅಧ್ಯಕ್ಷ ಎಸ್.ಪ್ರಭು ಇದ್ದರು.

ಗ್ರಾಮಸ್ಥರ ಅಭಿನಂದನೆ: ಅಧಿಕಾರ ಸ್ವೀಕರಿಸಿದ ಪಿ.ಮರಿಸ್ವಾಮಿ ಅವರನ್ನು ನಂಜೇದೇವನಪುರ ಗ್ರಾಮಸ್ಥರು ಅಭಿನಂದಿಸಿದರು. ಈ ಸಂದರ್ಭದಲ್ಲಿ ಶ್ರೀ ರಾಜೇಂದ್ರ ಸ್ವಾಮೀಜಿ, ಬ್ಲಾಕ್ ಕಾಂಗ್ರೆಸ್ ಮಾಜಿ ಅಧ್ಯಕ್ಷ ಪಿ.ರಾಜಣ್ಣ, ಗ್ರಾಪಂ ಅಧ್ಯಕ್ಷ ಪಿ.ಶೇಖರ್, ಉಪಾಧ್ಯಕ್ಷ ಗುರುಮಲ್ಲಪ್ಪ, ಮಾಜಿ ಸದಸ್ಯ ಎನ್.ಎಂ.ಮಹೇಶ್, ರಂಗ ಭೂಮಿ ಕಲಾವಿದ ಎನ್.ಆರ್. ಪುರುಷೋತ್ತಮ್, ರಾಜೇಶ್, ಬೆಳ್ಳಿ ಮಾದಪ್ಪ, ಎಸ್. ಮಾದಪ್ಪ, ಸುನೀಲ್, ಎನ್.ಜೆ.ಬಸವರಾಜು ಅನೇಕರು ಇದ್ದರು.

ಪೊಲೀಸರು ಸಮಾಜಮುಖಿಯಾಗಿ ಕಾರ್ಯ ನಿರ್ವಹಿಸಿ

- ಜಿಲ್ಲಾ ನ್ಯಾಯಾಧೀಶೆ ಬಿ.ಎಸ್.ಭಾರತಿ ಸಲಹೆ
- ಪೊಲೀಸರಿಗೆ ಜಿಲ್ಲಾಮಟ್ಟದ ಕಾರ್ಯಾಗಾರ



ಚಾಮರಾಜನಗರ ಎಸ್ಪಿ ಕಚೇರಿ ಸಭಾಂಗಣದಲ್ಲಿ ಪೊಲೀಸ್ ಅಧಿಕಾರಿಗಳಿಗೆ ಆಯೋಜಿಸಿದ್ದ ಕಾರ್ಯಾಗಾರವನ್ನು ನ್ಯಾಯಾಧೀಶೆ ಬಿ.ಎಸ್.ಭಾರತಿ ಉದ್ಘಾಟಿಸಿದರು. ನ್ಯಾಯಾಧೀಶ ಎಂ.ಶ್ರೀಧರ, ಎಎಸ್ಪಿ ಟಿ.ಜೆ.ಉದ್ದೇಶ್, ಉಮ್ಮತ್ತೂರು ಇಂದುಶೇಖರ್ ಮತ್ತಿತರರಿದ್ದರು.

ಚಾಮರಾಜನಗರ, ಮಾ.5–ಮಹಿಳೆಯರು ಮತ್ತು ಮಕ್ಕಳ ರಕ್ಷಣೆ ಹಾಗೂ ಸಬಲೀಕರಣಕ್ಕಾಗಿ ಪೊಲೀಸರು ಅಂತಃಕರಣದಿಂದ ಸಮಾಜಮುಖಿಯಾಗಿ ಕಾರ್ಯನಿರ್ವಹಿಸಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶೆ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷೆ ಬಿ.ಎಸ್.ಭಾರತಿ ಸಲಹೆ ನೀಡಿದರು.

ನಗರದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಪೊಲೀಸ್ ಇಲಾಖೆ ವತಿಯಿಂದ ಬೇಟಿ ಬಚಾವೋ–ಬೇಟಿ ಪಡಾವೋ ಕಾರ್ಯಕ್ರಮದಡಿ ಬಾಲ್ಯವಿವಾಹ, ಬಾಲಕಾರ್ಮಿಕ ಪದ್ಧತಿ ನಿಷೇಧ, ಪೋಕ್ಸೋ ಕಾಯ್ದೆ ಹಾಗೂ ಭ್ರೂಣಲಿಂಗ ಪತ್ತೆ ನಿಷೇಧ ಕುರಿತು ಪೊಲೀಸ್ ಅಧಿಕಾರಿಗಳಿಗೆ ಆಯೋಜಿಸಿದ್ದ ಜಿಲ್ಲಾಮಟ್ಟದ ಅರಿವು ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯರು ಮತ್ತು ಮಕ್ಕಳ ಮೇಲೆ ದೌರ್ಜನ್ಯಗಳು ನಿರಂತರವಾಗಿ ನಡೆಯುತ್ತಿವೆ. ಪೊಲೀಸರು ನೊಂದವರನ್ನು ಸ್ವಂತ ಕುಟುಂಬದವರಂತೆ ಭಾವಿಸಿ, ದೌರ್ಜನ್ಯ ಕೃತ್ಯಗಳನ್ನು ಗಂಭೀರವಾಗಿ ಪರಿಗಣಿಸಿ ದೂರು ದಾಖಲಿಸಿಕೊಂಡು ಸಂತ್ರಸ್ಥರಿಗೆ ನ್ಯಾಯ ದೊರಕಿಸಲು ಮುಂದಾಗಬೇಕು ಎಂದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಟಿ.ಜೆ.ಉದ್ದೇಶ್ ಮಾತನಾಡಿ, ಮಹಿಳೆಯರು ಮತ್ತು ಮಕ್ಕಳ ಮೇಲಿನ ದೌರ್ಜನ್ಯ ತಡೆಯಲು ಸರ್ಕಾರ ಹಲವು ಕಾಯ್ದೆಗಳನ್ನು ಜಾರಿಗೊಳಿಸಿದೆ. ಸಬಲೀಕರಣಕ್ಕಾಗಿ ಸಾಕಷ್ಟು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಕಾಯ್ದೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಪೊಲೀಸರು ಸಂವೇದನಾಶೀಲತೆಯಿಂದ ಕಾರ್ಯ ನಿರ್ವಹಿಸಬೇಕು. ಹೆಣ್ಣುಮಕ್ಕಳ ವಿಚಾರದಲ್ಲಿ ಮಾನವೀಯತೆಯಿಂದ ನಡೆದುಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ಶ್ರೀಧರ ಮಾತನಾಡಿ, ಮಹಿಳೆಯರು ಮತ್ತು ಮಕ್ಕಳ ಬಗ್ಗೆ ನಮ್ಮಲ್ಲಿರುವ ತಪ್ಪು ಗ್ರಹಿಕೆಗಳನ್ನು ಹೋಗಲಾಡಿಸಲು ಕಾರ್ಯಾಗಾರದ ಅರಿವು ಅಧಿಕಾರಿಗಳಿಗೆ ಅತ್ಯಗತ್ಯವಾಗಿದೆ. ಪ್ರತಿಯೊಬ್ಬರು ಸಾಂವಿಧಾನಿಕ ಹಕ್ಕುಗಳನ್ನು ನೆಮ್ಮದಿಯಿಂದ ಅನುಭವಿಸಲು ಹಾಗೂ ಸಾಮಾಜಿಕ ಸ್ವಾಸ್ಥ್ಯ ಕಾಪಾಡಲು ಪೊಲೀಸ್ ಇಲಾಖೆ ಸಹಕಾರ ನೀಡಬೇಕು ಎಂದು ತಿಳಿಸಿದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಉಮ್ಮತ್ತೂರು ಇಂದುಶೇಖರ್ ಮಾತನಾಡಿ, ಬಾಲ್ಯವಿವಾಹದಿಂದ ಹೆಣ್ಣುಮಕ್ಕಳ ಶಿಕ್ಷಣ ಮತ್ತು ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗಿ ಭವಿಷ್ಯದ ಜೀವನ ಕಷ್ಟಸಾಧ್ಯವಾಗಲಿದೆ. ಪ್ರತಿಯೊಂದು ಕಾಯ್ದೆಗಳ ಅನುಷ್ಠಾನದಲ್ಲಿ ಇಲಾಖೆಗಳು ಸಮನ್ವಯದಿಂದ ಕೆಲಸ ನಿರ್ವಹಿಸಿ ಮಹಿಳೆಯರು ಮತ್ತು ಮಕ್ಕಳಿಗೆ ಸಾಮಾಜಿಕ ನ್ಯಾಯ ಒದಗಿಸಬೇಕು ಎಂದರು.

ಜಿಲ್ಲಾ ನ್ಯಾಯಾಲಯದ ಸರ್ಕಾರಿ ಅಭಿಯೋಜಕ ಎಸ್.ಶಿವಕುಮಾರ್, ಮಕ್ಕಳ ಸ್ನೇಹಿ ನ್ಯಾಯಾಲಯದ ವಿಶೇಷ ಸರ್ಕಾರಿ ಅಭಿಯೋಜಕ ಕೆ.ಯೋಗೀಶ್ ಹಾಗೂ ಬಾಲನ್ಯಾಯ ಮಂಡಳಿಯ ಸದಸ್ಯ ಟಿ.ಜೆ.ಸುರೇಶ್, ಮಕ್ಕಳ ಕಲ್ಯಾಣ ವಿಶೇಷ ಘಟಕದ ಹಿರಿಯ ಪೊಲೀಸ್ ಅಧಿಕಾರಿ ಲಕ್ಷ್ಮಯ್ಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಜೆ.ಆರ್.ದಿನೇಶ್, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷೆ ಸರಸ್ವತಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಕಾರ್ಯಕ್ರಮ ಸಂಯೋಜಕ ಸಿದ್ದಶೆಟ್ಟಿ ಉಪಸ್ಥಿತರಿದ್ದರು.

ಬಿಆರ್‌ಟಿ ಪ್ರದೇಶದ ಕಾಳ್ಗಿಚ್ಚು ಸಂಪೂರ್ಣ ಹತೋಟಿಗೆ

ಚಾಮರಾಜನಗರ, ಮಾ.5– ತಾಲೂಕಿನ ಬಿಳಿಗಿರಿರಂಗನಾಥಸ್ವಾಮಿ ಹುಲಿ ಸಂರಕ್ಷಿತ ಪ್ರದೇಶದ ಪುಣಜನೂರು ವಲಯದಲ್ಲಿ ಸೋಮವಾರ ಕಾಣಿಸಿಕೊಂಡಿದ್ದ ಕಾಳ್ಗಿಚ್ಚು ಮಂಗಳವಾರ ಸಂಪೂರ್ಣ ಹತೋಟಿಗೆ ಬಂದಿದೆ.



ಕಾಳ್ಗಿಚ್ಚಿನಿಂದ ಸುಮಾರು 50 ಎಕರೆಗೂ ಹೆಚ್ಚು ಅರಣ್ಯ ಪ್ರದೇಶ ಸುಟ್ಟು ಹೋಗಿದೆ. ಪುಣಜನೂರಿನಿಂದ ಬೇಡಗುಳಿಗೆ ಸಂಪರ್ಕ ಕಲ್ಪಿಸುವ ರಸ್ತೆ ಮಾರ್ಗದ ಕುರಿಮಂದೆ, ಬಜೆಬಾವಿ ಪ್ರದೇಶದ ಮೂರು ಕಡೆ ಕಾಳ್ಗಿಚ್ಚು ಕಾಣಿಸಿಕೊಂಡಿದೆ. ಇದರಲ್ಲಿ ಎರಡು ಕಡೆ ಬೆಂಕಿ ಆರಿಸಲಾಗಿದೆ. ಇನ್ನೊಂದು ಕಡೆ ಬೆಂಕಿ ನಂದಿಸಲು ಅರಣ್ಯ ಇಲಾಖೆ ಸಿಬ್ಬಂದಿ ಹರಸಾಹಸ ಪಡುತ್ತಿದ್ದಾರೆ ಎಂದು ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶದ ಡಿಸಿಎಫ್ ದೀಪ ಜೆ.ಕಾಂಟ್ರ್ಯಾಕ್ಟರ್ ತಿಳಿಸಿದ್ದಾರೆ.

ಬೆಂಕಿ ಹತ್ತೋಟಿಗೆ: ಸೋಮವಾರ ಬೆಳಗ್ಗೆಯೇ ಬೆಂಕಿ ಕಾಣಿಸಿಕೊಂಡಿತ್ತು. ಸಂಜೆ ವೇಳೆಗೆ ಎರಡು ಕಡೆ ಹತೋಟಿಗೆ ಬಂದಿತ್ತು. ಮಂಗಳವಾರ ಬೆಳಗ್ಗೆ ಬೆಂಕಿಯನ್ನು ಸಂಪೂರ್ಣವಾಗಿ ನಂದಿಸಲಾಗಿದೆ. ಘಟನೆಯಿಂದ ಸುಮಾರು 40 ರಿಂದ 50 ಎಕರೆ ಅರಣ್ಯ ಪ್ರದೇಶ ಬೆಂಕಿಗಾಹುತಿಯಾಗಿದೆ. ಅಂದಾಜು 50 ಎಕರೆ ಸುಟ್ಟಿರಬಹುದು. ಇದು ನೆಲ ಬೆಂಕಿಯಾಗಿದ್ದು, ಎತ್ತರಕ್ಕೆ ವ್ಯಾಪಿಸಿಲ್ಲ. ಅಧಿಕಾರಿಗಳು ಹಾಗೂ ಸಿಬ್ಬಂದಿ ಪರಿಶ್ರಮದಿಂದ ಬೆಂಕಿಯನ್ನು ಸಂಪೂರ್ಣವಾಗಿ ನಂದಿಸಲಾಗಿದೆ ಎಂದು ಡಿಸಿಎಫ್ ದೀಪ ಜೆ.ಕಾಂಟ್ರ್ಯಾಕ್ಟರ್ ತಿಳಿಸಿದ್ದಾರೆ.

ಅರಕಲವಾಡಿಯಲ್ಲಿ ಕೊಂಡೋತ್ಸವ

ಚಾಮರಾಜನಗರ, ಮಾ.5– ತಾಲೂಕಿನ ಅರಕಲವಾಡಿಯ ಶಕ್ತಿ ದೇವತೆ ಮಾರಮ್ಮ ದೇವಿಯ ಕೊಂಡೋತ್ಸವ ಮಂಗಳವಾರ ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನೆರವೇರಿತು.

ಗ್ರಾಮದ ಕೆರೆಯಲ್ಲಿ ಗಂಗಾಪೂಜೆ ನೆರವೇರಿದ ನಂತರ ಸತ್ತಿಗೆ ಸೂರಪಾನಿ ಸಮೇತ ಹೆಣ್ಣು ಮಕ್ಕಳು ತಂಬಿಟ್ಟಿನ ಆರತಿಯೊಂದಿಗೆ ದೇವಿಯ ಮೂರ್ತಿಯನ್ನು ಮೆರವಣಿಗೆಯಲ್ಲಿ ಕರೆ ತರಲಾಯಿತು. ನಂತರ ದೇವರು ಹೊತ್ತ ಅರ್ಚಕರು ಅಗ್ನಿಕುಂಡದ ಸುತ್ತ ಮೂರು ಸುತ್ತು ಪ್ರದಕ್ಷಿಣೆ ನಡೆಸಿ ಕೊಂಡಹಾಯ್ದರು.

ಸಾವಿರಾರು ಭಕ್ತರು ದೇವರು ಅಗ್ನಿಕೊಂಡ ಪ್ರವೇಶಿಸುವುದನ್ನು ನೋಡಿ ಕಣ್ತುಂಬಿಕೊಂಡರು. ನಂತರ ಅಲ್ಲೇ ಇರುವ ಮಾರಮ್ಮ ದೇವಿಯ ದೇವಸ್ಥಾನದಲ್ಲಿ ತಂಬಿಟ್ಟಿನ ಆರತಿಯನ್ನು ದೇವಿಗೆ ಸಮರ್ಪಿಸಿ ಕುಟುಂಬಕ್ಕೆ ಒಳ್ಳೆಯದಾಗಲಿ. ಎಲ್ಲಾ ಸಮಸ್ಯೆಗಳು ದೂರವಾಗಲಿ ಎಂದು ಪ್ರಾರ್ಥಿಸಿದರು. ಹರದನಹಳ್ಳಿ ನಟರಾಜು ಹಾಗೂ ತಂಡದವರು ಭಕ್ತಿಗೀತೆ, ಜನಪದ, ಚಲನಚಿತ್ರ ಗೀತೆಗಳನ್ನು ಹಾಡಿದರು.

ಇಂದು ಜ್ಯೋತಿರ್ಲಿಂಗಗಳ ಪುಣ್ಯದರ್ಶನ


ಚಾಮರಾಜನಗರ, ಮಾ.5–88ನೇ ತ್ರಿಮೂರ್ತಿ ಶಿವ ಜಯಂತಿ ಮಹೋತ್ಸವ ಹಾಗೂ ವಿಶ್ವ ಪ್ರಸಿದ್ಧ ದ್ವಾದಶ ಜ್ಯೋತಿರ್ಲಿಂಗಗಳ ಪುಣ್ಯ ದರ್ಶನ ಮೇಳ ಮಾ.6ರಂದು ನಗರದಲ್ಲಿ ನಡೆಯಲಿದೆ ಎಂದು ಸ್ವಾಮಿ ವಿವೇಕಾನಂದ ರಾಷ್ಟ್ರ ರಾಜ್ಯ ಸದ್ಭಾವನಾ ಪ್ರಶಸ್ತಿ ಪುರಸ್ಕೃತೆ ರಾಜಯೋಗಿನಿ ಬ್ರಹ್ಮಾಕುಮಾರಿ ದಾನೇಶ್ವರೀಜೀ ತಿಳಿಸಿದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಸಂಜೆ 4ಕ್ಕೆ ಮೇಳಕ್ಕೆ ಚಾಲನೆ ನೀಡಲಾಗುವುದು. 5.30ಕ್ಕೆ ರಾಜಯೋಗ ವಿದ್ಯಾರ್ಥಿಗಳಿಂದ ಶಾಂತಿ ಶೋಭಾಯಾತ್ರೆ ಪ್ರಮುಖ ಬೀದಿಗಳಲ್ಲಿ ನಡೆಯಲಿದೆ. ಕಾರ್ಯಕ್ರಮದ ಸಾನ್ನಿಧ್ಯವನ್ನು ಮೈಸೂರು ಉಪವಲಯದ ಬ್ರಹ್ಮಾಕುಮಾರಿಸ್ ಮುಖ್ಯ ಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ಲಕ್ಷ್ಮೀಜೀ ವಹಿಸಲಿದ್ದು, ಹರವೆ ವಿರಕ್ತ ಮಠದ ಶ್ರೀ ಸರ್ಪಭೂಷಣ ಸ್ವಾಮೀಜಿ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಜಿಲ್ಲಾಧಿಕಾರಿ ಶಿಲ್ಪಾನಾಗ್ ಅಧ್ಯಕ್ಷತೆ ವಹಿಸಲಿದ್ದು, ಬಿಳಿಗಿರಿರಂಗನ ಬೆಟ್ಟದ ವಿಶ್ವಶಾಂತಿನಿಕೇತನ ಆಶ್ರಮದ ಶ್ರೀ ಶಾಂತಮಲ್ಲಿಕಾರ್ಜುನಸ್ವಾಮೀಜಿ ಧ್ವಜಾರೋಹಣ ನೆರವೇರಿಸಲಿದ್ದಾರೆ ಎಂದರು.



ಮೇಳದಲ್ಲಿ ವಿಶೇಷವಾಗಿ ಹಾಲೋಗ್ರಾಂ ಲಿಂಗ ಪ್ರದರ್ಶಿಸಲಾಗುವುದು. ಪ್ರತಿನಿತ್ಯ ಬೆಳಗ್ಗೆ ಮತ್ತು ಸಂಜೆ 6.30 ರಿಂದ ರಾತ್ರಿ 8ರವರೆಗೆ ಸಾರ್ವಜನಿಕರಿಗೆ ಸುಖ–ಶಾಂತಿ, ಆರೋಗ್ಯಕ್ಕಾಗಿ ಉಚಿತ ಪ್ರವಚನ ನಡೆಯಲಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಓಂ ಶಾಂತಿ ನ್ಯೂಸ್ ಸರ್ವಿಸ್‌ನ ಬಿ.ಕೆ. ಆರಾಧ್ಯ ಹಾಜರಿದ್ದರು.


ಸಾರಿಗೆ ಬಸ್ ಡಿಕ್ಕಿ: ಸೈಕಲ್ ಸವಾರ ಸ್ಥಳದಲ್ಲೇ ಸಾವು



ಕೊಳ್ಳೇಗಾಲ, ಮಾ.5–ಸಾರಿಗೆ ಬಸ್ ಡಿಕ್ಕಿ ಹೊಡೆದ ಪರಿಣಾಮ ಸೈಕಲ್ ಸವಾರ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಕಾಮಗೆರೆ ಗ್ರಾಮದ ಎಬಿನೇಜರ್ ಕಾಂಪ್ಲೆಕ್ಸ್ ಮುಂಭಾಗ ಮಂಗಳವಾರ ನಡೆದಿದೆ. ಕಾಮಗೆರೆ ಗ್ರಾಮದ ನಿಂಗಪ್ಪ (60) ಮೃತ ವ್ಯಕ್ತಿ. ಮಹದೇಶ್ವರಬೆಟ್ಟದಿಂದ ಕೊಳ್ಳೇಗಾಲದ ಕಡೆಗೆ ಬರುತ್ತಿದ್ದ ನಾಗಮಂಗಲ ಡಿಪೋ ಬಸ್ ಕಾಮಗೆರೆ ಗ್ರಾಮದ ಮುಖ್ಯರಸ್ತೆ ಎಬಿನೇಜರ್ ಕಾಂಪ್ಲೆಕ್ಸ್ ಮುಂಭಾಗ ಸೈಕಲ್‌ಗೆ ಡಿಕ್ಕಿ ಹೊಡೆದಿದೆ. ಪರಿಣಾಮ ಈತನ ತಲೆಗೆ ತೀವ್ರ ಪೆಟ್ಟು ಬಿದ್ದು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಕೊಳ್ಳೇಗಾಲ ಗ್ರಾಮಾಂತರ ಠಾಣೆ ಪೊಲೀಸರು ಸ್ಥಳ ಪರಿಶೀಲಿಸಿ, ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಚಿತ್ರ ನಿರ್ದೇಶಕ ಎಂ.ಎಸ್.ಸತ್ಯುಗೆ 'ಜೀವಮಾನ ಸಾಧನೆ ಪ್ರಶಸ್ತಿ'

ಬೆಂಗಳೂರು: ಖ್ಯಾತ ಚಲನಚಿತ್ರ ನಿರ್ದೇಶಕ, ಹಿರಿಯ ರಂಗಕರ್ಮಿ ಹಾಗೂ ಕಲಾ ನಿರ್ದೇಶಕರಾದ ಮೈಸೂರು ಶ್ರೀನಿವಾಸ ಸತ್ಯು (ಎಂ.ಎಸ್.ಸತ್ಯು) ಅವರಿಗೆ ರಾಜ್ಯ ಸರ್ಕಾರದ ವತಿಯಿಂದ 15ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ 'ಜೀವಮಾನ ಸಾಧನೆ ಪ್ರಶಸ್ತಿ'ಗೆ ಆಯ್ಕೆ ಮಾಡಲಾಗಿದೆ.



ಈ ಬಗ್ಗೆ ಸ್ವತಃ ಸಿಎಂ ಸಿದ್ದರಾಮಯ್ಯ ಅವರು ಟ್ವಿಟರ್‌ನಲ್ಲಿ ಮಾಹಿತಿ ನೀಡಿದ್ದು, 'ಅಂತಾರಾಷ್ಟ್ರೀಯ ಖ್ಯಾತಿಯ ಚಲನಚಿತ್ರ ನಿರ್ದೇಶಕ, ಹಿರಿಯ ರಂಗಕರ್ಮಿ ಹಾಗೂ ಕಲಾ ನಿರ್ದೇಶಕರಾದ ಮೈಸೂರು ಶ್ರೀನಿವಾಸ ಸತ್ಯು (ಎಂ.ಎಸ್.ಸತ್ಯು) ಅವರು ಕಲಾಜಗತ್ತಿಗೆ ಸಲ್ಲಿಸಿರುವ ಅನನ್ಯ ಸೇವೆಯನ್ನು ಗುರುತಿಸಿ 15ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ 'ಜೀವಮಾನ ಸಾಧನೆ ಪ್ರಶಸ್ತಿ'ಗೆ ಆಯ್ಕೆ ಮಾಡಲಾಗಿದೆ ಎಂದು ಟ್ವೀಟ್ ಮಾಡಿದ್ದಾರೆ.

ಸತ್ಯು ಅವರ ನಿರ್ದೇಶನದ ಹಿಂದಿ ಚಿತ್ರ ಗರಂ ಹಲವಾರು ರಾಷ್ಟ್ರೀಯ – ಅಂತಾರಾಷ್ಟ್ರೀಯ ಪ್ರಶಸ್ತಿ ಗಳಿಸಿದ್ದರೆ, ಕನ್ನಡದ 'ಬರ' ರಾಜ್ಯ ಮತ್ತು ರಾಷ್ಟ್ರಮಟ್ಟದ ಪ್ರಶಸ್ತಿಗಳನ್ನು ಪಡೆದಿತ್ತು. ಕಲಾ ನಿರ್ದೇಶಕರಾಗಿ ಅವರು ನಿರ್ದೇಶಿಸಿದ ಮೊದಲ ಚಲನಚಿತ್ರವಾದ 'ಹಕೀಕತ್' ಫಿಲ್ಮ್ ಫೇರ್ ಪ್ರಶಸ್ತಿಯನ್ನು ಪಡೆದಿತ್ತು. ಅವರ 'ದಾರಾಶೀಕೋ' ನಾಟಕವು ಆಧುನಿಕ ಉತ್ಕೃಷ್ಟ ನಾಟಕವೆಂದು ಗುರುತಿಸಲ್ಪಟ್ಟಿದ್ದು, ಅವರ ಇನ್ನೊಂದು ಸಾಧನೆಯಾಗಿದೆ. ಹೀಗೆ ನಮ್ಮೂರಿನಲ್ಲಿ ಹುಟ್ಟಿದ ಮೇರು ಸಾಧಕ, ಹಿರಿಯ ರಂಗಕರ್ಮಿಯೊಬ್ಬರು ಈ ಪ್ರಶಸ್ತಿಗೆ ಆಯ್ಕೆಯಾಗಿರುವುದು ಅತ್ಯಂತ ಖುಷಿಯ ವಿಚಾರ. ಅವರಿಗೆ ನನ್ನ ಹೃತ್ಪೂರ್ವಕ ಅಭಿನಂದನೆಗಳು ಎಂದು ಸಿಎಂ ಸಿದ್ದರಾಮಯ್ಯ ಟ್ವೀಟ್ ಮಾಡಿದ್ದಾರೆ.

ಲೋಕಸಭಾ ಚುನಾವಣೆಯ ಪೂರ್ವ ಸಿದ್ಧತೆ ಬಗ್ಗೆ ಜಿಲ್ಲಾಧಿಕಾರಿಗಳ ಸಭೆ

ಸೂಕ್ಷ್ಮ, ಅತಿ ಸೂಕ್ಷ್ಮ ಮತಗಟ್ಟೆಗಳಿಗೆ ಭೇಟಿ ನೀಡಿ ವರದಿ ನೀಡುವಂತೆ ಸೂಚನೆ

●ನೀತಿ ಸಂಹಿತೆ ಜಾರಿಯಾದ ತಕ್ಷಣ ಚೆಕ್ ಪೋಸ್ಟ್ ತೆರೆಯಿರಿ ●ನಿಗದಿತ ಅವಧಿಯಲ್ಲಿ ಪೋಸ್ಟರ್, ಬ್ಯಾನರ್ ತೆರವುಗೊಳಿಸಿ ●ಮುಕ್ತ, ನ್ಯಾಯಸಮ್ಮತ, ಪಾರದರ್ಶಕ ಚುನಾವಣೆ ಯಶಸ್ವಿಗೊಳಿಸಿ

ಮೈಸೂರು, ಮಾ.5(ಬಿಎಲ್‌ಯು)– ಸೂಕ್ಷ್ಮ ಮತ್ತು ಅತೀ ಸೂಕ್ಷ್ಮ ಮತಗಟ್ಟೆಗಳಿಗೆ ಭೇಟಿ ನೀಡಿ ವರದಿ ಸಲ್ಲಿಸಿ ಎಂದು ಮೈಸೂರು ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಹಾಗೂ ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.



ಲೋಕಸಭಾ ಚುನಾವಣೆ ಸಂಬಂಧ ಮೈಸೂರಿನ ಕೆ.ಆರ್.ನಗರ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ಮೈಸೂರು ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಹಾಗೂ ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ್ ಅಧಿಕಾರಿಗಳ ಸಭೆ ನಡೆಸಿದರು. (ಎಡಚಿತ್ರ), ಸಭೆಯಲ್ಲಿ ಭಾಗವಹಿಸಿದ್ದ ಅಧಿಕಾರಿಗಳನ್ನು (ಬಲಚಿತ್ರ) ಕಾಣಬಹುದು.

ಮೈಸೂರಿನ ಕೆ.ಆರ್.ನಗರ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಇಂದು ಲೋಕಸಭಾ ಚುನಾವಣೆ ಸಂಬಂಧ ಪೂರ್ವ ಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಮತಗಟ್ಟೆಗಳಿಗೆ ಭೇಟಿ ನೀಡಿ ಅದಕ್ಕೆ ಸಂಬಂಧಿಸಿದಂತೆ ನಮೂನೆಗಳಾದ ವಿಎಂ 1, ವಿಎಂ 2 ಮತ್ತು ವಿಎಂ 3 ಭರ್ತಿ ಮಾಡಿ. ಈ ಸಂಬಂಧ ಪೊಲೀಸ್ ಇಲಾಖೆಯ ಅಧಿಕಾರಿ ಜೊತೆ ಸಮನ್ವಯ ಸಾಧಿಸಿ ಭರ್ತಿ ಮಾಡಿದ ವರದಿಯನ್ನು ಕೂಡಲೇ ಸಲ್ಲಿಸಿ ಎಂದು ನಿರ್ದೇಶನ ನೀಡಿದರು.

ಪ್ರತಿಯೊಂದು ಮತಗಟ್ಟೆಗೆ ಭೇಟಿ ನೀಡಿ ಮೂಲಭೂತ ಸೌಕರ್ಯಗಳನ್ನು ಪರಿಶೀಲನೆ ನಡೆಸಿ. ಒಂದು ವೇಳೆ ನ್ಯೂನತೆಗಳಿದ್ದರೆ ಸರಿಪಡಿಸಿ ಎಂದು ಸೆಕ್ಟರ್ ಅಧಿಕಾರಿಗಳಿಗೆ ಹೇಳಿದರು.

ಮಾದರಿ ನೀತಿ ಸಂಹಿತೆ ಜಾರಿಯಾದ ತಕ್ಷಣ ಅಂತರ ಜಿಲ್ಲಾ ಗಡಿಗಳಲ್ಲಿ ಚೆಕ್ ಪೋಸ್ಟ್ ನಿರ್ಮಾಣ ಮಾಡಿ. ಚೆಕ್‌ಪೋಸ್ಟ್‌ಗಳ ಸಿಬ್ಬಂದಿಗೆ ಮೂಲಭೂತ ಸೌಕರ್ಯ ಕಲ್ಪಿಸಿ ನಿಯಮಿತವಾಗಿ ವಾಹನ ತಪಾಸಣೆ ನಡೆಸಿ ಎಂದು ಸೂಚಿಸಿದರು.

ವಿವಿಧ ಇಲಾಖೆ ಜೊತೆ ಸಮನ್ವಯತೆ ಸಾಧಿಸುವುದು ಸೆಕ್ಟರ್ ಆಫೀಸರ್‌ಗಳ ಜವಾಬ್ದಾರಿ ಹಾಗೂ ಕರ್ತವ್ಯವಾಗಿದ್ದು, ಇದನ್ನು ಪ್ರಮುಖವಾಗಿ ಅರಿಯಬೇಕು. ಸೆಕ್ಟರ್ ಅಧಿಕಾರಿಗಳ, ಇವಿಎಂ ಅಧಿ ಕಾರಿಗಳ ಕೈಪಿಡಿ ಹಾಗೂ ಚುನಾವಣಾ ಆಯೋಗದಿಂದ ಬರುವ ಎಲ್ಲಾ ಸುತ್ತೋಲೆಗಳಂತೆ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸಬೇಕು ಎಂದು ಡಾ.ರಾಜೇಂದ್ರ ಹಾಗೂ ಡಾ.ಕುಮಾರ್ ತಾಕೀತು ಮಾಡಿದರು.

ಸಾರ್ವಜನಿಕ ಪ್ರದೇಶಗಳಲ್ಲಿ ಅಳವಡಿಸುವ ಪೋಸ್ಟರ್ ಹಾಗೂ ಬ್ಯಾನರ್‌ಗಳನ್ನು ನಿಗದಿತ ಅವಧಿಯೊಳಗೆ ತೆರವುಗೊಳಿಸಬೇಕು. ಜೊತೆಗೆ ಕಾಮಗಾರಿ ಯಾವ ಹಂತದಲ್ಲಿದೆ ಎಂಬ ಪಟ್ಟಿ ತಯಾರಿಸಿ ವರದಿ ನೀಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಮುಕ್ತ, ನ್ಯಾಯ ಸಮ್ಮತ ಹಾಗೂ ಪಾರದರ್ಶಕ ಚುನಾವಣೆ ನಡೆಸುವ ಸಂಬಂಧ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸಿ. ಯಾವುದೇ ಲೋಪಗಳು ಆಗದಂತೆ ಎಚ್ಚರಿಕೆ ವಹಿಸಿ ಎಂದು ಹೇಳಿದರು.

ಎಆರ್ ಒ ಸುಪ್ರಿಯಾ ಬಣಗಾರ್, ಕೆ.ಆರ್.ನಗರ ಮತ್ತು ಸಾಲಿಗ್ರಾಮ ತಹಶೀಲ್ದಾರ್ ಹಾಗೂ ಕಾರ್ಯ ನಿರ್ವಹಣಾಧಿಕಾರಿಗಳು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಶೇ. 60ರ ಪ್ರಮಾಣದ ಕನ್ನಡ ನಾಮಫಲಕ ಆದೇಶ ಪಾಲನೆಗೆ ವಾಣಿಜ್ಯ ಮಳಿಗೆಗಳ ಮಾಲೀಕರ ನಿರ್ಧಾರ



ಕೆಆರ್ ಸರ್ಕಲ್ ಅಂಗಡಿಯೊಂದರಲ್ಲಿ ಕನ್ನಡ ನಾಮಫಲಕ ಅಳವಡಿಸುತ್ತಿರುವುದು.

ಮೈಸೂರು, ಮಾ. 5(ಆರ್‌ಕೆ)– ಶೇ. 60ರಷ್ಟು ಕನ್ನಡ ನಾಮಫಲಕ ಹಾಕಬೇಕೆಂಬ ಸರ್ಕಾರದ ಆದೇಶ ಪಾಲಿಸಲು ಮೈಸೂರಿನ ವಾಣಿಜ್ಯ ಮಳಿಗೆಗಳು, ಸಂಸ್ಥೆ, ಉದ್ದಿಮೆಗಳ ಮಾಲೀಕರು ನಿರ್ಧರಿಸಿದ್ದಾರೆ.

ಕರ್ನಾಟಕದಲ್ಲಿ ಕನ್ನಡ ಮಾತೃಭಾಷೆಯಾಗಿರುವುದರಿಂದ ರಾಜ್ಯದ ಎಲ್ಲಾ ಅಂಗಡಿ–ಮುಂಗಟ್ಟು ಸರ್ಕಾರಿ, ಖಾಸಗಿ ಕಚೇರಿ, ಶಾಲಾ ಕಾಲೇಜು, ಉದ್ದಿಮೆ, ಕೈಗಾರಿಕೆ, ಸಂಘ ಸಂಸ್ಥೆಗಳು ಕನ್ನಡ ನಾಮಫಲಕ ಅಳವಡಿಸುವಂತೆ ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ ಅಧ್ಯಕ್ಷ ನಾರಾಯಣಗೌಡ ನೇತೃತ್ವದಲ್ಲಿ ಕನ್ನಡ ಅಭಿಮಾನಿಗಳು, ಕಾರ್ಯಕರ್ತರು ಇತ್ತೀಚೆಗೆ ಬೆಂಗಳೂರಲ್ಲಿ ಭಾರೀ ಪ್ರತಿಭಟನೆ ನಡೆಸಿ ಸರ್ಕಾರದ ಗಮನ ಸೆಳೆದಿದ್ದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವು ಶೇ. 60ರಷ್ಟು ಕನ್ನಡ ಫಲಕ ಅಳವಡಿಸಬೇಕೆಂದು ಆದೇಶ ಹೊರಡಿಸಿತ್ತು.

ಇಂದು ಕರ್ನಾಟಕ ರಕ್ಷಣಾ ವೇದಿಕೆ ಮೈಸೂರು ಜಿಲ್ಲಾಧ್ಯಕ್ಷ ಪ್ರವೀಣ್‌ಕುಮಾರ್ ನೇತೃತ್ವದಲ್ಲಿ ಸೆಂಟ್ ಫಿಲೋಮಿನಾ ಚರ್ಚ್ ಬಳಿಯಿಂದ ಕನ್ನಡ ಕಡ್ಡಾಯ ಅಭಿಯಾನ ಆರಂಭಿಸಿ ಅಶೋಕ ರಸ್ತೆ, ಅರಮನೆ ಉತ್ತರ ದ್ವಾರ, ಕೆಆರ್ ಸರ್ಕಲ್, ಡಿ. ದೇವರಾಜ ಅರಸು ರಸ್ತೆ ಮೂಲಕ ಮೆರವಣಿಗೆ ನಡೆಸಿ ಶೇ. 60ರಷ್ಟು ನಾಮಫಲಕ ಅಳವಡಿಸುವಂತೆ ಅಂಗಡಿ ಮಾಲೀಕರಿಗೆ ಜಾಗೃತಿ ಮೂಡಿಸಿದರು.

ಈ ಹಿನ್ನೆಲೆಯಲ್ಲಿ ಕೆಲ ಅಂಗಡಿ ಮಾಲೀಕರು ತಾವೇ ಸ್ವಇಚ್ಛೆಯಿಂದ ಆಂಗ್ಲ ಭಾಷೆಯ ಫಲಕ ತೆಗೆದು ಕನ್ನಡ ನಾಮಫಲಕ ಹಾಕುವ ಪ್ರಕ್ರಿಯೆ ಆರಂಭಿಸಿದ್ದಾರೆ. ಉಳಿದಂತೆ ಎಲ್ಲರೂ ಮಾರ್ಚ್ 13ರೊಳಗಾಗಿ ತಮ್ಮ ಅಂಗಡಿಗಳ ಮುಂದೆ ಶೇ. 60ರಷ್ಟು ಕನ್ನಡ ನಾಮಫಲಕವನ್ನು ಅಳವಡಿಸಲು ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ.

ದೇವರಾಜ ಉಪವಿಭಾಗದ ಎಸಿಪಿ ಶಾಂತಮಲ್ಲಪ್ಪ ನೇತೃತ್ವದಲ್ಲಿ ದೇವರಾಜ ಠಾಣೆ ಇನ್ಸ್‌ಪೆಕ್ಟರ್ ಶಿವಕುಮಾರ್, ಸಬ್‌ಇನ್ಸ್‌ಪೆಕ್ಟರ್‌ಗಳಾದ ಪ್ರಭು, ಜೈಕೀರ್ತಿ ಸೇರಿದಂತೆ ಸಿಬ್ಬಂದಿ ಮೆರವಣಿಗೆ ಜೊತೆ ಸಾಗಿ ಬಂದೋಬಸ್ತ್ ವ್ಯವಸ್ಥೆ ಮಾಡಿದ್ದರು.



ಟರ್ಫ್ ಅಥಾರಿಟಿ ಆಫ್ ಇಂಡಿಯಾ ನಿರ್ವಹಣೆ ಹೊಣೆಯನ್ನು ನಿರ್ಗಮಿತ ಅಧ್ಯಕ್ಷ ಸುದೀಪ್ತೋ ಸರ್ಕಾರ್ ಅವರಿಂದ ಮೈಸೂರು ರೇಸ್ ಕ್ಲಬ್ ಅಧ್ಯಕ್ಷರೂ ಆದ ಕೆ.ಎಂ. ಚಂದ್ರೇಗೌಡ ಸೋಮವಾರದಂದು ಸ್ವೀಕರಿಸಿದರು.

ಫೇಸ್‌ಬುಕ್, ಇನ್‌ಸ್ಟಾಗ್ರಾಮ್ ಲಾಗಿನ್ ಸಮಸ್ಯೆ ; ಬಳಕೆದಾರರ ಕಂಗಾಲು

ಮೈಸೂರು,ಮಾ.5– ಮೆಟಾ ಒಡೆತನದ ಫೇಸ್‌ಬುಕ್, ಫೇಸ್‌ಬುಕ್ ಮೆಸೆಂಜರ್ ಹಾಗೂ ಇನ್‌ಸ್ಟಾಗ್ರಾಮ್ ಸಾಮಾಜಿಕ ಮಾಧ್ಯಮಗಳ ಬಳಕೆದಾರರು ಲಾಗಿನ್ ಮಾಡಲು ಸಾಧ್ಯವಾಗದೇ ಮಂಗಳವಾರ ಸಂಜೆ ತೀವ್ರ ಸಮಸ್ಯೆ ಎದುರಿಸಿದರು. ರಾತ್ರಿ 9ರ ಸುಮಾರಿಗೆ ಬಳಕೆದಾರರ ಫೇಸ್‌ಬುಕ್ ಖಾತೆಗಳು ಇದ್ದಕ್ಕಿದ್ದಂತೆ ಲಾಗೌಟ್ ಆದವು. ನಂತರ ಲಾಗಿನ್ ಆಗಲು ಸಾಧ್ಯವಾಗದೇ ಬಳಕೆದಾರರು ಪರದಾಡಿದರು. ಪಾಸ್‌ವರ್ಡ್ ಸರಿಯಾಗಿಲ್ಲವೆಂಬ ಸಂದೇಶ ಬರುತ್ತಲೇ ಇತ್ತು ಎಂದು ಬಳಕೆದಾರರು ತಾವು ಎದುರಿಸದ ಸಮಸ್ಯೆಗಳನ್ನು ಬಗ್ಗೆ ಹಂಚಿಕೊಂಡಿದ್ದಾರೆ.

ಈ ಕುರಿತಂತೆ #facebookdown ಹಾಗೂ #instagramdown ಹ್ಯಾಷ್‌ಟ್ಯಾಗ್ ಟ್ರೆಂಡ್ ಆದವು. ಈವರೆಗೂ ಸುಮಾರು 3 ಲಕ್ಷ ಫೇಸ್‌ಬುಕ್ ಬಳಕೆದಾರರು ಮತ್ತು ಇನ್‌ಸ್ಟಾಗ್ರಾಮ್‌ನ 10 ಸಾವಿರಕ್ಕೂ ಹೆಚ್ಚು ಬಳಕೆದಾರರು ತಾವು ಎದುರಿಸುತ್ತಿರುವ ಸಮಸ್ಯೆ ಕುರಿತು ವರದಿ ಮಾಡಲಿದ್ದಾರೆ ಎಂದು ಡೌನ್‌ಡಿಟೆಕ್ಟರ್ ಡಾಟ್ ಕಾಮ್ ವರದಿ ಮಾಡಿದೆ ಜೊತೆಗೆ ಈ ಕುರಿತಂತೆ ಮೆಟಾ ಯಾವುದೇ ಪ್ರತಿಕ್ರಿಯನ್ನು ಸದ್ಯ ನೀಡಿಲ್ಲ ಎಂದು ರಾಯಿಟರ್ಸ್ ವರದಿ ಮಾಡಿದೆ.

ಚಿನ್ನದ ಗಟ್ಟಿ ಕದ್ದು ಕೆಲಸಗಾರ ಪರಾರಿ

ಮೈಸೂರು,ಮಾ.5(ಪಿಎಂ)– ಮಳಿಗೆಯಲ್ಲಿ ಚಿನ್ನಾಭರಣ ಮಾಡಲು ನೀಡಿದ್ದ ಚಿನ್ನದ ಗಟ್ಟಿಯನ್ನು ಕೆಲಸಗಾರನೊಬ್ಬ ಕದ್ದು ಪರಾರಿಯಾದ ಘಟನೆ ಮೈಸೂರಿನ ಕೆಟಿ ಸ್ಟ್ರೀಟ್‌ನ ಜ್ಯುವೆಲರಿ ಮಳಿಗೆಯೊಂದರಲ್ಲಿ ನಡೆದಿದೆ. ಪಶ್ಚಿಮ ಬಂಗಾಲ ಮೂಲದ ಸಮರ್ ಪಂಡಿತ್ (23) ಚಿನ್ನದ ಗಟ್ಟಿ ಕದ್ದ ಆರೋಪಿ. ಈ ಸಂಬಂಧ ಮಳಿಗೆ ಮಾಲೀಕ ತರುಣ್ ದೋಲೈ ಪೊಲೀಸರಿಗೆ ದೂರು ನೀಡಿದ್ದಾರೆ.

ಕಳೆದ 3 ವರ್ಷದಿಂದ ಪಶ್ಚಿಮ ಬಂಗಾಳದ ಸಮರ್ ಪಂಡಿತ್ ನಮ್ಮ ಮಳಿಗೆಯಲ್ಲಿ ಚಿನ್ನಾಭರಣ ತಯಾರಿಸುವ ಕೆಲಸ ಮಾಡಿಕೊಂಡಿದ್ದು, ನನ್ನ ಅಕ್ಕನ ಮಗ ದಿನೇಶ್ ಮಾಲಿಕ್ 100 ಗ್ರಾಂ ಚಿನ್ನದ ಗಟ್ಟಿಯನ್ನು ಆಭರಣ ಮಾಡಿಕೊಡುವಂತೆ ಸಮರ್‌ಗೆ ನೀಡಿದ್ದರು. ಆದರೆ ಆತ ಕೆಲಸಕ್ಕೆ ಬಾರದೇ ನಾಪತ್ತೆಯಾಗಿದ್ದು, ಆತನ ಮೊಬೈಲ್ ಕೂಡ ಸ್ವಿಚ್‌ಆಫ್ ಆಗಿದೆ. ಅವನನ್ನು ಪತ್ತೆ ಮಾಡಿ ಕಾನೂನು ಕ್ರಮ ಕೈಗೊಳ್ಳುವಂತೆ ತರುಣ್ ದೋಲೈ ದೂರಿನಲ್ಲಿ ತಿಳಿಸಿದ್ದಾರೆ. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿರುವ ಮಂಡಿ ಮೊಹಲ್ಲಾ ಠಾಣೆ ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ.



ಮೈಸೂರು ಮಿತ್ರ ಬುಧವಾರ 6 ಮಾರ್ಚ್ 2024

4.65 ಕೋಟಿ ರೂ. ವಿವಿಧ ಕಾಮಗಾರಿಗಳಿಗೆ ಇಂದು ಶಾಸಕ ಜಿ.ಡಿ.ಹರೀಶ್‌ಗೌಡರಿಂದ ಚಾಲನೆ

ಹುಣಸೂರು, ಮಾ.5– ತಾಲೂಕಿನ ಸರ್ವತೋಮುಖ ಅಭಿವೃದ್ಧಿಗೆ ಮುಂದಾಗಿರುವ ಶಾಸಕ ಜಿ.ಡಿ.ಹರೀಶ್‌ಗೌಡರು 4.65 ಕೋಟಿ ರೂ. ವೆಚ್ಚದಲ್ಲಿ ಕೈಗೊಂಡಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಬುಧವಾರ ಭೂಮಿ ಪೂಜೆ ನೆರವೇರಿಸಲಿದ್ದಾರೆ



ಬಿಳಿಕೆರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 1.50 ಕೋಟಿ ರೂ. ವೆಚ್ಚದಲ್ಲಿ ಕೈಗೊಂಡಿರುವ ಕಟ್ಟಡ ನಿರ್ಮಾಣಕ್ಕೆ ಬೆಳಗ್ಗೆ 9.30ಕ್ಕೆ ಭೂಮಿ ಪೂಜೆ ನೆರವೇರಿಸಿದ ನಂತರ ಹುಣಸೂರು ಪಟ್ಟಣದ ಎಸ್.ಎಸ್.ತಿಟ್ಟು ಬಡಾವಣೆಯಲ್ಲಿ 30 ಲಕ್ಷ ರೂ. ವೆಚ್ಚದಲ್ಲಿ ಅಲ್ಪಸಂಖ್ಯಾತರ ಕಾಲೋನಿ ರಸ್ತೆ, ರೈಝಾಕ್ ಮೊಹಲ್ಲಾದಲ್ಲಿ 50 ಲಕ್ಷ ರೂ. ವೆಚ್ಚದಲ್ಲಿ ರಸ್ತೆ ಹಾಗೂ ಚರಂಡಿ ಅಭಿವೃದ್ಧಿಯ ಕಾಮಗಾರಿಗೆ ಚಾಲನೆ ನೀಡಲಿದ್ದಾರೆ.

ಬಳಿಕ 70 ಲಕ್ಷ ರೂ. ವೆಚ್ಚದ ಪಟ್ಟಣದ ಬಜಾರ್ ರಸ್ತೆ ಅಭಿವೃದ್ಧಿ, 10 ಲಕ್ಷ ರೂ. ವೆಚ್ಚದಲ್ಲಿ ನಿವಿಷಾಂಬ ಕಲ್ಯಾಣ ಮಂಟಪದ ಹಿಂಭಾಗದ ರಸ್ತೆ ಮತ್ತು ಚರಂಡಿ ಕಾಮಗಾರಿ, 10 ಲಕ್ಷ ರೂ. ವೆಚ್ಚದಲ್ಲಿ ಪಟ್ಟಣದ ಮಾಧವ ಪ್ರೌಢಶಾಲೆ ಪಕ್ಕದ ಅಲ್ಪಸಂಖ್ಯಾತರ ಕಾಲೋನಿಯಲ್ಲಿ 10 ಲಕ್ಷ ರೂ. ವೆಚ್ಚದಲ್ಲಿ ರಸ್ತೆ ಹಾಗೂ ಚರಂಡಿ ಕಾಮಗಾರಿ, 60 ಲಕ್ಷ ರೂ. ವೆಚ್ಚದಲ್ಲಿ ಹೋಲಿ ಫ್ಯಾಮಿಲಿ ಪಬ್ಲಿಕ್ ಸ್ಕೂಲ್ ರಸ್ತೆ ಮತ್ತು ಚರಂಡಿ ಅಭಿವೃದ್ಧಿ, 10 ಲಕ್ಷ ರೂ. ವೆಚ್ಚದಲ್ಲಿ ವಿ.ಪಿ.ಬೋರೆ ಅಲ್ಪಸಂಖ್ಯಾತರ ಕಾಲೋನಿ ರಸ್ತೆ ಹಾಗೂ ಚರಂಡಿ ಕಾಮಗಾರಿ, ಸಂತೆಕೆರೆ ಕೊಡಿ ಗ್ರಾಮದ ಅಲ್ಪಸಂಖ್ಯಾತ ಕಾಲೋನಿಗಳಲ್ಲಿ 10 ಲಕ್ಷ ರೂ. ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿ, ಅಲ್ಲಿ ಏರ್ಪಡಿಸಿರುವ ಕೃತಜ್ಞತಾ ಸಭೆಯಲ್ಲಿ ಶಾಸಕರು ಭಾಗವಹಿಸಲಿದ್ದಾರೆ.

ನಂತರ ರತ್ನಪುರಿ ಗ್ರಾಮದ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ 25 ಲಕ್ಷ ರೂ. ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿ, ಬಲ್ಲೇನಹಳ್ಳಿಯ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ 25 ಲಕ್ಷ ರೂ. ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿ, ಗಾವಡಗೆರೆ ಗ್ರಾಮದ ವಾಲ್ಮೀಕಿ ಬಡಾವಣೆಯಲ್ಲಿ 35 ಲಕ್ಷ ರೂ. ವೆಚ್ಚದ ಸಿಸಿ ರಸ್ತೆ ಮತ್ತು ಚರಂಡಿ ಅಭಿವೃದ್ಧಿಗೆ ಕಾಮಗಾರಿ, 5 ಲಕ್ಷ ರೂ. ವೆಚ್ಚದಲ್ಲಿ ಗ್ರಾಮದ ಸಿಸಿ ರಸ್ತೆ ಮತ್ತು ಚರಂಡಿ ಕಾಮಗಾರಿ, 5 ಲಕ್ಷ ರೂ. ವೆಚ್ಚದಲ್ಲಿ ಬೋರೆಗೌಡನಕೊಪ್ಪಲು ಗ್ರಾಮದ ಸಿಸಿ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಲಿದ್ದಾರೆ

ಪತ್ರಕರ್ತರಿಗೆ ವಿಮಾ ಬಾಂಡ್: ಇದೇ ಸಂದರ್ಭದಲ್ಲಿ ತಾಲೂಕು ಪತ್ರಕರ್ತರ ಸಂಘದ 35 ಸದಸ್ಯರಿಗೆ ಶಾಸಕ ಜಿ.ಡಿ.ಹರೀಶ್ ಗೌಡ ಅವರು ವೈಯಕ್ತಿಕವಾಗಿ ತಲಾ 22 ಲಕ್ಷ ವೆಚ್ಚದಲ್ಲಿ ವಿಮೆ ಮಾಡಿಸಿದ್ದು, ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ವಿಮಾ ಬಾಂಡ್‌ಗಳನ್ನು ವಿತರಣೆ ಮಾಡಲಿದ್ದಾರೆ.



ಡಿ.ಸಿ.ಪ್ರತಾಪ್‌ಗೆ ಪಿಹೆಚ್.ಡಿ ಪದವಿ

ಮೈಸೂರು: ಡಾ.ಆರ್.ಸಿ.ದೇವರಾಜು ಅವರ ಮಾರ್ಗದರ್ಶನದಲ್ಲಿ ಡಿ.ಸಿ.ಪ್ರತಾಪ್ ಅವರು ಕನ್ನಡ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ 'ನವ್ಯೋತ್ತರ ಕಥಾಸಾಹಿತ್ಯದಲ್ಲಿ ಕೃಷಿ– ಗ್ರಾಮ ಜೀವನ' ಮಹಾಪ್ರಬಂಧವನ್ನು ಮೈಸೂರು ವಿವಿ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಒಂದನೇ ಪುಟದಿಂದ

ಸಮಸ್ಯೆ ಆಗದಂತೆ ಕ್ರಮ ಕೈಗೊಳ್ಳಿ

ನಿಭಾಯಿಸಲು ಸರ್ಕಾರ ಸಂಪೂರ್ಣ ಸಿದ್ಧತೆ ಮಾಡಿಕೊಂಡಿದೆ. ಅನಿವಾರ್ಯವಾದಾಗ ಮಾತ್ರ ಹೊಸ ಕೊಳವೆ ಬಾವಿಗಳನ್ನು ಕೊರೆಸಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಿದ್ದು, ಅದನ್ನು ಬಳಕೆ ಮಾಡಿಕೊಳ್ಳಬೇಕು. ಕುಡಿಯುವ ನೀರಿಗೆ ಯಾವುದೇ ಕಾರಣಕ್ಕೂ ತೊಂದರೆಯಾಗಬಾರದು ಎಂದು ಮುಖ್ಯಕಾರ್ಯದರ್ಶಿ, ಜಿಲ್ಲಾಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಲಾಗಿದೆ. ಪ್ರತಿ ಜಿಲ್ಲೆಯಲ್ಲಿ ಟಾಸ್ಕ್ ಫೋರ್ಸ್ ಸಭೆ ಕರೆದು, ತಾಲೂಕಿನ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಸೂಚಿಸಿದೆ, ಈವರೆಗೆ 646 ಸಭೆಗಳನ್ನು ನಡೆಸಲಾಗಿದೆ. ಸುಮಾರು 7408 ಹಳ್ಳಿಗಳಲ್ಲಿ, 1115 ವಾರ್ಡ್‌ಗಳಲ್ಲಿ ನೀರಿನ ತೊಂದರೆಯಾಗಬಹುದು ಎಂದು ಅಂದಾಜಿಸಲಾಗಿದೆ. ಅಷ್ಟೂ ಕಡೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಯೋಜನೆ ಸಿದ್ಧವಾಗಿದೆ. ಖಾಸಗಿ ಕೊಳವೆಬಾವಿ ಮಾಲೀಕರೊಂದಿಗೆ ಒಪ್ಪಂದವಾಗಿದೆ. ಟ್ಯಾಂಕರ್ ಮೂಲಕ ನೀರು ಒದಗಿಸಲು ಕ್ರಮ ವಹಿಸಲಾಗಿದೆ ಎಂದರು.

ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ 307 ಸಭೆಗಳಾಗಿವೆ. ಕುಡಿಯುವ ನೀರಿಗೆ ತೊಂದರೆಯಾಗದಂತೆ ಕ್ರಮ ವಹಿಸಲಾಗಿದೆ. ಸಮಸ್ಯೆಯಿರುವ ಗ್ರಾಮ, ಜಿಲ್ಲೆಗಳಲ್ಲಿ ಮುಂಚಿತವಾಗಿ ಯೋಜನೆ ತಯಾರಿಸಬೇಕು, ಸದ್ಯ 98 ತಾಲೂಕುಗಳ 412 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದೆ. 175 ಗ್ರಾಮಗಳಿಗೆ 204 ಟ್ಯಾಂಕರ್‌ಗಳಿಂದ 596 ಖಾಸಗಿ ಕೊಳವೆಬಾವಿಗಳ ಮೂಲಕ ನೀರು ಸರಬರಾಜು ಆಗುತ್ತಿದೆ ಎಂದು ವಿವರಿಸಿದರು.

ಕೆಲವೆಡೆ ಸರ್ಕಾರದ ಕೊಳವೆಬಾವಿಗಳನ್ನು ಆಳ ಮಾಡುವುದು, ಫ್ಲ್ಯಾಶಿಂಗ್ ಮಾಡುವುದು, ಖಾಸಗಿ ಕೊಳವೆಬಾವಿಗಳನ್ನು ಬಾಡಿಗೆಗೆ ಪಡೆಯುವುದು, ಟ್ಯಾಂಕರ್ ಮೂಲಕ ನೀರು ಸರಬರಾಜಿಗೆ ಕ್ರಮ ವಹಿಸಲಾಗಿದೆ ಎಂದರು. ಇಂದಿನವರೆಗೆ 33.25 ಲಕ್ಷ ರೈತರಿಗೆ 631 ಕೋಟಿ ರೂ.ಗಳ ತಾತ್ಕಾಲಿಕ ಪರಿಹಾರ ನೀಡಲಾಗಿದೆ. ಸರ್ಕಾರ 600 ಕೋಟಿ ರೂ.ಗಳ ಬೆಳೆ ವಿಮೆ ಪರಿಹಾರ ಒದಗಿಸಿದೆ. ಇನ್ನೂ 800 ಕೋಟಿ ರೂ. ಪಾವತಿಯಾಗುವ ನಿರೀಕ್ಷೆ ಇದೆ. ಗ್ಯಾರಂಟಿ ಯೋಜನೆಗಳಿಂದಾಗಿ ಪ್ರತಿ.ಕುಟುಂಬಕ್ಕೆ 4 ರಿಂದ 5 ಸಾವಿರ ರೂ. ನಂತೆ ಒಂದು ಕೋಟಿ 20 ಲಕ್ಷ ಕುಟುಂಬಗಳಿಗೆ 4.50 ಕೋಟಿ ಜನರಿಗೆ ಇದರ ಲಾಭ ದೊರೆತಿದೆ, ಈ ಕಾರಣದಿಂದ ಜನ ಗುಳೇ ಹೋಗುತ್ತಿಲ್ಲ ಎಂದರು. ವಾಚಕರ ವಾಣಿ, ಸಾಮಾಜಿಕ ಜಾಲತಾಣಗಳಲ್ಲಿನ ವರದಿಗಳನ್ನು ಅಧಿಕಾರಿಗಳು ಕಟ್ಟುನಿಟ್ಟಾಗಿ ಗಮನಿಸಿ ಪರಿಹಾರ ನೀಡಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ. ಸಹಾಯವಾಣಿ ಹಾಗೂ ಕಂಟ್ರೋಲ್ ರೂಮ್ ಅನ್ನು ಸ್ಥಾಪಿಸಬೇಕು ಎಂದು ಸೂಚಿಸಲಾಗಿದೆ. ಹಣಕ್ಕೆ ಯಾವುದೇ ತೊಂದರೆ ಇಲ್ಲದಂತೆ ನೋಡಿಕೊಳ್ಳಲಾಗಿದೆ. ಟ್ಯಾಂಕರ್ ಮಾಲೀಕರು ಪರಿಸ್ಥಿತಿ ದುರುಪಯೋಗ ಮಾಡಿಕೊಳ್ಳುತ್ತಿರುವುದನ್ನು ತಪ್ಪಿಸಲು ಕ್ರಮ ವಹಿಸಲಾಗಿದೆ. ಬೆಂಗಳೂರು ಸುತ್ತಮುತ್ತಲಿನ ಪ್ರದೇಶಗಳಿಗೂ ನೋಂದಣಿ ಮಾಡಿಸಿಕೊಂಡು ದರಗಳನ್ನು ನಿಯಂತ್ರಣ ಮಾಡಲು ಕ್ರಮ ವಹಿಸಲಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

ಬಿಜೆಪಿ ಅಭ್ಯರ್ಥಿಗಳ ಪಟ್ಟಿ ಬಿಡುಗಡೆ

ಮಾಡುವ ಮೀಟಿಂಗ್ ನಡೆಯಲಿದೆ. ರಾಜ್ಯದ 28 ಕ್ಷೇತ್ರಗಳ ಅಭ್ಯರ್ಥಿಗಳ ತೀರ್ಮಾನ ಆಗಲಿದೆ ಎಂದು ಮತ್ತೊಮ್ಮೆ ಪುನರುಚ್ಚರಿಸಿದ್ದಾರೆ. ಪಟ್ಟಿ ಬಿಡುಗಡೆಯ ಬಗ್ಗೆ ಪ್ರಧಾನಿ ಮೋದಿ ಹಾಗೂ ಗೃಹ ಸಚಿವ ಅಮಿತ್ ಶಾ ತೀರ್ಮಾನ ಕೈಗೊಳ್ಳಲಿದ್ದಾರೆ ಎಂದರು. ಇದೇ ವೇಳೆ ವಿಧಾನ ಸೌಧದಲ್ಲಿ ಪಾಕ್ ಪರ ಘೋಷಣೆ ಕೂಗಿದ ವರ ಎಫ್‌ಎಸ್‌ಎಲ್ ವರದಿ ವಿಚಾರದ ಬಗ್ಗೆ ಪ್ರತಿಕ್ರಿಯಿಸಿ ಆರೋಪಿಗಳ ವಿರುದ್ಧ ಯಾರು ಕ್ರಮ ಕೈಗೊಳ್ಳುತ್ತಿಲ್ಲ. ಕಾನೂನು ತನ್ನದೇ ಆದ ಕ್ರಮ ಕೈಗೊಳ್ಳಲಿದೆ.

ಮೊದಲ ಪಟ್ಟಿ ನಾಳೆ ಅಂತಿಮ

ನಮ್ಮ ಅಂತಿಮ ಕೇಂದ್ರ ಚುನಾವಣಾ ಸಮಿತಿ ಸಭೆಯನ್ನು ನಡೆಸುತ್ತೇವೆ. ನಾನು ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾರ್ಚ್ 7 ರಂದು ದೆಹಲಿಗೆ ಹೋಗುತ್ತಿದ್ದು, ಅಲ್ಲಿ ನಾವು ಅಭ್ಯರ್ಥಿಗಳ (ಮೊದಲ) ಪಟ್ಟಿಯನ್ನು ಅಂತಿಮಗೊಳಿಸುತ್ತೇವೆ ಎಂದು ಅವರು ಹೇಳಿದರು. 2019ರ ಸಾರ್ವತ್ರಿಕ ಚುನಾವಣೆಯಲ್ಲಿ ಬಿಜೆಪಿಯು ರಾಜ್ಯದ ಒಟ್ಟು 28 ಕ್ಷೇತ್ರಗಳಲ್ಲಿ 25 ಸ್ಥಾನಗಳನ್ನು ಗೆದ್ದುಕೊಂಡಿತ್ತು. ಇದರೊಂದಿಗೆ ಬಿಜೆಪಿ ಬೆಂಬಲಿತ ಸ್ವತಂತ್ರ ಅಭ್ಯರ್ಥಿಯು ಗೆಲುವು ಸಾಧಿಸಿದ್ದರು.

ಆಗ ಸಮ್ಮಿಶ್ರ ಸರ್ಕಾರ ನಡೆಸುತ್ತಿದ್ದ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ನೇತೃತ್ವದ ಜೆಡಿಎಸ್ ಮತ್ತು ಕಾಂಗ್ರೆಸ್ ಪಕ್ಷಗಳು ಒಟ್ಟಾಗಿ ಚುನಾವಣೆ ಎದುರಿಸಿದ್ದು ತಲಾ ಒಂದೊಂದು ಸ್ಥಾನಗಳಲ್ಲಿ ಗೆಲುವು ಸಾಧಿಸಿದ್ದವು. ಆದರೆ ರಾಜಕೀಯ ರಂಗವು ಅಂದಿನಿಂದ ಗಮನಾರ್ಹವಾಗಿ ಬದಲಾಗಿದೆ. ಕಳೆದ ವರ್ಷ ಮೇ ತಿಂಗಳಲ್ಲಿ ನಡೆದ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಭರ್ಜರಿ ಜಯ ಸಾಧಿಸಿತ್ತು.

ಕಳೆದ ವರ್ಷ ಸೆಪ್ಟೆಂಬರ್‌ನಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟಕ್ಕೆ ಸೇರ್ಪಡೆಗೊಂಡಿರುವ ಜೆಡಿಎಸ್ ಇದೀಗ ಮುಂಬರುವ ಲೋಕಸಭೆ ಚುನಾವಣೆಗೆ ಸೀಟು ಹಂಚಿಕೆಯ ಬಗ್ಗೆ ಬಿಜೆಪಿಯೊಂದಿಗೆ ಮಾತುಕತೆ ನಡೆಸುತ್ತಿದೆ.

ಕೊಡದಿದ್ರೆ ರಾಜ್ಯಾದ್ಯಂತ ಸ್ಫೋಟಿಸುತ್ತೇವೆ...!

ದೇವಸ್ಥಾನಗಳು, ಹೋಟೆಲ್‌ಗಳು ಮತ್ತು ಸಾರ್ವಜನಿಕ ಪ್ರದೇಶಗಳಲ್ಲಿ ಬಾಂಬ್ ಸ್ಫೋಟಿಸುತ್ತೇವೆ ಎಂದು ಇ–ಮೇಲ್‌ನಲ್ಲಿ ಬರೆಯಲಾಗಿದೆ. ನಾವು ನಿಮಗೆ ಇನ್ನೊಂದು ಟ್ರೈಲರ್ ಅನ್ನು ತೋರಿಸಲು ಬಯಸುತ್ತೇವೆ. ಮುಂದೆ ಅಂಬಾರಿ ಉತ್ಸವ ಬಸ್ ಸ್ಫೋಟಿಸುತ್ತೇವೆ. ನಂತರ, ನಮ್ಮ ಬೇಡಿಕೆಗಳನ್ನು ಸಾಮಾಜಿಕ ಮಾಧ್ಯಮದಲ್ಲಿ ಎತ್ತುತ್ತೇವೆ. ನಿಮಗೆ ಕಳುಹಿಸಲಾದ ಮೇಲ್‌ನ ಸ್ಕ್ರೀನ್‌ಶಾಟ್‌ಗಳನ್ನು ಅಪ್‌ಲೋಡ್ ಮಾಡುತ್ತೇವೆ. ಸಾಮಾಜಿಕ ಮಾಧ್ಯಮದಲ್ಲಿ ನಾವು ಮುಂದಿನ ಸ್ಫೋಟದ ಬಗ್ಗೆ ಮಾಹಿತಿಯನ್ನು ಟ್ವೀಟ್ ಮಾಡುತ್ತೇವೆ ಎಂದು ಮೇಲ್ ನಲ್ಲಿ ಹೇಳಲಾಗಿದೆ.

ಬೆಂಗಳೂರಿನ ಹೆಚ್‌ಎಎಲ್‌ನ ರಾಮೇಶ್ವರಂ ಕೆಫೆಯಲ್ಲಿ ಮಾರ್ಚ್ 1ರಂದು ಬಾಂಬ್ ಸ್ಫೋಟಿಸಲಾಗಿದ್ದು ನಾಲ್ಕು ದಿನ ಕಳೆದರೂ ಸಹ ರಾಮೇಶ್ವರಂ ಕೆಫೆಯಲ್ಲಿ ಬಾಂಬ್ ಇಟ್ಟ ಉಗ್ರನ ಸಣ್ಣ ಸುಳಿವು ಸಿಗುತ್ತಿಲ್ಲ. ಇನ್ನು ಎಫ್‌ಎಸ್‌ಎಲ್ ತಂಡ, ಸಿಸಿಬಿ ಪೊಲೀಸರು, ಇನ್ನೊಂದೆಡೆ NIA ಅಧಿಕಾರಿಗಳೂ ಶಂಕಿತ ಉಗ್ರನ ಬೆನ್ನತ್ತಿದ್ದಾರೆ.

ಸರ್ ಎಂ.ವಿಶ್ವೇಶ್ವರಯ್ಯ ಸ್ನಾತಕೋತ್ತರ ಕೇಂದ್ರದಲ್ಲಿದ್ದ ತಾತ್ಕಾಲಿಕ ಬೋಧಕೇತರ ನೌಕರರು ಈಗ ಅತಂತ್ರ

ಬದುಕಿನ ಭದ್ರತೆಗಾಗಿ ಮೈಸೂರು ವಿವಿ ಮೊರೆ



ಮಂಡ್ಯ ತೂಬಿನಕೆರೆ ಸರ್‌ಎಂವಿ ಸ್ನಾತಕೋತ್ತರ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ತಾತ್ಕಾಲಿಕ ಬೋಧಕೇತರ ನೌಕರರು ಮಂಗಳವಾರ ಮೈಸೂರು ವಿವಿ ಕ್ರಾಫರ್ಡ್ ಭವನದಲ್ಲಿ ಮನವಿ ಸಲ್ಲಿಸಿ, ಹೊರಗಡೆ ಕುಳಿತಿರುವುದು.

ಮೈಸೂರು, ಮಾ.5(ಎಸ್‌ಬಿಡಿ)– ಈ ಹಿಂದೆ ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿದ್ದ ಮಂಡ್ಯದ ತೂಬಿನಕೆರೆ ಸರ್.ಎಂ.ವಿಶ್ವೇಶ್ವರಯ್ಯ ಸ್ನಾತಕೋತ್ತರ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ತಾತ್ಕಾಲಿಕ ನೌಕರರು ಅತಂತ್ರ ಪರಿಸ್ಥಿತಿಯಲ್ಲಿದ್ದು, ತಮ್ಮ ಸೇವೆಯನ್ನು ಮುಂದುವರೆಸಲು ಕೋರಿ ಮಂಗಳವಾರ ವಿವಿಯ ಕುಲಪತಿಯವರಿಗೆ ಮನವಿ ಸಲ್ಲಿಸಿದ್ದಾರೆ.

ಜಿಲ್ಲಾವಾರು ವಿಶ್ವವಿದ್ಯಾನಿಲಯ ಸ್ಥಾಪನೆ ಸಂದರ್ಭದಲ್ಲಿ ತೂಬಿನಕೆರೆ ಸ್ನಾತಕೋತ್ತರ ಕೇಂದ್ರ ಮಂಡ್ಯ ವಿಶ್ವವಿದ್ಯಾಲಯ ವ್ಯಾಪ್ತಿಗೆ ಸೇರಿದೆ. ಆ ಸಂದರ್ಭದಲ್ಲಿ ಸ್ಥಿರಾಸ್ತಿ, ಚರಾಸ್ತಿಯೊಂದಿಗೆ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಹಂಚಿಕೆ ಮಾಡಲಾಗಿದೆ. ಆದರೆ ಅಲ್ಲಿ ಕಾರ್ಯ ನಿರ್ವಹಿಸುತ್ತಿದ್ದ 30ಕ್ಕೂ ಹೆಚ್ಚು ತಾತ್ಕಾಲಿಕ ನೌಕರರು ಅತಂತ್ರರಾಗಿದ್ದಾರೆ. ಇವರನ್ನು ಸೇವೆಯಲ್ಲಿ ಮುಂದುವರೆಸಲು ಕಾನೂನಿನ ತೊಡಕಿದೆ ಎಂದು ಮಂಡ್ಯ ವಿವಿ ಸ್ಪಷ್ಟಪಡಿಸಿರುವುದರಿಂದ ಆತಂಕಕ್ಕೊಳಗಾಗಿರುವ ನೌಕರರು ಮೈಸೂರು ವಿವಿಯಲ್ಲಿಯೇ ಕಾರ್ಯ ನಿರ್ವಹಿಸಲು ಅವಕಾಶ ಮಾಡಿಕೊಡುವಂತೆ ಬೇಡಿಕೊಂಡಿದ್ದಾರೆ.

ಸರ್ಕಾರಿ ಆದೇಶದನ್ವಯ ನೌಕರರು ಆಯಾಯ ಸ್ನಾತಕೋತ್ತರ ಕೇಂದ್ರಗಳಲ್ಲಿಯೇ ಕರ್ತವ್ಯ ನಿರ್ವಹಿಸತಕ್ಕದ್ದು. ಹಾಗಾಗಿ ಮಂಡ್ಯ ವಿವಿ ವತಿಯಿಂದಲೇ ಇದನ್ನು ಪರಿಹರಿಸುವುದು ಸೂಕ್ತ ಎಂದು ಮೈಸೂರು ವಿವಿ ತಿಳಿಸಿತ್ತು. ಅಲ್ಲದೆ 2023ರ ಸೆಪ್ಟೆಂಬರ್‌ನಿಂದ ಸೇವೆ ಮುಂದುವರೆಸಲು ಯಾವುದೇ ಆದೇಶ ನೀಡಿಲ್ಲ. ನಾವು 1 ತಿಂಗಳಿಂದ ಹೋರಾಟ ಮಾಡಿದರೂ ಸೇವೆ ಮುಂದುವರೆಸಲು ಮಂಡ್ಯ ವಿವಿ ಅವಕಾಶ ನೀಡಿಲ್ಲ. ಇದರಿಂದ ಮನನೊಂದು ನೌಕರರೊಬ್ಬರ ತಾಯಿ ಸಾವನ್ನಪ್ಪಿದ್ದು, ಓರ್ವ ನೌಕರನೂ ಆತ್ಮಹತ್ಯೆಗೆ ಪ್ರಯತ್ನಿಸಿದ್ದ ಎಂದು ಕ್ರಾಫರ್ಡ್ ಭವನದ ಬಳಿ ನೊಂದ ನೌಕರರು ಅಳಲು ತೋಡಿಕೊಂಡರು.

ಮಂಡ್ಯ ವಿವಿ ಸ್ಪಷ್ಟನೆ: ತೂಬಿನಕೆರೆ ಸ್ನಾತಕೋತ್ತರ ಕೇಂದ್ರಕ್ಕೆ ಮೈಸೂರು ವಿವಿ ನಿಯೋಜಿಸಿದ್ದ ತಾತ್ಕಾಲಿಕ ನೌಕರರ ಸಂಬಂಧ ಮಂಡ್ಯ ವಿವಿ ಕುಲಸಚಿವರು ಐದಾರು ದಿನಗಳ ಹಿಂದೆ ಮೈಸೂರು ವಿವಿ ಕುಲಸಚಿವರಿಗೆ ಪತ್ರ ಬರೆದು ತಮ್ಮ ನಿಲುವನ್ನು ಸ್ಪಷ್ಟಪಡಿಸಿದ್ದಾರೆ. ಮೈಸೂರು ವಿವಿಯಿಂದ ಮಂಡ್ಯ ವಿವಿಗೆ 26 ಬೋಧಕ ಸಿಬ್ಬಂದಿ, 219 ಬೋಧಕೇತರ ಸಿಬ್ಬಂದಿ, ಚರಾಸ್ತಿ ಹಾಗೂ ಸ್ಥಿರಾಸ್ತಿಗಳನ್ನು ಹಂಚಿಕೆ ಮಾಡಲಾಗಿದ್ದು, ತಾತ್ಕಾಲಿಕ ಬೋಧಕೇತರ ಸಿಬ್ಬಂದಿ ಸಂಬಂಧ ಯಾವುದೇ ಆದೇಶವಿರುವುದಿಲ್ಲ.

ಸರ್.ಎಂ.ವಿಶ್ವೇಶ್ವರಯ್ಯ ಸ್ನಾತಕೋತ್ತರ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ತಾತ್ಕಾಲಿಕ ನೌಕರರನ್ನು ಪರಿಗಣಿಸಲು ಕ್ರಮ ವಹಿಸಿ, ಆಡಳಿತಾತ್ಮಕವಾಗಿ ನಿಯಮಗಳಡಿ ಮಂಡ್ಯ ವಿವಿ ವತಿಯಿಂದ ಈ ಪ್ರಕರಣವನ್ನು ಪರಿಹರಿಸುವುದು ಸೂಕ್ತ ಎಂದು ತಿಳಿಸಿದ್ದೀರಿ. ಆದರೆ ನಿಯಮಾನುಸಾರ ಪರಿಶೀಲಿಸಿದಾಗ 31 ಬೋಧಕೇತರ ಸಿಬ್ಬಂದಿ 2022–23ನೇ ಶೈಕ್ಷಣಿಕ ವರ್ಷದ ಸೆಪ್ಟೆಂಬರ್ 2023ರಲ್ಲಿ ಬಿಡುಗಡೆಗೊಂಡಿದ್ದಾರೆ. 2023–24ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಅವರ ಸೇವೆ ಮುಂದುವರೆಸುವ ಸಂಬಂಧ ಮೈಸೂರು ವಿವಿ ಯಾವುದೇ ಆದೇಶ ನೀಡಿಲ್ಲ.

ಅಲ್ಲದೆ ಮೈಸೂರು ವಿವಿ ತಿಳಿಸಿರುವಂತೆ 31 ತಾತ್ಕಾಲಿಕ ಬೋಧಕೇತರ ನೌಕರರನ್ನು ಮಂಡ್ಯ ವಿವಿಯಲ್ಲಿ 2023–24ನೇ ಸಾಲಿಗೆ ಮುಂದುವರೆಸಲು ಕಾನೂನಿನ ತೊಡಕಿದೆ. ಮಂಡ್ಯ ವಿವಿ ಯಾವುದೇ ಬೋಧಕೇತರ ಸಿಬ್ಬಂದಿ ನೇಮಕಾತಿ ಮಾಡಿಕೊಳ್ಳದಿರುವಂತೆ ಇಲ್ಲಿನ ಬೋಧಕೇತರ ಸಿಬ್ಬಂದಿ ಉಚ್ಚನ್ಯಾಯಾಲಯದಲ್ಲಿ ದಾವೆ ಹೂಡಿದ್ದಾರೆ. ಈ ವಿಷಯವಾಗಿ ಹೈಕೋರ್ಟ್ ಆದೇಶವನ್ನು ಪಾಲಿಸುವುದು ಹಾಗೂ ಸರ್ಕಾರದ ಮಾರ್ಗದರ್ಶನ ಕೋರಲು ಇತ್ತೀಚೆಗೆ ನಡೆದ ಮಂಡ್ಯ ವಿವಿ ಸಿಂಡಿಕೇಟ್ ಸಭೆಯಲ್ಲಿ ಸರ್ವಾನುಮತದಿಂದ ತೀರ್ಮಾನಿಸಲಾಗಿದೆ. ಅಲ್ಲಿಯವರೆಗೆ ಸರ್.ಎಂ.ವಿ ಸ್ನಾತಕೋತ್ತರ ಕೇಂದ್ರಕ್ಕೆ ಅವಶ್ಯಕವಿರುವ ಬೋಧಕೇತರ ಸಿಬ್ಬಂದಿಯನ್ನು ಹೊರಗುತ್ತಿಗೆ ಆಧಾರದ ಮೇಲೆ ತೆಗೆದುಕೊಳ್ಳಲು ನಿರ್ಧರಿಸಲಾಗಿದೆ. ಬೋಧಕೇತರ ಸಿಬ್ಬಂದಿ ಸೇವೆಯನ್ನು ಮಂಡ್ಯ ವಿವಿ ಪಡೆಯುವ ಬಗ್ಗೆ ಸೂಕ್ತ ಮಾರ್ಗದರ್ಶನ ಕೋರಿ ಉನ್ನತ ಶಿಕ್ಷಣ ಇಲಾಖೆ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ಪತ್ರ ಬರೆಯಲಾಗಿದೆ. ಆದ್ದರಿಂದ ಸರ್ ಎಂ.ವಿ. ಸ್ನಾತಕೋತ್ತರ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ತಾತ್ಕಾಲಿಕ ಬೋಧಕೇತರ ನೌಕರರ ಸೇವೆ ಸಂಬಂಧ ಮಾತೃ ವಿವಿಯಲ್ಲೇ ಸೂಕ್ತ ಕ್ರಮ ವಹಿಸುವ ಮೂಲಕ ಸಂದಿಗ್ಧ ಪರಿಸ್ಥಿತಿಯನ್ನು ಪರಿಹರಿಸಬೇಕು ಎಂದು ಮಂಡ್ಯ ವಿವಿ ಕುಲಸಚಿವರು ತಿಳಿಸಿದ್ದಾರೆ.

ಮೈಸೂರಲ್ಲಿ ಬಿಜೆಪಿ ನಾರಿ ಶಕ್ತಿ ಸ್ಕೂಟರ್ ರ‍್ಯಾಲಿ

ಮಹಿಳಾ ಸಬಲೀಕರಣಕ್ಕೆ ಪ್ರಧಾನಿ ಮೋದಿಯವರ ಕೊಡುಗೆ ಅಪಾರ ; ಮಾಜಿ ಮೇಯರ್ ಸಂದೇಶಸ್ವಾಮಿ





ಮೈಸೂರಿನ ಎನ್‌ಆರ್ ಕ್ಷೇತ್ರದಲ್ಲಿ ಮಂಗಳವಾರ 'ನಾರಿ ಶಕ್ತಿ ವಂದನಾ ಯಾತ್ರೆ' ಸ್ಕೂಟರ್ ರ‍್ಯಾಲಿಗೆ ಮಾಜಿ ಮೇಯರ್ ಸಂದೇಶಸ್ವಾಮಿ ಚಾಲನೆ ನೀಡಿದರು. ಮತ್ತೊಂದು ಚಿತ್ರದಲ್ಲಿ ಮೈಸೂರಿನಲ್ಲಿ ಚಾಮರಾಜ ವಿಧಾನಸಭಾ ಕ್ಷೇತ್ರದ ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ ಮಂಗಳವಾರ ಸ್ಕೂಟರ್ ರ‍್ಯಾಲಿ ನಡೆಸಲಾಯಿತು.

ಮೈಸೂರು,ಮಾ.5(ಪಿಎಂ)– ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಹಾಗೂ ರಾಜ್ಯದಲ್ಲಿ ಬಿಜೆಪಿ ಸರ್ಕಾರದ ಅವಧಿಯಲ್ಲಿ ಮಹಿಳಾ ಸಮುದಾಯದ ಸಬಲೀಕರಣಕ್ಕಾಗಿ ಜಾರಿಗೊಳಿಸಿದ ಯೋಜನೆಗಳ ಕುರಿತಂತೆ ಬಿಜೆಪಿ ನರಸಿಂಹರಾಜ ವಿಧಾನ ಸಭಾ ಕ್ಷೇತ್ರದ (ಎನ್‌ಆರ್ ಕ್ಷೇತ್ರ) ವತಿಯಿಂದ ಮಂಗಳವಾರ 'ನಾರಿ ಶಕ್ತಿ ವಂದನಾ ಯಾತ್ರೆ' ಶೀರ್ಷಿಕೆಯಡಿ ಕ್ಷೇತ್ರದಲ್ಲಿ ಸ್ಕೂಟರ್ ರ‍್ಯಾಲಿ ನಡೆಸಲಾಯಿತು.

ಬಿಜೆಪಿ ಮಹಿಳಾ ಮುಖಂಡರು, ಕಾರ್ಯಕರ್ತೆಯರು ಸ್ಕೂಟರ್ ರ‍್ಯಾಲಿ ನಡೆಸಿದರು. ಇವರಿಗೆ ಕೆಲ ಪುರುಷರು ಸಾಥ್ ನೀಡಿದರು. ಕ್ಷೇತ್ರದ 1008 ಗಣಪತಿ ವೃತ್ತದಲ್ಲಿ ಸ್ಕೂಟರ್ ರ‍್ಯಾಲಿಗೆ ಚಾಲನೆ ನೀಡಿದ ಕ್ಷೇತ್ರದ ಬಿಜೆಪಿ ಮುಖಂಡರೂ ಆದ ಮಾಜಿ ಮೇಯರ್ ಸಂದೇಶಸ್ವಾಮಿ ಮಾತನಾಡಿ, ಪುರುಷರಿಗೆ ಸರಿಸಮನಾಗಿ ಮಹಿಳೆಯರು ಬೆಳೆಯಬೇಕು ಎಂಬ ನಿಟ್ಟಿನಲ್ಲಿ ಕಳೆದ 10 ವರ್ಷಗಳಲ್ಲಿ ಮಹಿಳಾ ಸಮುದಾಯದ ಸಬಲೀಕರಣಕ್ಕೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಹಲವು ಯೋಜನೆಗಳನ್ನು ಜಾರಿಗೊಳಿಸಿದೆ ಎಂದು ತಿಳಿಸಿದರು.

ಇಂದಿರಾ ಗಾಂಧಿಯವರು ಪ್ರಧಾನಿಯಾದರೂ ಮಹಿಳೆಯರಿಗೆ ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಸ್ಪರ್ಧಿಸಲು ಮೀಸಲಾತಿ ತರಲಿಲ್ಲ. ಆದರೆ ನರೇಂದ್ರ ಮೋದಿಯವರ ಸರ್ಕಾರ ಶೇ.33ರಷ್ಟು ಮಹಿಳಾ ಮೀಸಲಾತಿ ಕಲ್ಪಿಸಿದೆ. ಹಾಗಾಗಿ ಮೋದಿಯವರು ಮತ್ತೊಮ್ಮೆ ಪ್ರಧಾನಿಯಾಗಲು ದೇಶದ ಮಹಿಳಾ ಸಮುದಾಯ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಬೆಂಬಲಿಸಬೇಕೆಂದು ಮನವಿ ಮಾಡಿದರು.

ಸ್ವಾತಂತ್ರ್ಯ ನಂತರ ಎಲ್ಲಾ ರಂಗದಲ್ಲೂ ಮಹಿಳೆಯರಿಗೆ ಸಮಾನ ಸ್ಥಾನಮಾನ ತಂದುಕೊಟ್ಟ ಕೀರ್ತಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸಲ್ಲುತ್ತದೆ. ಮಹಿಳೆಯರು ಸೌದೆ ಒಲೆಯಲ್ಲಿ ಅಡುಗೆ ಮಾಡಿ ಅನಾರೋಗ್ಯಕ್ಕೆ ಗುರಿಯಾಗುವುದನ್ನು ತಪ್ಪಿಸಲು ಉಜ್ವಲ ಉಚಿತ ಅನಿಲ ವಿತರಣೆ ಯೋಜನೆ ಅನುಷ್ಠಾನಗೊಳಿಸಿದ್ದಾರೆ. ಸುಕನ್ಯಾ ಸಮೃದ್ಧಿ ಯೋಜನೆ ಮೂಲಕ ಹುಟ್ಟುವ ಹೆಣ್ಣು ಮಕ್ಕಳಿಗೆ ಆರ್ಥಿಕ ಭದ್ರತೆ ಒದಗಿಸಿದ್ದಾರೆ. ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರು ತರಲು ಮಹಿಳೆಯರು ಪರಿತಪಿಸಬೇಕಾಗಿತ್ತು. ಅದನ್ನು ತಪ್ಪಿಸಿ ಪ್ರತಿಮನೆಗೆ ಜಾಲಧಾರೆ ಯೋಜನೆಯಡಿ ಕುಡಿಯುವ ನೀರು ಕಲ್ಪಿಸಿದ ಕೀರ್ತಿ ನಮ್ಮ ಪ್ರಧಾನಿ ಮೋದಿಯವರಿಗೆ ಸಲ್ಲಲಿದೆ ಎಂದರು.

ರಾಜೇಂದ್ರ ನಗರ ಆರ್ಚ್, ಶಿವಾಜಿ ಮುಖ್ಯ ರಸ್ತೆ, ಡಾ.ಬಿ.ಆರ್.ಅಂಬೇಡ್ಕರ್ ವೃತ್ತ (ಎಫ್‌ಟಿಎಸ್) ಮತ್ತು ಗಾಂಧಿ ನಗರ ಮುಖ್ಯ ರಸ್ತೆಯಲ್ಲಿ ಸಂಚರಿಸಿದ ರ‍್ಯಾಲಿಯು ಮಾರುತಿ ವೃತ್ತದಲ್ಲಿ ಮುಕ್ತಾಯಗೊಂಡಿತು. ಎನ್‌ಆರ್ ಕ್ಷೇತ್ರದ ಮಂಡಲ ಅಧ್ಯಕ್ಷ ಸ್ಮಾರ್ಟ್ ಮಂಜು, ಕಾರ್ಯದರ್ಶಿಗಳಾದ ಭಾನುಪ್ರಕಾಶ್, ಪದ್ಮನಾಭ್, ವಿನೋದ್, ಮುಖಂಡರಾದ ಶಾಂತ, ಕಾರ್ತಿಕ್, ನವೀನ್ ರಾಜ್, ಮಮತಾ ಸೇರಿದಂತೆ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು.

'ನಾರಿ ಶಕ್ತಿ ವಂದನಾ ಯಾತ್ರೆ' ಶೀರ್ಷಿಕೆಯಡಿ ಚಾಮರಾಜ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ ಸ್ಕೂಟರ್ ರ‍್ಯಾಲಿ ನಡೆಸಲಾಯಿತು. ಪಕ್ಷದ ಮಹಿಳಾ ಮುಖಂಡರು, ಕಾರ್ಯಕರ್ತೆಯರೊಂದಿಗೆ ಕೆಲ ಪುರುಷರು ಬೈಕ್‌ನಲ್ಲಿ ಸಾಥ್ ನೀಡಿದರು. ಕ್ಷೇತ್ರದ ವಿವಿಧ ರಸ್ತೆಗಳಲ್ಲಿ ರ‍್ಯಾಲಿ ಸಂಚರಿಸಿತು.

ಮೈಸೂರು ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ ರ‍್ಯಾಲಿಗೆ ಚಾಲನೆ ನೀಡಿದರು. ಚಾಮರಾಜ ಕ್ಷೇತ್ರದ ಬಿಜೆಪಿ ಅಧ್ಯಕ್ಷ ದಿನೇಶ್‌ಗೌಡ, ಮೈಸೂರು ನಗರ ಬಿಜೆಪಿ ಪ್ರಧಾನ ಕಾರ್ಯದರ್ಶಿ ಕೇಬಲ್ ಮಹೇಶ್, ಯುವ ಮೋರ್ಚಾ ನಗರಾಧ್ಯಕ್ಷ ಆರ್.ರಾಕೇಶ್‌ಗೌಡ, ಮಹಿಳಾ ಮೋರ್ಚಾ ಅಧ್ಯಕ್ಷೆ ರೇಣುಕಾ ರಾಜ್, ಪ್ರಧಾನ ಕಾರ್ಯದರ್ಶಿ ಮಮತಾ ಶೆಟ್ಟಿ, ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿ ಪುನೀತ್, ಕಾರ್ಯದರ್ಶಿಗಳಾದ ಕಿರಣ್‌ಗೌಡ, ಸಂತೋಷ್ ಕುಮಾರ್, ಉಪಾಧ್ಯಕ್ಷ ಜೋಗಿ ಮಂಜು ಸೇರಿದಂತೆ ಮಹಿಳಾ ಕಾರ್ಯಕರ್ತರು ಪಾಲ್ಗೊಂಡಿದ್ದರು.

ಚಕ್ರ ಇನಾಮ್ ಭೂಮಿ ವರ್ಗಾವಣೆ ರದ್ದಿಗೆ ಆಗ್ರಹಿಸಿ ಇಂದು ಪ್ರತಿಭಟನೆ

ಮೈಸೂರು,ಮಾ.5(ಎಂಟಿವೈ)– ಚಕ್ರ ಇನಾಮ್ ಭೂಮಿ ವರ್ಗಾವಣೆ ರದ್ದು ಮಾಡುವುದು ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ನಾಳೆ (ಬುಧವಾರ) ಬೆಳಗ್ಗೆ 10.30ಕ್ಕೆ ನಗರದ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ಸಮತಾ ಸೈನಿಕ ದಳ ಜಿಲ್ಲಾಧ್ಯಕ್ಷ ಗೋವಿಂದರಾಜು ತಿಳಿಸಿದ್ದಾರೆ.

ಚಕ್ರ ಇನಾಮ್ ಜಮೀನಿಗೆ ಸಂಬಂಧಿಸಿದಂತೆ ಅವಧಿ ಪೂರ್ಣ ಮಾರಾಟ ಹಾಗೂ ಚಕ್ರ ಇನಾಮ್ ಇಲ್ಲದವರು, ಇನಾಮ್ ಭೂಮಿಗಳನ್ನ ವರ್ಗಾವಣೆ ಮಾಡಿಕೊಂಡಿದ್ದು ಇದನ್ನು ರದ್ದುಪಡಿಸಿ ಚಕ್ರ ಇನಾಮ್ದಾರರಿಗೆ ಮರು–ಮಂಜೂರು ಮಾಡಬೇಕು. ಹುಣಸೂರಿನ ಸರ್ವೆ ನಂ 352, 385ರ ಜಮೀನಿನ ಪರಿಶಿಷ್ಟ ಜಾತಿಯವರ ಜಮೀನು ಖರೀದಿಯನ್ನು ರದ್ದು ಮಾಡಿ ಮೂಲ ಮಂಜೂರುದಾರರಿಗೆ ನೀಡಬೇಕು. ದಲಿತರ ಭೂಮಿ ಖರೀದಿಸದಂತೆ ತಡೆಯಬೇಕು. ಮೈಸೂರು ತಾಲೂಕು ದೊಡ್ಡಮಾರೆಗೌಡನಹಳ್ಳಿ ಸರ್ವೆ ನಂ.186ರ ಜಮೀನನ್ನು 30 ಮಂದಿ ಬಡ ದಲಿತ ಸಾಗುವಳಿದಾರರ ಪತ್ರದ ರದ್ದತಿ ವಾಪಸು ಪಡೆದು ಮತ್ತೆ ಅವರಿಗೇ ನೀಡಬೇಕು ಎಂದು ಒತ್ತಾಯಿಸಿ ಪ್ರತಿಭಟನೆ ನಡೆಸುತ್ತಿರುವುದಾಗಿ ಅವರು ತಿಳಿಸಿದ್ದಾರೆ.

(ಮಂಗಳವಾರ 'ಮೈಸೂರು ಮಿತ್ರ' ಸಂಚಿಕೆಯಲ್ಲಿ ಈ ಸುದ್ದಿಯೊಂದಿಗೆ ಬೇರೆ ಚಿತ್ರ ಪ್ರಕಟವಾಗಿತ್ತು.)

ಜಯಲಲಿತಾ ಆಭರಣ ತಮಿಳುನಾಡು ಸರ್ಕಾರಕ್ಕೆ ಹಸ್ತಾಂತರಕ್ಕೆ ಹೈಕೋರ್ಟ್ ತಡೆ



ಬೆಂಗಳೂರು: ತಮಿಳುನಾಡಿನ ಮಾಜಿ ಮುಖ್ಯಮಂತ್ರಿ ದಿವಂಗತ ಜೆ.ಜಯಲಲಿತಾ ವಿರುದ್ಧದ ಅಕ್ರಮ ಆಸ್ತಿ ಗಳಿಕೆಗೆ ಸಂಬಂಧಿಸಿದ ಪ್ರಕರಣದಲ್ಲಿ ವಶಕ್ಕೆ ಪಡೆಯಲಾದ ಚಿನ್ನಾಭರಣಗಳನ್ನು ನಗರದ ವಿಶೇಷ ನ್ಯಾಯಾಲಯದ ಸುಪರ್ದಿಯಿಂದ ತಮಿಳುನಾಡು ಸರ್ಕಾರಕ್ಕೆ ಹಸ್ತಾಂತರಿಸುವ ಪ್ರಕ್ರಿಯೆಗೆ ಹೈಕೋರ್ಟ್ ಮಧ್ಯಂತರ ತಡೆ ನೀಡಿದೆ.

ಹಸ್ತಾಂತರ ಪ್ರಕ್ರಿಯೆ ಪ್ರಶ್ನಿಸಿ ಜಯಲಲಿತಾ ಅವರ ಅಣ್ಣ ಜಯಕುಮಾರ್ ಪುತ್ರಿ ಜೆ.ದೀಪಾ ಸಲ್ಲಿಸಿರುವ ಕ್ರಿಮಿನಲ್ ಮೇಲ್ಮನವಿಯನ್ನು ನ್ಯಾಯಮೂರ್ತಿ ಪಿ.ಎಂ.ನವಾಜ್ ಅವರಿದ್ದ ಏಕಸದಸ್ಯ ನ್ಯಾಯಪೀಠ ಮಂಗಳವಾರ ವಿಚಾರಣೆ ನಡೆಸಿ ಈ ಕುರಿತಂತೆ ಆದೇಶಿಸಿದೆ. ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ದಿವಂಗತ ಜಯಲಲಿತಾ ಅವರಿಗೆ ಸೇರಿದ ಚಿನ್ನಾಭರಣಗಳನ್ನು ತಮಿಳುನಾಡು ಸರ್ಕಾರಕ್ಕೆ ಹಸ್ತಾಂತರಿಸುವಂತೆ ನಗರದ 36ನೇ ಹೆಚ್ಚುವರಿ ಸಿಟಿ ಸಿವಿಲ್ ಕೋರ್ಟ್‌ನ ವಿಶೇಷ ನ್ಯಾಯಾಲಯ 2023ರ ಜುಲೈ 12ರಂದು ಆದೇಶಿಸಿದೆ. ಆದರೆ, ಅರ್ಜಿದಾರರಾದ ಜೆ.ದೀಪಾ ಅವರು ಜಯಲಲಿತಾರ ಕಾನೂನು ಬದ್ಧ ವಾರಸುದಾರರಾಗಿದ್ದು, ಎಲ್ಲ ಚಿನ್ನಾಭರಣಗಳನ್ನು ಅವರಿಗೇ ಹಸ್ತಾಂತರಿಸಲು ನಿರ್ದೇಶಿಸಬೇಕು. ಅರ್ಜಿ ಇತ್ಯರ್ಥಗೊಳ್ಳುವ ಮೊದಲು ವಿಶೇಷ ನ್ಯಾಯಾಲಯದ ಆದೇಶಕ್ಕೆ ಮಧ್ಯಂತರ ತಡೆ ನೀಡಬೇಕು ಎಂದು ಕೋರಿದರು. ಇದನ್ನು ದಾಖಲಿಸಿಕೊಂಡ ನ್ಯಾಯಪೀಠ, ಅರ್ಜಿಗೆ ಸಂಬಂಧಿಸಿದಂತೆ ಆಕ್ಷೇಪಣೆ ಸಲ್ಲಿಸಿ ಎಂದು ಪ್ರಕರಣದ ವಿಶೇಷ ಪ್ರಾಸಿಕ್ಯೂಟರ್ ಕಿರಣ್ ಎಸ್. ಜವಳಿ ಅವರಿಗೆ ನಿರ್ದೇಶಿಸಿ ವಿಚಾರಣೆಯನ್ನು ಇದೇ 26ಕ್ಕೆ ಮುಂದೂಡಿತು.

ದೆಹಲಿ ರ‍್ಯಾಲಿಗೆ ರಾಜ್ಯದಿಂದ ಐದು ಸಾವಿರ ರೈತರು ಭಾಗಿ



ರೈತರ ಬೇಡಿಕೆ ಈಡೇರಿಕೆಗಾಗಿ ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ಪತ್ರಿಕಾಗೋಷ್ಠಿ ನಡೆಸಿದರು.

ಮೈಸೂರು, ಮಾ.5(ಎಸ್‌ಪಿಎನ್)– ರೈತರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಮಾ.14ರಂದು ನವದೆಹಲಿಯ ರಾಮಲೀಲಾ ಮೈದಾನದಲ್ಲಿ ಸಂಯುಕ್ತ ಕಿಸಾನ್ ಮೋರ್ಚಾದಿಂದ ಬೃಹತ್ ಪ್ರತಿಭಟನಾ ಸಭೆ ಆಯೋಜಿಸಿದ್ದು, ಈ ಸಭೆಯನ್ನು ಬೆಂಬಲಿಸಿ ಕರ್ನಾಟಕದಿಂದ ಸುಮಾರು 5 ಸಾವಿರ ರೈತರು ಭಾಗಿಯಾಗಲಿದ್ದಾರೆ ಎಂದು ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ತಿಳಿಸಿದರು.

ಮೈಸೂರು–ಹುಣಸೂರು ರಸ್ತೆಯಲ್ಲಿರುವ ಜಲದರ್ಶಿನಿ ಸರ್ಕಾರಿ ವಸತಿಗೃಹದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಹಿಂದೆ ಪ್ರತಿಭಟನೆ ಸಂದರ್ಭದಲ್ಲಿ ಕೇಂದ್ರ ಸರ್ಕಾರ, ರೈತರಿಗೆ ಹಲವು ಬೇಡಿಕೆಗಳನ್ನು ಈಡೇರಿಸುವ ಭರವಸೆ ನೀಡಿದ್ದು. ಆದರೆ ಕೇಂದ್ರ ಸರ್ಕಾರ ಕೊಟ್ಟಮಾತಿನಂತೆ ನಡೆದುಕೊಂಡಿಲ್ಲ ಹಾಗೂ ಕೃಷಿ ಉತ್ಪನ್ನಗಳಿಗೆ ಎಂ.ಎಸ್.ಪಿ ನಿಗದಿಗೊಳಿಸಿ, ಅದಕ್ಕೆ ಕಾನೂನು ಮಾನ್ಯತೆ ನೀಡುವ ಕುರಿತು ಸರ್ಕಾರ ಮುಂದಾಗಿಲ್ಲ ಎಂದು ಟೀಕಿಸಿದರು.

1.50 ಲಕ್ಷ ರೈತರು ಆತ್ಮಹತ್ಯೆ: ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಅಧಿಕಾರಕ್ಕೆ ಬಂದು 10 ವರ್ಷ ಪೂರೈಸುತ್ತಿದೆ. ಈ ಅವಧಿಯಲ್ಲಿ ದುಡಿಯುವ ವರ್ಗವನ್ನು ರಕ್ಷಿಸದೇ, ಅವರಿಗೆ ಮಾರಕವಾಗುವ ಕಾನೂನು ಜಾರಿಗೊಳಿಸಿದ್ದೇ ಸಾಧನೆ. ಈ ಸರ್ಕಾರದ ಆಡಳಿತಾವಧಿಯಲ್ಲಿ ಇದುವರೆವಿಗೂ 1.50ಲಕ್ಷ ರೈತರು ವಿವಿಧ ಕಾರಣಗಳಿಗಾಗಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಕೇಂದ್ರ ಸರ್ಕಾರ ರೈತ ವಿರೋಧಿ ನೀತಿಯನ್ನು ಖಂಡಿಸಿ 2020ರಿಂದ 2021ರ ನವೆಂಬರ್‌ವರೆಗೆ ರೈತರು ಪ್ರತಿಭಟನೆ ನಡೆಸಿದ್ದರು. ಈ ಹೋರಾಟ ಹತ್ತಿಕ್ಕಲು ಕೇಂದ್ರ ಸರ್ಕಾರ ವಾಮಮಾರ್ಗ ಅನುಸರಿಸಿತು.

782 ಮಂದಿ ಸಾವು: ಈ ಹಿಂದೆ ನವದೆಹಲಿಯಲ್ಲಿ ಪ್ರತಿಭಟನೆ ನಡೆಸುತ್ತಿದ್ದ ರೈತರ ಮೇಲಿನ ದೌರ್ಜನ್ಯ ಕುರಿತು ಅಂತರರಾಷ್ಟ್ರೀಯ ಮಾಧ್ಯಮದಲ್ಲಿ ಭಾರಿ ಸದ್ದು ಮಾಡಿತು. ವಿಶ್ವಸಂಸ್ಥೆಯಲ್ಲೂ ರೈತರ ಪ್ರತಿಭಟನೆಯನ್ನು ಬಲಪ್ರಯೋಗದ ಮೂಲಕ ಹತ್ತಿಕ್ಕಬಾರದು ಎಂದು ವಿಶ್ವಮಾನವ ಹಕ್ಕುಗಳ ಸಂಸ್ಥೆ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದ್ದ ಸಂದರ್ಭವನ್ನು ವಿವರಿಸಿದರಲ್ಲದೆ, ಈ ಹೋರಾಟದಲ್ಲಿ ಒಟ್ಟು 782 ಮಂದಿ ವಿವಿಧ ಸಂದರ್ಭದಲ್ಲಿ ಸಾವನ್ನಪ್ಪಿದ್ದ ಪ್ರಸಂಗವನ್ನು ವಿವರಿಸಿದರು.

ಆರೋಪಿಗೆ ಟಿಕೆಟ್ ಬೇಡ: ಉತ್ತರ ಪ್ರದೇಶದ ಲಖಿಂಪುರ ಖೇರಿಯಲ್ಲಿ ಪ್ರತಿಭಟನಾನಿರತ ರೈತರ ಮೇಲೆ ವಾಹನ ಹರಿಸಿ ಬಲಿ ತೆಗೆದುಕೊಂಡ ಆರೋಪಿ ಅಜಯ್ ಮಿಶ್ರಾ ತೇನಿಗೆ ಈ ಬಾರಿ ಲೋಕಸಭೆ ಟಿಕೆಟ್‌ಅನ್ನು ಬಿಜೆಪಿಯಿಂದ ನೀಡುವ ಸಂಭವವಿದೆ. ಆತನಿಗೆ ಈ ಬಾರಿ ಟಿಕೆಟ್ ನೀಡಿದರೆ ದೇಶಾದ್ಯಂತ ಬಿಜೆಪಿ ವಿರುದ್ಧ ಹೋರಾಟ ರೂಪಿಸುತ್ತೇವೆ ಎಂದರು.

ನರೇಗಾದ ದುಡಿಮೆ ಅವಧಿ ಇಳಿಕೆ: ನರೇಗಾ ಯೋಜನೆಯಡಿ 100 ದಿನಗಳವರೆಗೆ ನೀಡುವ ಉದ್ಯೋಗವನ್ನು 44 ದಿನಗಳಿಗೆ ಇಳಿಸಿದೆ. ಈ ನಿರ್ಧಾರದಿಂದ ದುಡಿಯುವ ಜನರ ಉದ್ಯೋಗವನ್ನು ಕೇಂದ್ರ ಸರ್ಕಾರ ಕಸಿದಿದೆ ಎಂದರು.

ಮಾ.16ರಂದು ಕಿಸಾನ್ ಮಜ್ದೂರ್ ಪಂಚಾಯ್ತ್: ಕಾರ್ಮಿಕರ ಕಾನೂನುಗಳಿಗೆ ತಿದ್ದುಪಡಿ ತಂದು 8 ಗಂಟೆ ಅವಧಿ ಇದ್ದ ಸಮಯವನ್ನು 12 ಗಂಟೆಗೇರಿಸಿದೆ. ಇದರಿಂದ ಆಡಳಿತ ವರ್ಗ ಕಾರ್ಮಿಕರನ್ನು ಜೀತದಾಳುಗಳಂತೆ ನಡೆಸಿಕೊಳ್ಳುವ ಸಂಭವವಿದೆ. ಕೂಡಲೇ ಕಾರ್ಮಿಕ ಕಾನೂನಿಗೆ ತಿದ್ದುಪಡಿ ತರಬೇಕು ಎಂದು ಒತ್ತಾಯಿಸಿದರು. ನವದೆಹಲಿಯಲ್ಲಿ ನಡೆಯುತ್ತಿರುವ ರೈತರ ಹೋರಾಟ ಬೆಂಬಲಿಸಿ, ಮಾ.16ರಂದು ಚಿತ್ರದುರ್ಗದಲ್ಲಿ ಕಿಸಾನ್ ಮಜ್ದೂರ್ ಪಂಚಾಯ್ತ್ ಆಯೋಜಿಸಲಾಗಿದೆ ಎಂದರು. ಈ ವೇಳೆ ರೈತ ಮುಖಂಡರಾದ ಹೊಸಕೋಟೆ ಬಸವರಾಜು, ಮರಂಕಯ್ಯ, ಪ್ರಸನ್ನ ಎನ್.ಗೌಡ ಇದ್ದರು.

ಶಂಭುದೇವನಪುರದಲ್ಲಿ ಗ್ರಾಮ ಪರಿಕ್ರಮ ಯಾತ್ರೆ ಕಾರ್ಯಕ್ರಮ

ಆಹಾರ ಉತ್ಪಾದನೆಯಲ್ಲಿ ಭಾರತ ನಂ.1 ಆಗಬೇಕೆಂಬುದು ಮೋದಿ ಸಂಕಲ್ಪ

ರಾಜ್ಯ ಬಿಜೆಪಿ ರೈತ ಮೋರ್ಚಾ ಅಧ್ಯಕ್ಷ ಎ.ಎಸ್.ಪಾಟೀಲ್ ನಡಹಳ್ಳಿ



ಶಂಭುದೇವನಪುರದಲ್ಲಿ ಕೃಷಿ ಪರಿಕರಗಳಿಗೆ ಪೂಜೆ ಸಲ್ಲಿಸಿದ ಬಿಜೆಪಿ ನಾಯಕರು

ತಿ.ನರಸೀಪುರ, ಮಾ.5– ಭಾರತ ವಿಶ್ವದಲ್ಲೇ ಅತೀ ಹೆಚ್ಚು ಆಹಾರ ಧಾನ್ಯಗಳನ್ನು ಬೆಳೆಯುವ ಎರಡನೇ ರಾಷ್ಟ್ರವಾಗಿದ್ದು, ಚೀನಾ ಹಿಂದಿಕ್ಕಿ ಭಾರತ ಮೊದಲ ರಾಷ್ಟ್ರವಾಗಬೇಕೆಂಬ ಸಂಕಲ್ಪ ಪ್ರಧಾನಿ ನರೇಂದ್ರ ಮೋದಿಯವರದ್ದಾಗಿದೆ ಎಂದು ರಾಜ್ಯ ಬಿಜೆಪಿ ರೈತ ಮೋರ್ಚಾ ಅಧ್ಯಕ್ಷ ಎ.ಎಸ್.ಪಾಟೀಲ್ ನಡಹಳ್ಳಿ ತಿಳಿಸಿದರು.

ತಾಲೂಕಿನ ಶಂಭುದೇವಪುರದಲ್ಲಿ ರೈತ ಮೋರ್ಚಾ ಹಮ್ಮಿಕೊಂಡಿದ್ದ ಗ್ರಾಮ ಪರಿಕ್ರಮ ಯಾತ್ರೆ ಕಾರ್ಯಕ್ರಮದಲ್ಲಿ ರೈತರು ವ್ಯವಸಾಯಕ್ಕೆ ಬಳಸುವ ಪರಿಕರಗಳಿಗೆ ಪೂಜೆ ಸಲ್ಲಿಸಿ ನಂತರ ಅವರು ಮಾತನಾಡಿದರು.

ರೈತನನ್ನು ಮಾತ್ರ ಮಹಾ ಸಂತ ಎನ್ನಲಾಗುತ್ತದೆ. ಕಾಯಕ ಮತ್ತು ದಾಸೋಹ ತತ್ವವನ್ನು ಜೀವನದಲ್ಲಿ ಅಳವಡಿಸಿಕೊಂಡು ಪ್ರಕೃತಿಯೊಂದಿಗೆ ಸರಳ ಜೀವನ ನಡೆಸುವ ವ್ಯಕ್ತಿ ಎಂದರೆ ಅದು ರೈತ ಮಾತ್ರ. ಬಿಸಿಲು, ಮಳೆ, ಚಳಿ ಎನ್ನದೇ ಆತ ನಿರಂತರವಾಗಿ ದುಡಿಯುತ್ತಾನೆ. ಕಾಯಕ ಆತನ ಬದುಕು. ಅದಕ್ಕಾಗಿಯೇ ಬಸವಣ್ಣನವರು ಕಾಯಕವೇ ಕೈಲಾಸ ಎಂದು ಹೇಳಿದ್ದಾರೆ. ನಿಜವಾದ ಕಾಯಕ ಯೋಗಿ ರೈತನನ್ನು ಎಲ್ಲರೂ ಗೌರವಿಸಬೇಕಿದೆ ಎಂದರು.

ಎಥೆನಾಲ್ ಪಾಲಿಸಿಯಿಂದ ಕಬ್ಬಿನ ಬೆಲೆ ಏರಿಕೆ: ಭವಿಷ್ಯದಲ್ಲಿ ರೈತರು ಬೆಳೆಯುವ ಕಬ್ಬಿನ ಬೆಲೆ ಪ್ರತಿ ಟನ್‌ಗೆ 10 ರಿಂದ 12 ಸಾವಿರ ರೂ.ಗಳಾಗಲಿವೆ. ಪೆಟ್ರೋಲ್‌ಗೆ ಎಥೆನಾಲ್ ಮಿಕ್ಸ್ ಮಾಡುವ ಪಾಲಿಸಿಯನ್ನು ಪ್ರಧಾನಿ ಮೋದಿ ತಂದಿದ್ದಾರೆ. ಜಗತ್ತಿನಲ್ಲಿ ಅಮೆರಿಕಾ, ಬ್ರೆಜಿಲ್ ಬಿಟ್ಟರೆ ನಮ್ಮ ದೇಶದಲ್ಲಿ ಈ ಪಾಲಿಸಿ ಜಾರಿಯಾಗಲಿದ್ದು ಇದರಿಂದ ಕಬ್ಬು ಬೆಳೆಗಾರರಿಗೆ ಅನುಕೂಲವಾಗಲಿದೆ ಎಂದರು.

ಸಿದ್ದು ಮಾಡಿದ್ದು, ಮನೆ ಹಾಳು ಕೆಲಸ: ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಡಿದ ಏಕೈಕ ಸಾಧನೆ ಎಂದರೆ ಅದು ನಮ್ಮ ಮನೆ ಹಾಳು ಮಾಡುವ ಕೆಲಸ ಮಾತ್ರ. ಮಹಿಳೆಯರಿಗೆ 2 ಸಾವಿರ ರೂ., ಬಸ್‌ನಲ್ಲಿ ಉಚಿತ ಪ್ರಯಾಣ ಕಲ್ಪಿಸಿರುವುದರಿಂದ ಇಂದು ಅದೆಷ್ಟೋ ಮನೆಗಳಲ್ಲಿ ಕಲಹಗಳಾಗಿವೆ. ನರೇಂದ್ರ ಮೋದಿ ಹಾಗೂ ಯಡಿಯೂರಪ್ಪ ಸರ್ಕಾರದಿಂದ ರೈತರಿಗೆ ತಿಂಗಳಿಗೆ ಐದಾರು ಸಾವಿರ ರೂ.ಗಳ ಸಹಾಯಧನ ಸಿಗುತ್ತಿತ್ತು. ವರ್ಷಕ್ಕೆ 30 ರಿಂದ 50 ಸಾವಿರ ರೂ. ರೈತರ ಖಾತೆಗೆ ಜಮೆಯಾಗುತ್ತಿತ್ತು. ಅದನ್ನು ಸಂಪೂರ್ಣ ನಿಲ್ಲಿಸಿ ರಾಜ್ಯ ಸರ್ಕಾರ ಮಹಿಳೆಯರ ಕೈಗೆ ಹಣ ನೀಡಿ ನಮ್ಮ ಮನೆ ಹಾಳು ಮಾಡುವ ಕೆಲಸಕ್ಕೆ ಮುಂದಾಗಿದ್ದು, ಈ ಬಗ್ಗೆ ರಾಜ್ಯಾದ್ಯಂತ ಪಕ್ಷದ ಕಾರ್ಯಕರ್ತರು ಮನೆ ಮನೆಗೆ ತೆರಳಿ ಜಾಗೃತಿ ಮೂಡಿಸುವ ಕೆಲ ಮಾಡಿ ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಡಾ.ನವೀನ್, ಜಿಲ್ಲಾ ಗ್ರಾಮಾಂತರ ಕಾರ್ಯದರ್ಶಿ ವಾಸುದೇವ್, ಜಿಲ್ಲಾ ರೈತ ಮೋರ್ಚಾ ಅಧ್ಯಕ್ಷ ಶ್ರೀನಿವಾಸ್‌ಗೌಡ, ಡಾ.ರೇವಣ್ಣ, ಕ್ಷೇತ್ರಾಧ್ಯಕ್ಷ ಸತೀಶ್, ಶಿವಕುಮಾರ್, ಜಿಲ್ಲಾ ರೈತ ಮೋರ್ಚಾ ಉಪಾಧ್ಯಕ್ಷ ಎಸ್.ಬಿ.ಟಿ.ಸುರೇಶ್, ಸುಗಂಧರಾಜು, ಜಿಲ್ಲಾ ಕಾರ್ಯದರ್ಶಿ ಮಹೇಶ್, ಉಪಾಧ್ಯಕ್ಷ ರಮೇಶ್ ಕುಮಾರ್, ಮುಖಂಡರಾದ ಶಿವಕುಮಾರ್, ಶಂಭುದೇವಪುರ ಕುಮಾರ್, ನಂದನ್, ಮಾಧ್ಯಮ ವಕ್ತಾರ ದಯಾನಂದ್ ಪಟೇಲ್, ರಮೇಶ್ ಕುಮಾರ್, ಬಸವರಾಜು, ಕರೋಹಟ್ಟಿ ಮಹದೇವಯ್ಯ, ಈರೇಗೌಡ, ಕುಮಾರಸ್ವಾಮಿ, ಗೌಡ್ರು ಮಹದೇವಸ್ವಾಮಿ, ಶಿವಕುಮಾರ್, ವೆಂಕಟರಮಣಶೆಟ್ಟಿ, ರಾಹುಲ್, ರೇಚಣ್ಣ, ಬಿದರಗೂಡು ಶಿವಕುಮಾರ್, ದಾಸಯ್ಯ, ಪ್ರಭುಸ್ವಾಮಿ ಮತ್ತಿತರರಿದ್ದರು.

ಸಿದ್ದರಾಮಯ್ಯರದ್ದು ದರಿದ್ರ ಸರ್ಕಾರ: ಎಲ್.ಆರ್.ಮಹದೇವಸ್ವಾಮಿ

ಬಿ.ಎಸ್.ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದ ವೇಳೆ ಹೈನುಗಾರಿಕೆ ಮಾಡುವ ರೈತರಿಗೆ ಪ್ರತಿ ಲೀಟರ್ ಹಾಲಿಗೆ 2 ರೂ. ಪ್ರೋತ್ಸಾಹಧನ ನೀಡಿದ್ದರು. ಅಧಿಕಾರದಿಂದ ಇಳಿಯುವ ವೇಳೆಗೆ 5 ರೂ.ಗಳಿಗೆ ಹೆಚ್ಚಿಸಿ ನಿರ್ಗಮಿಸಿದ್ದರು. ಚುನಾವಣೆ ವೇಳೆ ಅಧಿಕಾರಕ್ಕೆ ಬಂದರೆ 7 ರೂ. ಪ್ರೋತ್ಸಾಹ ಧನ ನೀಡುವ ಭರವಸೆ ನೀಡಿದ್ದ ಕಾಂಗ್ರೆಸ್ ಅಧಿಕಾರಕ್ಕೆ ಬಂದು 9 ತಿಂಗಳಾದರೂ ಯಡಿಯೂರಪ್ಪ ನೀಡಿದ 5 ರೂ. ಸಹಾಯಧನ ನೀಡದ ದರಿದ್ರ ಸರ್ಕಾರ ಸಿದ್ದರಾಮಯ್ಯನವರದು ಎಂದು ಮೈಸೂರು ಜಿಲ್ಲಾ ಗ್ರಾಮಾಂತರ ಅಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಕಿಡಿಕಾರಿದರು.

ಬಿಜೆಪಿ ಸರ್ಕಾರದಲ್ಲಿ ರೈತರ ಪಂಪ್‌ಸೆಟ್‌ಗಳಿಗೆ ಎಕರೆಗೆ 250 ರೂ. ಸಬ್ಸಿಡಿ ನೀಡಿದ್ದೆವು. ಯಾವುದೇ ಜಾತಿ ಬೇಧ ಮಾಡದೇ ಎಲ್ಲಾ ರೈತರ ಮಕ್ಕಳಿಗೆ ಸ್ಕಾಲರ್‌ಷಿಪ್ ಕೊಡುವ ಯೋಜನೆ, ಅಲ್ಲದೇ ಪ್ರಧಾನಮಂತ್ರಿ ಕಿಸಾನ್ ಯೋಜನೆಯಡಿ ಕೇಂದ್ರದಿಂದ 6 ಹಾಗೂ ರಾಜ್ಯ ಸರ್ಕಾರದಿಂದ 4 ಸಾವಿರ ನೀಡಲಾಗುತ್ತಿತ್ತು. ಆದರೆ ಸಿದ್ದರಾಮಯ್ಯ ಸರ್ಕಾರ ಎಲ್ಲಾ ಯೋಜನೆಗಳನ್ನು ನಿಲ್ಲಿಸಿದೆ ಎಂದರು.

ರೈಲಿಗೆ ಸಿಲುಕಿ ವ್ಯಕ್ತಿ ಸಾವು

ನಂಜನಗೂಡು, ಮಾ.5– ಪತ್ನಿಯೊಂದಿಗೆ ವಿಡಿಯೋ ಕಾಲ್‌ನಲ್ಲಿ ಮಾತನಾಡುತ್ತಾ ರೈಲ್ವೆ ಕಂಬಿ ದಾಟುತ್ತಿದ್ದ ವ್ಯಕ್ತಿಯೋರ್ವ ರೈಲಿಗೆ ಸಿಲುಕಿ ಸಾವನ್ನಪ್ಪಿರುವ ಘಟನೆ ತಾಲೂಕಿನ ದೊಡ್ಡಕವಲಂದೆ ಗ್ರಾಮದಲ್ಲಿ ನಡೆದಿದೆ.

ಬಿಹಾರ ಮೂಲದ ಮನುಸಾಮಿ(30) ಮೃತಪಟ್ಟವರು. ಗ್ರಾಮದಲ್ಲಿ ಮರಗೆಲಸ ಮಾಡಿಕೊಂಡಿದ್ದ ಈತ ಮಂಗಳವಾರ ಬೆಳಗ್ಗೆ ಬಹಿರ್ದೆಸೆಗೆಂದು ಕೆರೆಗೆ ತೆರಳಿ ಮರಳಿ ವಾಪಸ್ ಬರುವಾಗ ತನ್ನ ಪತ್ನಿಯೊಂದಿಗೆ ವಿಡಿಯೋ ಕಾಲ್‌ನಲ್ಲಿ ಮಾತನಾಡುತ್ತಾ ರೈಲ್ವೆ ಕಂಬಿ ದಾಟುತ್ತಿದ್ದ ವೇಳೆ ಚಾಮರಾಜನಗರದಿಂದ ಮೈಸೂರಿಗೆ ತೆರಳುತ್ತಿದ್ದ ರೈಲಿಗೆ ಸಿಲುಕಿ ಸಾವನ್ನಪ್ಪಿದ್ದಾನೆ.

ವಿಷಯ ತಿಳಿದು ಸ್ಥಳಕ್ಕಾಗಮಿಸಿದ ರೈಲ್ವೆ ಪೊಲೀಸ್ ಠಾಣೆ ಎಎಸ್‌ಐ ಶ್ರೀನಿವಾಸ ಮೂರ್ತಿ ಪರಿಶೀಲನೆ ನಡೆಸಿದರು. ಬಳಿಕ ಶವವನ್ನು ಚಾಮರಾಜನಗರ ಜಿಲ್ಲಾಸ್ಪತ್ರೆಗೆ ರವಾನಿಸಿದರು. ಮೃತ ಮನುಸಾಮಿ ಕೆಲಸ ಮಾಡುತ್ತಿದ್ದ ಮೇಸ್ತ್ರಿ ಕಡೆಯವರ ಮೂಲಕ ಮೃತನ ಕುಟುಂಬಕ್ಕೆ ವಿಷಯ ಮುಟ್ಟಿಸಿದ್ದು, ಈ ಸಂಬಂಧ ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮಾ.22, ಶ್ರೀಕಂಠೇಶ್ವರಸ್ವಾಮಿ ಗೌತಮ ಪಂಚ ಮಹಾರಥೋತ್ಸವ

ಅಗತ್ಯ ಮೂಲ ಸೌಕರ್ಯ ಕಲ್ಪಿಸಲು ಡಿಸಿ ಸೂಚನೆ

ನಂಜನಗೂಡು, ಮಾ.5– ಶ್ರೀಕಂಠೇಶ್ವರಸ್ವಾಮಿಯವರ ದೊಡ್ಡ ಜಾತ್ರೆಗೆ ರಾಜ್ಯದ ವಿವಿಧೆಡೆಗಳಿಂದ ಆಗಮಿಸುವ ಭಕ್ತರ ಅನುಕೂಲಕ್ಕಾಗಿ ಅಧಿಕಾರಿಗಳು ದೇವಾಲಯದ ಆವರಣದಲ್ಲಿ ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ ಅಗತ್ಯ ಮೂಲ ಸೌಲಭ್ಯ ಕಲ್ಪಿಸಿ ಜಾತ್ರೆ ಯಶಸ್ವಿಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಸೂಚಿಸಿದರು.

ದೇವಾಲಯದ ದಾಸೋಹ ಭವನದಲ್ಲಿ ನಡೆದ ಜಾತ್ರೆ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಮಾ.22ರಂದು ಶ್ರೀಕಂಠೇಶ್ವರಸ್ವಾಮಿಯವರ ಗೌತಮ ಪಂಚ ಮಹಾರಥೋತ್ಸವ ಜರುಗಲಿದ್ದು, ರಾಜ್ಯದ ವಿವಿಧೆಡೆಗಳಿಂದ ಜಾತ್ರೆಗೆ ಆಗಮಿಸುವ ಭಕ್ತರ ಅನುಕೂಲಕ್ಕಾಗಿ ಶೌಚಾಲಯ ನಿರ್ಮಾಣ, ಕುಡಿಯುವ ನೀರಿನ ವ್ಯವಸ್ಥೆ, ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಿ ಸಾಂಕ್ರಾಮಿಕ ರೋಗ ಹರಡದಂತೆ ಎಚ್ಚರಿಕೆ ವಹಿಸಬೇಕು. ಪ್ರಸಾದ ವಿನಿಯೋಗಕ್ಕೆ ಸೇವಾರ್ಥದಾರರು ಮೊದಲೇ ಪರವಾನಗಿ ಪಡೆಯಬೇಕು. ಅಲ್ಲದೇ ಪ್ರಸಾದ ವಿತರಣೆ ಸಂದರ್ಭ ಮಾದರಿ ಸಂಗ್ರಹಿಸಿ ಪರೀಕ್ಷೆಗೆ ಒಳಪಡಿಸಬೇಕು ಮತ್ತು ಶುಚಿತ್ವ ಕಾಪಾಡಿಕೊಳ್ಳಬೇಕು. ಕಪಿಲಾ ನದಿ ಆಸು ಪಾಸು ನೈರ್ಮಲ್ಯ ಕಾಪಾಡಬೇಕು ಎಂದರು.



ಶ್ರೀಕಂಠೇಶ್ವರಸ್ವಾಮಿ ಜಾತ್ರೆ ಮಹೋತ್ಸವ ಸಂಬಂಧ ಪೂರ್ವಭಾವಿ ಸಭೆ ನಡೆಯಿತು.

> ಜಾತ್ರೆಯುದ್ದು ರಾಜ್ಯದ ವಿವಿಧ ಮೂಲೆಗಳಿಂದ ಭಕ್ತರು ಆಗಮಿಸುವ ಹಿನ್ನೆಲೆಯಲ್ಲಿ ಸಾರಿಗೆ ಇಲಾಖೆ ಮಾ.22 ರಿಂದ 24ರವರೆಗೆ ಹೆಚ್ಚಿನ ಬಸ್ ಸೌಲಭ್ಯ ಮತ್ತು ಹೆಚ್ಚುವರಿ ರೈಲು ಓಡಿಸಲು ಕ್ರಮ ವಹಿಸಬೇಕು.
> -ಡಾ.ಕೆ.ವಿ.ರಾಜೇಂದ್ರ, ಡಿಸಿ

ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಐದು ರಥಗಳನ್ನು ತಾಂತ್ರಿಕ ಪರೀಕ್ಷೆಗೆ ಒಳಪಡಿಸಿ ವರದಿ ನೀಡಬೇಕು. ರಥ ಸುಸ್ಥಿತಿಯಲ್ಲಿದೆಯೇ ಎಂಬ ಬಗ್ಗೆ ಪರಿಶೀಲಿಸಿ ಪ್ರಮಾಣ ಪತ್ರ ನೀಡಲು ಮುಂದಾಗಬೇಕು. ಅಲ್ಲದೇ ಜಾತ್ರೆ ಹಾಗೂ ತೆಪ್ಪೋತ್ಸವ ದಿನದಂದು ಕಪಿಲಾ ನದಿಗೆ ನೀರುಹರಿಸಲು ಕ್ರಮವಹಿಸಬೇಕು ಎಂದು ಸೂಚಿಸಿದರು.

ವಿದ್ಯುತ್ ಇಲಾಖೆ ನಗರದ ಪ್ರಮುಖ ರಸ್ತೆ ಹಾಗೂ ವೃತ್ತಗಳಲ್ಲಿ, ಸರ್ಕಾರಿ ಕಟ್ಟಡ, ದೇವಾಲಯದ ಆಸುಪಾಸಿನಲ್ಲಿ ವಿದ್ಯುತ್ ದೀಪಾಲಂಕಾರ ಮಾಡುವಂತೆ ಸಲಹೆ ನೀಡಿದ ಅವರು, ನಗರಸಭಾಧಿಕಾರಿಗಳು ನಗರದೆಲ್ಲೆಡೆ ಶುಚಿತ್ವ ಕಾಪಾಡುವಂತೆ ಸೂಚನೆ ನೀಡಿದರು.

ಸುರಕ್ಷತೆಗೆ ಆದ್ಯತೆ ನೀಡಿ: ಸುರಕ್ಷತೆ ದೃಷ್ಟಿಯಿಂದ ಬಸ್‌ನಿಲ್ದಾಣ ಸೇರಿದಂತೆ ಆಯಕಟ್ಟಿನ ಪ್ರದೇಶಗಳಲ್ಲಿ ತಾತ್ಕಾಲಿಕ ಸಿಸಿ ಟಿವಿ ಮತ್ತು ವಾಚ್ ಟವರ್‌ಗಳನ್ನು ನಿರ್ಮಿಸಲು ಕ್ರಮವಹಿಸಬೇಕು. ಅಲ್ಲದೇ ಜನಜಂಗುಳಿ ನಿಯಂತ್ರಿಸಲು ಪೊಲೀಸ್ ಅಧಿಕಾರಿಗಳು ಹೆಚ್ಚಿನ ಬಂದೋಬಸ್ತ್ ನಿಯೋಜಿಸಬೇಕು. ರಥ ಎಳೆಯುವವರಿಗೆ ದೇವಾಲಯದ ವತಿಯಿಂದ ಸಮವಸ್ತ್ರ ನೀಡಲಾಗುವುದು. ಸಮವಸ್ತ್ರ ಗುರುತಿನ ಚೀಟಿ, ಸಮವಸ್ತ್ರ ಇಲ್ಲದ ವ್ಯಕ್ತಿಗಳನ್ನು ನಿಯಂತ್ರಿಸಬೇಕು ಎಂದು ತಾಕೀತು ಮಾಡಿದರು.

ಸಭೆಯಲ್ಲಿ ಶಾಸಕ ದರ್ಶನ್, ಜಿಪಂ ಕಾರ್ಯದರ್ಶಿ ಕೃಷ್ಣರಾಜು, ದೇವಾಲಯದ ಇಓ ಜಗದೀಶ್, ಆರೋಗ್ಯಾಧಿಕಾರಿ ಈಶ್ವರ್ ಕಾನ್ಟ್ಕೆ, ಉಪ ಪೊಲೀಸ್ ವರಿಷ್ಠಾಧಿಕಾರಿ ಬಾಬು, ದೇವಾಲಯದ ಪ್ರಧಾನ ಅರ್ಚಕರಾದ ನಾಗಚಂದ್ರ ದೀಕ್ಷಿತ್, ನೀಲಕಂಠ ದೀಕ್ಷಿತ್ ಸೇರಿದಂತೆ ಹಲವರಿದ್ದರು.

ಸೂರಹಳ್ಳಿ ಪಿಎಸಿಎಸ್‌ಗೆ ನಿರ್ದೇಶಕರ ಆಯ್ಕೆ



ಮಲ್ಕುಂಡಿ, ಮಾ.5– ಇಲ್ಲಿಗೆ ಸಮೀಪದ ಸೂರಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಕಚೇರಿಯಲ್ಲಿ ಮಂಗಳವಾರ ನಡೆದ ಚುನಾವಣೆಯಲ್ಲಿ 11 ಮಂದಿ ನಿರ್ದೇಶಕರನ್ನು ಆಯ್ಕೆ ಮಾಡಲಾಯಿತು. ಸಂಘದ ಸಾಲಗಾರರ ಕ್ಷೇತ್ರದಲ್ಲಿ ಒಟ್ಟು 22 ಮಂದಿ ನಾಮಪತ್ರ ಸಲ್ಲಿಸಿದ್ದರು. ನಂತರ ನಡೆದ ಚುನಾವಣೆಯಲ್ಲಿ ಮಹಾಲಿಂಗಪ್ಪ, ರಾಜಶೇಖರ, ಕೆಂಪಣ್ಣ, ನಾಗರಾಜು, ಸಿದ್ದಪ್ಪ, ಮಾದಪ್ಪ, ನಾಗರತ್ನ, ಇಂದ್ರಾಣಿ, ಮಹದೇವನಾಯಕ, ಸಿ.ಮಂಜು ಆಯ್ಕೆಯಾದರು. ಇನ್ನು ಸಾಲಗಾರರಲ್ಲದ ಒಂದು ಕ್ಷೇತ್ರಕ್ಕೆ ಐವರು ನಾಮಪತ್ರ ಸಲ್ಲಿಸಿದ್ದರು. ಈ ಪೈಕಿ ತಗಡೂರು ನಾಯಕ ಆಯ್ಕೆಯಾದರು. ಚುನಾವಣಾಧಿಕಾರಿಯಾಗಿ ಪ್ರಸಾದ್ ಕಾರ್ಯ ನಿರ್ವಹಿಸಿದರು. ಈ ಸಂದರ್ಭ ಕಾಂಗ್ರೆಸ್ ಮುಖಂಡ ಲಕ್ಷ್ಮಣ್, ಸಿಇಓ ಎಸ್.ಮಹದೇವಸ್ವಾಮಿ ಸೇರಿದಂತೆ ಇತರರಿದ್ದರು.



ಹುಣಸೂರಿನ ಪ್ರಮುಖ ಸ್ಥಳದಲ್ಲಿ ಡಾ.ಬಿಆರ್.ಅಂಬೇಡ್ಕರ್ ಪ್ರತಿಮೆ ನಿರ್ಮಾಣಕ್ಕೆ ಒತ್ತಾಯಿಸಿ ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅವರಿಗೆ ದಲಿತ ಮುಖಂಡರು ಮನವಿ ಸಲ್ಲಿಸಿದರು.

ತಗಡೂರಲ್ಲಿ ತಿರಂಗ ಧ್ವಜ ಯಾತ್ರೆಗೆ ಚಾಲನೆ

ಪಾಕಿಸ್ತಾನ ಪರ ಘೋಷಣೆ ಖಂಡನೀಯ: ಸತೀಶ್



ತಿ.ನರಸೀಪುರ, ಮಾ.5– ನೂತನ ರಾಜ್ಯಸಭಾ ಸದಸ್ಯ ನಾಸೀರ್ ಹುಸೇನ್ ಬೆಂಬಲಿಗರು ಪಾಕಿಸ್ತಾನದ ಪರ ಘೋಷಣೆ ಕೂಗಿರುವುದು ಖಂಡನೀಯ ಎಂದು ವರುಣ ವಿಧಾನ ಸಭಾ ಕ್ಷೇತ್ರದ ಬಿಜೆಪಿ ಅಧ್ಯಕ್ಷ ಸತೀಶ್ ತಿಳಿಸಿದರು.

ತಾಲೂಕಿನ ತಗಡೂರಿನ ಜನತಾ ಪ್ರೌಢ ಶಾಲೆ ಆವರಣದಲ್ಲಿರುವ ರಾಷ್ಟ್ರಪಿತ ಮಹಾತ್ಮ ಗಾಂಧಿ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಮೂಲಕ ತಿರಂಗ ಧ್ವಜ ಯಾತ್ರೆಗೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ದೇಶದ ಮಣ್ಣು, ಗಾಳಿ, ನೀರು ಎಲ್ಲವನ್ನೂ ಪಡೆದ ನಾವು ಜೀವಿಸುವ ನೆಲದ ಬಗ್ಗೆ ಅಪಾರ ಗೌರವ ಹೊಂದಬೇಕು. ದೇಶದ ಸಾರ್ವಭೌಮತ್ವಕ್ಕೆ ಧಕ್ಕೆ ತರುವ ಹೇಳಿಕೆಯನ್ನು ಯಾರೂ ನೀಡಬಾರದು. ಪಾಕಿಸ್ತಾನ ಜಿಂದಾಬಾದ್ ಘೋಷಣೆ ಕೂಗಿರುವುದು ಖಂಡನೀಯ. ಮತ್ತೆ ಇಂತಹ ಘಟನೆ ಮರುಕಳಿಸಬಾರದು. ರಾಜ್ಯ ಸರ್ಕಾರ ತನಿಖೆ ತೀವ್ರಗೊಳಿಸಿ ಪಾಕಿಸ್ತಾನ ಪರ ಘೋಷಣೆ ಕೂಗಿದ ಆರೋಪಿಗಳನ್ನು ಬಂಧಿಸಿ ಉಗ್ರ ಶಿಕ್ಷೆ ನೀಡಬೇಕು ಎಂದು ಒತ್ತಾಯಿಸಿದರು.

ಈ ವೇಳೆ ಜಿಲ್ಲಾ ಬಿಜೆಪಿ ಎಸ್‌ಟಿ ಮೋರ್ಚಾ ಅಧ್ಯಕ್ಷ ಮುದ್ದುಕೃಷ್ಣ, ಕಾರ್ಯದರ್ಶಿ ವಾಸುದೇವ, ಶಿವಯ್ಯ, ರಾಜೇಂದ್ರ ಮಾಜಿ ಗ್ರಾಪಂ ಅಧ್ಯಕ್ಷ ನಾಗೇಶ್ ನಾಯಕ, ಮಹೇಶ, ಮಾದು ಹೆಳವರಹುಂಡಿ ಮಹೇಶ, ಯೋಗೇಶ್, ಕಾರ್ತಿಕ್, ಹುಳಿಮಾವು ಶಿವು, ಅಳಗಂಚಿ ಕುಮಾರ, ಪುಟ್ಟಣ್ಣ, ಚಿಕ್ಕಸ್ವಾಮಿ, ತಗಡೂರು ಪ್ರಜ್ವಲ್, ಶಶಿ, ಪ್ರದೀಪ್ ಪಟೇಲ್ ಇತರರಿದ್ದರು.



ಮಾರಮ್ಮ ಹಬ್ಬದ ಅಂಗವಾಗಿ ಮೂಗೂರಿನ ಅಂಬೇಡ್ಕರ್ ಬಡಾವಣೆ ಮಹಿಳೆಯರು, ಮಕ್ಕಳು ತಂಪಿನ ಆರತಿಯೊಂದಿಗೆ ಮೆರವಣಿಗೆಯಲ್ಲಿ ದೇವಾಲಯಕ್ಕೆ ತೆರಳಿ ಪೂಜೆ ಸಲ್ಲಿಸಿದರು. ಈ ವೇಳೆ ಗ್ರಾಮದ ಮುಖಂಡರು, ಯಜಮಾನರು ಹಾಜರಿದ್ದರು.

ನಂಜನಗೂಡು ನಗರಸಭೆಗೆ 2.50 ಕೋಟಿ ಉಳಿತಾಯ ಬಜೆಟ್

ನಂಜನಗೂಡು, ಫೆ.5– ಇಲ್ಲಿನ ನಗರಸಭೆಯಲ್ಲಿ 2024–25ನೇ ಸಾಲಿಗೆ 60.19 ಕೋಟಿ ವೆಚ್ಚದ ಬೃಹತ್ ಬಜೆಟ್ ಸಿದ್ಧಪಡಿಸಲಾಗಿದ್ದು, 2.50 ಕೋಟಿ ಉಳಿತಾಯ ಬಜೆಟ್ ಮಂಡಿಸಲಾಗಿದೆ ಎಂದು ನಗರಸಭೆ ಆಡಳಿತಾಧಿಕಾರಿಯೂ ಆದ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ತಿಳಿಸಿದರು.

ಇಲ್ಲಿನ ನಗರಸಭೆ ಸಭಾಂಗಣದಲ್ಲಿ ಮಂಗಳವಾರ ಬಜೆಟ್ ಮಂಡಿಸಿ ಮಾತನಾಡಿದ ಅವರು, ಪ್ರಾರಂಭಿಕ ಶುಲ್ಕ 16.61 ಕೋಟಿ ಸೇರಿದಂತೆ ಆಸ್ತಿ ತೆರಿಗೆ, ಖಾತೆ ಶುಲ್ಕ, ನೀರಿನ ಶುಲ್ಕ ಸೇರಿದಂತೆ ಇತರೆ ಮೂಲಗಳಿಂದ 20 ಕೋಟಿ ಆದಾಯ ಬರುವ ನಿರೀಕ್ಷೆ ಇದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಎಸ್‌ಎಫ್‌ಸಿ ವೇತನ ಅನುದಾನ, ಬೀದಿ ದೀಪ, ವಿದ್ಯುತ್, ನೀರು ಸರಬರಾಜು, 15ನೇ ಹಣಕಾಸು ಯೋಜನೆ ಸೇರಿದಂತೆ ವಿವಿಧ ಯೋಜನೆಯಡಿ 25 ಕೋಟಿ ಆದಾಯ ಬರುವ ಸಾಧ್ಯತೆಯೊಂದಿಗೆ 2024–25ನೇ ಸಾಲಿಗೆ 62.7 ಕೋಟಿ ಆದಾಯ ನಿರೀಕ್ಷಿಸಲಾಗಿದೆ ಎಂದರು.

ನಗರಸಭೆ ಆಸ್ತಿ ರಚನೆಗೆ ಕ್ರಮ: ಈ ಬಾರಿ ನಗರಸಭೆಗೆ ಆದಾಯ ಬರುವ ಆಸ್ತಿಗಳನ್ನು ಸೃಷ್ಟಿಸಲು ಕ್ರಮ ವಹಿಸಲಾಗಿದೆ. ಅಲ್ಲದೆ ಕಪಿಲಾ ನದಿ ಸ್ವಚ್ಛತೆ ಗಮನದಲ್ಲಿಟ್ಟುಕೊಂಡು ಬಜೆಟ್ ಮಂಡಿಸಲಾಗಿದೆ. ಎಲ್ಲಾ ವಾರ್ಡ್‌ಗಳಲ್ಲಿ ರಸ್ತೆ, ಪಾದಚಾರಿ ರಸ್ತೆ ಹಾಗೂ ಚರಂಡಿ ನಿರ್ಮಾಣಕ್ಕೆ 9.5 ಕೋಟಿ, ಘನತ್ಯಾಜ್ಯ ನಿರ್ವಹಣಾ ಘಟಕಕ್ಕೆ 1.5 ಕೋಟಿ, ನೀರು ಸರಬರಾಜು ನಿರ್ವಹಣೆಗೆ 2.05 ಕೋಟಿ, ಉದ್ಯಾನಗಳ ಅಭಿವೃದ್ಧಿಗಾಗಿ 75 ಲಕ್ಷ, ನಗರಸಭೆ ಅಧಿಕಾರಿಗಳ ವೇತನಕ್ಕಾಗಿ 4.77 ಕೋಟಿ, ಬೀದಿ ದೀಪ, ವಿದ್ಯುತ್ ಶುಲ್ಕ ಪಾವತಿಗಾಗಿ 5.75 ಕೋಟಿ, ನೀರು ಸರಬರಾಜು ವಿದ್ಯುತ್ ಶುಲ್ಕ ಪಾವತಿಗಾಗಿ 2.75 ಕೋಟಿ, ನೈರ್ಮಲ್ಯ ವೆಚ್ಚಾಗಿ 2 ಕೋಟಿ, ದುರಸ್ತಿ ಕಾರ್ಯಗಳಿಗಾಗಿ 1.55 ಕೋಟಿ ಮೀಸಲಿಡಲಾಗಿದೆ ಎಂದು ತಿಳಿಸಿದರು.



ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಬಜೆಟ್ ಮಂಡಿಸಿದರು.

50 ಲಕ್ಷ ವೆಚ್ಚದಲ್ಲಿ ಬಜಾರ್ ರಸ್ತೆಯಲ್ಲಿರುವ ಮಳಿಗೆಯ ಮೊದಲ ಅಂತಸ್ತಿನಲ್ಲಿ ಹೆಚ್ಚುವರಿ ಮಳಿಗೆ, ಕಾಂಪೌಂಡ್, ಕ್ರೀಡಾಂಗಣ ಅಭಿವೃದ್ಧಿಗೆ 1 ಕೋಟಿ, ಸಮುದಾಯ ಭವನ, ಅಂಗನವಾಡಿ, ಗ್ರಂಥಾಲಯ ಕಟ್ಟಡ ನಿರ್ಮಾಣಕ್ಕೆ 50 ಲಕ್ಷ, ಮಳೆ ನೀರಿನ ಚರಂಡಿ ಹಾಗೂ ಸೇತುವೆ ನಿರ್ಮಾಣಕ್ಕೆ 50 ಲಕ್ಷ, ಸಾರ್ವಜನಿಕ ಶೌಚಗೃಹ ನಿರ್ಮಾಣಕ್ಕೆ 50 ಲಕ್ಷ, ಸಾರ್ವಜನಿಕರಿಗೆ ಉಪಟಳ ನೀಡುವ ಕೋತಿ, ಬಿಡಾಡಿ ದನ–ಕುದುರೆ, ಹಂದಿಗಳನ್ನು ಹಿಡಿದು ಸಾಗಿಸಲು 40 ಲಕ್ಷ, ಪ್ರತಿ ವಾರ್ಡ್‌ನಲ್ಲೂ 100 ಗಿಡ ನೆಡಲು 50 ಲಕ್ಷ ವಿನಿಯೋಗಿಸಲಾಗುವುದು ಎಂದು ಮಾಹಿತಿ ನೀಡಿದರು.

ಮಾಜಿ ನಗರಸಭಾಧ್ಯಕ್ಷ ಹೆಚ್.ಎಸ್.ಮಹದೇವಸ್ವಾಮಿ ಮಾತನಾಡಿ, ಈ ಬಜೆಟ್ ಸಾರ್ವಜನಿಕ ಉಪಯೋಗಿ ಬಜೆಟ್ ಆಗಿಲ್ಲ. ಅಧಿಕಾರಿಗಳ ಉಪಯೋಗಿ ಬಜೆಟ್ ಆಗಿದೆ. ಕಳೆದ ಬಾರಿ ವಾಹನ ರಿಪೇರಿಗೆ 2 ಲಕ್ಷ ಮಾತ್ರ ಮೀಸಲಿಡಲಾಗಿತ್ತು. ಈ ಬಾರಿ 25 ಲಕ್ಷ ಮೀಸಲಿಟ್ಟಿದ್ದಾರೆ. ಸಾರ್ವಜನಿಕರ ಉಪಯೋಗಕ್ಕೆ ಬರುವ ಯಾವುದೇ ಕಾಮಗಾರಿಗಳಿಗೆ ಅನುದಾನ ನೀಡಿಲ್ಲ ಎಂದು ಆರೋಪಿಸಿದರು.

ಇದೇ ವೇಳೆ ಪೌರಾಯುಕ್ತ ನಂಜುಂಡಸ್ವಾಮಿ ಅವರು ವಾರದಲ್ಲಿ 3 ದಿನ ಮುಂಜಾನೆ 7 ಗಂಟೆಗೆ ವಾರ್ಡ್‌ಗಳಿಗೆ ಭೇಟಿ ನೀಡಿ ಸ್ಥಳೀಯ ಸಮಸ್ಯೆಗಳನ್ನು ನಿವಾರಿಸಬೇಕು. ಭೇಟಿ ನೀಡಿರುವ ಜಿಪಿಎಸ್ ಚಿತ್ರಗಳನ್ನು ನನಗೆ ಕಳುಹಿಸಬೇಕು. ಇಲ್ಲವಾದಲ್ಲಿ ಲೋಕಸಭಾ ಚುನಾವಣೆ ಬಳಿಕ ನಿಮ್ಮನ್ನು ಬೇರೆಡೆಗೆ ವರ್ಗಾವಣೆ ಮಾಡಬೇಕಾಗುತ್ತದೆ ಎಂದು ಡಿಸಿ ಡಾ.ರಾಜೇಂದ್ರ ಎಚ್ಚರಿಸಿದರು.

ಸಭೆಯಲ್ಲಿ ಶಾಸಕ ದರ್ಶನ್, ನಗರಸಭಾ ಆಯುಕ್ತ ನಂಜುಂಡಸ್ವಾಮಿ, ಸದಸ್ಯರಾದ ಮಹೇಶ್ ಅತ್ತಿಖಾನೆ, ಕಪಿಲೇಶ್, ಸಿದ್ದರಾಜು, ಗಂಗಾಧರ್, ಶ್ರೀಕಂಠಸ್ವಾಮಿ ಸೇರಿದಂತೆ ನಗರಸಭಾ ಅಧಿಕಾರಿಗಳು ಮತ್ತು ಸದಸ್ಯರು ಇದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಕೆಟಿಎಂ (ಕ)	4 ಪ್ರದರ್ಶನಗಳು,
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಕಾಟೇರ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಕ್ರಾಕ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಗುಂಟೂರು ಖಾರಂ (ತೆ)	4 ಪ್ರದರ್ಶನಗಳು
ಗಾಯಿತ್ರಿ	
ಒಂದು ಸರಳ ಪ್ರೇಮಕಥೆ (ಕ)	4 ಪ್ರದರ್ಶನಗಳು
ರಾಜಕಮಲ್	
ಆಪರೇಷನ್ ವ್ಯಾಲಂಟೀನ್ (ತೆ)	4 ಪ್ರದರ್ಶನಗಳು
ಸಂಗಂ	
ಉಪಾಧ್ಯಕ್ಷ (ಕ)	4 ಪ್ರದರ್ಶನಗಳು
ಲಿಡೋ	
ವಾರಿ–3 (ತೆ)	4 ಪ್ರದರ್ಶನಗಳು
ತಿಬ್ಬಾದೇವಿ	
ಸಹದೇವ್ (ಹಿ)	4 ಪ್ರದರ್ಶನಗಳು
ಪ್ರಭಾ	
ಛಾಯಾ (ಕ)	2 ಪ್ರದರ್ಶನಗಳು
ನಮೋಭಾರತ್ (ಕ)	2 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಚಾರಿ 111 (ತೆ): ಬೆ.10.30ಕ್ಕೆ, ಡ್ಯೂನ್ ಪಾರ್ಟ್ 2 (ಇಂ): ಮ.1.05ಕ್ಕೆ, ರಾ.10.25ಕ್ಕೆ, ಆರ್ಟಿಕಲ್ 370 (ಹಿಂ): ಸಂ.4.15ಕ್ಕೆ, ರಾ.7.25ಕ್ಕೆ.
ಸ್ಕ್ರೀನ್ 2	ಜುಗಲ್‌ಬಂದಿ (ಕ): ಬೆ.10.45ಕ್ಕೆ, ಉಪಾಧ್ಯಕ್ಷ (ಕ): ಮ.1.30ಕ್ಕೆ, ಲಾಪತಾ ಲೇಡಿಸ್ (ಹಿಂ): ಸಂ.4.25ಕ್ಕೆ, ಒಂದು ಸರಳ ಪ್ರೇಮಕಥೆ (ಕ): ರಾ.7ಕ್ಕೆ, ಮಂಜುಮಲೆ (ಮ): ರಾ.10ಕ್ಕೆ.
ಸ್ಕ್ರೀನ್ 3	ಆರ್ಟಿಕಲ್ 370 (ಹಿಂ): ಬೆ.10.40ಕ್ಕೆ, ರಾ.9.45ಕ್ಕೆ, ಆಪರೇಷನ್ ವ್ಯಾಲೆಂಟೈನ್ (ತೆ): ಮ.1.45ಕ್ಕೆ, ಸಂ.4.25ಕ್ಕೆ, ರಾ.7.05ಕ್ಕೆ.
ಸ್ಕ್ರೀನ್ 4	

ಐನಾಕ್ಸ್ ಮೂವೀಸ್
ದೂ : 2533444 / 2433456

ಸ್ಕ್ರೀನ್ 1	ಆಪರೇಷನ್ ವ್ಯಾಲೆಂಟೈನ್ (ತೆ): ಬೆ.9.55ಕ್ಕೆ, ಲಾಪತಾ ಲೇಡಿಸ್ (ಹಿಂ): ಮ.12.45ಕ್ಕೆ, ಡ್ಯೂನ್ ಪಾರ್ಟ್ 2 (ಇಂ): ಮ.3.30ಕ್ಕೆ, ರಾ.7ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 2	ಡ್ಯೂನ್ ಪಾರ್ಟ್ 2 (ಇಂ): ಬೆ.9.50ಕ್ಕೆ, ಮ.1.20ಕ್ಕೆ, ಕ್ರೀಂ (ಕ): ಸಂ.4.50ಕ್ಕೆ, ಆಪರೇಷನ್ ವ್ಯಾಲೆಂಟೈನ್ (ತೆ): ರಾ.7.25ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ರಾ.10.20ಕ್ಕೆ.
ಸ್ಕ್ರೀನ್ 3	ಲಾಪತಾ ಲೇಡಿಸ್ (ಹಿಂ): ಬೆ.10ಕ್ಕೆ, ರಾ.7.25ಕ್ಕೆ, ಆರ್ಟಿಕಲ್ 370 (ಹಿಂ): ಮ.12.45ಕ್ಕೆ, ಸಂ.4.05ಕ್ಕೆ, ರಾ.10.10ಕ್ಕೆ.
ಸ್ಕ್ರೀನ್ 4	ಆಪರೇಷನ್ ವ್ಯಾಲೆಂಟೈನ್ (ತೆ): ಮ.12ಕ್ಕೆ, ಉಪಾಧ್ಯಕ್ಷ (ಕ): ಮ.3.05ಕ್ಕೆ, ಒಂದು ಸರಳ ಪ್ರೇಮಕಥೆ (ಕ): ಸಂ.6.20ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಪಾರ್ಕಿಂಗ್ (ಕ): ಬೆ.10.35ಕ್ಕೆ, ಸಪ್ತ ಸಾಗರದಾಚೆ ಎಲ್ಲೋ 2 (ಕ): ಮ.1.10ಕ್ಕೆ, ಬ್ಯಾಡ್ ಮ್ಯಾನರ್ಸ್ (ಕ): ಸಂ.4ಕ್ಕೆ, ಅರ್ಧಂಬರ್ಧ ಪ್ರೇಮಕಥೆ (ಕ): ಸಂ.6.35ಕ್ಕೆ, ಅನ್ನಪೂರ್ಣಿ (ತ): ರಾ.9.15ಕ್ಕೆ
ಸ್ಕ್ರೀನ್ 2	ಅನಿಮಲ್ (ಹಿಂ): ಬೆ.10ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ಮ.1.45ಕ್ಕೆ.
ಸ್ಕ್ರೀನ್ 3	ಸ್ಯಾಮ್ ಬಹದ್ದೂರ್ (ಹಿಂ): ಬೆ.10.10ಕ್ಕೆ, ಸಂ.4.50ಕ್ಕೆ, ಅನಿಮಲ್ (ಹಿಂ): ಮ.1.05ಕ್ಕೆ, ರಾ.7.45ಕ್ಕೆ
ಸ್ಕ್ರೀನ್ 4	ಸಪ್ತ ಸಾಗರದಾಚೆ ಎಲ್ಲೋ 2 (ಕ): ಬೆ.10.45ಕ್ಕೆ, ಅನಿಮಲ್ (ಹಿಂ): ಮ.2.40ಕ್ಕೆ, ನೆಪೋಲಿಯನ್ (ಇಂ): ಸಂ.6.25ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ರಾ.9.30ಕ್ಕೆ.


ಪಿವಿಆರ್ ಸಿನಿಮಾಸ್
ಮೊ.ನಂ: 8951357139
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಆರ್ಟಿಕಲ್ 370 (ಹಿಂ): ಬೆ.9ಕ್ಕೆ, ಮ.12.20ಕ್ಕೆ, ಮ.3.40ಕ್ಕೆ, ರಾ.7ಕ್ಕೆ, ರಾ.10.20ಕ್ಕೆ, ಡ್ಯೂನ್ ಪಾರ್ಟ್ 2 (ಇಂ): ಬೆ.8.30ಕ್ಕೆ, ಮ.12ಕ್ಕೆ, ಮ.3.30ಕ್ಕೆ, ರಾ.7ಕ್ಕೆ, ರಾ.10.30ಕ್ಕೆ, ಡೆಮೋನ್ ಸ್ಲೇಯರ್ (ಜ): ಸಂ.4.30ಕ್ಕೆ, ಆಪರೇಷನ್ ವ್ಯಾಲೆಂಟೈನ್ (ತೆ & ಹಿಂ): ಬೆ.9.45ಕ್ಕೆ, ಮ.3.40ಕ್ಕೆ, ಸಂ.6.35ಕ್ಕೆ, ರಾ.9.30ಕ್ಕೆ, ಲಾಪತಾ ಲೇಡಿಸ್ (ಹಿಂ): ಬೆ.10.35ಕ್ಕೆ, ಸಂ.4.10ಕ್ಕೆ, ರಾ.9.45ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ಬೆ.10.20ಕ್ಕೆ, ಮ.1.25ಕ್ಕೆ, ರಾ.7.25ಕ್ಕೆ, ತೇರಿ ಬತೂನ್ ಮೇ ಐಸಾ ಉಲ್ಜಾ ಜಿಯಾ (ಹಿಂ): ಬೆ.11.55ಕ್ಕೆ, ಕ್ರೀಂ (ಕ): ಸಂ.6.55ಕ್ಕೆ, ಪ್ರೇಮಲು (ಮ): ರಾ.10.20ಕ್ಕೆ, ಜೋಶುವಾ (ತ): ಮ.1.20ಕ್ಕೆ, ಸಂ.6.55ಕ್ಕೆ, ಭ್ರಮಯುಗಂ (ಮ): ರಾ.9.45ಕ್ಕೆ, ವಾರನಂ ಆಯಿರಂ (ತ): ಮ.3.40ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಸರ್ಕಾರದ ಯೋಜನೆಗಳನ್ನು ಸದ್ಬಳಕೆ ಮಾಡಿಕೊಳ್ಳಿ: ಕೆ.ವೆಂಕಟೇಶ್

ಪಿರಿಯಾಪಟ್ಟಣ, ಮಾ.5– ರೇಷ್ಮೆ ಬೆಳೆಗಾರರ ಅಭಿವೃದ್ಧಿಗೆ ಸರ್ಕಾರ ಹಲವು ಯೋಜನೆ ಜಾರಿಗೊಳಿಸಿದ್ದು, ಅವುಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಸಚಿವ ಕೆ.ವೆಂಕಟೇಶ್ ತಿಳಿಸಿದರು.



ತಾಲೂಕಿನ ಕಗ್ಗುಂಡಿ ಬಳಿಯ ರೇಷ್ಮೆ ಕೃಷಿ ಕ್ಷೇತ್ರದ ಆವರಣದಲ್ಲಿ ಏರ್ಪಡಿಸಿದ್ದ ಹುಣಸೂರು ಉಪ ವಿಭಾಗ ಮಟ್ಟದ ರೇಷ್ಮೆ ಬೆಳೆಗಾರರ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ತಂಬಾಕು ಬೆಳೆಗಾರರು ತಂಬಾಕು ಮಂಡಳಿ ನಿಗದಿಪಡಿಸುವ ಪ್ರಮಾಣಕ್ಕಿಂತಲೂ ಕಡಿಮೆ ಪ್ರಮಾಣವನ್ನು ಉತ್ಪಾದಿಸಿದರೆ ಬೇಡಿಕೆಯೂ ಹೆಚ್ಚಲಿದ್ದು ಉತ್ತಮ ದರ ಸಿಗಲಿದೆ. ಆದರೆ ಐಟಿಸಿ ಸೇರಿದಂತೆ ಇತರೆ ಕಂಪನಿಗಳು ಎರಡನೇ ಬೆಳೆಯಾಗಿ ತಂಬಾಕು ಬೆಳೆಯುವಂತೆ ರೈತರನ್ನು ಯಾಮಾರಿಸುತ್ತಿವೆ. ತಂಬಾಕು ಖರೀದಿದಾರ ಕಂಪನಿ ಮಾತುಗಳಿಗೆ ರೈತರು ಮಾರುಹೋಗದೆ ರೇಷ್ಮೆ ಸೇರಿದಂತೆ ಮಿಶ್ರ ವಾಣಿಜ್ಯ ಬೆಳೆ ಪದ್ಧತಿಯಲ್ಲಿ ತೊಡಗಿಸಿಕೊಳ್ಳಬೇಕು ಎಂದರು.

ಪಶು ಸಂಗೋಪನೆ ಮತ್ತು ರೇಷ್ಮೆ ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ಇದೆ. ಪಶು ಸಂಗೋಪನೆ ಇಲಾಖೆಯಲ್ಲಿನ 18 ಸಾವಿರ ಹುದ್ದೆಗಳಿಗೆ ಪ್ರಸ್ತುತ 8 ಸಾವಿರ ಮಂದಿ ಮಾತ್ರ ಕರ್ತವ್ಯ ನಿರ್ವಹಿಸುತ್ತಿದ್ದು, ಇನ್ನೂ 10 ಸಾವಿರ ಹುದ್ದೆಗಳು ಖಾಲಿ ಉಳಿದಿವೆ. ಪಶುಸಂಗೋಪನೆ ಇಲಾಖೆಯಲ್ಲಿ 400 ವೈದ್ಯರ ನೇಮಕಾತಿಗೆ ಮುಖ್ಯಮಂತ್ರಿಗಳು ಒಪ್ಪಿಗೆ ನೀಡಿದ್ದಾರೆ. ಇದೇ ಪರಿಸ್ಥಿತಿ ರೇಷ್ಮೆ ಇಲಾಖೆಯಲ್ಲಿಯೂ ಇದ್ದು ಆದಷ್ಟು ಶೀಘ್ರ ಖಾಲಿ ಉಳಿದಿರುವ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಕಾರ್ಯಾಗಾರದಲ್ಲಿ ಕೇಂದ್ರಿಯ ರೇಷ್ಮೆ ಸಂಶೋಧನೆ ವಿಜ್ಞಾನಿ ಡಾ.ಕೆಬಿ.ಚಂದ್ರಶೇಖರ್, ರಾಜ್ಯ ರೇಷ್ಮೆ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ ಕುಲಸಚಿವ ಡಾ.ಟಿ.ರಾಮೇಗೌಡ, ವಿಜ್ಞಾನಿಗಳಾದ ಡಾ.ಆರ್.ಎಂ.ಶಿವಪ್ರಸಾದ್, ಡಾ.ಶಾನ್ ಬಾಗ್, ಹೆಚ್.ರಾಜಪ್ಪ ರೇಷ್ಮೆ ಬೆಳೆಗಾರರಿಗೆ ಮಾಹಿತಿ ನೀಡಿದರು.

ಪ್ರಗತಿಪರ ರೈತ ಕೋಲಾರದ ಮುಳ್ಳೂರು ಶಿವಣ್ಣ ಮಾತನಾಡಿದರು. ಸಮಾವೇಶದಲ್ಲಿ ರೇಷ್ಮೆ ಇಲಾಖೆ ಜಂಟಿ ನಿರ್ದೇಶಕರಾದ ಬಿ.ಆರ್.ಪ್ರತಿಭಾ, ಉಪ ನಿರ್ದೇಶಕರಾದ ಎಸ್.ಕೆ ಮಂಜುಳಾ, ಸಹಾಯಕ ನಿರ್ದೇಶಕ ಮಾದೇಶ್, ಎನ್.ಉಮೇಶ್, ಎಂ.ಶಿವಮೂರ್ತಿ, ಡಿ.ಜಿ.ಮಂಜುನಾಥ್, ಅಧಿಕಾರಿ ಚಂದ್ರೇಗೌಡ, ಮೈಸೂರು ರೇಷ್ಮೆ ರೈತ ಉತ್ಪಾದಕ ಕಂಪನಿ ವ್ಯವಸ್ಥಾಪಕ ನಿರ್ದೇಶಕ ಬಿ.ಎ.ಪ್ರಕಾಶ್, ತಾಪಂ ಇಓ ಡಿ.ಬಿ.ಸುನೀಲ್ ಕುಮಾರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಡಿ.ಟಿ.ಸ್ವಾಮಿ, ರಹಮತ್ ಜಾನ್ ಬಾಬು, ಪಿಎಲ್‌ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಹೊಲದಪ್ಪ, ಪರಮೇಶ್ ಸೇರಿದಂತೆ ಇನ್ನಿತರರಿದ್ದರು.



ಕೆ.ಆರ್.ನಗರ ಪುರಸಭೆಗೆ ಸೇರಿದ 72 ವಾಣಿಜ್ಯ ಮಳಿಗೆ ಹರಾಜು ಪ್ರಕ್ರಿಯೆಯಲ್ಲಿ ಸರ್ಕಾರದ ನಿಯಮಗಳನ್ನು ಗಾಳಿಗೆ ತೂರಲಾಗಿದೆ ಎಂದು ಆರೋಪಿಸಿ ಪುರಸಭೆ ಎದುರು ಹರಾಜಿನಲ್ಲಿ ಪಾಲ್ಗೊಂಡಿದ್ದ ಬಿಡ್ಡುದಾರರು ವಿಷದ ಬಾಟಲಿ ಹಿಡಿದು ಪ್ರತಿಭಟನೆ ನಡೆಸಿದರು. ಈ ವೇಳೆ ನಗರ ಜೆಡಿಎಸ್ ಪ್ರಧಾನ ಕಾರ್ಯದರ್ಶಿ ಕೆ.ಎಸ್.ರುದ್ರೇಶ್, ಚಿರಾಗ್ ಪಟೇಲ್, ಅಮೃತ್‌ಗೌಡ, ಪ್ರದೀಪ್, ಸೈಯದ್ ಜವಾದ್, ಕೃತಿಕ್ ಮತ್ತಿತರರಿದ್ದರು.

ವಿದೇಶ ಪ್ರವಾಸ



ದಿನಾಂಕ: 07.03.2024 ರಂದು
ಧರ್ಮೇಶ್ H ಮತ್ತು ಅವರ ಕುಟುಂಬ (ಹೆಬ್ಬಾಳು)
ದುಬೈ ಪ್ರವಾಸಕ್ಕೆ ತೆರಳಲಿದ್ದು, ಇವರ ಪ್ರಯಾಣ ಸುಖಕರವಾಗಿರಲೆಂದು ಹಾರೈಸುವ: ಮಹೇಂದ್ರ, ಸುನೀಲ್.ಜಿ, ರಾಘವೇಂದ್ರ, ಯೋಗಣ್ಣ



ಹೋಟೆಲ್ ಮೀನಾಕ್ಷಿ ಭವನ್ ಮಾಲೀಕರಾದ
ಬಾಲಿ (ರಮೇಶ್) ಅವರಿಗೆ
ಹುಟ್ಟುಹಬ್ಬದ ಶುಭಾಶಯಗಳು



ಶುಭಕೋರುವವರು:
ಬೆಲವತ್ತ ಶಿವಕುಮಾರ್,
ನಿರ್ದೇಶಕರು ಹಿಂದುಳಿದ ವರ್ಗಗಳ ವಿವಿಧೋದ್ದೇಶ ಸಹಕಾರ ಸಂಘ.



Kumuda Spa
WOMEN'S DAY SPECIAL OFFERS

1. Choose any one of the COMPLIMENTARY services Pedicure / Hand wax / Manicure Along with Kumuda spa offered massages.
2. @ 2999 get a package deal of Lotus facial, Pedicure, Hand wax & Threading.
3. Get Complimentary Hairspa along with Foot Massage.

0821-4193567/9632769550

WANTED
* Diploma, B.E., & M.Tech in Civil Engineers
* Drivers: 5 Nos.

Call: 78920-35143

SRR MASALA
WANTED URGENTLY
Distributor for Mysore, Mandya, Chamarajanagar & Hassan, all Taluk and Sales Officers, Contact
9686994803
9663349013

ಉಬ್ಬಿರುವ ರಕ್ತನಾಳಗಳಿಗೆ ಶಾಶ್ವತ ವಿದಾಯ ಹೇಳಿ ಆಧುನಿಕ ಎಂಡೊ ವೀನಸ್ ಲೇಸರ್ ಅಬಲೇಶನ್ ಮುಖಾಂತರ

8-3-2024 - ಶುಕ್ರವಾರ
14-3-2024 - ಗುರುವಾರ
ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ರವರೆಗೆ



ಡಾ. ವಿನಯ್ ನ್ಯಾಪತಿ

ಸ್ಥಳ: ರಾಮಕೃಷ್ಣ ಆಸ್ಪತ್ರೆ, ಶಾಪ್ ನಂ.1120, ಎಫ್-58 ಬಿ, 1ನೇ ಮೆಯಿನ್, ಲಕ್ಷ್ಮೀಬಾಯಿ ರಸ್ತೆ,ಸೆಂಟ್ ಮೇರೀಸ್ ಶಾಲೆ ಎದುರುಗಡೆ, ವಿದ್ಯಾರಣ್ಯಪುರ, ಮೈಸೂರು.

ನೇಮಕಾತಿಗಳಿಗಾಗಿ
808 883 7000

Avis Vascular Centre
/avisvascularcentre
www.avisvascularcentre.com



· 10 am to 8 pm · Open All Days · Master / Visa Card Accepted
INNERWEAR · LEISUREWEAR · ACTIVEWEAR · KIDSWEAR · SOCKS

Venue In Mysore
JLB Road | The Institution Of Engineers (Auditorium Hall), Jhansi Lakshmibai Road - 5

ಮೈಸೂರು ಮಿತ್ರ 44
ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸ ಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ವುಮೆನ್ಸ್ ವರ್ಲ್ಡ್
ಬ್ಯೂಟಿ ಸಲೂನ್ & ಮೇಕಪ್ ಟ್ರೈನಿಂಗ್ ಅಕಾಡೆಮಿ
ಉಚಿತ 6 ತಿಂಗಳ ಬ್ಯೂಟಿಷಿಯನ್ ಕೋರ್ಸ್
ಬ್ಯೂಟಿ ಪಾರ್ಲರ್‌ಗೆ ಅನುಭವಿ ಮಹಿಳಾ ಸಿಬ್ಬಂದಿ ಬೇಕಾಗಿದ್ದಾರೆ
ವಿಳಾಸ: #14-4, ಪಾರ್ವತಿ ಆರ್ಕೇಡ್, ಅಮೃತ ವಿದ್ಯಾಲಯ ಹತ್ತಿರ, ಬೋಗಾದಿ 2ನೇ ಹಂತ, ದಕ್ಷಿಣ, ಮೈಸೂರು
9066672891

A REPUTED SCHOOL IN MYSORE URGENTLY REQUIRES
ASSISTANT TEACHERS

1. Kannada and English Medium Physics and Maths Teacher for High School (1 Post)
2. English Language Teacher for High School (1 Post)
3. Social Science Teacher English Medium for High School (1 Post)
4. Primary School Teachers (3 Posts)

Email your Detailed Resume to :
srikanthsrivatsa28@gmail.com

WANTED
Production / Maintenance Engineers
(Freshers Only)
Qualification : Diploma in Mechanical or Electrical or ITI, Should be willing to work in shifts, Salary : Rs 15000 to 18000/month
9513777350

JAYACHAMARAJA WADIYAR GOLF CLUB
Maharana Prathap Singhji Road, Nazarbad, Mysore – 570 010
Phone: 0821-2538457/2413385, 6366460669

Date :23-02-2024

ANNUAL GENERAL BODY MEETING – NOTICE

38th Annual General Body Meeting for the year 2022-23 is scheduled to be held on **Sunday the 24th of March, 2024 at 10.00 AM**, Notices dispatched to Hon. Members by post. Those members who have not received the invitation are kindly requested to treat this publication as invitation and requested to attend the meeting without fail.

Sd/-	Sd/-
Dr. Abraham Thomas President, JWGC	V G Achar Hon. Secretary, JWGC

SITE FOR SALE
North, No .926, 30x40 Sathgalli B Zone, Rs. 65L
100 Mtrs from Ring Road.
Opp. proposed Cricket Stadium, Half Km from VTU
WhatsApp/Call
74117 96800



NOT GETTING YOUR STAR OF MYSORE & ಮೈಸೂರು ಮಿತ್ರ
Call: 98452-96447 / 99003-82840

ಮದುವೆ, ಶುಭ ಸಮಾರಂಭಗಳಿಗೆ
ಕಾಂಚೀಪುರಂ ರೇಷ್ಮೆ ಸೀರೆಗಳು
50% ರಿಯಾಯಿತಿ
ಮಾರಾಟ ಮತ್ತು
ಹಳೆ ಸೀರೆಗಳ ಎಕ್ಸ್‌ಚೇಂಜ್ ಆಫರ್
ಈ ಅವಕಾಶ ಕೆಲವೇ ದಿನಗಳು ಮಾತ್ರ
ಹೋಟೆಲ್ ಮಯೂರ ಹೊಯ್ಸಳ
(ಕೆಎಸ್‌ಟಿಡಿಸಿ ಯೂನಿಟ್), ಜೆಎಲ್‌ಬಿ ರಸ್ತೆ, ಮೈಸೂರು
ಮೊ. : 9481820079

FOR RENT / SALE
Paying Guest (PG) Building
Near JSS Medical University, Bannimantap, SS Nagar.
Contact :
90089-59015 / 98804-96953

ಪಟ್ಟಣ ಪಂಚಾಯಿತಿ ಕಾರ್ಯಾಲಯ,
ಅರಕಲಗೂಡು, ಹಾಸನ ಜಿಲ್ಲೆ-573102
ಫೋ.ನಂ.220350 E-mail: ka.arkalgudu.tp@gmail.com
ನಂ:ಅ.ಪ.ಪಂ/ಕ.ಅ/ಟೆಂಡರ್/ಎಂ.ಆರ್.ಎಫ್ /01/2023-24 ದಿನಾಂಕ: 05/03/2024

ಟೆಂಡರ್ ಪ್ರಕಟಣೆ
(ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಮಾತ್ರ)

ಅರಕಲಗೂಡು ಪಟ್ಟಣ ವ್ಯಾಪ್ತಿಯಲ್ಲಿ ಸ್ವಚ್ಛಭಾರತ್ ಯೋಜನೆ 2.0, ಸ್ವಚ್ಛಭಾರತ್ ಯೋಜನೆ 1.0 ಉಳಿಕೆ ಮೊತ್ತ ಮತ್ತು 15 ನೇ ಹಣಕಾಸು ಎಂ.ಪಿ.ಸಿ ಅನುದಾನ ದಡಿಯಲ್ಲಿ ಕೆಲಸಗಳನ್ನು ನಿರ್ವಹಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣಾ ಪಾರದರ್ಶಕತೆ ಅಧ್ಯಾದೇಶ 2000 ರಂತೆ ಹಾಗೂ STANDARD TENDER DOCUMENT ಸರ್ಕಾರದ ಆದೇಶ ಸಂಖ್ಯೆ: ಎಫ್.ಡಿ/06/ಪಿಪಿಎಲ್/2006, ಬೆಂಗಳೂರು ರಂತೆ ದ್ವಿಲಕೋಟೆ ಪದ್ಧತಿಯಲ್ಲಿ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ನೋಂದಾಯಿಸಲ್ಪಟ್ಟ ಅರ್ಹ ಗುತ್ತಿಗೆದಾರರಿಂದ ಐಟಂವಾರು ದರದ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ವಿವರಗಳಿಗಾಗಿ http://kppp.karnataka.gov.in ನ್ನು ಅಥವಾ ಕಚೇರಿಯ ಅಭಿಯಂತರರ ಶಾಖೆಯನ್ನು ಸಂಪರ್ಕಿಸಬಹುದಾಗಿದೆ. 1. ಖಾಲಿ ಟೆಂಡರ್ ಫಾರಂಗಳಿಗೆ ಇ-ಪ್ರೊಕ್ಯೂರ್‌ಮೆಂಟ್ ಪ್ರಕಾರ ಅರ್ಜಿ ಸಲ್ಲಿಸುವ ಹಾಗೂ ಷೆಡ್ಯೂಲ್-ಬಿಗಳನ್ನು ವೆಬ್‌ಸೈಟ್‌ನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ: 12-03-2024 ರಂದು ಸಂಜೆ 5.30 ಗಂಟೆ 2.ಟೆಂಡರ್ ತೆರೆಯುವ ದಿನಾಂಕ: 14-03-2024 ರ ಬೆಳಗ್ಗೆ 11.00 ಗಂಟೆ ಕ್ರ.ಸಂ.ವಿವರ: DMA/2023-24/OW/WORK-INDENT16011 ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) 36.00

ಸಹಿ/- ಮುಖ್ಯಾಧಿಕಾರಿ, ಪಟ್ಟಣ ಪಂಚಾಯಿತಿ, ಅರಕಲಗೂಡು

ವಾಸಾಸಂಇ/ಜಿಸವಿ/ಹಾಸನ/889/ಕೆಎಸ್‌ಎಂಸಿಎ/898/2023-24

ದಿನಾಂಕ: 06.03.2024ರ ಬುಧವಾರ ರಂದು ಹುಣಸೂರು ವಿಧಾನ ಸಭಾಕ್ಷೇತ್ರದ ವ್ಯಾಪ್ತಿಯಲ್ಲಿ ನಡೆಯಲಿರುವ ಗುದ್ದಲಿ ಪೂಜೆ ಕಾಮಗಾರಿಗಳ ವಿವರಗಳು

ಸಮಯ	ಕಾರ್ಯಕ್ರಮಗಳ ವಿವರ	ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ
ಬೆಳಗ್ಗೆ: 9.30	ಬಿಳಿಕೆರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹುಣಸೂರು, ಇದರ ಕಟ್ಟಡ ಕಾಮಗಾರಿ	150
ಬೆಳಗ್ಗೆ: 10.30	ಹುಣಸೂರು ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಪತ್ರಕರ್ತರಿಗೆ 22ಲಕ್ಷವೆಚ್ಚದಲ್ಲಿ ಶಾಸಕರ ವೈಯಕ್ತಿಕ ನೇರವಿನಿಂದ 35 ಪತ್ರಕರ್ತರಿಗೆ ವಿಮಾ ಬಾಂಡ್ ವಿತರಣೆ	-
ಬೆಳಗ್ಗೆ: 11.30	ಹುಣಸೂರು ಪಟ್ಟಣದ ಎನ್.ಎಸ್ ತಿಟ್ಟು ಬಡಾವಣೆಯ ಅಲ್ಪಸಂಖ್ಯಾತರು ವಾಸಿಸುವ ಕಾಲೋನಿಗಳಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿ.	30.00
ಮಧ್ಯಾಹ್ನ: 12.00	ಹುಣಸೂರು ಪಟ್ಟಣದ ರೈಯೂಕ್ ಮೊಹಲ್ಲಾದ ಅಲ್ಪಸಂಖ್ಯಾತರು ವಾಸಿಸುವ ಕಾಲೋನಿಗಳಲ್ಲಿ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿ.	50.00
ಮಧ್ಯಾಹ್ನ: 12.30	ಹುಣಸೂರು ಪಟ್ಟಣದ ಅಲ್ಪಸಂಖ್ಯಾತರು ವಾಸಿಸುವ ಬಜಾರ್ ರಸ್ತೆ ಅಭಿವೃದ್ಧಿ ಕಾಮಗಾರಿ	70.00
ಮಧ್ಯಾಹ್ನ: 1.00	ಹುಣಸೂರು ಪಟ್ಟಣದ ನಿಮಿಷಾಂಬ ಕಲ್ಯಾಣ ಮಂಟಪ ಹಿಂಭಾಗ ಅಲ್ಪಸಂಖ್ಯಾತರು ವಾಸಿಸುವ ಕಾಲೋನಿಗಳಲ್ಲಿ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿ.	10.00
ಮಧ್ಯಾಹ್ನ: 1.30	ಹುಣಸೂರು ಪಟ್ಟಣದ ಮಾಧವ ಪ್ರೌಢಶಾಲೆಯ ಪಕ್ಕದ ಅಲ್ಪಸಂಖ್ಯಾತರು ವಾಸಿಸುವ ಕಾಲೋನಿಗಳಲ್ಲಿ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿ.	10.00
ಮಧ್ಯಾಹ್ನ: 1.45	ಹುಣಸೂರು ಪಟ್ಟಣದ ವಿ.ಪಿ. ಬೋರೆ ಅಲ್ಪಸಂಖ್ಯಾತರು ವಾಸಿಸುವ ಕಾಲೋನಿಯ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿ	10.00
ಮಧ್ಯಾಹ್ನ: 2.00	ಹುಣಸೂರು ಪಟ್ಟಣದ ಅಲ್ಪಸಂಖ್ಯಾತರು ವಾಸಿಸುವ ಹೋಲಿ ಫ್ಯಾಮಿಲಿ ಪಬ್ಲಿಕ್ ಸ್ಕೂಲ್ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿ.	60.00
ಮಧ್ಯಾಹ್ನ: 2.30	ಸಂತೆಕೆರೆ ಕೊಡಿ ಗ್ರಾಮದ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿ. ಹಾಗೂ ಕೃತಜ್ಞತ ಸಭೆ	10.00
ಮಧ್ಯಾಹ್ನ: 3.30	ರತ್ನಾಪುರಿ ಗ್ರಾಮದ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿ	25.00
ಸಂಜೆ: 4.00	ಬಲ್ಲೇನಹಳ್ಳಿ ಗ್ರಾಮದ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿ	25.00
ಸಂಜೆ: 4.30	ಗಾವಡಗೆರೆ ಗ್ರಾಮದ ವಾಲ್ಮೀಕಿ ಬಡಾವಣೆಯ ಸಿಸಿ ರಸ್ತೆ ಹಾಗೂ ಚರಂಡಿ ಅಭಿವೃದ್ಧಿ ಕಾಮಗಾರಿ.	35.00
ಸಂಜೆ: 4.30	ಗಾವಡಗೆರೆ ಗ್ರಾಮದ ಸಿಸಿ ರಸ್ತೆ ಹಾಗೂ ಚರಂಡಿ ಅಭಿವೃದ್ಧಿ ಕಾಮಗಾರಿ.	5.00
ಸಂಜೆ: 5.00	ಬೋರೆಗೌಡನಕೊಪ್ಪಲು ಗ್ರಾಮದ ಸಿಸಿ ರಸ್ತೆ ಹಾಗೂ ಚರಂಡಿ ಅಭಿವೃದ್ಧಿ ಕಾಮಗಾರಿ.	5.00
	ಒಟ್ಟು	465.00



ನಗರಾಭಿವೃದ್ಧಿ ಹಾಗೂ ತಾಲ್ಲೂಕಿನ ಸರ್ವತೋಮುಖ ಅಭಿವೃದ್ಧಿಗೆ ಆದ್ಯತೆ ನೀಡಿ ಗುದ್ದಲಿ ಪೂಜೆಗೆ ಆಗಮಿಸುತ್ತಿರುವ ಜನಪ್ರಿಯ ಶಾಸಕರಾದ
ಜಿ.ಡಿ.ಹರೀಶ್ ಗೌಡರಿಗೆ
ಸ್ವಾಗತ ಕೋರುವ

ಹೆಚ್.ಪಿ.ಸತೀಶ್ ಕುಮಾರ್
ನಗರಸಭಾ ಸದಸ್ಯರು, ಹುಣಸೂರು.

